ಸಂಪುಟ: 05 ಸಂಚಿಕೆ: 122 ಪುಟಗಳು: 08 ಮಂಗಳವಾರ 15 ಜುಲೈ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಮಾನವೀಯತೆಯ ಮೇಲಿನ ನಂಬಿಕೆಯನ್ನು ನೀವು ಕಳೆದುಕೊಳ್ಳಬಾರದು. ಮಾನವೀಯತೆಯು ಒಂದು ಸಾಗರ; ಸಮುದ್ರದ ಕೆಲವು ಹನಿಗಳು ಕೊಳಕಾಗಿದ್ದರೆ, ಸಾಗರವು ಕೊಳಕಾಗುವುದಿಲ್ಲ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 5 ಹೈಕೋರ್ಟ್‌ಗೆ ಹೊಸ ಮುಖ್ಯ ನಾಯಮೂರ್ತಿ ನೇಮಕ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರವು ಜುಲೈ 14 ರಂದು ಕರ್ನಾಟಕ ಸೇರಿದಂತೆ 5 ರಾಜ್ಯಗಳ ಹೈಕೋರ್ಟ್‌ಗಳಿಗೆ ಹೊಸ ಮುಖ್ಯ ನ್ಯಾಯಮೂರ್ತಿಗಳನ್ನು ನೇಮಿಸಿದೆ. ಸುಪ್ರೀಂ ಕೋರ್ಟ್‌ನ ಕೊಲಿಜಿಯಂ ಮೇ ತಿಂಗಳಲ್ಲಿ ಈ ನೇಮಕಾತಿಗಳನ್ನು ಶಿಫಾರಸು ಮಾಡಿತ್ತು. ಅದರಂತೆ, ನ್ಯಾಯಮೂರ್ತಿಗಳ ನೇಮಕ ನಡೆದಿದೆ. ಮಧ್ಯಪ್ರದೇಶ, ಗುವಾಹಾಟಿ, ಪಾಟ್ನಾ, ಜಾರ್ಖಂಡ್ ಹೈಕೋರ್ಟ್‌ಗಳ ನ್ಯಾಯಮೂರ್ತಿಗಳ ಬದಲಾವಣೆಯಾಗಿದೆ. ಸಂಜೀವ್ ಸಚ್‌ದೇವ್, ನ್ಯಾಯಮೂರ್ತಿ ವಿಭು ಬಕ್ರು, ನ್ಯಾಯಮೂರ್ತಿ ಅಶುತೋಷ್ ಕುಮಾರ್, ನ್ಯಾಯಮೂರ್ತಿ ವಿಪುಲ್ ಮನುಭಾಯಿ ಪಾಂಚೋಲಿ ಮತ್ತು ನ್ಯಾಯಮೂರ್ತಿ ತರ್ಲೋಕ್ ಸಿಂಗ್ ಚೌಹಾಣ್ ಅವರನ್ನು ವಿವಿಧ ಹೈಕೋರ್ಟ್‌ಗಳ ಮುಖ್ಯ ನ್ಯಾಯಮೂರ್ತಿಗಳಾಗಿ ನೇಮಿಸಲಾಗಿದೆ. ಇದರ ಜೊತೆಗೆ, ನಾಲ್ವರು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ಬೇರೆ ಹೈಕೋರ್ಟ್‌ಗಳಿಗೆ ವರ್ಗಾವಣೆ ಮಾಡಲಾಗಿದೆ.

## ನಾನೇ ನಂಬರ್ 1 ಮಂತ್ರಿ, ಪ್ರಶಸ್ತಿ ಕೊಡುವುದಾದರೆ ನನಗೇ ಪಕ್ಕಾ

• ಉದಯವಾಹಿನಿ, ಬೆಂಗಳೂರು

ನಾನೇ ರಾಜ್ಯದ ನಂಬರ್ 1 ಮಂತ್ರಿ. ಒಂದು ವೇಳೆ ಸಚಿವರಿಗೆ ಪ್ರಶಸ್ತಿ ಕೊಡುವುದಾದರೆ ಅದು ನನಗೆ ಸಿಗುವುದು ಪಕ್ಕಾ! ಹೀಗಂತ ಹೇಳಿದ್ದು ಸಚಿವ ಜಮೀರ್ ಅಹ್ಮದ್ ಖಾನ್. ಕೆಪಿಸಿಸಿ ಕಚೇರಿಯಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನು ಭೇಟಿ ಮಾಡಿದ ಬಳಿಕ ಮಾತನಾಡಿ, ರಾಜ್ಯದಲ್ಲಿ ನಂಬರ್ ಒನ್ ಮಿನಿಸ್ಟರ್ ನೀವೇ ಎಂದು ಸುರ್ಜೇವಾಲಾ ನನಗೆ ತಿಳಿಸಿದ್ರು.

ಸಚಿವವಾರು ಯಾರಿಗಾದ್ರು ಅವಾರ್ಡ್ ಕೊಟ್ರೆ ಅದು ನನಗೆ ಸಲ್ಲುತ್ತೆ ಅಂತಾ ಸುರ್ಜೇವಾಲಾ ತಿಳಿಸಿದ್ದಾರೆ. ಅವರ ಮಾತಿನಿಂದ ನನಗೆ ತುಂಬಾ ಖುಷಿಯಾಗಿದೆ ಎಂದರು. ವಸತಿ ಹಂಚಿಕೆಯಲ್ಲಿ ಆಗಿರುವ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಶಾಸಕ ಬಿ ಆರ್ ಪಾಟೀಲ್ ಮಾಡಿರುವ ಆರೋಪದ ಹಿನ್ನಲೆಯಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರಿಗೆ ಪಿನ್ ಟು ಪಿನ್ ಮಾಹಿತಿಯನ್ನು ನೀಡಿದರು. ಕೆಪಿಸಿಸಿ ಕಚೇರಿಯಲ್ಲಿ ಸುರ್ಜೇವಾಲ ಅವರನ್ನು ಭೇಟಿ ಮಾಡಿದ ಜಮೀರ್, ಆರೋಪಕ್ಕೆ ಸೂಕ್ತ ದಾಖಲೆಗಳ ಜೊತೆಗೆ ಸ್ಪಷ್ಟನೆ ನೀಡಿದರು. ರಾಜ್ಯಕ್ಕೆ ಆಗಮಿಸಿರುವ ಸುರ್ಜೇವಾಲ ಅವರು ಸಚಿವರುಗಳ ಜೊತೆಗೆ ಸಭೆ ನಡೆಸುತ್ತಿದ್ದಾರೆ. ಶಾಸಕರ ಆರೋಪಗಳಿಗೆ ಸಂಬಂಧಿಸಿದಂತೆ ಸಚಿವರ ಜೊತೆಗಿನ ಮಾತುಕತೆಯ ಸಂದರ್ಭದಲ್ಲಿ ಸ್ಪಷ್ಟನೆ ಕೇಳುತ್ತಿದ್ದಾರೆ. ಸಚಿವರು ಕೂಡಾ ದಾಖಲೆಗಳ ಜೊತೆಗೆ ಇಲಾಖೆಯ ಕೆಲಸ ಕಾರ್ಯಗಳು ಹಾಗೂ ಕಳೆದ ಎರಡು ವರ್ಷಗಳಲ್ಲಿ ಮಾಡಿರುವ ಸಾಧನೆಗಳ ಬಗ್ಗೆ ಮಾಹಿತಿ ನೀಡಿದ್ದಾರೆ.

## ಹುಬ್ಬಳ್ಳಿ ಎನ್‌ಕೌಂಟರ್: ತನಿಖಾ ವರದಿ ಸಲ್ಲಿಕೆಗೆ ಗಡುವು

• ಉದಯವಾಹಿನಿ, ಬೆಂಗಳೂರು

ಹುಬ್ಬಳ್ಳಿಯಲ್ಲಿ ಐದು ವರ್ಷದ ಬಾಲಕಿ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಲಾಗಿದೆ' ಎಂಬ ಆರೋಪದಡಿ ಪೊಲೀಸ್ ಎನ್‌ಕೌಂಟರ್‌ನಲ್ಲಿ ಮೃತಪಟ್ಟ ವಲಸೆ ಕಾರ್ಮಿಕ ಪಾಟ್ನಾದ ರಿತೇಶ್ ಕುಮಾರ್ ಪ್ರಕರಣಕ್ಕೆ ಸಂಬಂಧಿಸಿದ ಈವರೆಗಿನ ತನಿಖಾ ವರದಿಯನ್ನು ಸಲ್ಲಿಸಿ' ಎಂದು ಹೈಕೋರ್ಟ್, ರಾಜ್ಯ ಸರ್ಕಾರಕ್ಕೆ ಮೂರು ವಾರಗಳ ಗಡುವು ನೀಡಿದೆ. ಈ ಕುರಿತಂತೆ, 'ಪೀಪಲ್ಸ್ ಯೂನಿಯನ್ ಫಾರ್ ಸಿವಿಲ್ ಲಿಬರ್ಟೀಸ್ ಕರ್ನಾಟಕ' (ಪಿಯುಸಿಎಲ್) ಸಂಘಟನೆಯ ಪ್ರಧಾನ ಕಾರ್ಯದರ್ಶಿ ಇ.ಶುಜಾಯುತ್ ಉಲ್ಲಾ ಮತ್ತು ಮಹಿಳಾ ಹಕ್ಕುಗಳ ಹೋರಾಟಗಾರ್ತಿ ಮಧು ಭೂಷಣ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ.ಕಾಮೇಶ್ವರ ರಾವ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. ಪ್ರಕರಣದಲ್ಲಿ ಈವರೆಗೆ ಆಗಿರುವ ತನಿಖೆಯ ವರದಿಯನ್ನು ಮೂರು ವಾರಗಳಲ್ಲಿ ಸಲ್ಲಿಸಿ' ಎಂದು ನ್ಯಾಯಪೀಠ ವಿಚಾರಣೆಯನ್ನು ಆಗಸ್ಟ್ 11ಕ್ಕೆ ಮುಂದೂಡಿತು.

## ಚುನಾವಣಾ ಆಯೋಗಕ್ಕೆ ಸುಳ್ಳು ಮಾಹಿತಿ: ಜನಾರ್ದನ ರೆಡ್ಡಿಗೆ ನೋಟಿಸ್

• ಉದಯವಾಹಿನಿ, ಬೆಂಗಳೂರು

ಕಲ್ಯಾಣ ರಾಜ್ಯ ಪ್ರಗತಿ ಪಕ್ಷದಿಂದ ಗಂಗಾವತಿ ವಿಧಾನಸಭಾ ಕ್ಷೇತ್ರದಲ್ಲಿ ಗೆದ್ದು ಶಾಸಕರಾಗಿರುವ ಗಾಲಿ ಜನಾರ್ದನ ರೆಡ್ಡಿ ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ಸುಳ್ಳು ಮಾಹಿತಿ ನೀಡಿದ್ದು, ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಬೇಕು' ಎಂದು ಕೋರಲಾಗಿರುವ ಅರ್ಜಿಗೆ ಸಂಬಂಧಿಸಿದಂತೆ ಕೇಂದ್ರ ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಲು ಹೈಕೋರ್ಟ್ ಆದೇಶಿಸಿದೆ. ಈ ಸಂಬಂಧ ಆಂಧ್ರಪ್ರದೇಶದ ಅನಂತಪುರಂ ನಿವಾಸಿ ಟಪಾಲ್ ಶ್ಯಾಮ್ ಪ್ರಸಾದ್ ಸಲ್ಲಿಸಿರುವ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಸ್.ಸುನೀಲ್ ದತ್ ಯಾದವ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು.



# ಸೇತುವೆಗೆ ಸಿಗಂದೂರು ಚೌಡೇಶ್ವರಿ ನಾಮಕರಣ ಮಾಡಿದ ಗಡ್ಕರಿ

### ದ್ವೀಪ ಜನರ 70 ವರ್ಷಗಳ ಕನಸು ಸಾಕಾರ

● ಕೇಂದ್ರ ಸಚಿವ ನಿತಿನ್ ಗಡ್ಕರಿಗೆ 'ರೋಡ್ಕರಿ' ಎಂದು ನಾಮಕರಣ ● ಕಾರಣ ವಿವರಿಸಿದ ಕೇಂದ್ರ ಸಚಿವ ಜೋಶಿ ● ಕೇಂದ್ರ ಸಚಿವರಿಗೆ ಗೌರವ ನೀಡಿ ನಾನು ಕಾರ್ಯಕ್ರಮದಿಂದ ದೂರ ಉಳಿದೆ: ಜಾರಕಿಹೊಳಿ

**ನಿತಿನ್ ಗಡ್ಕರಿಗೆ ಸಿಎಂ ಸಿದ್ದರಾಮಯ್ಯ ಪತ್ರ**





ದೇಶದಲ್ಲಿ ಸಚಿವ ನಿತಿನ್ ಗಡ್ಕರಿ ಅವರು ಸಂಚಾರ ಕ್ರಾಂತಿಯನ್ನೇ ಮಾಡುತ್ತಿದ್ದಾರೆ. 1998-99ರ ದಶಕದಲ್ಲಿ ಹಲವು ಪ್ರಥಮಗಳ ರೂವಾರಿ ಆಗಿದ್ದವರು, ಅಟಲ್ ಬಿಹಾರಿ ವಾಜಪೇಯಿ ಸರ್ಕಾರದಲ್ಲಿ ಶುರು ಮಾಡಿದ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಗೆ ರೂಪುರೇಷೆ ಕೊಟ್ಟದ್ದಲ್ಲದೆ, ದೇಶದಲ್ಲಿ ಹಳ್ಳಿಗಳ ರಸ್ತೆ ಸುಧಾರಣೆ, ವಿದ್ಯುತ್ ಯೋಜನೆಗಳನ್ನು ಸಾಕಾರಗೊಳಿಸಿದವರಾಗಿದ್ದಾರೆ

-ಪ್ರಹ್ಲಾದ್ ಜೋಶಿ, ಕೇಂದ್ರ ಸಚಿವ

• ಉದಯವಾಹಿನಿ, ಶಿವಮೊಗ್ಗ

ಸಾಗರದ ಶರಾವತಿ ಹಿನ್ನೀರಿನಲ್ಲಿ ನಿರ್ಮಾಣವಾಗಿರುವ ದೇಶದ 2ನೇ ಅತಿ ಉದ್ದದ ಕೇಬಲ್ ಸೇತುವೆಯಾದ ಸಿಗಂದೂರು ಸೇತುವೆ ಕೇಂದ್ರ ರಸ್ತೆ ಸಾರಿಗೆ ಸಚಿವ ನಿತಿನ್ ಗಡ್ಕರಿಯವರು ಲೋಕಾರ್ಪಣೆ ಮಾಡಿದರು. ಸೇತುವೆ ಲೋಕಾರ್ಪಣೆ ವೇಳೆ ನಡೆದ ಹೋಮದಲ್ಲಿ ಸಚಿವರು ಪಾಲ್ಗೊಂಡರು. ಲೋಕಾರ್ಪಣೆ ನಂತರ ಸಿಗಂದೂರು ಚೌಡೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿ, ಚೌಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಅವರಿಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಮಾಜಿ ಸಚಿವ ಕಾಗೋಡು ತಿಮ್ಮಪ್ಪ, ಸಂಸದ ಬಿ.ವೈ ರಾಘವೇಂದ್ರ, ಮಾಜಿ ಶಾಸಕ ಹರತಾಳು ಹಾಲಪ್ಪ ಸಾಥ್ ನೀಡಿದರು. ದೇವಸ್ಥಾನದಲ್ಲಿ ನವಚಂಡಿಕಾ ಹೋಮದ ಪೂರ್ಣಾವತಿ




ನೆರವೇರಿಸಲಾಯಿತು. ಧರ್ಮದರ್ಶಿ ರಾಮಪ್ಪನವರು ಕೇಂದ್ರ ಸಚಿವರಿಗೆ ಸೇತುವೆಯ ಪ್ರತಿಕೃತಿ ನೀಡಿ ಗೌರವಿಸಿದರು. ಸೇತುವೆ ಲೋಕಾರ್ಪಣೆ ಜೊತೆಗೆ ಶಿವಮೊಗ್ಗ ಜಿಲ್ಲೆಯ ವಿವಿಧ ಭಾಗಗಳ 2,056 ಕೋಟಿ ರೂ. ವೆಚ್ಚದ ವಿವಿಧ ಯೋಜನೆಗಳಿಗೆ ಸಚಿವರು ಚಾಲನೆ ನೀಡಿದ್ದಾರೆ. ಸಿಗಂದೂರು ಸೇತುವೆ, 2019ರ ಡಿಸೆಂಬರ್‌ನಲ್ಲಿ ಕಾಮಗಾರಿ ಪ್ರಾರಂಭಗೊಂಡಿತು. 2.44 ಕಿಲೋಮೀಟರ್ ಉದ್ದದ ಕೇಬಲ್ ಸೇತುವೆ ಇದಾಗಿದ್ದು, ಅಗಲ 16 ಮೀಟರ್, ಸೇತುವೆ ಫುಟ್‌ಪಾತ್ 2★1.5 ಮೀಟರ್ ಇದೆ. ಸಂಪರ್ಕ ರಸ್ತೆ 1.05 ಕೀಮೀ ನಿಂದ 3 ಕೀಮಿ ಇದ್ದು, ಉಕ್ಕಿನ ಕೇಬಲ್ ಉದ್ದ 470 ಮೀಟರ್, ಕೇಬಲ್ ಎತ್ತರ 38.50 ಮೀಟರ್ ಇದೆ. 473 ಕೋಟಿ ರೂ. ವೆಚ್ಚವಾಗಿದೆ. ದಿಲೀಪ್ ಬಿಲ್ಡ್ ಕಾನ್ ಎಂಬ ಕಂಪನಿಯಿಂದ ಸೇತುವೆ ನಿರ್ಮಾಣವಾಗಿದೆ. ಕೋವಿಡ್ ಕಾರಣದಿಂದ ಮೂರು ವರ್ಷದಲ್ಲಿ ಮುಗಿಯಬೇಕಾದ ಸೇತುವೆ ಐದು ವರ್ಷ ತೆಗೆದುಕೊಂಡಿತು. 100 ಟನ್ ತೂಕ ತಡೆದುಕೊಳ್ಳುವ ಸಾಮರ್ಥ್ಯ ಹೊಂದಿದೆ. ಗುಜರಾತ್‌ನ ಓಖಾ ಬಳಿ ನರ್ಮದಾ ನದಿಗೆ ನಿರ್ಮಿಸಿದ ತೂಗು ಸೇತುವೆ ಬಳಿಕ ದೇಶದಲ್ಲಿ ನಿರ್ಮಾಣಗೊಂಡ ದೇಶದ ಎರಡನೇ ಅತೀ ದೊಡ್ಡ ಕೇಬಲ್ ಸೇತುವೆ ಇದಾಗಿದೆ.

**2.12 ಕಿ.ಮೀ. ಉದ್ದದ ಸಿಗಂದೂರು ಸೇತುವೆ:** ಸಿಗಂದೂರು ಸೇತುವೆ ಸೋಮವಾರ ಲೋಕಾರ್ಪಣೆ ಮಾಡಲಾಯಿತ್ತು. 473 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣಗೊಂಡಿರುವ 2.12 ಕಿ ಮೀ. ಉದ್ದದ ಈ ಸೇತುವೆ, ಭಾರತದ 4ನೇ ಅತಿ ಉದ್ದದ ಕೇಬಲ್ ಸೇತುವೆ. ಕರ್ನಾಟಕದ ಅತಿ ಉದ್ದದ ಸೇತುವೆ ಎಂಬ ಖ್ಯಾತಿಗೆ ಪಾತ್ರವಾಗಲಿದೆ. ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರು ಸೇತುವೆ ಉದ್ಘಾಟಿಸಿದ್ದಾರೆ. ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಸಂಸದ ಬಿ.ವೈ ರಾಘವೇಂದ್ರ, ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಮತ್ತಿತರರು ಭಾಗವಹಿಸಿದ್ದಾರೆ.


**1** ಸಿಗಂದೂರು ಸೇತುವೆ ಉದ್ಘಾಟನೆ ಮುಂದೂಡಿ ಎಂದು ಕೇಂದ್ರ ಸಚಿವರಿಗೆ ಸಿದ್ದರಾಮಯ್ಯ ಪತ್ರ.

**2** ಅಂಬಾರಗೋಡ್ಲು-ಕಳಸವಳ್ಳಿ (ಸಿಗಂದೂರು) ಸೇತುವೆ ಉದ್ಘಾಟನೆ ಕಾರ್ಯಕ್ರಮ ಸೋಮವಾರ ನಿಗದಿ.



### ಶಿಷ್ಟಾಚಾರ ಪಾಲಿಸದೆ ಸಿಗಂದೂರಿನ ಸೇತುವೆ ಉದ್ಘಾಟನೆ

ಸಿಗಂದೂರು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಪಾಲನೆಯಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಸಾಗರ ತಾಲ್ಲೂಕಿನಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮವನ್ನು ಮುಂದೂಡುವಂತೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರಿಗೆ ದೂರವಾಣಿ ಮೂಲಕ ಮಾತನಾಡಿ ಪತ್ರವನ್ನೂ ಬರೆಯಲಾಗಿತ್ತು. ಕೇಂದ್ರ ಸಚಿವರು ಕಾರ್ಯಕ್ರಮ ಮುಂದೂಡಲು ಸಮ್ಮತಿಸಿದ್ದರು. ಹೀಗಿದ್ದರೂ ಸಹ ಇಲ್ಲಿನ ಸ್ಥಳೀಯ ಬಿಜೆಪಿ ನಾಯಕರ ಒತ್ತಡಕ್ಕೆ ಮಣಿದು, ನನ್ನ ಗಮನಕ್ಕೆ ತರದೇ ಕಾರ್ಯಕ್ರಮವನ್ನು ಇಂದೇ ಆಯೋಜಿಸಿದ್ದಾರೆ. ಪೂರ್ವನಿಯೋಜಿತ ಕಾರ್ಯಕ್ರಮಗಳಲ್ಲಿ ಭಾಗಿಯಾಗಲು ನಾನು ವಿಜಯಪುರ ಜಿಲ್ಲೆಗೆ ತೆರಳಬೇಕಾಗಿರುವುದರಿಂದ ಸಾಗರ ತಾಲ್ಲೂಕಿನ ಕಾರ್ಯಕ್ರಮಕ್ಕೆ ಹೋಗಲು ಸಾಧ್ಯವಾಗುತ್ತಿಲ್ಲ ಎಂದರು.



### ಕೇಂದ್ರ ಸರ್ಕಾರ ಸಿಎಂಗೆ ಮೊದಲು ತಿಳಿಸಬೇಕು

ಸಿಗಂದೂರು ಸೇತುವೆ ಲೋಕಾರ್ಪಣೆ ವಿಚಾರವಾಗಿ ಕೇಂದ್ರ ಸರ್ಕಾರ ಸಿಎಂಗೆ ಮೊದಲು ತಿಳಿಸಬೇಕು. ರಾಜ್ಯ ಸರ್ಕಾರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಸದಾಶಿವನಗರ ನಿವಾಸದ ಬಳಿ ಇಂದು ಮಾತನಾಡಿದ ಅವರು, ಸೇತುವೆ ಉದ್ಘಾಟನೆಗೆ ಸಿಎಂ ಗೈರು ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಕೇಂದ್ರ ಸರ್ಕಾರ ಸಿಎಂಗೆ ಮೊದಲು ತಿಳಿಸಬೇಕು. ರಾಜ್ಯ ಸರ್ಕಾರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ಸಂಸದರು ಮನವಿ ಮಾಡಿದ್ದಾರೆ. ಅದಕ್ಕಾಗಿ ಸಿಎಂ ಪತ್ರ ಕೂಡಾ ಬರೆದಿದ್ದಾರೆ. ಇದೊಂದು ದೊಡ್ಡ ಕಾರ್ಯಕ್ರಮ. ಒಂದು ತಿಂಗಳ ಮುನ್ನವೇ ಹೇಳಬೇಕು. 2,000 ಕೋಟಿಗೂ ಹೆಚ್ಚು ಹಣ ಖರ್ಚಾಗಿದೆ. ನಮ್ಮ ನಿರಾವರಿ ಇಲಾಖೆಯಿಂದಲೂ ಖರ್ಚು ಮಾಡಿದ್ದೇವೆ. ಇದಕ್ಕೆ ಹೋಗಲೇಬೇಕಾಗಿತ್ತು ಎಂದು ಅವರು ಹೇಳಿದರು.

# ಹಾರ್ಲಿಕ್ಸ್ ಬಿಸ್ಕೆಟ್‌ನಲ್ಲಿ ಕ್ರಿಮಿನಾಶಕ ಪತ್ತೆ ಆರೋಪ

### ಎಚ್‌ಯುಎಲ್ ಮುಖ್ಯ ವ್ಯವಸ್ಥಾಪಕ ನಿರ್ದೇಶಕ ರೋಹಿತ್ ಜಾವ ವಿರುದ್ಧದ ಪ್ರಕರಣ ರದ್ದು.

• ಉದಯವಾಹಿನಿ, ಬೆಂಗಳೂರು

ಹಾರ್ಲಿಕ್ಸ್ ಬಿಸ್ಕೆಟ್‌ನಲ್ಲಿ ಕ್ರಿಮಿನಾಶಕ ಪತ್ತೆ ಆರೋಪ ಸಂಬಂಧ ಹಿಂದೂಸ್ತಾನ್ ಯುನಿಲಿವರ್ ಲಿಮಿಟೆಡ್ (ಎಚ್‌ಯುಎಲ್)ನ ಮುಖ್ಯ ವ್ಯವಸ್ಥಾಪಕ ನಿರ್ದೇಶಕ ರೋಹಿತ್ ಜಾವ ವಿರುದ್ಧದ ಪ್ರಕರಣವನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿದೆ.

ತಮ್ಮ ವಿರುದ್ಧ ಹೆಬ್ಬಾಳ ವೃತ್ತದ ಆಹಾರ ಸುರಕ್ಷಾ ಅಧಿಕಾರಿ ದಾಖಲಿಸಿದ್ದ ಆಹಾರ ಸುರಕ್ಷಾ ನಿಯಮ ಉಲ್ಲಂಘನೆ ಪ್ರಕರಣ ರದ್ದು ಕೋರಿ ರೋಹಿತ್ ಜಾವ ಸಲ್ಲಿಸಿದ್ದ ಅರ್ಜಿ ಕುರಿತು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜೆ.ಎಂ. ಖಾಜಿ ಅವರಿದ್ದ ಏಕಸದಸ್ಯ ಪೀಠ, ಈ ಆದೇಶ ಮಾಡಿದೆ.

ಕಂಪನಿ ಬದಲು ಎಂಡಿಯನ್ನು ಕಕ್ಷಿದಾರರ ಮಾಡಲಾಗಿದೆ ಅಲ್ಲದೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯಿದೆ- 2006 ಅಡಿಯಲ್ಲಿ ಈ ರೀತಿಯ ಪ್ರಕರಣಗಳಲ್ಲಿ ಕಂಪನಿಯನ್ನು ಕಕ್ಷಿದಾರರನ್ನಾಗಿ ಮಾಡಬೇಕೆಂದು ಹೇಳಲಾಗಿದೆ. ಈ ಪ್ರಕರಣದಲ್ಲಿ ಕಂಪನಿಯನ್ನು ಕಕ್ಷಿದಾರರನ್ನಾಗಿಸಿಲ್ಲ. ಅದಕ್ಕೆ ಬದಲಾಗಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರನ್ನು ಮಾತ್ರ ಕಕ್ಷಿದಾರರನ್ನಾಗಿ ಮಾಡಲಾಗಿದೆ. ಆದ್ದರಿಂದ ಕಂಪನಿಯ ಪರವಾಗಿ ವ್ಯವಸ್ಥಾಪಕ ನಿರ್ದೇಶಕರನ್ನು ಮಾತ್ರ ವಿಚಾರಣೆಗೆ ಒಳಪಡಿಸಲಾಗದು ಎಂದು ನ್ಯಾಯಪೀಠ ಆದೇಶಿಸಿದೆ. ನಿರ್ದಿಷ್ಟ ವ್ಯಕ್ತಿಯನ್ನು ಹೊಣೆಗಾರರನ್ನಾಗಿಸಲು ಕಂಪನಿಯನ್ನೂ ಹೊಣೆಗಾರರನ್ನಾಗಿ ಮಾಡಬೇಕಾಗುತ್ತದೆ.

ಆದ್ದರಿಂದ ಆರೋಪಿಯ ವಿರುದ್ಧದ ಕ್ರಿಮಿನಲ್ ಪ್ರಕ್ರಿಯೆ ವಜಾಗೊಳಿಸಬೇಕಿದೆ. ಆರೋಪಿಗಳ ವಿರುದ್ಧ ಹೆಚ್ಚುವರಿಯಾಗಿ ಕಂಪನಿಯನ್ನೂ ಸೇರಿಸಿ ಹೊಸದಾಗಿ ದೂರುಗಳು ದಾಖಲಿಸಲು ದೂರುದಾರರಿಗೆ ಸ್ವಾತಂತ್ರ್ಯ ಇರಲಿದೆ ಎಂದು ಖುದ್ದಾಗಿ ನ್ಯಾಯಪೀಠ ಆದೇಶದಲ್ಲಿ ವಿವರಿಸಿದೆ.

**ಪ್ರಕರಣದ ಹಿನ್ನೆಲೆ ಏನು:** ಬೆಂಗಳೂರಿನ ನಗರದ ಹೆಬ್ಬಾಳ ವೃತ್ತದ ಡೌನ್‌ಟೌನ್ ಸೂಪರ್ ಮಾರ್ಕೆಟ್‌ನಲ್ಲಿ ತೆಗೆದುಕೊಂಡಿದ್ದ ಹಾರ್ಲಿಕ್ಸ್ ಬಿಸ್ಕೆಟ್‌ನಲ್ಲಿ ಆಹಾರ ಸುರಕ್ಷೆ ಮತ್ತು ಗುಣಮಟ್ಟ ನಿಯಂತ್ರಣ ಕಾಯಿದೆಯಡಿ ನಿಗದಿಪಡಿಸಿರುವುದಕ್ಕಿಂತ ಹೆಚ್ಚಿನ ಕ್ರಿಮಿನಾಶಕ ಅಂಶ ಪತ್ತೆಯಾಗಿದೆ. ಇದು ಮಾನವನ ಆರೋಗ್ಯಕ್ಕೆ ಹಾನಿಕಾರಕ ಎಂದು ಆರೋಪಿಸಿ ಆಹಾರ ಸುರಕ್ಷತಾ ಅಧಿಕಾರಿ 2023ರ ಜೂನ್‌ನಲ್ಲಿ ಪ್ರ ಕರಣ ದಾಖಲಿಸಿದ್ದರು.

ಆರ್ಥಿಕ ಅಪರಾಧಗಳಿಗಾಗಿ ಸ್ಥಾಪಿಸಲಾಗಿರುವ ವಿಶೇಷ ನ್ಯಾಯಾಲಯದ ಮುಂದೆ ದಾಖಲಾಗಿದ್ದ ಪ್ರಕರಣದಲ್ಲಿ ಹಿಂದೂಸ್ತಾನ್ ಯುನಿಲಿವರ್ ಲಿಮಿಟೆಡ್ ಅನ್ನು ಆರೋಪಿಯನ್ನಾಗಿ ಮಾಡಲಾಗಿರಲಿಲ್ಲ. ಬದಲಾಗಿ ಅರ್ಜಿದಾರ ರೋಹಿತ್ ಜಾವ ವಿರುದ್ಧ ಎಫ್ ಸಿ ಸಿ ಕಾಯಿದೆ ಸೆಕ್ಷನ್ 51 ಮತ್ತು 59 ರಡಿ ಪ್ರಕರಣ ದಾಖಲಿಸಿ, ಕಂಪನಿಯ ನಿರ್ವಹಣೆಗೆ ಜಾವ ಕಾರಣ ಎಂದು ದೂರಲಾಗಿತ್ತು. 2023ರ ಜೂನ್ 26 ರಂದು ವಿಚಾರಣಾಧೀನ ನ್ಯಾಯಾಲಯವು ಸಂಜ್ಞೆ ಪರಿಗಣಿಸಿ ಸಮನ್ಸ್ ಜಾರಿಗೊಳಿಸಿತ್ತು. ಅದನ್ನು ಪ್ರಶ್ನಿಸಿ ಜಾವ ಹೈಕೋರ್ಟ್‌ನ ಮೆಟ್ಟಿಲೇರಿದ್ದರು.




# ಲಷ್ಕರೆ ತಯ್ಬಾ ಉಗ್ರ ಚಟುವಟಿಕೆ ಒಪ್ಪಿಕೊಂಡ 8 ಮಂದಿ ಶಂಕಿತ ಉಗ್ರರು

### ● ಎಂಟು ಮಂದಿ ಶಂಕಿತ ಉಗ್ರರನ್ನು ಜುಲೈ 16 ರಂದು ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರು

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಜೈಲು ಹಾಗೂ ರಾಜಧಾನಿಯಲ್ಲಿ ಲಷ್ಕರೆ ತಯ್ಬಾ (ಎಲ್‌ಇಟಿ) ಉಗ್ರ ಚಟುವಟಿಕೆಗಳನ್ನು ನಡೆಸಿದ ಆರೋಪ ಪ್ರಕರಣದಲ್ಲಿ ಎಲ್‌ಇಟಿ ಉಗ್ರ ಟಿ.ನಜೀರ್ ಸೇರಿದಂತೆ ಎಂಟು ಮಂದಿ ಶಂಕಿತ ಉಗ್ರರು ತಪ್ಪೊಪ್ಪಿಗೆ ಅರ್ಜಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ.

ಪ್ರಕರಣದ ಮೊದಲ ಆರೋಪಿ ಟಿ. ನಜೀರ್, ಸೈಯದ್ ಸುಹೈಲ್ (24), ಮೊಹಮದ್ ಉಮರ್ (30), ಜಹೀದ್ ತಬ್ರೇಜ್ (27), ಸೈಯದ್ ಮುದಾಸಿರ್ ಪಾಶಾ (29), ಮೊಹಮದ್ ಫೈಸಲ್ (29), ಸಲ್ಮಾನ್ ಖಾನ್ (29), ಹಾಗೂ ಛೋಟಾ ಉಸ್ಮಾನ್ ಅಲಿಯಾಸ್ ವಿಕ್ರಮ್ ಕುಮಾರ್ ತಪ್ಪೊಪ್ಪಿಗೆ ಅರ್ಜಿಯನ್ನು ಸಲ್ಲಿಸಿದವರು.

ಎಂಟು ಮಂದಿ ಶಂಕಿತ ಉಗ್ರರನ್ನು ಜುಲೈ 16 ರಂದು ಎನ್ ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು. ನ್ಯಾಯಾಲಯವು ತಪ್ಪೊಪ್ಪಿಗೆ ಅರ್ಜಿಗಳು ಸ್ವಯಂಪ್ರೇರಿತವಾಗಿ ಸಲ್ಲಿಸಿರುವುದೇ ಎಂಬುದನ್ನು ಪರಿಶೀಲಿಸಲಿದೆ. ಅಲ್ಲದೆ, ತಪ್ಪೊಪ್ಪಿಗೆ ಸಿದ್ಧರಿರುವ ಕುರಿತು ಪ್ರತ್ಯೇಕ ಹೇಳಿಕೆ ದಾಖಲು ಪ್ರಕ್ರಿಯೆ ನಡೆಸಲಿದೆ ಎಂದು ಮೂಲಗಳು ತಿಳಿಸಿವೆ.

**ಮೂವರು ಶಂಕಿತರಿಗೆ ಜೈಲು:** ಎಲ್‌ಇಟಿ ಸಂಘಟನೆಗೆ ನೆರವಾಗುತ್ತಿದ್ದ ಆರೋಪದ ಮೇರೆಗೆ ಇತ್ತೀಚೆಗೆ ಬಂಧಿತರಾದ ಪರಪ್ಪನ ಅಗ್ರಹಾರ



ಜೈಲಿನ ಮನೋವೈದ್ಯ ಡಾ.ನಾಗರಾಜ್, ಎಎಸ್‌ಐ ಚಾಂದ್ ಪಾಷಾ, ಅನೀಸಾ ಫಾತೀಮಾರನ್ನು 14 ದಿನ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ನ್ಯಾಯಾಲಯ ಸೋಮವಾರ ಆದೇಶಿಸಿದೆ.

ಜೈಲಿನಲ್ಲಿರುವ ಉಗ್ರ ಟಿ. ನಜೀರ್ ಎಲ್‌ಇಟಿ ಬಲಪಡಿಸಲು ಸಹಕಾರ ನೀಡುತ್ತಿದ್ದರು. ಇದರ ಜತೆಗೆ, ದೇಣಿಗೆ ಸಂಗ್ರಹ ಆರೋಪ ಸಂಬಂಧ ಮೂವರನ್ನೂ ಇತ್ತೀಚೆಗೆ ಎನ್‌ಐಎ ತನಿಖಾ ಅಧಿಕಾರಿಗಳು ಬಂಧಿಸಿದ್ದರು. ತನಿಖೆಯಲ್ಲಿ ಹಣದ ಲಾಭ ಪಡೆದ ವೈದ್ಯ ನಾಗರಾಜ್, ನಜೀರ್‌ಗೆ ಮೊಬೈಲ್ ಮಾರುತ್ತಿದ್ದ ವಿಚಾರ ಬಯಲಾಗಿತ್ತು. ಎಎಸ್‌ಐ ಚಾಂದ್ ಪಾಶಾ ಕೂಡ ಎಸ್ಕಾರ್ಟ್ ಮಾಹಿತಿಯನ್ನು ರವಾನಿಸಿ ಉಗ್ರ ಚಟುವಟಿಕೆಗಳಿಗೆ ಸಹಕಾರ ನೀಡುತ್ತಿದ್ದರು. ತಲೆಮರೆಸಿಕೊಂಡ ಉಗ್ರ ಜುನೈದ್ ಅಹಮದ್‌ನ ತಾಯಿಯಾಗಿರುವ ಅನೀಸಾ ಕೂಡ ನಜೀರ್‌ಗೆ ಸಹಕಾರ ನೀಡಿದ್ದ ವಿಚಾರ ತನಿಖೆಯಲ್ಲಿ ಬಯಲಾಗಿದೆ ಎಂದು ಮೂಲಗಳು ಹೇಳಿವೆ. ಅಪರಾಧ ಪ್ರಕರಣಗಳಲ್ಲಿ ಜೈಲು ಸೇರಿದ್ದ ಸೈಯದ್ ಸೇರಿ ಇತರೆ ಆರೋಪಿಗಳಿಗೆ ಜೈಲಿನಲ್ಲಿಯೇ ಟಿ. ನಾಸೀರ್, ಉಗ್ರವಾದ ತುಂಬಿದ್ದ. ಭಯೋತ್ಪಾದನಾ ಚಟುವಟಿಕೆ ನಡೆಸುವುದು ಹಾಗೂ ದೇಣಿಗೆ ಸಂಗ್ರಹಿಸುವ ಟಾಸ್ಕ್ ನೀಡಿದ್ದ. ಜಾಮೀನು ಪಡೆದು ಹೊರಬಂದಿದ್ದ ಆರೋಪಿಗಳು ಸಂಪೂರ್ಣವಾಗಿ ಎಲ್‌ಇಟಿ ಬಲಗೊಳಿಸುವಲ್ಲಿ ನಿರತರಾಗಿದ್ದರು ಎಂಬ ಸಂಗತಿ ತನಿಖೆಯಲ್ಲಿ ಗೊತ್ತಾಗಿತ್ತು. ಈ ನಿಟ್ಟಿನಲ್ಲಿ ಎನ್‌ಐಎ ಪ್ರಕರಣದ ತನಿಖೆಯ ಜವಾಬ್ದಾರಿ ವಹಿಸಿಕೊಂಡಿತ್ತು. ತನಿಖೆ ಮುಂದುವರಿಸಿರುವ ಎನ್‌ಐಎ, ಈವರೆಗೂ ಉಗ್ರ ಜುನೈದ್ ಸೇರಿ 9 ಜನರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದೆ.

### ಫಿನಾಯಿಲ್ ಕುಡಿದ ಅನೀಸಾ

ನಾಲ್ಕು ದಿನಗಳ ಕಾಲ ಎನ್‌ಐಎ ಕಸ್ಟಡಿಯಲ್ಲಿದ್ದ ಅನೀಸಾ ಫಾತೀಮಾ ಭಾನುವಾರ ಶೌಚಾಲಯ ಸ್ವಚ್ಛಗೊಳಿಸುವ ಫಿನಾಯಿಲ್ ಕುಡಿದು ಅಸ್ವಸ್ಥಗೊಂಡಿದ್ದ ಘಟನೆ ಜರುಗಿದೆ. ಅನೀಸಾ ಫಾತೀಮಾ ಒಬ್ಬರೇ ಶೌಚಾಲಯಕ್ಕೆ ತೆರಳಿದ್ದ ವೇಳೆ ಗೋಡೆ ಮೇಲಿಟ್ಟಿದ್ದ ಫಿನಾಯಿಲ್ ಕುಡಿದಿದ್ದರು. ತಕ್ಷಣ ಗಮನಿಸಿದ ಎನ್‌ಐಎ ಸಿಬ್ಬಂದಿ ಆಕೆಯನ್ನು ಆಸ್ಪತ್ರೆಗೆ ದಾಖಲಿಸಿದ್ದು, ವೈದ್ಯರು ಚಿಕಿತ್ಸೆ ನೀಡಿದ್ದಾರೆ ಎಂದು ಮೂಲಗಳು ಹೇಳಿವೆ.

### ಪ್ರಕರಣದ ಹಿನ್ನೆಲೆ ಏನು

ಬೆಂಗಳೂರಿನಲ್ಲಿ ಎಲ್‌ಇಟಿ ಉಗ್ರ ಚಟುವಟಿಕೆಗಳನ್ನು ನಡೆಸುತ್ತಿದ್ದ ಶಂಕೆ ಮೇರೆಗೆ 2023ರ ಜುಲೈನಲ್ಲಿ ಸಿಸಿಬಿ ಪೊಲೀಸರು, ಆರ್.ಟಿ.ನಗರದ ಸೈಯದ್ ಸುಹೈಲ್ ಸೇರಿದಂತೆ ಆರು ಆರೋಪಿಗಳನ್ನು ಬಂಧಿಸಿದ್ದರು. ಆರೋಪಿಗಳಿಂದ ನಾಲ್ಕು ಹ್ಯಾಂಡ್ ಗ್ರೆನೇಡ್ ವಶಪಡಿಸಿಕೊಂಡಿದ್ದರು. ತನಿಖೆಯಲ್ಲಿ ಆರೋಪಿಗಳಿಗೆ ಎಲ್‌ಇಟಿ ಉಗ್ರ ಟಿ.ನಾಸೀರ್ ಸಂಪರ್ಕವಿದ್ದು, ಆತನ ಪ್ರೇರಣೆಯಿಂದಲೇ ಉಗ್ರ ಚಟುವಟಿಕೆ ನಡೆಸುತ್ತಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,988/Gram24ct ₹9,155/Gram22ct ಬೆಳ್ಳಿ: ₹115.00/Gram

## 20ರಂದು ಕೆಂಪೇಗೌಡ ಜಯಂತ್ಯುತ್ಸವ

• **ಉದಯವಾಹಿನಿ, ಬೆಂಗಳೂರು**

ಭಾರತ ಯುವ ಕೇಂದ್ರದಿಂದ ಬಾಗಲಗುಂಟೆಯ ಶ್ರೀಸಾಯಿ ಕಲ್ಯಾಣ ಮಂಟಪದಲ್ಲಿ ಇದೇ 20ರಂದು ಸಂಜೆ 5 ಗಂಟೆಗೆ ಕೆಂಪೇಗೌಡ ಜಯಂತ್ಯುತ್ಸವ ನಾಡಪ್ರಭು ಕೆಂಪೇಗೌಡ ಪುಸ್ತಕ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ನಿರ್ಮಲಾನಂದ ನಾಥ ಸ್ವಾಮೀಜಿ ಮತ್ತು ವಿಜಯನಗರ ಶಾಖ ಮಠದ ಪೀಠಾಧ್ಯಕ್ಷ ಸೌಮ್ಯನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸುವವರು. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಕೇಂದ್ರದ ಅಧ್ಯಕ್ಷ ವಿನೋದ್ ಗೌಡ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಸಮಾರಂಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇಕಡಾ 95ಕ್ಕೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗಣ್ಯರಿಗೆ ಕೆಂಪೇಗೌಡ ಪ್ರಶಸ್ತಿ ನೀಡಿ ಅಭಿನಂದಿಸಲಾಗುವುದು. ಇದೇ ವೇಳೆ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ' ಎಂದು ಅವರು ತಿಳಿಸಿದರು.

## ಮೈಕ್ರೋ ಫೈನಾನ್ಸ್ ಸಿಬ್ಬಂದಿ ನಿಗೂಢ ಸಾವು; ಓರ್ವನ ಬಂಧನ

• **ಉದಯವಾಹಿನಿ, ಬೆಂಗಳೂರು**

ದಕ್ಷಿಣ ಜಿಲ್ಲೆಯ (ಹಿಂದೆ ರಾಮನಗರ) ಕನಕಪುರ ಪಟ್ಟಣದಲ್ಲಿರುವ ತನ್ನ ಕಚೇರಿಯಲ್ಲಿ 20 ವರ್ಷದ ಮೈಕ್ರೋಫೈನಾನ್ಸ್ ಉದ್ಯೋಗಿಯೊಬ್ಬರು ನಿಗೂಢವಾಗಿ ಸಾವನ್ನಪ್ಪಿದ್ದಾರೆ. ಮೃತನನ್ನು ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲ್ಲೂಕಿನ ಕೊಳತ್ತೂರು ಗ್ರಾಮದ ಆರ್ ದರ್ಶನ್ ಎಂದು ಗುರುತಿಸಲಾಗಿದೆ. ಕೊಲೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಶಾಖೆ ವ್ಯವಸ್ಥಾಪಕರನ್ನು ಬಂಧಿಸಿದ್ದಾರೆ ಮತ್ತು ಇತರ ಇಬ್ಬರು ಸಹೋದ್ಯೋಗಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಈ ಹಿಂದೆ ಮಂಡ್ಯದ ಹಲಗೂರು ಶಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಇತ್ತೀಚೆಗೆ ಬಡ್ತಿಯ ನಂತರ ಕನಕಪುರಕ್ಕೆ ವರ್ಗಾವಣೆಗೊಂಡಿದ್ದರು. ದರ್ಶನ್ ಅವರ ತಂದೆಗೆ ಮೂವರು ಹಿರಿಯ ಅಧಿಕಾರಿಗಳ ಕಿರುಕುಳದ ಬಗ್ಗೆ ದೂರು ನೀಡಿದ್ದರು ಎಂದು ವರದಿಯಾಗಿದೆ. ದರ್ಶನ್ ಅವರ ತಂದೆ ಆರ್ ರಾಜು (58) ನೀಡಿದ ದೂರಿನ ಆಧಾರದ ಮೇಲೆ, ಕನಕಪುರ ಪಟ್ಟಣ ಪೊಲೀಸರು ವ್ಯವಸ್ಥಾಪಕ ರೇವಣ್ಣ, ಇಬ್ಬರು ಹಿರಿಯ ಸಿಬ್ಬಂದಿ ರೇಣುಕಾ ಶರ್ಮಾ ಮತ್ತು ಸಚಿನ್ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

## ಕೇವಲ 2 ಸಾವಿರ ರೂ ಲಂಚಕ್ಕಾಗಿ ಕೆಲಸ ಕಳೆದುಕೊಂಡ ಪಿಡಿಒ

• **ಉದಯವಾಹಿನಿ, ಬೆಂಗಳೂರು**

'ಇ-ಸ್ವತ್ತು'ಗಾಗಿ ಕೇವಲ 2,000 ರೂ. ಲಂಚ ಪಡೆದಿದ್ದ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ)ಗೆ ರಾಜ್ಯ ಸರ್ಕಾರ ಕಡ್ಡಾಯ ನಿವೃತ್ತಿ ನೀಡಿದೆ. ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಚನ್ನೇಪುರ ಗ್ರಾಮ ಪಂಚಾಯತ್‌ನ ಪಿಡಿಒ ಹನುಮಂತಪ್ಪ ಹಂಚಿನಮನೆ, ಮಂಗಳಾಬಾಯಿ ಎಂಬುವವರಿಂದ 14X100 ಅಡಿ ಅಳತೆಯ ಮನೆಯೊಂದಿಗೆ ಮನೆ ಖರೀದಿಸಲು ಇ-ಸ್ವತ್ತು' ಮಂಜೂರಾತಿಗಾಗಿ ಬೇಡಿಕೆ ಇಟ್ಟಿದ್ದರು. ಮಾವಿನಕಟ್ಟೆ ಗ್ರಾಮದ ನಿವಾಸಿ ರಂಗನಾಥ ಬಿ.ಎಚ್. ಅವರಿಂದ 2,000 ರೂ. ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ರಾಜ್ಯ ಸರ್ಕಾರವು ಜುಲೈ 31, 2023 ರಂದು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14 (ಎ) ಅಡಿಯಲ್ಲಿ ಅವರ ವಿರುದ್ಧದ ತನಿಖೆಯನ್ನು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ ವೀರಪ್ಪ ಅವರಿಗೆ ವಹಿಸಿತು. ಫೆಬ್ರವರಿ 18 ರಂದು ಉಪ ಲೋಕಾಯುಕ್ತರು, ಕರ್ನಾಟಕ ನಾಗರಿಕ ಸೇವಾ (ನಡವಳಿಕೆ) ನಿಯಮಗಳು, 1966 ರ ನಿಯಮ 3 (1) (1), (2) ಮತ್ತು (3) ಅಡಿಯಲ್ಲಿ ಅನುಚಿತವಾಗಿ ವರ್ತಿಸಿದ್ದರಿಂದ ಅವರಿಗೆ ಕಡ್ಡಾಯ ನಿವೃತ್ತಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಿದ್ದಾರೆ. ಶಿಫಾರಸನ್ನು ಅಂಗೀಕರಿಸಿದ ರಾಜ್ಯ ಸರ್ಕಾರವು ಮಾರ್ಚ್ 10 ರಂದು ಹನುಮಂತಪ್ಪ ಹಂಚಿನಮನೆ ಅವರಿಗೆ ಶೋಕಾಸ್ ನೋಟಿಸ್ ನೀಡಿತು. ಇದಕ್ಕೆ ಉತ್ತರವಾಗಿ, ಅವರು ಆರೋಪಗಳನ್ನು ನಿರಾಕರಿಸಿದರು, ತನಿಖಾಧಿಕಾರಿಯು ಅವರ ವಿರುದ್ಧದ ಆರೋಪಗಳನ್ನು ಪರಿಶೀಲಿಸಲು ಸರಿಯಾಗಿ ವಿಚಾರಣೆ ನಡೆಸಿಲ್ಲ ಎಂದು ಹೇಳಿದರು.

## ಪಬ್, ರೆಸ್ಟೋರೆಂಟ್ ಮೇಲೆ ದಾಳಿ

• **ಉದಯವಾಹಿನಿ, ಬೆಂಗಳೂರು**

ನಗರದ ವಿವಿಧೆಡೆ ಪಬ್, ರೆಸ್ಟೋರೆಂಟ್‌ಗಳ ಮೇಲೆ ಶನಿವಾರ ರಾತ್ರಿ ಸಿಸಿಬಿ (ಮಾದಕ ದ್ರವ್ಯ ನಿಗ್ರಹ ದಳ) ವಿದೇಶೀಯರ ವಿಭಾಗೀಯ ನೋಂದಣಾಧಿಕಾರಿ ಕಚೇರಿ (ಎಫ್‌ಆರ್‌ಆರ್‌ಒ) ಅಧಿಕಾರಿಗಳ ತಂಡ ಜಂಟಿಯಾಗಿ ದಾಳಿ ನಡೆಸಿ, ಮಾದಕವಸ್ತುಗಳನ್ನು ಜಪ್ತಿ ಮಾಡಿದೆ.ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಟ್ರಿನಿಟಿ ಸರ್ಕಲ್, ಚರ್ಚ್ ಸ್ಟ್ರೀಟ್, ಕೋರಮಂಗಲದ ಹಲವು ಕಡೆ ಕ್ಲಬ್ ಮತ್ತು ರೆಸ್ಟೋರೆಂಟ್‌ಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ವಿದೇಶಿ ಡ್ರಗ್ಸ್ ಪೆಡ್ಲರ್ ಒಬ್ಬನನ್ನು ಬಂಧಿಸಿದ್ದು, ಎಷ್ಟು ಮೊತ್ತದ ಡ್ರಗ್ಸ್ ಜಪ್ತಿ ಮಾಡಲಾಗಿದೆ ಎಂಬುದನ್ನು ಬಹಿರಂಗಪಡಿಸಿಲ್ಲ, ಈ ಬಗ್ಗೆ ಕಬ್ಬನ್ ಪಾರ್ಕ್ ಹಾಗೂ ಕೋರಮಂಗಲ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಎಫ್‌ಐಆರ್ ದಾಖಲಿಸಿದ್ದಾರೆ. ನೈಜೀರಿಯಾದ ಪೆಡ್ಲರ್‌ನನ್ನು ವಶಕ್ಕೆ ಪಡೆದು ಎಫ್‌ಆರ್‌ಆರ್ ಅಧಿಕಾರಿಗಳು ವಿಚಾರಣೆ ನಡೆಸಿದಾಗ, ವೀಸಾ ಅವಧಿ ಮುಕ್ತಾಯಗೊಂಡಿದ್ದರೂ ನಗರದಲ್ಲಿ ಅಕ್ರಮವಾಗಿ ವಾಸವಾಗಿರುವುದು ಪತ್ತೆಯಾಗಿದೆ. ಪಬ್‌ಗೆ ಬರುವ ಗ್ರಾಹಕರಿಗೆ ಡ್ರಗ್ಸ್ ಪೂರೈಕೆ ಮಾಡುತ್ತಿದ್ದ ಎಂದು ಸಿಸಿಬಿ ಪೊಲೀಸರು ತಿಳಿಸಿದ್ದಾರೆ.

# ಪ್ರಾಜೆಕ್ಟ್ ಮೆಜೆಸ್ಟಿಕ್ ಕನಸಿಗೆ ರೆಕ್ಕೆ

### ಬಸ್ ನಿಲ್ದಾಣಗಳ ಪುನರ್ ಅಭಿವೃದ್ಧಿ, ಸಾರಿಗೆ ಹಬ್, ವಾಣಿಜ್ಯ ಸಂಕೀರ್ಣ ನಿರ್ಮಿಸುವ ಯೋಜನೆ

• **ಉದಯವಾಹಿನಿ, ಬೆಂಗಳೂರು**

ಬಸ್ ನಿಲ್ದಾಣಗಳ ಪುನರ್ ಅಭಿವೃದ್ಧಿ, ಸಾರಿಗೆ ಹಬ್, ವಾಣಿಜ್ಯ ಸಂಕೀರ್ಣ ನಿರ್ಮಿಸುವ ಪ್ರಾಜೆಕ್ಟ್ ಮೆಜೆಸ್ಟಿಕ್ ಯೋಜನೆಗಾಗಿ ತಾಂತ್ರಿಕ ಸಲಹೆಗಾರರನ್ನು ನೇಮಿಸಿಕೊಳ್ಳಲು ಕೆಎಸ್‌ಆರ್‌ಟಿಸಿ ನಿರ್ಧರಿಸಿದೆ. ಅವರಿಂದ ಸಲಹೆ ಪಡೆದ ಬಳಿಕ ಯೋಜನೆಯ ನೀಲನಕ್ಷೆ ತಯಾರಿ, ಟೆಂಡರ್ ಪ್ರಕ್ರಿಯೆಗಳು ನಡೆಯಲಿವೆ. ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಕೆಂಪೇಗೌಡ ಬಸ್ ನಿಲ್ದಾಣದಲ್ಲಿ ಪ್ರಾಜೆಕ್ಟ್ ಬೆಂಗಳೂರು ನಿರ್ಮಾಣಗೊಳ್ಳಲಿದ್ದು, ನಗರ ಸಾರಿಗೆ, ಅಂತರಜಿಲ್ಲಾ ಸಾರಿಗೆ, ಮೆಟ್ರೊ, ರೈಲು, ಉಪನಗರ ರೈಲುಗಳ ನಡುವೆ ಉತ್ತಮ ಸಂಪರ್ಕ ಕಲ್ಪಿಸುವ ಹಬ್ ಇದಾಗಲಿದೆ.

ಕೆಎಸ್‌ಆರ್‌ಟಿಸಿಗೆ ಸೇರಿದ 40 ಎಕರೆ ಜಮೀನು ಇಲ್ಲಿ ಇತ್ತು. ಅದರಲ್ಲಿ ಐದು ಎಕರೆಯನ್ನು ನಮ್ಮ ಮೆಟ್ರೊಗೆ ನೀಡಲಾಗಿದೆ. ಉಳಿದ 35 ಎಕರೆಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಬಿಎಂಟಿಸಿ ನಿಲ್ದಾಣ, ಕೆಎಸ್‌ಆರ್‌ಟಿಸಿ ಕಾರ್ಯಾಗಾರ, ಡಿಪೋಗಳಿವೆ. ಈ 35 ಎಕರೆಯಲ್ಲಿ ಹಬ್ ನಿರ್ಮಿಸಲು ಯೋಜಿಸಲಾಗಿದೆ.

ಪ್ರತಿದಿನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ 3,000 ಬಸ್‌ಗಳು ಬಂದು ಹೋಗುತ್ತವೆ. ಬಿಎಂಟಿಸಿ ಬಸ್ ನಿಲ್ದಾಣಕ್ಕೆ ಸುಮಾರು 10,000 ಬಸ್‌ಗಳು ಬಂದು ಹೋಗುತ್ತವೆ. ಅದಕ್ಕೆ ಸರಿಯಾಗಿ ನಿಲ್ದಾಣದ ಅಭಿವೃದ್ಧಿ, ಪಕ್ಕದಲ್ಲೇ ಇರುವ ಮೆಟ್ರೊ, ರೈಲು ನಿಲ್ದಾಣಗಳನ್ನು ಸುಲಭವಾಗಿ ಸಂಪರ್ಕಿಸುವ ರೀತಿಯಲ್ಲಿ ಯೋಜನೆ ಇರಲಿದೆ. ಸಂಪರ್ಕವೂ ಸುಲಭವಾಗುವಂತೆ ಮಾಡಲಾಗುವುದು ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ನೇಮಕವಾಗಲಿರುವ ತಾಂತ್ರಿಕ ಸಲಹೆಗಾರರು ಸ್ಥಳ ಪರಿಶೀಲನೆ, ಸಂಚಾರದ ಚಟುವಟಿಕೆ ವಿಶ್ಲೇಷಣೆ. ಮಾರುಕಟ್ಟೆ ಅಗತ್ಯದ ಮುನ್ಸೂಚನೆ.

ಪರಿಸರ, ಸಾಮಾಜಿಕ ಪರಿಣಾಮಗಳ ಅಧ್ಯಯನದೊಂದಿಗೆ ಕಾರ್ಯಸಾಧ್ಯತಾ ವರದಿಯನ್ನು ಡಿಪಿಆರ್ ಸಿದ್ಧಪಡಿಸಲಿದ್ದಾರೆ. ವಿನ್ಯಾಸ, ಅಂದಾಜು ವೆಚ್ಚಗಳೆಲ್ಲ ಅದರಲ್ಲಿ ಇರಲಿವೆ ಎಂದು ಮಾಹಿತಿ ನೀಡಿದರು. ಶಾಪಿಂಗ್ ಕಾಂಪ್ಲೆಕ್ಸ್, ಆಹಾರ ಮಳಿಗೆಗಳು, ಕಚೇರಿ ಪ್ರದೇಶ ಒಳಗೊಂಡಂತೆ ವಾಣಿಜ್ಯ ವ್ಯವಸ್ಥೆ ಇರಲಿವೆ. ಕೆಎಸ್‌ಆರ್‌ಟಿಸಿಯ ಮೂರು ಟರ್ಮಿನಲ್‌ಗಳಲ್ಲಿ ಅಂಗವಿಕಲರು, ವೃದ್ಧರಾದಿಯಾಗಿ ಎಲ್ಲರಿಗೂ ಓಡಾಡಲು ಅನುಕೂಲವಾಗುವ ವ್ಯವಸ್ಥೆಗಳು ಇರಲಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ಬಜೆಟ್‌ನಲ್ಲಿ ಈ ಯೋಜನೆಯನ್ನು ಪ್ರಸ್ತಾಪಿಸಿದ್ದರು. ಈ ಯೋಜನೆ ಕಾರ್ಯರೂಪಗೊಳಿಸಲು ಪ್ರಕ್ರಿಯೆಗಳು ಈಗ ಆರಂಭವಾಗಿವೆ.

**ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿಕೆ**

**ಬಸ್‌ನಿಲ್ದಾಣ ಪುನರ್ ನಿರ್ಮಾಣ ಅನಿವಾರ್ಯ**

**ಮೆಜೆಸ್ಟಿಕ್‌ನಲ್ಲಿ ಐವತ್ತು ವರ್ಷಗಳ ಹಿಂದೆ ನಿಲ್ದಾಣ ನಿರ್ಮಾಣವಾಗಿತ್ತು. ಈಗ ದಟ್ಟಣೆ ಹೆಚ್ಚಾಗಿದೆ. ಅದಕ್ಕೆ ತಕ್ಕಂತೆ ಮೇಲ್ದರ್ಜೆಗೆ ಏರಿಸುವುದು ಅನಿವಾರ್ಯ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು. ಅದಕ್ಕಾಗಿ ತಾಂತ್ರಿಕ ಸಲಹೆಗಾರರನ್ನು ನೇಮಿಸಿಕೊಳ್ಳಲು ಟೆಂಡರ್ ಕರೆಯಲಾಗಿದೆ. ಮೆಜೆಸ್ಟಿಕ್‌ನಲ್ಲಿ ಏನೆಲ್ಲ ಇರಬೇಕು ಎಂಬುದನ್ನು ನಾವು ಅವರಿಗೆ ತಿಳಿಸುತ್ತೇವೆ. ಯಾವ ರೀತಿ ಇರಬೇಕು ಎಂಬುದರ ವಿನ್ಯಾಸ ಸಲಹೆಗಳನ್ನು ಅವರು ನೀಡಲಿದ್ದಾರೆ. ಮೂರ್ನಾಲ್ಕು ತಿಂಗಳಲ್ಲಿ ವಿಸ್ತೃತ ಯೋಜನಾ ವರದಿಯನ್ನು ತಯಾರು ಮಾಡಲಾಗುವುದು. ಬಳಿಕ ಕಾಮಗಾರಿಗೆ ಸಂಬಂಧಿಸಿದ ಟೆಂಡರ್ ಕರೆಯಲಾಗುವುದು' ಎಂದು ಅವರು ಮಾಹಿತಿ ನೀಡಿದರು.**

## ಯುವ ಪುಸ್ತಕ ಸರಣಿಗೆ ಚಾಲನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಭಾರತೀಯ ಇತಿಹಾಸ ಮತ್ತು ಸಾಂಸ್ಕೃತಿಕ ಸಂಶೋಧನಾ ಪ್ರತಿಷ್ಠಾನ ಎಫ್‌ಐಎಚ್‌ಸಿಆರ್, ಓಲಾ ಫೌಂಡೇಷನ್ ಆಶ್ರಯದಲ್ಲಿ ಯುವ ಪುಸ್ತಕ ಸರಣಿಗೆ ಹೆಬ್ಬಾಳದ ಕೋರ್ಟ್‌ಯಾರ್ಡ್ ಮ್ಯಾರಿಯಟ್‌ನಲ್ಲಿ ಚಾಲನೆ ನೀಡಲಾಯಿತು. ಪ್ರಾಚೀನ ನಾಗರಿಕತೆಗಳಿಂದ ಆರಂಭಿಸಿ ಮಧ್ಯಕಾಲೀನ ರಾಜವಂಶಗಳು, ನಾಯಕರು, ಹಾಗೂ ಸಾಂಸ್ಕೃತಿಕ ಘಟ್ಟಗಳವರೆಗೆ ವಿಷಯಗಳನ್ನು ಸುಂದರ ಚಿತ್ರಣದೊಂದಿಗೆ ಮಕ್ಕಳಿಗೆ ಇತಿಹಾಸವನ್ನು ತಿಳಿಸುವ ಸರಣಿ ಇದಾಗಿದೆ. ಪುಸ್ತಕಗಳು ಏಕಕಾಲದಲ್ಲಿ ಕನ್ನಡ, ಹಿಂದಿ, ತಮಿಳು, ತೆಲುಗು, ಮಲಯಾಳ, ಮರಾಠಿ ಆಂಗ್ಲದಲ್ಲಿ ಪ್ರಕಟವಾಗಿವೆ. ಕಾರ್ಯಕ್ರಮದಲ್ಲಿ ರಾಜ್ಯಸಭೆ ಸದಸ್ಯೆ ಸುಧಾಮೂರ್ತಿ ಮಾತನಾಡಿ, ಇತಿಹಾಸವೇ ನಮ್ಮ ಭಾಷೆ, ನಮ್ಮ ಸಂಸ್ಕೃತಿ. ಮಾತ್ರವಲ್ಲ ನಮ್ಮ ನಡವಳಿಕೆಯ ಬೆನ್ನೆಲುಬು. ಮಕ್ಕಳಿಗೆ ಇತಿಹಾಸವನ್ನು ಸರಳವಾಗಿ, ಕಥೆಗಳ ಮೂಲಕ ಕಲಿಸಲು ಇಂತಹ ಪುಸ್ತಕಗಳು ಬಹಳ ಅವಶ್ಯಕ ಎಂದು ಹೇಳಿದರು.

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಮಕ್ಕಳಲ್ಲಿ ಇತಿಹಾಸದ ಬಗ್ಗೆ ಕುತೂಹಲ ಬೆಳೆಸುವ ಇಂತಹ ಯೋಜನೆಗಳು, ದೇಶದ ಭವಿಷ್ಯವನ್ನು ಉತ್ತಮಗೊಳಿಸಲಿದೆ' ಎಂದರು. ಸದ್ಗುರು ಮಧುಸೂದನ್ ಸಾಯಿ, ಲೇಖಕ ವಿಕ್ರಮ್ ಸಂಪತ್ ಉಪಸ್ಥಿತರಿದ್ದರು.

## ಉಗ್ರನ ಜತೆ ಸಂಪರ್ಕ: ಆರೋಪಿಗಳ ಸಿಡಿಆರ್ ಪರಿಶೀಲನೆ

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ಕಾರಾಗೃಹದಲ್ಲಿ ಉಗ್ರರಿಗೆ ನೆರವು ನೀಡಿದ ಆರೋಪದಡಿ ಎನ್‌ಐಎ ಬಂಧಿಸಿರುವ ಮೂವರು ಆರೋಪಿಗಳ ಮೊಬೈಲ್ ಕರೆಗಳ ವಿವರ (ಸಿಡಿಆರ್) ಪರಿಶೀಲನೆ ನಡೆಸಿದ ವೇಳೆ, ಮಹತ್ವದ ಮಾಹಿತಿ ಲಭ್ಯವಾಗಿದೆ. ಪರಪ್ಪನ ಅಗ್ರಹಾರ ಜೈಲಿನ ಮನೋವೈದ್ಯ ನಾಗರಾಜ್, ಸಶಸ್ತ್ರ ಮೀಸಲು ಪಡೆಯ ಎಎಸ್‌ಐ ಚಾಂದ್ ಪಾಷಾ ಹಾಗೂ ವಿದೇಶದಲ್ಲಿ ತಲೆಮರೆಸಿಕೊಂಡಿರುವ ಆರೋಪಿ ಜುನೈದ್ ಅಹಮದ್‌ನ ತಾಯಿ ಅನೀಸ್ ಫಾತಿಮಾ ಅವರ ಮೊಬೈಲ್ ಕರೆ ವಿವರಗಳ ಪರಿಶೀಲನೆ ನಡೆಸಿದ್ದು, ಆರೋಪಿಗಳು ಯಾರ ಜತೆ ಸಂಪರ್ಕದಲ್ಲಿದ್ದರು ಯಾರಿಗೆಲ್ಲಾ ಕರೆ ಮಾಡಿದ್ದರು ಯಾರೊಂದಿಗೆ ಎಷ್ಟು ಗಂಟೆ ಮಾತನಾಡಿದ್ದರು ಕೊನೆಯ ಬಾರಿಗೆ ಯಾರ ಜತೆ ಮಾತನಾಡಿದ್ದರು ಎಂಬುದನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಪತ್ತೆಹಚ್ಚಿದೆ. ಕರೆಗಳ ಮಾಹಿತಿಯ ಜಾಡು ಹಿಡಿದು ತನಿಖೆ ನಡೆಸಿದಾಗ, ಉಗ್ರ ಟಿ.ನಾಸಿರ್ ಸೂಚನೆಯಂತೆ ವಿದೇಶದಲ್ಲಿ ತಲೆಮರೆಸಿಕೊಂಡಿರುವ ಶಂಕಿತ ಉಗ್ರ ಜುನೈದ್ ಅಹ್ಮದ್, ತನ್ನ ತಾಯಿ ಫಾತಿಮಾಗೆ ಹಲವು ಬಾರಿ ಕರೆ ಮಾಡಿ ಗೋಪ್ಯ ಮಾತುಕತೆ ನಡೆಸಿರುವುದು ಪತ್ತೆಯಾಗಿದೆ. ಪುತ್ರನ ಜತೆಗಿನ ಮಾತುಕತೆ ವಿವರವನ್ನು ಫಾತಿಮಾ ಅವರು ಎಎಸ್‌ಐ ಚಾಂದ್ ಪಾಷಾ ಅವರೊಂದಿಗೆ ಹಂಚಿಕೊಳ್ಳುತ್ತಿದ್ದರು. ಬಳಿಕ ಪಾಷಾ ಅವರು ನಾಸಿರ್‌ಗೆ ವಿಷಯ ತಲುಪಿಸುತ್ತಿದ್ದರು ಎಂಬುದು ಎನ್‌ಐಎ ತನಿಖೆಯಲ್ಲಿ ಗೊತ್ತಾಗಿದೆ. ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡಿರುವ ತನಿಖಾಧಿಕಾರಿಗಳು, ಆರೋಪಿಗಳು ಸಂಪರ್ಕದಲ್ಲಿದ್ದವರ ಪಟ್ಟಿ ಸಿದ್ಧಪಡಿಸಿದ್ದಾರೆ. ನೋಟಿಸ್ ನೀಡಿ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಿದ್ದಾರೆ ಎನ್ನಲಾಗಿದೆ. ಆರೋಪಿಗಳ ಪೊಲೀಸ್ ಕಸ್ಟಡಿ ಸೋಮವಾರ ಅಂತ್ಯಗೊಳ್ಳಲಿದ್ದು, ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುತ್ತದೆ. ತನಿಖೆ ವೇಳೆ ಲಭ್ಯವಾಗಿರುವ ಬಲವಾದ ಸಾಕ್ಷ್ಯಾಧಾರಗಳನ್ನು ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಿ, ಹೆಚ್ಚಿನ ತನಿಖೆಗಾಗಿ ಆರೋಪಿಗಳನ್ನು ಮತ್ತೆ ಒಂದು ವಾರ ಕಸ್ಟಡಿಗೆ ನೀಡುವಂತೆ ಮನವಿ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.



## 500 ಕೋಟಿ ದಾಟಿದ ಮಹಿಳಾ ಫಲಾನುಭವಿಗಳ ಸಂಖ್ಯೆ

• **ಉದಯವಾಹಿನಿ, ಬೆಂಗಳೂರು**

ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣದ ಮಹಿಳಾ ಫಲಾನುಭವಿಗಳ ಸಂಖ್ಯೆ 500 ಕೋಟಿ ದಾಟಿದ್ದು, ಈ ಮೂಲಕ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣದ ಮಹಿಳಾ ಫಲಾನುಭವಿಗಳ ಸಂಖ್ಯೆ 500 ಕೋಟಿ ದಾಟಿರುವ ಹಿನ್ನೆಲೆಯಲ್ಲಿ ಈ ಸಂದರ್ಭವನ್ನು ಗುರ್ತಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಡಿಕೆಶಿ ಸಾಂಕೇತಿಕವಾಗಿ ಮಹಿಳಾ ಪ್ರಯಾಣಿಕರಿಗೆ ನಿರ್ವಾಹಕರಂತೆ ಟಿಕೆಟ್ ನೀಡಲಿದ್ದಾರೆ.

5 ಗ್ಯಾರಂಟಿ ಯೋಜನೆಗಳ ಪೈಕಿ ಶಕ್ತಿ ಯೋಜನೆ ಮೊದಲ ಗ್ಯಾರಂಟಿ ಯೋಜನೆಯಾಗಿದ್ದು, ಈ ಯೋಜನೆಗೆ


ಉದಯವಾಹಿನಿ ಚಿತ್ರ

2023ರ ಜೂ 11ರಂದು ಚಾಲನೆ ನೀಡಲಾಗಿತ್ತು.

ಅಂದಿನಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ನಿಗಮ (ಬಿಎಂಟಿಸಿ) – ನಾಲ್ಕು ಬಸ್ ನಿಗಮಗಳಲ್ಲಿ 497.79 ಕೋಟಿ ಮಹಿಳೆಯರು ಪ್ರಯಾಣ ಮಾಡಿದ್ದಾರೆ.

**ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರು ಉಚಿತ ಟಿಕೆಟ್ ಪಡೆದು ಪ್ರಯಾಣಿಸಿದ ಟಿಕೆಟ್‌ಗಳ ಮೌಲ್ಯ ಅಂದಾಜು 12,600 ಕೋಟಿ ರೂಪಾಯಿಗಳಾಗಿದೆ. ಪ್ರತಿ ದಿನ ಅಂದಾಜು 80 ಲಕ್ಷಕ್ಕೂ ಹೆಚ್ಚಿನ ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯಡಿ ಉಚಿತ ಟಿಕೆಟ್ ಪಡೆದು ಪ್ರಯಾಣಿಸುತ್ತಿದ್ದಾರೆ.**

## ಬಿಎಂಆರ್‌ಸಿಎಲ್‌ಗೆ ಜಮೀನು ಹಸ್ತಾಂತರಿಸಿ

• **ಉದಯವಾಹಿನಿ, ಬೆಂಗಳೂರು**



ಹೆಬ್ಬಾಳ ಬಳಿ ಬಹು ಮಾದರಿ ಸಾರಿಗೆ ಕೇಂದ್ರದ ವಿನ್ಯಾಸದಲ್ಲಿ ರಾಜಿ ಮಾಡಿಕೊಳ್ಳದೆ 45 ಎಕರೆ ಜಮೀನನ್ನು ಬಿಎಂಆರ್‌ಸಿಎಲ್‌ಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ಶಾಸಕ ಎಸ್. ಸುರೇಶ್ ಕುಮಾರ್ ಅವರು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಈ ಬಗ್ಗೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಬಹು ಮಾದರಿ ಸಾರಿಗೆ ಕೇಂದ್ರದ ವಿನ್ಯಾಸದಲ್ಲಿ ರಾಜಿ ಮಾಡಿಕೊಳ್ಳುವಂತೆ ಬೆಂಗಳೂರು ಮೆಟ್ರೊ ರೈಲು ನಿಗಮ ಲಿಮಿಟೆಡ್ (ಬಿಎಂಆರ್‌ಸಿಎಲ್) ಮೇಲೆ ಸ್ಥಾಪಿತ ಹಿತಾಸಕ್ತಿಗಳು ಭಾರಿ ಒತ್ತಡ ಹೇರುತ್ತಿವೆ. ಒತ್ತಡಕ್ಕೆ ಒಳಗಾದ ಬಿಎಂಆರ್‌ಸಿಎಲ್ ಈಗ ಯೋಜನೆಗೆ ತನ್ನ ಭೂಮಿಯ ಬೇಡಿಕೆಯನ್ನು 45 ಎಕರೆಗಳಿಂದ 9 ಎಕರೆಗಳಿಗೆ ಇಳಿಸಿದೆ.

ಇದನ್ನು ಸರಿಹೊಂದಿಸಲು ಡಿಪೊ, ಪಾರ್ಕಿಂಗ್ ಸ್ಥಳ ಮತ್ತು ವಿಮಾನ ನಿಲ್ದಾಣ ಮೆಟ್ರೊ ಮಾರ್ಗವನ್ನು ಸಂಪರ್ಕಿಸುವ ಟ್ರೈ-ಜಂಕ್ಷನ್ ಅನ್ನು ಒಳಗೊಂಡಿರುವ ಮೆಗಾ ಹಬ್ ಸೇರಿದಂತೆ ನಾಗರಿಕಸ್ನೇಹಿ ಸೌಲಭ್ಯಗಳನ್ನು ಕೈಬಿಟ್ಟಿದೆ. ರಾಜಕೀಯ ರಿಯಲ್ ಎಸ್ಟೇಟ್ ಲಾಬಿಗಳಿಂದ ಅಸಹನೀಯ ಒತ್ತಡಕ್ಕೆ ಮಣಿದು, ರಾಜಿ ಮಾಡಿಕೊಳ್ಳುತ್ತಿದೆ ಎಂದು ಹೇಳಿದ್ದಾರೆ. 2024ರ ಮಾರ್ಚ್‌ನಿಂದ 45 ಎಕರೆ ಭೂಮಿಗಾಗಿ ಬಿಎಂಆರ್‌ಸಿಎಲ್ ಮನವಿಯನ್ನು ಪರಿಶೀಲಿಸಲಾಗುತ್ತಿದೆ.

ಈ ವಿಳಂಬವು ವಿಮಾನ ನಿಲ್ದಾಣ ಸಂಪರ್ಕಿಸುವ ಮೆಟ್ರೊದ ಯೋಜನೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ಸ್ವಾಧೀನದಲ್ಲಿರುವ 45 ಎಕರೆ ಭೂಮಿಗೆ ಸಂಬಂಧಿಸಿದಂತೆ, ಭೂಮಾಲೀಕರಿಗೆ ಪಾವತಿಸಲು ಕೆಐಎಡಿಬಿ ನಿಗದಿಪಡಿಸಿದ ಬೆಲೆಯನ್ನು ಪಾವತಿಸಲು ಬಿಎಂಆರ್‌ಸಿಎಲ್ ಸಿದ್ಧವಾಗಿದೆ.

## ಪೇಜಾವರ ಮಠ ಶ್ರೀ ಶ್ರೀ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು, ಶ್ರೀ ಶ್ರೀ ಶ್ರೀ ದೇವವರ್ಧನ ತೀರ್ಥ ಶ್ರೀಪಾದರು ಭವ್ಯ ಶೋಭಾಯಾತ್ರೆಯಲ್ಲಿ ಭಾಗಿ

• **ಉದಯವಾಹಿನಿ, ಬೆಂಗಳೂರು**

ಬಸವನಗುಡಿ ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠದಲ್ಲಿ ಚಾತುರ್ಮಾಸ್ಯ ವ್ರತವನ್ನು ಕೈಗೊಳ್ಳಲಿರುವ ಪರಮಪೂಜ್ಯ ಪೇಜಾವರ ಅಧೋಕ್ಷಜ ಮಠಾಧೀಶರಾದ ಶ್ರೀಶ್ರೀಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದರು ಮತ್ತು ಶ್ರೀ ಶಿರೂರು ಮಠಾಧೀಶರಾದ ಶ್ರೀಶ್ರೀಶ್ರೀ ವೇದವರ್ಧನತೀರ್ಥ ಶ್ರೀಪಾದರ ಸ್ವಾಗತ ಸಮಾರಂಭ. ಭವ್ಯ ಶೋಭಾಯಾತ್ರೆ ಮತ್ತು ಸಭಾ ಕಾರ್ಯಕ್ರಮ.

ಶಾಸಕರಾದ ರವಿಸುಬ್ರಮಣ್ಯ, ವಿಧಾನಪರಿಷತ್ ಸದಸ್ಯರಾದ ಟಿ.ಎ.ಶರವಣ, ಚಾತುರ್ಮಾಸ್ಯ ಸಮಿತಿ ಅಧ್ಯಕ್ಷರಾದ ರಾಮಚಂದ್ರ ಉಪಾಧ್ಯ, ಉತ್ತರಾಧಿ ಮಠದ


ಉದಯವಾಹಿನಿ ಚಿತ್ರ

ನಿರ್ದೇಶಕ ಸತ್ಯಧ್ಯಾನಚಾರ್ಯ ಕಟ್ಟಿ, ಕೇಶವ ಬಾಯರಿ, ಡಾ-ಉದಯಕುಮಾರ್ ಸರಳ್ತಾಯ, ಅಖಿಲ ಭಾರತ ಮಾಧ್ವಮಂಡಲ ಅಧ್ಯಕ್ಷರಾದ ಗೌತಮ್ ಹೆಚ್.ವಿ. ಮತ್ತು ಹರಿದಾಸ ಭಟ್ ರವರು, ವೀರನಾರಾಯಣ ಪಾಂಡುರಂಗಿ, ಪಾರಪತ್ಯಗಾರರಾದ ಶ್ರೀಶಾಭಟ್ ಕಡೆಕಾರ್ ರವರು, ವಿದ್ಯಾಪೀಠ ವ್ಯವಸ್ಥಾಪಕರು ಶಶಾಂಕ್ ಅಚಾರ್ಯ, ಕಾಂಗ್ರೆಸ್ ಪಕ್ಷದ ಮುಖಂಡರಾದ ಬಾಲಾಜಿರವರು ಉಪಸ್ಥಿತರಿದ್ದರು. ಭವ್ಯ ಶೋಭಯಾತ್ರೆಯು ನವ ಮಂತ್ರಾಲಯ ರಾಯರ ಮಠದಲ್ಲಿ ವಿಶೇಷ ಪೂಜೆ ಸಲ್ಲಿಸಿ ಭವ್ಯ ಮೆರವಣಿಗೆಯಲ್ಲಿ ವಿದ್ಯಾಪೀಠ ರಸ್ತೆಯ ಮೂಲಕ ಪೂರ್ಣಪ್ರಜ್ಞಾ ವಿದ್ಯಾಪೀಠದವರಗೆ ಸಾಗಿತು.

ನೂರಾರು ಅಗಮ ಪಂಡಿತರು, ಮಹಿಳಾ ಮಂಡಳಿಯವರಾದ ತ್ರಿಪುರ ಸುಂದರಿ, ಗಿರಿವಾಸವಿ ತಂಡದವರಿಂದ ಭಕ್ತಿಗೀತೆ ಹಾಡಿದರು, ಯಕ್ಷಗಾನ ವೇಷಧಾರಿಗಳು, ಪೂಜಾಕುಣಿತ, ಡೊಳ್ಳು, ವೀರಗಾಸೆ, ತಮಟೆವಾದ್ಯ ವಿವಿಧ ಕಲಾತಂಡಗಳು ಭಾಗವಹಿಸಿದ್ದರು.

## ಕ್ಯಾಂಟರ್ ಚಕ್ರ ಹರಿದು ವಿದ್ಯಾರ್ಥಿನಿ ಸಾವು

• **ಉದಯವಾಹಿನಿ, ಬೆಂಗಳೂರು**

ಕ್ಯಾಂಟರ್ ಹಾಗೂ ದ್ವಿಚಕ್ರ ವಾಹನ ನಡುವೆ ಅಪಘಾತ ಸಂಭವಿಸಿದ ಪರಿಣಾಮ ಹಿಂಬದಿ ಸವಾರರೊಬ್ಬರು ಮೃತಪಟ್ಟಿರುವ ಘಟನೆ ಅಡುಗೋಡಿ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಕೋರಮಂಗಲದ ನಿವಾಸಿ. ಜೈನ್ ಶಕೀನಾ (23) ಮೃತ ಯುವತಿ. ನಗರದ ಕಾಲೇಜಿನಲ್ಲಿ ಓದುತ್ತಿರುವ ಯುವತಿ, ತನ್ನ ಸಹೋದರನ ಜತೆ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದರು. ಈ ವೇಳೆ ದ್ವಿಚಕ್ರ ವಾಹನವು ಕ್ಯಾಂಟರ್‌ಗೆ ತಾಗಿದೆ. ನಿಯಂತ್ರಣ ತಪ್ಪಿ ಇಬ್ಬರು ಕೆಳಗೆ ಬಿದ್ದಿದ್ದಾರೆ. ಬಲಕ್ಕೆ ಬಿದ್ದ ಯುವತಿ ಮೇಲೆ ಕ್ಯಾಂಟರ್ ಚಕ್ರ ಹರಿದಿದೆ.



ತೀವ್ರವಾಗಿ ಗಾಯಗೊಂಡ ಅವರು ಸ್ಥಳದಲ್ಲಿಯೇ ಮೃತಪಟ್ಟರು. ಸವಾರನಿಗೆ ಸಣ್ಣ ಗಾಯವಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಅಡುಗೋಡಿ ಸಂಚಾರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚಾಲಕ ಹಾಗೂ ಕ್ಯಾಂಟರ್ ಅನ್ನು ವಶಕ್ಕೆ ಪಡೆದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ವಾರಕ್ಕೆ ಒಮ್ಮೆಯೂ ಬಾರದ ಕಾವೇರಿ

### ಬಂಜಾರ ಬಡಾವಣೆ, ಪುಣ್ಯಭೂಮಿ ಲೇಔಟ್, ಕಲ್ಕೆರೆ ನಿವಾಸಿಗಳ ಅಳಲು

• **ಉದಯವಾಹಿನಿ, ಬೆಂಗಳೂರು**

ಮನೆಗಳಿಗೆ ಸಮರ್ಪಕವಾಗಿ ಕಾವೇರಿ ನೀರು ಪೂರೈಕೆಯಾಗುತ್ತಿಲ್ಲ. ಕೆಲವು ಮನೆಗಳಿಗೆ ನಿಗದಿತ ಸಮಯದಲ್ಲೂ ನೀರು ಬಿಡುತ್ತಿಲ್ಲ. ಠೇವಣಿ ಪಾವತಿಸಿ ನೀರಿನ ಸಂಪರ್ಕ ಪಡೆದರೂ, ಹಣ ತೆತ್ತು ಟ್ಯಾಂಕರ್ ನೀರು ಖರೀದಿಸುವುದು ತಪ್ಪಿಲ್ಲ! ಇದು ಬೆಂಗಳೂರು ಪೂರ್ವ ತಾಲ್ಲೂಕಿನ ಹೊರಮಾವು ವ್ಯಾಪ್ತಿಯ ಬಂಜಾರ ಬಡಾವಣೆ, ಕಲ್ಕೆರೆ, ಪುಣ್ಯಭೂಮಿ ಬಡಾವಣೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದ ನಿವಾಸಿಗಳ ಬೇಸರದ ನುಡಿಗಳು. ಬಿಬಿಎಂಪಿಗೆ ಹೊಸದಾಗಿ ಸೇರ್ಪಡೆಗೊಂಡಿರುವ 110 ಹಳ್ಳಿಗಳಲ್ಲಿ ಈ ಬಡಾವಣೆಗಳಿವೆ. ಕೆಲವರು ಕಳೆದ ಮಾರ್ಚ್ ಏಪ್ರಿಲ್ ತಿಂಗಳಲ್ಲಿ ಜಲಮಂಡಳಿ ನಡೆಸಿದ 'ಕಾವೇರಿ ನೀರು ಸಂಪರ್ಕ ಅಭಿಯಾನದ ಸಂದರ್ಭದಲ್ಲಿ ಠೇವಣಿ ಪಾವತಿಸಿ ನೀರಿನ ಸಂಪರ್ಕ ಪಡೆದಿದ್ದಾರೆ. ಇನ್ನೂ ಕೆಲವರು ಒಂದೂವರೆ ತಿಂಗಳ ಹಿಂದೆ ಸಂಪರ್ಕ ಪಡೆದಿದ್ದಾರೆ. 'ಆದರೆ ಅನೇಕ ಮನೆಗಳಿಗೆ ಸಮರ್ಪಕವಾಗಿ ನೀರು ಪೂರೈಕೆಯಾಗುತ್ತಿಲ್ಲ' ಎಂಬುದು ನಿವಾಸಿಗಳ ದೂರು.

'ದೊಡ್ಡಕೆಂಪೇಗೌಡ ಬಡಾವಣೆ, ಪುಣ್ಯಭೂಮಿ ಲೇಔಟ್, ಬಂಜಾರ ಬಡಾವಣೆ ಮತ್ತು ಗೋಲ್ಡನ್ ಎನ್‌ಕ್ಲೇವ್‌ನಲ್ಲಿ ಒಂದಷ್ಟು ಮನೆಗಳಿಗೆ ಕಾವೇರಿ ನೀರು ವಾರಕ್ಕೆ ಒಂದು ದಿನ ಬರುತ್ತದೆ. ಕೆಲವು ರಸ್ತೆಗಳಲ್ಲಿ ಅದೂ ಇಲ್ಲ. ಪೂರೈಕೆಯಾಗುವ ನೀರಿನ ಪ್ರಮಾಣ ತುಂಬಾ ಕಡಿಮೆ. ಹೀಗಾಗಿ ಹಣ ತೆತ್ತು ಟ್ಯಾಂಕರ್ ನೀರು ಖರೀದಿಸುವುದು ತಪ್ಪಿಲ್ಲ ಎಂದು ಕಲ್ಕೆರೆ ನಿವಾಸಿ ಕುಮಾರ್ ಹೇಳಿದರು. ಮನೆಗೆ ಕಾವೇರಿ ನೀರಿನ ಸಂಪರ್ಕ ಪಡೆದ ದಿನದಿಂದಲೂ ಈ ಸಮಸ್ಯೆ ಇದೆ. ಆರಂಭದಲ್ಲಂತೂ ನೀರೇ ಬರುತ್ತಿರಲಿಲ್ಲ. ದೂರು ನೀಡಿದ ನಂತರ. ವಾರಕ್ಕೊಮ್ಮೆ ಸಣ್ಣದಾಗಿ ನೀರು ಬರುತ್ತಿತ್ತು. ಈಗ 15 ದಿನಗಳಿಗೊಮ್ಮೆಯೂ ನೀರು ಬರುತ್ತಿಲ್ಲ. ಈ ಬಗ್ಗೆ ಜಲಮಂಡಳಿಯ


ಉದಯವಾಹಿನಿ ಚಿತ್ರ

ಅಧಿಕಾರಿಗಳಿಗೆ ದೂರು ನೀಡಿದ್ದೇವೆ. ಸಮಸ್ಯೆ ಬಗೆಹರಿದಿಲ್ಲ ಎಂದು ಬಂಜಾರ ಬಡಾವಣೆಯ ನಿವಾಸಿ ಸೌಭಾಗ್ಯ ಸಮಸ್ಯೆಯನ್ನು ವಿವರಿಸಿದರು. ನಮ್ಮ ಪಕ್ಕದ ರಸ್ತೆಯ ಮನೆಗಳಿಗೆ ನೀರು ಬರುತ್ತದೆ.

ನಮ್ಮ ರಸ್ತೆಯ ಮನೆಗಳಿಗೆ ಬರುವುದಿಲ್ಲ. ಕಾರಣ ಏನೆಂದೂ ಹೇಳುವುದಿಲ್ಲ. ನೀರು ಬಂದು 15-20 ದಿನಗಳಾಯಿತು. ವಾಲ್‌ಮನ್‌ಗಳಿಂದ ಹಿಡಿದು ಎಲ್ಲ ಹಂತದ ಸಿಬ್ಬಂದಿಗೂ ತಿಳಿಸಿದ್ದೇವೆ. ಅವರು ದೂರು ದಾಖಲಿಸಿ ಕೊಂಡಿದ್ದೇವೆ ಎನ್ನುತ್ತಾರೆ, ನೀರು ಮಾತ್ರ ಬರುವುದಿಲ್ಲ' ಎಂದು ಪುಣ್ಯಭೂಮಿ ಬಡಾವಣೆಯ ನಿವಾಸಿ ರಾಜು ದೂರಿದರು. 'ನಮಗೆ ತಿಂಗಳಿಗೆ ಎಂಟು ಟ್ಯಾಂಕರ್ ನೀರು ಬೇಕು. ಜಲಮಂಡಳಿಗೆ ಠೇವಣಿಯನ್ನೂ ಕಟ್ಟಿ, ಈ ಕಡೆ ಟ್ಯಾಂಕರ್‌ಗೂ ಹಣ ಕೊಡುವುದು ಕಷ್ಟ' ಎಂದು ಬೇಸರ ವ್ಯಕ್ತಪಡಿಸಿದರು. 'ನಮ್ಮ ಮನೆಗೆ ತಿಂಗಳಿಗೆ ಐದು ಸಾವಿರ ಲೀಟರ್ ಸಾಮರ್ಥ್ಯದ ಎಂಟು ಟ್ಯಾಂಕರ್‌ಗಳಷ್ಟು ನೀರು ಬೇಕು. ಕಾವೇರಿ ನೀರಿನ ಸಂಪರ್ಕ ಪಡೆದ ಮೇಲೆ ಎರಡು ಟ್ಯಾಂಕರ್ ನೀರು ಕಡಿಮೆ ಮಾಡಿದ್ದೆ. ಅಂದರೆ ತಿಂಗಳಿಗೆ 10 ಸಾವಿರ ಲೀಟರ್ ಅಷ್ಟೇ ಬರುತ್ತಿರುವುದು. ಅದೂ ಸರಿಯಾಗಿ ಪೂರೈಕೆಯಾಗುತ್ತಿಲ್ಲ. ಹೀಗಿದ್ದಾಗ, ಕಾವೇರಿ ನೀರು ಯಾಕೆ ಬೇಕು' ಎಂದು ನಿವಾಸಿಯೊಬ್ಬರು ಪ್ರಶ್ನಿಸಿದರು.

**ನೀರು ಹಣ ವ್ಯರ್ಥ**

**ಜಲಮಂಡಳಿಯವರು ವಾರಕ್ಕೆ ಎರಡು ದಿನ ಕಾವೇರಿ ನೀರು ಬಿಡುತ್ತೇವೆಂದು ಹೇಳುತ್ತಾರೆ. ಅದು ಯಾವ ದಿನ ಯಾವ ಸಮಯ ಎಂದು ಸರಿಯಾಗಿ ಹೇಳುವುದಿಲ್ಲ. ಒಮ್ಮೊಮ್ಮೆ ನಾವು ಟ್ಯಾಂಕರ್ ನೀರು ಹಾಕಿಸಿಕೊಂಡ ದಿನವೇ ಕಾವೇರಿ ನೀರು ಬಿಡುತ್ತಾರೆ. ಇದರಿಂದ ನಮಗೆ ಹಣ ವ್ಯರ್ಥವಾಗುತ್ತದೆ. ನಿಗದಿತ ಸಮಯದಲ್ಲಿ ನೀರು ಪೂರೈಕೆ ಮಾಡದಿದ್ದರೆ ನೀರು ವ್ಯರ್ಥವಾಗುವ ಸಾಧ್ಯತೆಯೂ ಹೆಚ್ಚು ಎಂದು ಬಂಜಾರ ಪಡಾವಣೆ ನಿವಾಸಿ ಇಂದಿರಾ ಬೆನಕನಹಳ್ಳಿ ಸಮಸ್ಯೆಯ ಇನ್ನೊಂದು ಮಗ್ಗಲನ್ನು ವಿವರಿಸಿದರು.**

**ಬಂಜಾರ ಬಡಾವಣೆ ಸೇರಿದಂತೆ ಕೆಲವು ಕಡೆಗಳಲ್ಲಿ ಮುಖ್ಯ ಕೊಳವೆಗಳೊಂದಿಗಿನ ಸಂಪರ್ಕ ತಪ್ಪಿರುತ್ತದೆ(ಮಿಸ್ಸಿಂಗ್ ಲಿಂಕ್). ನೀರಿನ ಸೋರಿಕೆ ಸಮಸ್ಯೆಯೂ ಇದೆ. ಎಲ್ಲವನ್ನೂ ಹಂತ ಹಂತವಾಗಿ ಸರಿಪಡಿಸುತ್ತಿದ್ದೇವೆ. ನೀರು ಪೂರೈಕೆಯಲ್ಲಿ ಸಮಸ್ಯೆಯಾಗಿರುವ ಕುರಿತು ಜಲಮಂಡಳಿಗೆ ಮಾಹಿತಿ ನೀಡಿದರೆ ತಕ್ಷಣ ಬಗೆಹರಿಸುತ್ತೇವೆ.**

**ಜಲಮಂಡಳಿ ಅಧಿಕಾರಿಗಳು ಬೆಂಗಳೂರು ಪೂರ್ವ ವಲಯ**

## ಬೀದಿ ನಾಯಿಗಳಿಗೆ ಬಿರಿಯಾನಿ ಭಾಗ್ಯ: ಟೀಕೆ ಬೆನ್ನಲ್ಲೇ ಬಿಬಿಎಂಪಿ ಸ್ಪಷ್ಟನೆ

• **ಉದಯವಾಹಿನಿ, ಬೆಂಗಳೂರು**

ಬೀದಿ ನಾಯಿಗಳಿಗೆ ಮಾಂಸಾಹಾರ ಊಟ ನೀಡುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಿರ್ಧಾರ ಭಾರೀ ಚರ್ಚೆ ಟೀಕೆಗಳಿಗೆ ಕಾರಣವಾಗಿದ್ದು, ಈ ವಿಚಾರವಾಗಿ ಬಿಬಿಎಂಪಿ ಸ್ಪಷ್ಟನೆ ನೀಡಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪಶುಪಾಲನಾ ವಿಭಾಗದ ವತಿಯಿಂದ ಸಮುದಾಯ (ಬೀದಿ) ನಾಯಿಗಳಿಗೆ ಆಹಾರ ನೀಡುವ ಸಲುವಾಗಿ ಟೆಂಡರ್ ಆಹ್ವಾನಿಸಲಾಗಿದ್ದು, ಇದರ ಸಾಧಕ-ಬಾಧಕಗಳನ್ನು ಪರಿಶೀಲಿಸಿದ ನಂತರ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದು ವರದಿಗಳು ತಿಳಿಸಿದ್ದವು. ಈ ವರದಿಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆ ಟೀಕೆಗಳನ್ನು ಹುಟ್ಟುಹಾಕಿವೆ. ಬಿಬಿಎಂಪಿಯ ಈ ನಿಲುವನ್ನು ಸಂಸದ ಡಾ.ಸಿ.ಎನ್.ಮಂಜುನಾಥ್ ಅವರೂ ಕೂಡ ಟೀಕಿಸಿದ್ದರು. ಬೀದಿ ನಾಯಿಗಳಿಗೆ ಮಾಂಸಾಹಾರವನ್ನು ಹೇಗೆ ನೀಡಲು ಸಾಧ್ಯ ಎಂದು ಪ್ರಶ್ನಿಸಿದ್ದರು. ಬಗ್ಗೆ ಬಿಬಿಎಂಪಿ ಸ್ಪಷ್ಟನೆ ನೀಡಿದೆ. ಬೀದಿ ನಾಯಿಗಳಿಗೆ ಆಹಾರ ನೀಡುವ ಯೋಜನೆ ಹೊಸ ಕಾರ್ಯಕ್ರಮವಲ್ಲ. ಕೋವಿಡ್ ಸಮಯದಲ್ಲಿ ಪಾಲಿಕೆಯು ಆಹಾರ ನೀಡುವಿಕೆಯನ್ನು ಕೈಗೆತ್ತಿಕೊಂಡಿತ್ತು. ಆ ಚಟುವಟಿಕೆಯ ಮುಂದುವರಿಕೆಯಾಗಿ, ಕಳೆದ ವರ್ಷವೂ ನಿಗದಿತ ಸಂಖ್ಯೆಯಲ್ಲಿ ನಾಯಿಗಳ ಆಹಾರ ನೀಡಲಾಗಿತ್ತು. ಕಳೆದ ವರ್ಷದ ಕಾರ್ಯಕ್ರಮದಿಂದ ಕಲಿತ ಪಾಠಗಳ ಆಧಾರದ ಮೇಲೆ, ಈ ಯೋಜನೆಯು


ಉದಯವಾಹಿನಿ ಚಿತ್ರ

ಒಂದು ಸುಧಾರಣೆಯಾಗಿದೆ ಕೇಂದ್ರ ಸರ್ಕಾರವು ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿಯ ಮೂಲಕ ವ್ಯಾಖ್ಯಾನಿಸಿದ ಪ್ರಾಣಿ ಜನನ ನಿಯಂತ್ರಣ ನಿಯಮಗಳು, 2023ರ ಪ್ರಕಾರ ಕಾನೂನಾತ್ಮಕ ಅವಶ್ಯಕತೆಯಾಗಿದೆ. ಬಿಬಿಎಂಪಿ ಈಗ ಪ್ರತಿ ವಲಯದಲ್ಲಿ ಆಹಾರ ತಯಾರಕರನ್ನು ಆಯಾ ವಲಯ ಸಹಾಯಕ ನಿರ್ದೇಶಕರು ಗುರುತಿಸಿದ ಮೇಲ್ವಿಚಾರಣೆ ಮಾಡುವ ಆಹಾರ ನೀಡುವ ಸ್ಥಳಗಳಲ್ಲಿ ಪೌಷ್ಟಿಕ ಆಹಾರವನ್ನು ಒದಗಿಸಲು ಆಹ್ವಾನಿಸಿದೆ. ಪ್ರಸ್ತುತ ಅಂಜುಬುರುಕ ನಾಯಿಗಳನ್ನು ಹಿಡಿಯುವುದು ಒಂದು ದೊಡ್ಡ ಸವಾಲಾಗಿದೆ. ಅದೇ ಸಮಯದಲ್ಲಿ, ಕೆಲವು ಸ್ಥಳಗಳಲ್ಲಿ ಆಹಾರ ಲಭ್ಯತೆಯ ಕೊರತೆಯು ನಾಯಿಗಳನ್ನ ಗುಂಪುಗಾರಿಕೆಯ ನಡವಳಿಕೆಯತ್ತ ಸರಿಸುತ್ತಿದೆ ಹಾಗು ನಾಯಿ ಕಡಿತವನ್ನು ಹೆಚ್ಚಿಸುತ್ತಿದೆ. ಆಹಾರ ಯೋಜನೆಯ ಮೂಲಕ ಕ್ಯಾಚಿಂಗ್ ಪ್ರಯತ್ನವು ಸುಧಾರಿಸುತ್ತದೆ, ಇದರಿಂದಾಗಿ ಜನನ ನಿಯಂತ್ರಣ ಮತ್ತು ರೇಬೀಸ್ ವಿರೋಧಿ ಲಸಿಕಾಕರಣ ಪ್ರಮಾಣ ಹೆಚ್ಚಾಗುತ್ತದೆ.

# ಆಧುನಿಕ ಜೀವನ ಶೈಲಿಯಿಂದ ಆರೋಗ್ಯ ಸಮಸ್ಯೆ: ಡಾ.ಸಿ.ಎನ್.ಮಂಜುನಾಥ್

• ಉದಯವಾಹಿನಿ, ಹಾರೋಹಳ್ಳಿ

ಆಧುನಿಕ ಜೀವನ ಶೈಲಿ, ಒತ್ತಡದಿಂದ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ. ಹಾಗಾಗಿ ಪ್ರತಿಯೊಬ್ಬರೂ ಆರೋಗ್ಯದತ್ತ ಕಾಳಜಿವಹಿಸಿ ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್.ಮಂಜುನಾಥ್ ತಿಳಿಸಿದರು.ಹಾರೋಹಳ್ಳಿಯ ಗ್ರಾಮಾಂತರ ಪ್ರೌಢಶಾಲಾ ಆವರಣದಲ್ಲಿ ಹಾರೋಹಳ್ಳಿ ವರ್ತಕರ ಸಂಘ, ಲಘು ಉದ್ಯೋಗ ಭಾರತಿ, ರೋಟರಿ ಕ್ಲಬ್, ರೋಟರಿ ಟ್ರಸ್ಟ್, ಕಲ್ಪವೃಕ್ಷ ಕೋ ಆಪರೇಟಿವ್ ಸೊಸೈಟಿ, ಹಾರೋಹಳ್ಳಿ ನಾಗರಿಕರ ಹಿತ ಸಂರಕ್ಷಣಾ ವೇದಿಕೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ, ಪೌರ ಕಾರ್ಮಿಕರಿಗೆ ಪೌರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಆರೋಗ್ಯ ಕಾಪಾಡಿಕೊಳ್ಳಲು ನಮ್ಮ ಸುತ್ತ ಸ್ವಚ್ಛ ಪರಿಸರ ಮತ್ತು ನೆಮ್ಮದಿ ಅವಶ್ಯಕ. ನಮ್ಮ ದೇಶದಲ್ಲಿ ಹೃದಯಾಘಾತ, ಅಧಿಕ ರಕ್ತದೊತ್ತಡ, ಸಕ್ಕರೆ ಖಾಯಿಲೆ, ಪಾರ್ಶ್ವವಾಯು, ಒಂಟಿತನ ಸಾಂಕ್ರಾಮಿಕ ರೋಗಗಳಾಗಿ ಮಾರ್ಪಟ್ಟಿವೆ. ದೇಶದಲ್ಲಿ ಪ್ರತಿ ವರ್ಷ 30 ಲಕ್ಷ ಮಂದಿ ಹೃದಯ ಸಂಬಂಧಿ ಖಾಯಿಲೆಗೆ ತುತ್ತಾಗುತ್ತಿದ್ದಾರೆ. ಹಾಗಾಗಿ ಜೀವನ ಶೈಲಿ ಬದಲಿಸಿಕೊಳ್ಳುವ ಅವಶ್ಯಕತೆ ಇದೆ ಎಂದರು. ಆಹಾರದಲ್ಲಿ ಬಿಳಿ ವಸ್ತುಗಳಾದ ಉಪ್ಪು, ಸಕ್ಕರೆ, ಪಾಲಿಶ್ ಅಕ್ಕಿ ಇವುಗಳಿಂದ ದೂರವಿರಿ. ನಾವು ತಿನ್ನುವ ಆಹಾರದಲ್ಲಿ ನಮ್ಮ ಆರೋಗ್ಯ ಅಡಗಿದೆ. ಫಾಸ್ಟ್ ಫುಡ್‌ಗಳಿಂದ ದೂರವಿರಿ. ಕೈ ಚೆನ್ನಾಗಿದ್ದರೆ ನಮ್ಮ ಆರೋಗ್ಯವೂ ಚೆನ್ನಾಗಿರುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸುಮಾರು 50 ಯುನಿಟ್ ರಕ್ತ ಸಂಗ್ರಹವಾಗಿದೆ. ಪೌರ ಕಾರ್ಮಿಕರನ್ನು ಸನ್ಮಾನಿಸಲಾಯಿತು. ವರ್ತಕರ ಸಂಘದ ಅಧ್ಯಕ್ಷ ಮುರಳೀಧರ್, ನಾಗರಿಕ ಹಿತರಕ್ಷಣ ಸಮಿತಿಯ ಶ್ರೀನಿವಾಸ್, ರೋಟರಿಯ ಡಾ.ಪ್ರಾಣೇಶ್, ನಾಗರಾಜು, ಲಘು ಉದ್ಯೋಗ ಭಾರತಿಯ ನಾಗರಾಜು, ಸೆಲ್ವಂ, ಈರೇಗೌಡ, ಡಾ.ಚಂದ್ರಶೇಖರ್, ಮೋಟಪ್ಪ, ಸುಬ್ರಹ್ಮಣ್ಯ, ಜಿ.ನಾಗರಾಜು, ಶೇಷಾದ್ರಿ ರಾಮು. ಎರೆಹಳ್ಳಿ ಶಶಿ, ಪ್ರಭಾಕರ್, ಉಮಾಪತಿ ಸೇರಿದಂತೆ ಇತರರು ಹಾಜರಿದ್ದರು.


ಉದಯವಾಹಿನಿ ಚಿತ್ರ

# ಕೈಕೊಟ್ಟ ಮಳೆರಾಯ; ಬಿತ್ತನೆ ಕಾರ್ಯ ಮುಗಿಸದ ರೈತ

## ಜೂನ್ ತಿಂಗಳಲ್ಲಿ 174.6 ಮಿ.ಮೀ ಮಳೆ ಆಗಿದ್ದು, ಶೇಕಡ 45 ರಷ್ಟು ಬಿತ್ತನೆ ಆಗಿತ್ತು ಎಂದು ಕೃಷಿ ಅಧಿಕಾರಿಗಳು ಮಾಹಿತಿ

• ಉದಯವಾಹಿನಿ, ಕೊರಟಗೆರೆ

ರಾಜ್ಯಾದ್ಯಾಂತ ಮುಂಗಾರು ಪ್ರಾರಂಭವಾಗಿ ತಿಂಗಳು ಕಳೆದಿದ್ದರೂ ಕೊರಟಗೆರೆ ತಾಲ್ಲೂಕಿನಲ್ಲಿ ಈ ಬಾರಿ ನಿರೀಕ್ಷಿತ ಪ್ರಮಾಣದ ಮಳೆ ಹಾಗೂ ಬಿತ್ತನೆ ಕಾರ್ಯ ಆಗದ ಪರಿಣಾಮ ತಾಲ್ಲೂಕಿನಲ್ಲಿ ಬರದ ಛಾಯೆ ಆವರಿಸಿದೆ.

2025-26ನೇ ಸಾಲಿನಲ್ಲಿ ಕೊರಟಗೆರೆ ತಾಲ್ಲೂಕಿನ ವಾರ್ಷಿಕ ವಾಡಿಕೆ ಮಳೆಯು ಒಟ್ಟು 637.5 ಮಿ.ಮಿ ಆಗಬೇಕಿದ್ದು, ಜೂನ್ ತಿಂಗಳವರೆಗೆ ವಾಡಿಕೆ ಮಳೆ 7.2 ಮಿ.ಮಿ ಇದ್ದು, ಪ್ರಸ್ತುತ ಸಾಲಿನಲ್ಲಿ ಕೇವಲ 26.8 ಮಿ.ಮಿ ಮಳೆಯಾಗಿದೆ. ಜೂನ್ ತಿಂಗಳಲ್ಲಿ ಶೇಕಡ 60 ರಷ್ಟು ಮಳೆ ಕೊರತೆಯಾಗಿರುವುದರಿಂದ ರೈತರ ಬಿತ್ತನೆ ಕೆಲಸಗಳು ಕುಂಠಿತವಾಗಿದೆ . ಕಳೆದ ವರ್ಷಕ್ಕೆ ಹೋಲಿಸಿದಾಗ ಕಳೆದ ವರ್ಷ ಜೂನ್ ತಿಂಗಳಲ್ಲಿ 174.6 ಮಿ.ಮೀ ಮಳೆ ಆಗಿದ್ದು, ಶೇಕಡ 45 ರಷ್ಟು ಬಿತ್ತನೆ ಆಗಿತ್ತು ಎಂದು ಕೃಷಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಕೇವಲ ಶೇ. 5 ರಷ್ಟು ಮಾತ್ರ ಬಿತ್ತನೆ ಆಗಿದ್ದು. ಪ್ರಸಕ್ತ ವರ್ಷದಲ್ಲಿ ಉತ್ತಮ ಮಳೆಯಾಗುವ ಮುನ್ಸೂಚನೆ ಇರುತ್ತದೆ ಎಂದು ಭಾರತೀಯ ಹವಾಮಾನ ಇಲಾಖೆಯು ತಿಳಿಸಿದೆ. ಆದರೆ ಇಲ್ಲಿಯವರೆಗೂ ಕೆಲವು ಭಾಗದಲ್ಲಿ ಮಳೆಯಾದರೆ ತಾಲ್ಲೂಕಿನಾದ್ಯಾಂತ ಹೇಳಿಕೊಳ್ಳುವಂತ ಮಳೆ ಬಂದಿಲ್ಲ ಎಂದು ರೈತರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ಕೊರಟಗೆರೆ ತಾಲ್ಲೂಕಿನಲ್ಲಿ ಮುಂಗಾರು ಕೃಷಿ ಬೆಳೆಗಳ ಒಟ್ಟು ವಿಸ್ತೀರ್ಣ 32.491 ಹೆಕ್ಟೇರ್ ಇದ್ದು, ಬಿತ್ತನೆ ಕಾರ್ಯಕ್ಕೆ ರೈತರು ಭೂಮಿಯನ್ನು ಉಳುಮೆ ಮಾಡಿ ಸಿದ್ದತೆ ಮಾಡಿಕೊಂಡು ಮಳೆಗಾಗಿ ಕಾಯುತ್ತಿದ್ದಾರೆ. ಸರಿಯಾದ ಸಮಯಕ್ಕೆ ಮಳೆ ಬಂದರೆ ಉತ್ತಮ ಬೆಳೆ ಬರುತ್ತದೆ. ಇದೇ ರೀತಿ ಮಳೆಯ ಕೊರತೆ ಆದರೆ ರೈತರ ಪರಿಸ್ಥಿತಿ ಹೇಳತೀರದು, ಪ್ರಸಕ್ತ ಸಾಲಿನ ಪ್ರಾರಂಭದಲ್ಲಿ ಮಳೆಯ ಕೊರತೆ ಉಂಟಾಗಿದ್ದು, ಎಲ್ಲಾ ತಯಾರಿ ಮಾಡಿಕೊಂಡ ರೈತ ಮುಗಿಲು ನೋಡುವಂತಾಗಿದೆ. ಕಳೆದ ವರ್ಷ ತಾಲ್ಲೂಕಿನಲ್ಲಿ ಕೃಷಿ ಇಲಾಖೆಯಿಂದ ಒಟ್ಟು 1822.91 ಕ್ವಿಂಟಲ್ ನಷ್ಟು ಬಿತ್ತನೆ ಬೀಜ ವಿತರಣೆ ಮಾಡಲಾಗಿತ್ತು. ಆದರೆ ಈ ವರ್ಷ ಇಲ್ಲಿಯವರೆಗೆ ಕೇವಲ 285.65 ಕ್ವಿಂಟಲ್ ನಷ್ಟು ಮಾತ್ರ ವಿತರಣೆ ಆಗಿದೆ. ಆದರೆ ತೊಗರಿ, ಶೇಂಗಾ ಮತ್ತು ಮುಸುಕಿನ ಜೋಳ ಬೆಳೆಗಳಿಗೆ ಜುಲೈ 31 ರವರೆಗೆ ಹಾಗೂ ರಾಗಿ ಮತ್ತು ಇತರ ಸಿರಿ ಧಾನ್ಯಗಳಿಗೆ ಆಗಸ್ಟ್ 15 ರವರೆಗೆ ಬಿತ್ತನೆ ಮಾಡಲು ಕಾಲಾವಕಾಶವಿದ್ದು ಮಳೆ ಆದಲ್ಲಿ ಉತ್ತಮ ಬಿತ್ತನೆಯನ್ನು ನಿರೀಕ್ಷಿಸಬಹುದಾಗಿದೆ.

> ತಾಲ್ಲೂಕಿನಲ್ಲಿ ಮಳೆ ಪ್ರಮಾಣ ಕಡಿಮೆ ಆಗಿರುವುದರಿಂದ ರೈತರು ತಮ್ಮ ಕೈಯಲ್ಲಿ ಹಣವೆಲ್ಲ ಉಳುಮೆ ಬಿತ್ತನೆ ಬೀಜಕ್ಕೆ ಖರ್ಚು ಮಾಡಿದ್ದು, ಸಮಯಕ್ಕೆ ಸರಿಯಾಗಿ ಮಳೆ ಬರದಿದ್ದರೆ, ರೈತ ಬೀದಿಗೆ ಬರುವುದು ಖಚಿತವಾಗಿದೆ. ಸರ್ಕಾರ ರೈತರ ಪರಿಸ್ಥಿತಿ ಮನಗೊಂಡು ಸೂಕ್ತ ಪರಿಹಾರ ನೀಡಬೇಕು.
>
> ಸಿದ್ದರಾಜು ರೈತ ಸಂಘ ತಾಲ್ಲೂಕು ಅಧ್ಯಕ್ಷ

> ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ರಸಗೊಬ್ಬರ ಮಳಿಗೆಗಳು ಹಾಗೂ ಪ್ರಾಥಮಿಕ ಕೃಷಿ ಸಹಕಾರ ಸಂಘಗಳಲ್ಲಿ ರಸಗೊಬ್ಬರಗಳಾದ ಯೂರಿಯಾ.78 ಮೆಟ್ರಿಕ್ ಟನ್, ಡಿ.ಎ.ಪಿ-258.4 ಮೆ,ಟನ್. ಎಂ.ಒ.ಪಿ-36.65 ಮೆ.ಟನ್ ಎನ್.ಪಿ.ಕೆ ಕಾಂಪ್ಲೆಕ್ಸ್ ಗೊಬ್ಬರಗಳು 1395.32 ಮೆ.ಟನ್ ಹಾಗೂ ಇತರೆ ಗೊಬ್ಬರ 3.5 ಮೆ.ಟನ್ ಒಟ್ಟು ರಸಗೊಬ್ಬರ 3071.65 ಮೆ.ಟನ್ ದಾಸ್ತಾನಿದ್ದು, ಪ್ರಸಕ್ತ ಹಂಗಾಮಿಗೆ ಯಾವುದೇ ರಸಗೊಬ್ಬರದ ಕೊರತೆ ಇರುವುದಿಲ್ಲ. ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ಮಾಡಿ ಬಿತ್ತನೆ ಬೀಜ ಮತ್ತು ಬೆಳೆಗಳ ಬಗ್ಗೆ ತಾಂತ್ರಿಕ ಮಾಹಿತಿಯನ್ನು ಪಡೆಯಬಹುದು.
>
> ರುದ್ರಪ್ಪ ಎಂ.ಆರ್. ಸಹಾಯಕ ಕೃಷಿ ನಿರ್ದೇಶಕರು.

ಕೊರಟಗೆರೆ ಕೃಷಿ ಇಲಾಖೆ ವ್ಯಾಪ್ತಿಯ 4 ರೈತ ಸಂಪರ್ಕ ಕೇಂದ್ರಗಳಲ್ಲಿ ಮುಂಗಾರು ಬೆಳೆಗಳಾದ ರಾಗಿ (ಎಂ,ಆರ್-6), ಭತ್ತ(ತೆಲ್ಲ ಹಂಸ), ಹಾಗೂ (ಐ.ಆರ್-64), ಮುಸುಕಿನ ಜೋಳ (ಹೈಬ್ರಿಡ್) ಅಲಸಂಡೆ (ಡಿ.ಸಿ-15),ತೊಗರಿ (ಬಿ,ಆರ್,ಜಿ-3) (ಬಿ,ಆರ್,ಜಿ-5) ಹಾಗೂ ಶೇಂಗಾ (ಕೆ-6) ಪ್ರಮಾಣಿತ ಬಿತ್ತನೆ ಬೀಜಗಳ ಒಟ್ಟು 681.61 ಕ್ವಿಂಟಲ್ ದಾಸ್ತಾನಿದ್ದು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳನ್ನು ವಿತರಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.



# ಒಕ್ಕಲಿಗರು ಉಪಜಾತಿ ನೋಂದಾಯಿಸಿ: ಸಿದ್ದರಾಮ ಚೈತನ್ಯ ಸ್ವಾಮೀಜಿ ಸಲಹೆ

• ಉದಯವಾಹಿನಿ, ತುಮಕೂರು

ಜಾತಿ ಜನಗಣತಿ ವೇಳೆ ಪ್ರಧಾನವಾಗಿ 'ಒಕ್ಕಲಿಗ' ಎಂದು ನಮೂದಿಸಿ. ಉಪ ಜಾತಿ ಕಾಲಂನಲ್ಲಿ ತಮ್ಮ ಉಪ ಜಾತಿಯನ್ನೂ ನೋಂದಾಯಿಸಬೇಕು ಎಂದು ಕುಣಿಗಲ್‌ನ ಅರೇಶಂಕರ ಮಠದ ಸಿದ್ದರಾಮ ಚೈತನ್ಯ ಸ್ವಾಮೀಜಿ ಸಲಹೆ ಮಾಡಿದರು. ನಗರದಲ್ಲಿ ಉಪ್ಪಾರಹಳ್ಳಿ ಒಕ್ಕಲಿಗರ ಸಂಘದ ವಾರ್ಷಿಕೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರ್ಕಾರದ ಹಂತದಲ್ಲಿ ಆಗುತ್ತಿರುವ ಬದಲಾವಣೆ ಬಗ್ಗೆ ಒಕ್ಕಲಿಗರು ಗಮನಹರಿಸುವುದಿಲ್ಲ. ಸಂಘಟನೆಗಳು ಸಮಾಜದಲ್ಲಿ ಜಾಗೃತಿ ಮೂಡಿಸಬೇಕು. ಸರ್ಕಾರದ ಸವಲತ್ತು ಕುರಿತು ಮಾಹಿತಿ ಒದಗಿಸಬೇಕು. ಒಕ್ಕಲಿಗರೆಲ್ಲ ಒಂದೇ, ಅದರೊಳಗೆ ಉಪಜಾತಿಗಳ ಭೇದ ಬೇಡ. ಗಣತಿ ವೇಳೆ ಉಪ ಜಾತಿ ನೋಂದಣಿ ಮಾಡಿದರೆ ಸವಲತ್ತು ಪಡೆಯಲು ನೆರವಾಗುತ್ತದೆ ಎಂದರು. ರಾಜ್ಯ ಒಕ್ಕಲಿಗರ ಸಂಘದ ಸಹ ಕಾರ್ಯದರ್ಶಿ ಹನುಮಂತರಾಯಪ್ಪ, ಒಕ್ಕಲಿಗರ ಸಂಘದ ಶಿಕ್ಷಣ ಸಂಸ್ಥೆಗಳಲ್ಲಿ ಎಲ್‌ಕೆಜಿಯಿಂದ ಉನ್ನತ ಶಿಕ್ಷಣದ ವರೆಗೆ ಕಲಿಯಲು ಅವಕಾಶ ಕಲ್ಪಿಸಲಾಗಿದೆ. ಮಕ್ಕಳ ವಿದ್ಯಾಭ್ಯಾಸಕ್ಕೆ ಸಂಘ ವಿಶೇಷ ಆಸಕ್ತಿವಹಿಸಿದೆ. ಪ್ರತಿ ವರ್ಷ ಪ್ರತಿಭಾ ಪುರಸ್ಕಾರ ವಿತರಿಸಲಾಗುತ್ತಿದೆ ಎಂದು ತಿಳಿಸಿದರು.ಉಪ್ಪಾರಹಳ್ಳಿ ಒಕ್ಕಲಿಗರ ಸಂಘದ ಅಧ್ಯಕ್ಷ ನರಸಿಂಹಮೂರ್ತಿ, ಉಪಾಧ್ಯಕ್ಷ ಜಿ.ಟಿ.ರಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಬಿ.ಸಿದ್ದರಾಜುಗೌಡ, ಸಹ ಕಾರ್ಯದರ್ಶಿ ಕುಮಾರ್ ಸಂಘಟನಾ ಕಾರ್ಯದರ್ಶಿ ಡಿ.ವಿ. ಶ್ರೀನಿವಾಸ್, ಖಜಾಂಚಿ ಬಿ.ಸಿ.ಧನಂಜಯ, ಭೈರವೇಶ್ವರ ಭೈರವ ಗಿರೀಶ್, ವಿಜಯಕುಮಾರ್, ಟಿ.ಆರ್.ನಾಗರಾಜು, ಮಂಜುನಾಥ್, ದೊಡ್ಡಶಾನಯ್ಯ ಮೊದಲಾದವರು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

> ಮಾಜಿ ಸಂಸದ ಎಸ್ .ಪಿ.ಮುದ್ದಹನುಮೇಗೌಡ, ಪಠ್ಯ ಓದಿ ಹೆಚ್ಚು ಅಂಕ ಪಡೆದು ಪ್ರತಿಭಾವಂತರಾದರೆ ಪರಿಪೂರ್ಣ ವ್ಯಕ್ತಿತ್ವ ಹೊಂದಲು ಸಾಧ್ಯವಿಲ್ಲ. ವ್ಯಕ್ತಿತ್ವ ವಿಕಸನಕ್ಕೆ ವಿದ್ಯೆ ಹಾಗೂ ಸಂಸ್ಕಾರ ಎರಡೂ ಮುಖ್ಯ. ವಿದ್ಯೆ ಜತೆಗೆ ಸಂಸ್ಕಾರವನ್ನೂ ಕಲಿಸಬೇಕು. ಮಕ್ಕಳಲ್ಲಿ ಸಾಮಾಜಿಕ ಜವಾಬ್ದಾರಿ ಬೆಳೆಸಬೇಕು. ಕಲಿಕೆ ಹಾಗೂ ಸಾಧನೆ ನಿರಂತರವಾಗಿರಬೇಕು' ಎಂದು ಸಲಹೆ ಮಾಡಿದರು.

# ನಗರ ಸಾರಿಗೆ ಬಸ್‌ಗಳಲ್ಲಿ ಧ್ವನಿ ಸ್ಪಂದನ ಸೇವೆಗೆ ಚಾಲನೆ

• ಉದಯವಾಹಿನಿ, ಮೈಸೂರು

ಇಲ್ಲಿನ ಕೆಎಸ್‌ಆರ್‌ಟಿಸಿ ನಗರ ಸಾರಿಗೆ ಬಸ್‌ಗಳಲ್ಲಿ ಧ್ವನಿ ಸ್ಪಂದನ ಸೇವೆಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಚಾಲನೆ ನೀಡಿದರು. ಅಂಧತ್ವ ಸಮಸ್ಯೆಯುಳ್ಳವರು ವಿಶೇಷ ಸಾಧನದ ಮೂಲಕ ಯಾರ ನೆರವು ಇಲ್ಲದಂತೆ ಬಸ್ ಏರಲು ಇದರಿಂದ ಸಾಧ್ಯವಾಗಲಿದೆ. ಬೆಂಗಳೂರಿನ 125 ಬಸ್‌ಗಳಲ್ಲಿ ಈಗಾಗಲೇ ಅಳವಡಿಸಿ ಬಳಸುತ್ತಿದ್ದು, ಇದೀಗ ಮೈಸೂರಿನ 200 ಬಸ್‌ಗಳಲ್ಲಿ ಚಾಲನೆ ನೀಡಲಾಗಿದೆ. ಮುಂದೆ ಕೆಎಸ್‌ಆರ್‌ಟಿಸಿಯ 7 ಸಾವಿರ ಬಸ್ ಗಳಲ್ಲೂ ಹಂತಹಂತವಾಗಿ ಅಳವಡಿಸಲಾಗುವುದು' ಎಂದು ಸಚಿವರು ಹೇಳಿದರು.

ರಾಜ್ಯದಲ್ಲಿ ಮುಂದೆ ಹೊಸತಾಗಿ ಖರೀದಿಸುವ ಎಲ್ಲಾ ಕೆಎಸ್‌ಆರ್‌ಟಿಸಿ ಬಸ್‌ಗಳಿಗೆ ನಿರ್ಮಾಣ ಹಂತದಲ್ಲೇ ಈ ಸಾಧನ ಅಳವಡಿಕೆಗೆ ಸೂಚಿಸಲಾಗುವುದು ಎಂದರು.

ಶಾಸಕರಾದ ಜಿ.ಟಿ. ದೇವೇಗೌಡ, ತನ್ವೀರ್ ಸೇಠ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಜಿಲ್ಲಾ ಸಮಿತಿ ಅಧ್ಯಕ್ಷ ಅರುಣ್ ಕುಮಾರ್ ಜೊತೆಗಿದ್ದರು.


ಉದಯವಾಹಿನಿ ಚಿತ್ರ


# ಜನರಿಗೆ ನ್ಯಾಯ ದೊಕಿಸುವುದಷ್ಟೆ ಗುರಿ

• ಉದಯವಾಹಿನಿ, ತಿ.ನರಸೀಪುರ

ಪಟ್ಟಣದ ತ್ರಿವೇಣಿ ನಗರದ ನಳಂದ ಬುದ್ಧವಿಹಾರದಲ್ಲಿ ಈಚೆಗೆ ನಡೆದ ಕಾರ್ಯಕ್ರಮದಲ್ಲಿ ದಲಿತ ಸಂಘಟನೆಗಳ ಒಕ್ಕೂಟದಿಂದ ಕರ್ನಾಟಕ ಭೂಷಣ ಪ್ರಶಸ್ತಿ ಪುರಸ್ಕೃತ ಅಲಗೂಡು ಚಂದ್ರಶೇಖರ್ ಅವರನ್ನು ಅಭಿನಂದಿಸಲಾಯಿತು. ಈ ಸಂದರ್ಭ ಮಾತನಾಡಿದ ಆಲಗೂಡು ಚಂದ್ರಶೇಖರ್, ಸಾಮಾಜಿಕ ಅಸಮಾನತೆ, ಬಾಬಾ ಸಾಹೇಬ ಅಂಬೇಡ್ಕರ್ ಆದರ್ಶ, ಚಿಂತನೆ ಅಳವಡಿಸಿಕೊಂಡು ದಲಿತ ಸಂಘರ್ಷ ಸಮಿತಿಯ ನೀತಿ ನಿಯಮಗಳ ವ್ಯಾಪ್ತಿಯಲ್ಲಿ ಹೋರಾಟ ಮಾಡಿಕೊಂಡು ಬಂದಿದ್ದೇನೆ. ನಮ್ಮ ಹೋರಾಟದಿಂದ ಜನರಿಗೆ ನ್ಯಾಯ ಸಿಗುವುದಷ್ಟೆ ನಮ್ಮ ಗುರಿ ಎಂದರು.

ಪುರಸ್ಕೃತರಿಗೆ ಅಭಿನಂದಿಸಿದ ವಿಚಾರವಾದಿ ಕೆ.ಎನ್ ಪ್ರಭುಸ್ವಾಮಿ, ಚಂದ್ರಶೇಖರ್ ಸಾಮಾಜಿಕ ಕಳಕಳಿಯಿಂದ ಅನೇಕ ಹೋರಾಟ ಮಾಡಿಕೊಂಡು ನೊಂದವರಿಗೆ ನೆರವು ನೀಡಿದ್ದಾರೆ. ಪ್ರತಿಫಲಾಪೇಕ್ಷೆ ಇಲ್ಲದ ಸೇವೆಯಿಂದ ಅವರಿಗೆ ಅಂತರರಾಷ್ಟ್ರೀಯ ಭಾರತ್ ಜ್ಯೋತಿ ಪ್ರಶಸ್ತಿಯಿಂದ ಕರ್ನಾಟಕ ಭೂಷಣ ಪ್ರಶಸ್ತಿವರೆಗೂ ದೊರಕಿವೆ.

ಇದು ಶೋಷಿತ ಸಮುದಾಯದ ಹೋರಾಟಕ್ಕೆ ದೊರೆತ ಗೌರವ ಎಂದರು.


ಉದಯವಾಹಿನಿ ಚಿತ್ರ

> ಒಕ್ಕೂಟದ ಸಂಚಾಲಕ ಬನ್ನಹಳ್ಳಿ ಸೋಮಣ್ಣ, ಸಂಘಟನೆಯೊಂದಿಗೆ ಹೋರಾಟದ ಮೂಲಕ ನಾಗರಿಕರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತಾ, ಅವರಿಗೆ ನ್ಯಾಯ ದೊರಕಿಸಿ ಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದರೆ ಪ್ರಶಸ್ತಿಗಳು ಅರಸಿ ಬರುತ್ತದೆ ಎನ್ನುವುದಕ್ಕೆ ಚಂದ್ರಶೇಖರ್ ಜ್ವಲಂತ ಉದಾಹರಣೆ ಎಂದು ತಿಳಿಸಿದರು.

# ವೃತ್ತಿ ಒತ್ತಡ ತಗ್ಗಿಸಲು ಕ್ರೀಡೆ ಸಹಕಾರಿ: ಲಕ್ಷ್ಮಯ್ಯ

• ಉದಯವಾಹಿನಿ, ಚಾಮರಾಜನಗರ

ಒತ್ತಡದಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಒತ್ತಡ ನಿವಾರಿಸಿಕೊಳ್ಳುವ ಪ್ರಯತ್ನ ಮಾಡಬೇಕು ಎಂದು ಡಿವೈಎಸ್‌ಪಿ ಲಕ್ಷ್ಮಯ್ಯ ಸಲಹೆ ನೀಡಿದರು. ನಗರದ ರಾಮಸಮುದ್ರ ಬಡಾವಣೆಯಲ್ಲಿರುವ ದೀನಬಂಧು ಶಾಲೆ ಆವರಣದಲ್ಲಿ ಭಾನುವಾರ ಜಿಲ್ಲಾ ಕಾರ್ಯನಿರತ ಪತ್ರಿಕಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಪೊಲೀಸರ, ಪತ್ರಕರ್ತರು ಸಮಯದ ಮಿತಿ ಇಲ್ಲದೆ ಒತ್ತಡದಲ್ಲಿ ಕಾರ್ಯ ನಿರ್ವಹಿಸುತ್ತಾರೆ. ವೃತ್ತಿಯ ಅತಿಯಾದ ಒತ್ತಡ ಅನಾರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತಿದ್ದು ಎಚ್ಚರವಹಿಸಬೇಕು. ವೃತ್ತಿಯ ಜೊತೆಗೆ ಆರೋಗ್ಯವನ್ನು ಸುಸ್ಥಿತಿಯಲ್ಲಿ ಇಟ್ಟುಕೊಳ್ಳಬೇಕು ಎಂದರು.

ಸಂಘದ ಅಧ್ಯಕ್ಷ ದೇವರಾಜು ಕಪ್ಪಸೋಗೆ ಮಾತನಾಡಿ, ಪತ್ರಕರ್ತರಲ್ಲಿ ಹೆಚ್ಚುತ್ತಿರುವ ವೃತ್ತಿ ಒತ್ತಡದಿಂದ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ಮಾನಸಿಕ ಒತ್ತಡ ನಿವಾರಿಸಿಕೊಳ್ಳಬೇಕು ಎಂದರು.

ಇದೇವೇಳೆ 'ಮೈಸೂರು ಮಿತ್ರ ಪತ್ರಿಕೆ ಸಂಪಾದಕರಾದ ಕೆ.ಬಿ.ಗಣಪತಿ ಅವರ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ರಾಜ್ಯ ಪರಿಷತ್ ಸದಸ್ಯ ಗೂಳೀಪುರ ನಂದೀಶ್, ಪ್ರಧಾನ ಕಾರ್ಯದರ್ಶಿ ಎಸ್.ಪ್ರಸಾದ್ ಲಕ್ಕೂರ್, ಕ್ರೀಡಾಪಟು ವಿ.ಶ್ರೀನಿವಾಸ ಪ್ರಸಾದ್, ಮಹದೇವ್ ಹೆಗ್ಗವಾಡಿಪುರ, ಸಂಘದ ಪದಾಧಿಕಾರಿಗಳು, ಸದಸ್ಯರು, ಕುಟುಂಬದವರು ಇದ್ದರು.


ಉದಯವಾಹಿನಿ ಚಿತ್ರ

> ಜಿಲ್ಲೆಯಲ್ಲಿ ಕ್ರೀಡಾ ಕ್ಷೇತ್ರ ಅಭಿವೃದ್ಧಿ ಹೊಂದಿಲ್ಲ, ಜಿಲ್ಲಾ ಕ್ರೀಡಾಂಗಣ ಕಾಮಗಾರಿ ದಶಕಗಳು ಕಳೆದರೂ ಪೂರ್ಣವಾಗಿಲ್ಲ. ಜಿಲ್ಲೆಯ ಕ್ರೀಡಾಪಟುಗಳು ಸೌಲಭ್ಯ ವಂಚಿತರಾಗಿದ್ದು ರಾಜ್ಯ, ರಾಷ್ಟ್ರಮಟ್ಟದ ವೇದಿಕೆ ಪ್ರವೇಶಿಸಲಾಗುತ್ತಿಲ್ಲ. ಸರ್ಕಾರ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದರು.

# ನನಗೆ ಡೈರಿಯ ಸಂಬಳ, ಅನುಕೂಲಗಳು ಬೇಡ

## ಎಲ್ಲರ ಜೊತೆಯೂ ನಾನು ಚರ್ಚೆ ನಡೆಸುತ್ತೇನೆ ಎಂದು ಬಮುಲ್ ಅಧ್ಯಕ್ಷ ಡಿ.ಕೆ. ಸುರೇಶ್ ಹೇಳಿಕೆ

• ಉದಯವಾಹಿನಿ, ಮಾಗಡಿ

ಬಮುಲ್ ರೈತರ ಸಂಸ್ಥೆ ಇದನ್ನು ಬೆಳೆಸುವುದು ನಮ್ಮ ಕರ್ತವ್ಯ. ಈ ಕೆಲಸವನ್ನು ನಾನು ಮಾಡುತ್ತೇನೆ. ಇದಕ್ಕೆ ಎಲ್ಲಾ ನಾಯಕರ ಬೆಂಬಲ ಬೇಕು. ಎಲ್ಲರ ಜೊತೆಯೂ ನಾನು ಚರ್ಚೆ ನಡೆಸುತ್ತೇನೆ ಎಂದು ಬಮುಲ್ ಅಧ್ಯಕ್ಷ ಡಿ.ಕೆ. ಸುರೇಶ್ ತಿಳಿಸಿದರು.

ಮಾಗಡಿಯಲ್ಲಿ ಮಾತನಾಡಿದ ಅವರು, ನನಗೆ ಡೈರಿಯ ಸಂಬಳ, ಡೈರಿಯ ಅನುಕೂಲಗಳು ಬೇಡ. ನಾನು ಇರುವ ತನಕ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ. ನನ್ನ ಮೇಲೆ ಇಟ್ಟಿರುವ ನಂಬಿಕೆಗೆ ತಕ್ಕಂತೆ ಕೆಲಸ ಮಾಡುತ್ತೇನೆ. ನನ್ನ ಮನವಿ ಎಂದರೆ ನಂದಿನಿ ಉಳಿಸಿ, ಬೆಳೆಸಿ,ಉತ್ಪನ್ನಗಳನ್ನು ಬಳಸಿ ಎಂದರು.

ನಂದಿನಿ ಉತ್ಪನ್ನಗಳ ಬೇಡಿಕೆಗೆ ತಕ್ಕಂತೆ ಪೂರೈಕೆ ಸಾಧ್ಯವಾಗುತ್ತಿಲ್ಲ. ಉದಾಹರಣೆಗೆ ಪನ್ನೀರಿನ ಬೇಡಿಕೆಗೆ ಶೇ 5 ರಷ್ಟು ಮಾತ್ರ ನಾವು ಪೂರೈಕೆ ಮಾಡುತ್ತಿದ್ದೇವೆ. ಇದನ್ನು ಹೆಚ್ಚು ಮಾಡಬೇಕು ಎನ್ನುವುದು ನಮ್ಮ ಉದ್ದೇಶ. ಜನರೇ ನಂದಿನಿ ಉತ್ಪನ್ನಗಳನ್ನು ಹೆಚ್ಚು ಬಳಸುವ ಮೂಲಕ ಮಾರುಕಟ್ಟೆ ಹೆಚ್ಚು ಮಾಡಿಕೊಡಬೇಕು ಎಂದು ಹೇಳಿದರು.


ಹೊಸಕೋಟೆಯಲ್ಲಿ 22 ಎಕರೆ ಜಮೀನು, ದೊಡ್ಡ ಬಳ್ಳಾಪುರದಲ್ಲಿಯೂ 8 ಎಕರೆ ಜಮೀನಿದೆ ಅಲ್ಲಿಯೂ ಹಾಲು ಸಂಸ್ಕರಣ ಕೇಂದ್ರ ತೆರೆಯಬೇಕು ಎಂಬುದು ಅಲ್ಲಿನವರ ಬೇಡಿಕೆ. ಮಾಗಡಿ ತಾಲ್ಲೂಕಿನ ಅಭಿವೃದ್ಧಿಗೆ ನಾನು ಕೈ ಜೋಡಿಸುತ್ತೇನೆ.

ಕಾವೇರಿ, ಹೇಮಾವತಿ, ಎತ್ತಿನಹೊಳೆಯಿಂದಲೂ ನೀರು ಬರುವ ಸಂಭವವಿದೆ. ಇದನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ನಾವು ನಿಮ್ಮ ನಿರೀಕ್ಷೆಗೆ ತಕ್ಕಂತೆ ಉತ್ತಮ ಕೆಲಸ ಮಾಡಿದಾಗ ಮಾತ್ರ ಈ ಅಭಿನಂದನೆಗೆ ನಾವು ಅರ್ಹ ಎಂದು ಸಾಬೀತಾಗುತ್ತದೆ. ನನಗೆ ಹಾಲು ಸಹಕಾರ ಕ್ಷೇತ್ರದಲ್ಲಿ ಹೆಚ್ಚು ಅನುಭವವಿಲ್ಲ. ಈ ಕ್ಷೇತ್ರದ ಪ್ರಕ್ರಿಯೆ, ಅದರ ಆಡಳಿತ ಬಗ್ಗೆ ನಾನು ಈಗಷ್ಟೇ ಪ್ರಾಮಾಣಿಕವಾಗಿ ಕಲಿಯುತ್ತಿದ್ದೇನೆ. ನಾನು ಕೆಟ್ಟವನಾಗಬೇಕಾ, ಒಳ್ಳೆಯವನಾಗಬೇಕಾ ಎಂಬ ಪ್ರಶ್ನೆ ನನ್ನನ್ನು ಕಾಡುತ್ತಿದೆ. ಕೆಟ್ಟವನಾಗದೆ ನನಗೆ ಬೇರೆ ವಿಧಿ ಇಲ್ಲ ಎಂದರು. ಇಲ್ಲಿ ಕೆಲವರು 5 ಪ್ರೋತ್ಸಾಹ ಧನ ನೀಡಬೇಕು ಎಂದು ಹೇಳಿದರು, ಮೇವು ಪೂರೈಕೆದಾರರು ತಮ್ಮದೇ ಸಮಸ್ಯೆ ಹೇಳಿಕೊಂಡರು. ಇದನ್ನು ಖಾಸಗಿ ಅವರಿಗೆ ಕೊಟ್ಟಿರುವ ಕಾರಣ ಅವರು ಲಾಭ ನೋಡುತ್ತಿದ್ದಾರೆ. ನಾವು ಕನಕಪುರದಲ್ಲಿ ಸ್ಥಾಪಿಸಿರುವ ಹಾಲು ಕೇಂದ್ರ ಇಡೀ ಏಷ್ಯಾದಲ್ಲೇ ಅತ್ಯುತ್ತಮ ಘಟಕ. ನಾವು ಹೊಸ ಮಾರುಕಟ್ಟೆ ಹುಡುಕಬೇಕು. ಅದಕ್ಕೆ ಗುಣಮಟ್ಟದ ಅವಶ್ಯಕತೆ ಇದೆ. ಹಾಲು ಹಾಕುವವರಿಂದ ಕೊನೆಯದಾಗಿ ಮಾರುವವನವರೆಗೆ ಎಲ್ಲರೂ ಗುಣಮಟ್ಟ ನೋಡುತ್ತಾರೆ ಎಂದು ಹೇಳಿದರು.

ಖಾಸಗಿ ಹಾಲು ಸಂಸ್ಥೆಗಳು ರೈತರಿಂದ ಸಂಗ್ರಹಿಸುತ್ತಿರುವ ಹಾಲಿನಲ್ಲಿ ಕೊಬ್ಬಿನಾಂಶದ ಗುಣಮಟ್ಟ ಶೇ.4.5ರಷ್ಟಿದೆ. ನಾವು ಸಂಗ್ರಹಿಸುತ್ತಿರುವ ಹಾಲಿನ ಕೊಬ್ಬಿನಾಂಶದ ಗುಣಮಟ್ಟ ಶೇ.4.1ರಷ್ಟಿದೆ. ಇದನ್ನು ಸರಿಪಡಿಸಲು ನಾನು 1 ತಿಂಗಳು ಸಮಯಾವಕಾಶ ನೀಡಿದ್ದೇನೆ. ಇದಕ್ಕೆ ಸಹಕಾರ ನೀಡುವುದಾಗಿ ಎಲ್ಲರೂ ಹೇಳಿದ್ದಾರೆ. ವ್ಯವಸ್ಥೆಗೆ ತಕ್ಕ ಹಾಲಿನ ಉತ್ಪಾದನೆ ಇಲ್ಲ. ನಮ್ಮಲ್ಲಿ 25 ಲಕ್ಷ ಲೀಟರ್ ಹಾಲು ಪರಿಷ್ಕರಣೆ ಸಾಮರ್ಥ್ಯ ಹೊಂದಿದ್ದು, ನಾವು ಮಾಡುತ್ತಿರುವುದು ಸರಾಸರಿ 15 ಲಕ್ಷ ಲೀಟರ್ ಮಾತ್ರ. ಇನ್ನು 10 ಲಕ್ಷ ಲೀಟರ್ ಹಾಲು ಪರಿಷ್ಕರಿಸುವ ಸಾಮರ್ಥ್ಯ ನಮ್ಮಲ್ಲಿದೆ. ಮುಂದಿನ ಒಂದು ವರ್ಷದಲ್ಲಿ ಬಮೂಲ್ ಸಂಸ್ಥೆಯಲ್ಲಿ 25 ಲಕ್ಷ ಹಾಲು ಉತ್ಪಾದನೆ ಮಾಡಬೇಕು ಎಂದು ಅಧಿಕಾರಿಗಳಿಗೆ ಗುರಿ ನೀಡಿದ್ದೇನೆ ಎಂದು ತಿಳಿಸಿದರು.ಕಳೆದ ಎರಡು ತಿಂಗಳಿಂದ ಸಂಸ್ಥೆ ನಷ್ಟ ಅನುಭವಿಸಿದೆ. ರೈತರ ಮೇಲೆ ಹೊರೆ ಹಾಕಿ ಈ ನಷ್ಟ ಭರಿಸಲು ನನಗೆ ಇಷ್ಟವಿಲ್ಲ. ಹಾಲು ಉತ್ಪಾದನೆ ಜಾಸ್ತಿ ಮಾಡಿ 2 ರೂ. ಕಡಿಮೆ ಮಾಡಿ ಲಾಭಾಂಶ ತೋರಿಸಬಹುದು. ಆದರೆ ಅದು ಸರಿಯಲ್ಲ. ಈಗಿರುವ ವ್ಯವಸ್ಥೆ ಸರಿಪಡಿಸಿ, ಹಸುಗಳು ಹೆಣ್ಣು ಕರುಗಳನ್ನು ಹಾಕಬೇಕು. ನಾವು ಅವುಗಳ ಬಗ್ಗೆ ಗಮನ ಹರಿಸಿಡಿದ್ದೇವೆ. ಹೆಚ್ಚು ಪಶು ವೈದ್ಯರು, ನಾಯಿ ಬೆಕ್ಕು ಆರೋಗ್ಯ ನೋಡಿಕೊಳ್ಳುತ್ತಿದ್ದಾರೆ. ನಮ್ಮ ಡೈರಿ ಹಾಗೂ ಸರ್ಕಾರದಲ್ಲೂ ಪಶು ವೈದ್ಯರಿಲ್ಲ. ಇರುವವರು ವೈದ್ಯ ಕೆಲಸ ಬಿಟ್ಟು ಆಡಳಿತ ಮಂಡಳಿ ಸೇರಿದ್ದಾರೆ ಎಂದರು. ಇದೆಲ್ಲದಕ್ಕೂ ಪರಿಹಾರ ಹುಡುಕಬೇಕಾದರೆ ನಾನು ಕೆಟ್ಟವನಾಗಲೇ ಬೇಕು.

ನಾನು ನಿಮ್ಮ ಮೇಲೆ ಹೊರೆ ಹಾಕಲು ಇಷ್ಟವಿಲ್ಲ. ನಾನು ಅಧ್ಯಕ್ಷನಾದ ಮೂರೇ ದಿನಕ್ಕೆ ಎಂ.ಡಿ ಅವರು ಕರೆ ಮಾಡಿ ಮೇವಿನ ಬೆಲೆ 500 ಜಾಸ್ತಿ ಮಾಡಿದ್ದೇವೆ ಎಂದು ಹೇಳಿದರು. ನಾನು ಅದನ್ನು ತಡೆದು, ಮರು ದಿನ ಸಭೆ ನಡೆಸಿ ಹೊಸ ಆಡಳಿತ ಮಂಡಳಿ ಬರುವವರೆಗೂ ಇದನ್ನು ತಡೆಹಿಡಿಯುವಂತೆ ಮಾಡಿದ್ದೇನೆ ಎಂದರು.



ಉದಯವಾಹಿನಿ ಚಿತ್ರ

> ಶ್ರೀರಂಗ ನೀರಾವರಿ ಯೋಜನೆ ಬಗ್ಗೆ ತುಮಕೂರಿನವರು ಕೇವಲವಾಗಿ ಮಾತನಾಡುತ್ತಿದ್ದಾರೆ. ಇದರ ಬಗ್ಗೆ ಎಲ್ಲರು ಪಕ್ಷಾತೀತವಾಗಿ ಹೋರಾಟ ಮಾಡಬೇಕು. ನೀವು ಕಾವೇರಿ ಜಲಾನಯನ ಪ್ರದೇಶದ ಒಳಗೆ ಬರುವವರು. ನೀವು ತಮಿಳುನಾಡಿಗೆ ಸೇರಿದವರಲ್ಲ. ನೀವು ವ್ಯವಸಾಯಕ್ಕೆ ನೀರು ಕೇಳುತ್ತಿಲ್ಲ. ಕುಡಿಯುವುದಕ್ಕೆ ಕೇಳುತ್ತಿರುವುದು ಎಂದು ಹೇಳಿದರು.

> ನಮ್ಮ ಒಕ್ಕೂಟದಲ್ಲಿ 1.28 ಲಕ್ಷ ರೈತರು ಹಾಲು ಉತ್ಪಾದನೆ ಮಾಡುತ್ತಿದ್ದಾರೆ. ಮಾಗಡಿಯಲ್ಲಿ 12 ಸಾವಿರ ರೈತರು ಹಾಲು ಉತ್ಪಾದನೆ ಮಾಡುತ್ತಿದ್ದು, ನೀವು ಹೆಚ್ಚು ಹಸುಗಳನ್ನು ಕಟ್ಟಿ ನಮಗೆ ಸಹಕಾರ ನೀಡಬೇಕು. ನಿಮಗೆ ಅಗತ್ಯವಿರುವ ಆರ್ಥಿಕ ನೆರವಿಗಾಗಿ 3% ಬಡ್ಡಿದರದಲ್ಲಿ 2 ಹಸು ಖರೀದಿ ಮಾಡಲು 2 ಲಕ್ಷವರೆಗೂ ಸಾಲ ನೀಡಲಿ ಜಿಲ್ಲಾ ಸಹಕಾರಿ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಹಾಲು ವಾಹನಗಳಿಗೆ ಜಿಪಿಎಸ್ ವ್ಯವಸ್ಥೆ, ರೈತರ ಹಾಲಿನ ಗುಣಮಟ್ಟ ಎಷ್ಟಿದೆ ಎಂದು ಸ್ಥಳದಲ್ಲೇ ತಿಳಿಸಲು ಅಗತ್ಯ ತಂತ್ರಜ್ಞಾನ ಅಳವಡಿಸಲಾಗುತ್ತದೆ. ಇದರ ಮಾಹಿತಿಯನ್ನು ಪ್ರತಿ ನಿತ್ಯ ನಿಮಗೆ ನೀಡಲಾಗುವುದು ಎಂದು ತಿಳಿಸಿದರು.

# ಮಿನಿ ನ್ಯೂಸ್

## ಮೋರಿಗೆ ನುಗ್ಗಿದ ಕಾರು: ಐವರಿಗೆ ಗಂಭೀರ ಗಾಯ

• ಉದಯವಾಹಿನಿ, ಚಿಂತಾಮಣಿ

ಬೆಂಗಳೂರು ಮದನಪಲ್ಲಿ ರಸ್ತೆಯ ಐಮರೆಡ್ಡಿಹಳ್ಳಿ ಬಳಿ ಭಾನುವಾರ ರಾತ್ರಿ ಕಾರು ಮೋರಿಯ ತಡೆಗೋಡೆ ಡಿಕ್ಕಿ ಹೊಡೆದು ಐವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬೆಂಗಳೂರಿನ ಯಲಹಂಕ ತಾಲ್ಲೂಕಿನ ಚಿಕ್ಕಜಾಲ ಸಮೀಪದ ಮಾರನಾಯಕನಹಳ್ಳಿಯ ಲಕ್ಷ್ಮೀಕಾಂತ್, ಅನಂತಕುಮಾರ್, ವೆಂಕಟೇಶ್, ಮೀನುಕುಂಟೆ ಗ್ರಾಮದ ಅಂಬರೀಶ್ ಮತ್ತು ರಾಮಚಂದ್ರ ಗಾಯಗೊಂಡವರು. ಆಷಾಢ ಮಾಸದ ಅಂಗವಾಗಿ ನೆರೆಯ ಆಂಧ್ರ ಪ್ರದೇಶದ ಬಾಯಿಕೊಂಡಗೆ ಬೆಂಗಳೂರಿನಿಂದ ಕಾರಿನಲ್ಲಿ ತೆರಳಿ ಗಂಗಮ್ಮದೇವಿಯ ದರ್ಶನ ಮಾಡಿಕೊಂಡು ಬೆಂಗಳೂರಿಗೆ ವಾಪಸ್ ಹೋಗುವಾಗ ದುರ್ಘಟನೆ ನಡೆದಿದೆ. ಐಮರೆಡ್ಡಿಹಳ್ಳಿ ಬಳಿ ಕಾರು ಮೋರಿಯ ತಡೆಗೋಡೆಗೆ ಡಿಕ್ಕಿ ಹೊಡೆದಿದೆ. ಕಾರು ಸಂಪೂರ್ಣವಾಗಿ ಜಖಂಗೊಂಡಿದೆ.

ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ತೆರಳಿ ಗಾಯಾಳುಗಳನ್ನು ನಗರದ ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಿದ್ದಾರೆ. ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಚಿಕ್ಕಬಳ್ಳಾಪುರದ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 87ನೇ ನುಡಿಜಾತ್ರೆಯಲ್ಲಿ ಭ್ರಷ್ಟಾಚಾರ ಆರೋಪ

• ಉದಯವಾಹಿನಿ, ಮಂಡ್ಯ

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಹೆಸರಿನಲ್ಲಿ ಭಾರಿ ಭ್ರಷ್ಟಾಚಾರ ನಡೆದಿದ್ದು, ಉನ್ನತ ಮಟ್ಟದ ತನಿಖೆ ಆಗಬೇಕು' ಎಂದು ಮಾಜಿ ಶಾಸಕ ಕೆ.ಅನ್ನದಾನಿ ಒತ್ತಾಯಿಸಿದರು. 2024ರ ಡಿಸೆಂಬರ್ ತಿಂಗಳಿನಲ್ಲಿ ಮಂಡ್ಯದಲ್ಲಿ ನಡೆದ ಸಮ್ಮೇಳನ ನಡೆದ ಕೆಲ ದಿನಗಳಲ್ಲೇ ನಾನು ಭ್ರಷ್ಟಾಚಾರದ ಬಗ್ಗೆ ದನಿ ಎತ್ತಿದ್ದೆ. ಸರ್ಕಾರ ನನ್ನ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಲಿಲ್ಲ. ಸಮ್ಮೇಳನದ ಹೆಸರಿನಲ್ಲಿ ದೊಡ್ಡ ಮಟ್ಟದ ಭ್ರಷ್ಟಾಚಾರವೆಸಗಿ ಸ್ವೇಚ್ಛಾಚಾರ ನಡೆಸಿರುವುದು ಕೆಲ ದಾಖಲೆಗಳಿಂದ ಸಾಬೀತಾಗಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು. 500 ಬೆಲೆಯ ಹಣ್ಣಿನ ಬುಟ್ಟಿಗೆ 2,500, 900 ಬೆಲೆಯ ರೇಷ್ಮೆ ಸಾಲಿಗೆ 1,680, ಸಚಿವರು ಹಾಗೂ ಮುಖ್ಯಮಂತ್ರಿಗೆ ನೀಡಿರುವ ನೆನಪಿನ ಕಾಣಿಕೆಗೆ 31,500 ಭರಿಸಿರುವುದು ಭ್ರಷ್ಟಾಚಾರವಲ್ಲವೇ ಮತ್ತೇನು ಸಮ್ಮೇಳನಕ್ಕೆ 30 ಕೋಟಿ ವ್ಯಯಿಸಲಾಗಿದೆ ಎಂದು ಲೆಕ್ಕಪತ್ರಗಳನ್ನು ನೀಡಲಾಗಿದೆ. 10ಕ್ಕೆ ಆಗಬೇಕಾದ ಕೆಲಸಕ್ಕೆ 100 ಸೇರಿಸಿ ಸುಳ್ಳಿನ ಲೆಕ್ಕ ನೀಡಲಾಗಿದೆ ಎಂದು ಗಂಭೀರ ಆರೋಪ ಮಾಡಿದರು. ಸಾಹಿತ್ಯದ ಹೆಸರಿನಲ್ಲಿ ಮಂಡ್ಯ ಜಿಲ್ಲೆಗೆ ಕಳಂಕ ತರುವ ಪ್ರಯತ್ನದಲ್ಲಿ ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳು ಕಾರ್ಯ ನಿರ್ವಹಿಸಿ ಜಿಲ್ಲೆಯ ಮಾನ ಮರ್ಯಾದೆ ಹರಾಜು ಹಾಕಿದ್ದಾರೆ. ವ್ಯಾಪಕ ಭ್ರಷ್ಟಾಚಾರವು ಸಾರಿಗೆ, ವಸತಿ, ವೇದಿಕೆ ಮತ್ತು ಆಹಾರ ಸಮಿತಿಯಲ್ಲಿ ನಡೆದಿದೆ. ವೇದಿಕೆ ಸಮಿತಿಗೆ ಸುಮಾರು ತಲಾ 8.70 ಕೋಟಿ ಪಾವತಿಸಲಾಗಿದೆ. ಸದರಿ ಹಣದಲ್ಲಿ ದುಪ್ಪಟ್ಟು ವಸ್ತುಗಳ ಖರೀದಿ ನಡೆಸಬಹುದಿತ್ತು. ಈ ಹಿನ್ನೆಲೆಯಲ್ಲಿ ಹಾಲಿ ಅಥವಾ ಮಾಜಿ ನ್ಯಾಯಮೂರ್ತಿಗಳ ನೇತೃತ್ವದಲ್ಲಿ, ಸಿಐಡಿ, ಇಡಿ ಅಥವಾ ಸಿಬಿಐ ತನಿಖೆ ಆಗಲಿ ಎಂದು ಆಗ್ರಹಿಸಿದರು.

## ಪರಿಸರ ಸಂರಕ್ಷಣೆ ಪುಣ್ಯದ ಕೆಲಸ: ನ್ಯಾಯಮೂರ್ತಿ ಎಸ್.ಜಿ.ಪಂಡಿತ್

• ಉದಯವಾಹಿನಿ, ನಾಗಮಂಗಲ

ಪರಿಸರ ಸಂರಕ್ಷಣೆಯ ನಿಟ್ಟಿನಲ್ಲಿ ಗಿಡಗಳನ್ನು ನೆಡುವುದು. ಅವುಗಳನ್ನು ಸಂರಕ್ಷಿಸಿ ಹೆಮ್ಮರವಾಗುವಂತೆ ಮಾಡುವುದು ಪುಣ್ಯದ ಕೆಲಸವಾಗಿದೆ. ಸುತ್ತಮುತ್ತಲಿನ ಪರಿಸರದಲ್ಲಿ ಗಿಡಮರಗಳನ್ನು ಬೆಳೆಸುವ ಕೆಲಸ ಮಾಡಿ' ಎಂದು ಹೈಕೋರ್ಟ್ ನ್ಯಾಯಾಲಯದ ನ್ಯಾಯಮೂರ್ತಿ ಎಸ್.ಜಿ.ಪಂಡಿತ್ ಹೇಳಿದರು. ತಾಲ್ಲೂಕಿನ ಅಂಕುಶಾಪುರ ಮತ್ತು ಕಾಚೇನಹಳ್ಳಿ ಅರಣ್ಯ ಪ್ರದೇಶದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಜಿಲ್ಲಾಡಳಿ, ತಾಲ್ಲೂಕು ಕಸಾಪ, ವಕೀಲರ ಸಂಘ ಮತ್ತು ಎ.ಸಿ.ಯುನ ಎನ್.ಎಸ್.ಎಸ್ ಘಟಕಗಳ ಸಹಯೋಗದಲ್ಲಿ ಬೆಂಗಳೂರಿನ ಮಾತೃ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಐದು ಸಾವಿರ ಗಿಡಗಳನ್ನು ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. 'ಪರಿಸರ ದಿನಾಚರಣೆಯೂ ಒಂದು ದಿನದ ಗಿಡ ನೆಡುವ ಕಾರ್ಯಕ್ರಮ ಎಂದು ಭಾವಿಸದೇ ಪ್ರತಿ ದಿನವೂ ಪರಿಸರ ಸಂರಕ್ಷಣೆ ಮಾಡುವ ಕೆಲಸವಾಗಬೇಕು. ಜೊತೆಗೆ ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಿಸುವ ಮೂಲಕ ಪರಿಸರ ಮಾಲಿನ್ಯವಾಗದಂತೆ ಕ್ರಮವಹಿಸಿ.

ಪುನರ್ ಬಳಸಬಹುದಾದ ಪ್ಲಾಸ್ಟಿಕ್ ಬಳಕೆಗೆ ಆದ್ಯತೆ ನೀಡಿ. ಪ್ರತಿ ಮಕ್ಕಳೂ ತಮ್ಮ ಮನೆಯ ವಾತಾವರಣದಲ್ಲಿ ಗಿಡಗಳನ್ನು ನೆಟ್ಟು ಬೆಳೆಸಿ ಪೋಷಿಸಿದರೆ ಅದುವೆ ನಿಜವಾದ ಮಹಾತ್ಕಾರ್ಯ ಎಂದರು.

## ಸರ್ಕಾರದ ಯೋಜನೆಯಿಂದ ಕೆಆರ್‌ಎಸ್‌ಗೆ ಅಪಾಯ: ಎಂ.ಶಿವಪ್ರಕಾಶ

• ಉದಯವಾಹಿನಿ, ಮಂಡ್ಯ

ಕನ್ನಂಬಾಡಿ ಕಟ್ಟೆ ಉಳಿಸಬೇಕೆಂದು ಪ್ರತಿಭಟನೆ ಮಾಡುತ್ತಿರುವುದೇ ದುರಂತ, ಏಕೆಂದರೆ ಕಾಂಗ್ರೆಸ್ ಮತಿಹೀನ ಸರ್ಕಾರವಾಗಿದ್ದು, ದೈವತ್ವ ಸ್ವರೂಪವಾದ ಅಣೆಕಟ್ಟೆಗೆ ಧಕ್ಕೆ ತರುವ ಯೋಜನೆ ಮಾಡಲು ಹೊರಟವರಿಗೆ ದೇವರೇ ಶಿಕ್ಷೆ ಕೊಡುತ್ತಾನೆ' ಎಂದು ಹೈಕೋರ್ಟ್ ಹಿರಿಯ ವಕೀಲ ಎಂ.ಶಿವಪ್ರಕಾಶ ಹರಿಹಾಯ್ದರು. ಗಾಂಧಿ ಭವನದಲ್ಲಿ ಮಂಡ್ಯ ಜಿಲ್ಲಾ ರೈತ ಹಿತ ರಕ್ಷಣಾ ಸಮಿತಿ, ರೈತ ಸಂಘಟನೆಗಳು, ದಲಿತ, ಕಾರ್ಮಿಕ, ಕನ್ನಡಪರ, ಮಹಿಳಾ ಸಂಘಟನೆಗಳು ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ನಡೆದ ಕನ್ನಂಬಾಡಿ ಕಟ್ಟೆ ಉಳಿಸಿ ಎಂಬ ವಿಚಾರ ಸಂಕಿರಣದಲ್ಲಿ ವಿಷಯ ಮಂಡಿಸಿದರು. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಅಣೆಕಟ್ಟೆ ನಿರ್ಮಿಸಿ ಜನೋಪಯೋಗಿ ಯೋಜನೆ ತಂದರು. ಆದರೆ, ಸರ್ಕಾರ ಅಪಾಯಕಾರಿ ಯೋಜನೆಯನ್ನು ಜಾರಿಗೊಳಿಸಲು ಹೊರಟಿದೆ. ಇತಿಹಾಸ ಅರಿಯದವರು, ಓದದವರು ಮೋಜು ಮಸ್ತಿ ಮಾಡಲು ಅಮ್ಯೂಸ್‌ಮೆಂಟ್ ಪಾರ್ಕ್ ಮಾಡಲು ಮುಂದಾಗುತ್ತಾರೆ, ಯಾರೂ ಕೇಳದಿದ್ದರೂ ಆರತಿ ಮಾಡಬೇಕೆಂದು ನಿಂತಿದ್ದಾರೆ. ಇದೆಲ್ಲ ಹಣ ಮಾಡಲಿಕ್ಕೆ. ಖಾಸಗಿ ಲಾಬಿಯವರಿಗೆ ಅನುಕೂಲ ಮಾಡಿಕೊಡಲು ಬಾರ್ ಅಂಡ್ ರೆಸ್ಟೋರೆಂಟ್, ಮೋಜು ಮಸ್ತಿಗೆ ಅವಕಾಶ ಮಾಡಿಕೊಡುವಂತಹ ಯೋಜನೆಗೆ ಕೈ ಹಾಕಿದ್ದಾರೆ ಎಂದು ಕಿಡಿಕಾರಿದರು. ಪರಿಸರಕ್ಕಾಗಿ ನಾವು ಸಂಘಟನೆಯ ರಾಜ್ಯ ಘಟಕದ ಅಧ್ಯಕ್ಷ ಎ.ಟಿ.ರಾಮಸ್ವಾಮಿ ಮಾತನಾಡಿ, ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ರೂ 2,662 ಕೋಟಿ ಖರ್ಚು ಮಾಡಿ ಯಾವ ಸಾಧನೆ ಮಾಡಲು ಹೊರಟಿದೆ ಎನ್ನುವುದನ್ನು ತಿಳಿಸಬೇಕು.

ಅಂತರಾಳದಿಂದ..
EDITORIAL

# ಗುಜರಾತ್‌ನಲ್ಲಿ ಸೇತುವೆ ಕುಸಿತ; ವ್ಯವಸ್ಥೆಯ ಕುಸಿತದ ಸಂಕೇತವೇ?



ವ್ಯವಸ್ಥೆಯಲ್ಲಿನ ನೈತಿಕ ಅಧಃಪತನದ ಸಂಕೇತದಂತೆ ಸೇತುವೆಗಳು ಕುಸಿಯುತ್ತಿವೆ. ಸೇತುವೆಗಳ ನಿರ್ವಹಣೆ ಹಾಗೂ ದುರಸ್ತಿ ಸರ್ಕಾರಗಳಿಗೆ ಆದ್ಯತೆಯ ಕೆಲಸ ಆಗಬೇಕು.

ಗುಜರಾತ್‌ನ ವಡೋದರಾದಲ್ಲಿ ಮಹಿಸಾಗರ ನದಿಗೆ ನಿರ್ಮಿಸಿದ್ದ. 40 ವರ್ಷಗಳಷ್ಟು ಹಳೆಯದಾದ ಸೇತುವೆ ಕುಸಿದುಬಿದ್ದು ಕನಿಷ್ಠ 18 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ದೇಶದ ಹಲವು ಕಡೆಗಳಿಂದ ವರದಿಯಾಗುತ್ತಿರುವ ಸೇತುವೆ ಕುಸಿತದ ಘಟನೆಗಳಲ್ಲಿ ಇದು ಈಚೆಗಿನದು. ವಡೋದರಾದ ಸೇತುವೆಯ ಒಂದು ಭಾಗವು ಕುಸಿದು ನದಿಗೆ ಬಿದ್ದಾಗ ಅದರ ಮೇಲೆ ವಾಹನಗಳು ಇದ್ದವು. ಕೆಲವರಿಗೆ ಜೀವ ಉಳಿಸಿಕೊಳ್ಳಲು ಯಾವ ಅವಕಾಶವೂ ಸಿಗಲಿಲ್ಲ.

**ಕಳೆದ ತಿಂಗಳು ಪುಣೆಯಲ್ಲಿ ತೂಗುಸೇತುವೆಯೊಂದು ಕುಸಿದು ನಾಲ್ಕು ಮಂದಿ ಮೃತಪಟ್ಟಿದ್ದರು. ಅಸ್ಸಾಂನಲ್ಲಿ ಮೂರು ವಾರಗಳ ಹಿಂದೆ ಆಗತಾನೇ ದುರಸ್ತಿ ಆಗಿದ್ದ ಸೇತುವೆಯೊಂದು ಕುಸಿದು ಬಿದ್ದಿತ್ತು. ಬಿಹಾರದಲ್ಲಿ ಸೇತುವೆ ಕುಸಿತದ 12 ಪ್ರಕರಣಗಳು ಕಳೆದ ವರ್ಷ ವರದಿಯಾಗಿವೆ. ಗುಜರಾತ್‌ನಲ್ಲಿ ಕೂಡ ಈಚಿನ ವರ್ಷಗಳಲ್ಲಿ ಸೇತುವೆ ಹಾಗೂ ಮೇಲ್ಸೇತುವೆ ಕುಸಿತದ ಹಲವು ಪ್ರಕರಣಗಳು ನಡೆದಿವೆ. ಮೊರ್ಬಿ ನದಿಗೆ ನಿರ್ಮಿಸಿದ್ದ ತೂಗುಸೇತುವೆಯೊಂದು 2022ರ ಅಕ್ಟೋಬರ್‌ನಲ್ಲಿ ಕುಸಿದು 140ಕ್ಕೂ ಹೆಚ್ಚು ಮಂದಿ ಜೀವ ಕಳೆದುಕೊಂಡರು. ಮೊರ್ಬಿ ಸೇತುವೆಯನ್ನು ರಿಪೇರಿ ಮಾಡಿ ಆಗಷ್ಟೇ ಬಳಕೆಗೆ ಮುಕ್ತವಾಗಿಸಲಾಗಿತ್ತು.**

ಈಚೆಗೆ ಕೆಲವು ವಾರಗಳಲ್ಲಿ ವರದಿಯಾಗಿರುವ ಸೇತುವೆ ಕುಸಿತದ ಘಟನೆಗಳಲ್ಲಿ ಇದು ಮೂರನೆಯದು. ವಡೋದರಾ ಸೇತುವೆಯ ಸುರಕ್ಷತೆ ಬಗ್ಗೆ ಕೆಲವು ದೂರುಗಳು ಇವೆ. ಆ ದೂರುಗಳನ್ನು, ಸೇತುವೆಯನ್ನು ಬಳಸುವ ಜನರು ಹಾಗೂ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಮೇಲಧಿಕಾರಿಗಳ ಗಮನಕ್ಕೆ ತಂದಿದ್ದರು. ಕಳೆದ ವರ್ಷ ರಿಪೇರಿ ಮಾಡಲಾಗಿತ್ತು ಎಂದು ಜಿಲ್ಲಾಡಳಿತವು ಹೇಳಿದ್ದ ಸೇತುವೆಯ ಕುಸಿತದ ಬಗ್ಗೆ ಗುಜರಾತ್ ಸರ್ಕಾರವು ತನಿಖೆಗೆ ಆದೇಶಿಸಿದೆ. ಹೊಸದಾಗಿ ನಿರ್ಮಾಣ ಆಗಿರುವ ಹಲವು ಸೇತುವೆಗಳ ಗುಣಮಟ್ಟವು ಕಳವಳಕಾರಿ ಆಗಿದೆ. ನಿರ್ಮಾಣ ಸಂದರ್ಭದಲ್ಲಿ ಕಳಪೆ ಗುಣಮಟ್ಟದ ಸರಕುಗಳನ್ನು ಬಳಸುವುದು ಹಾಗೂ ಪಾಲಿಸಬೇಕಿರುವ ಅತ್ಯುತ್ತಮ ಮಾನದಂಡಗಳನ್ನು ಪಾಲಿಸದೆ ಇರುವುದು ನಡೆದೇ ಇದೆ. ಗುತ್ತಿಗೆ ಪಡೆದವರು ಅಕ್ರಮವಾಗಿ ಲಾಭ ಮಾಡಿಕೊಳ್ಳುವುದರ ಮೇಲೆ ಕಣ್ಣಿಟ್ಟಿರುತ್ತಾರೆ; ಲಾಭದಲ್ಲಿ ಒಂದಿಷ್ಟು ಪಾಲನ್ನು ಅವರು ಅಧಿಕಾರಿಗಳಿಗೂ ರಾಜಕೀಯ ಮುಖಂಡರಿಗೂ ತಲುಪಿಸುವ ಪದ್ಧತಿ ಚಾಲ್ತಿಯಲ್ಲಿದೆ. ರಿಪೇರಿ ಕೆಲಸಗಳು ತೃಪ್ತಿಕರ ಮಟ್ಟದಲ್ಲಿ ಇರುವುದಿಲ್ಲ. ಅಲಂಕಾರಕ್ಕೆ ಎಂಬಂತೆ ಮಾತ್ರವೇ ಕೆಲಸಗಳು ನಡೆದಿರುತ್ತವೆ. ಹಿಂದೆ ನಡೆದ ದುರಂತಗಳಿಂದ ನಾವು ಯಾವ ಪಾಠವನ್ನೂ ಕಲಿತಿಲ್ಲ. ಸಾರ್ವಜನಿಕರ ಸುರಕ್ಷತೆ ಹಾಗೂ ಸಾರ್ವಜನಿಕರ ಒಳಿತಿಗಿಂತ ಹೆಚ್ಚಿನ ಮಹತ್ವವು ಕೆಲವೇ ಕೆಲವರು ಹಣಕಾಸಿನ ಲಾಭ ಮಾಡಿಕೊಳ್ಳುವುದಕ್ಕೆ ಸಿಗುತ್ತಿದೆ.

ದೇಶಕ್ಕೆ ಸ್ವಾತಂತ್ರ್ಯ ಸಿಗುವ ಮೊದಲು ನಿರ್ಮಾಣ ಆದ ಸರಿಸುಮಾರು 100ಕ್ಕೂ ಹೆಚ್ಚು ಸೇತುವೆಗಳು ಇಂದಿಗೂ ಬಳಕೆಯಲ್ಲಿ ಇವೆ ಎಂದು ಅಂದಾಜು ಮಾಡಲಾಗಿದೆ. ಈ ಸೇತುವೆಗಳ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತವಾಗಿದೆ. ಅಷ್ಟೇ ಅಲ್ಲ, ಸ್ವಾತಂತ್ರ್ಯ ಬಂದ ನಂತರದಲ್ಲಿ ನಿರ್ಮಾಣವಾದ ಹಲವು ಸೇತುವೆಗಳ ಸುರಕ್ಷತೆಯ ಬಗ್ಗೆಯೂ ಪ್ರಶ್ನೆಗಳಿವೆ. ಸೇತುವೆಗಳ ಸುರಕ್ಷತೆಯ ವಿಚಾರವಾಗಿ ಸಂಬಂಧಪಟ್ಟ ಅಧಿಕಾರಿಗಳು ಹೆಚ್ಚಿನ ಲಕ್ಷ್ಯ ವಹಿಸಿಲ್ಲ. ಈಗ ವರದಿಯಾಗಿರುವ ಘಟನೆಗಳು ಅಧಿಕಾರಿಗಳಿಗೆ ಇಂತಹ ನಿರ್ಮಾಣಗಳನ್ನು ಕಾಲಕಾಲಕ್ಕೆ ಪರಿಶೀಲನೆ ನಡೆಸಲು. ಅವುಗಳ ರಚನೆಯು ಜನರ ಬಳಕೆಗೆ ಸುರಕ್ಷಿತವಾಗಿ ಇದೆಯೇ ಎಂಬುದನ್ನು ಖಾತರಿಪಡಿಸಿಕೊಳ್ಳಲು ಒಂದು ಕಾರಣವಾಗಿ ಒದಗಿಬರಬೇಕು. ಅವುಗಳ ರಿಪೇರಿ, ನಿರ್ವಹಣೆಯನ್ನು ಆದ್ಯತೆಯ ಕೆಲಸವನ್ನಾಗಿ ಕೈಗೆತ್ತಿಕೊಳ್ಳಬೇಕು. ಆದರೆ, ಸೇತುವೆಗಳು ಕುಸಿದಾಗ ಹೆಚ್ಚಿನ ಸಂದರ್ಭಗಳಲ್ಲಿ ಉತ್ತರದಾಯಿತ್ವ ನಿಗದಿ ಮಾಡುವ ಕೆಲಸ ಆಗುವುದಿಲ್ಲ.

**ಸೇತುವೆಗಳ ಕುಸಿತವು ಅಪಘಾತದ ಘಟನೆಗಳಷ್ಟೇ ಅಲ್ಲ;** ಅವು ನಿರ್ವಹಣೆಯ ಕೆಲಸವು ಬಹುಕಾಲದಿಂದ ಆಗದೆ ಇರುವುದರ ಫಲವೂ ಹೌದು. ವಡೋದರಾ ಸೇತುವೆಯು ಸುರಕ್ಷಿತವಾಗಿದೆ, 'ಪ್ರಮುಖ ಲೋಪಗಳು' ಅದರಲ್ಲಿ ಇಲ್ಲ ಎಂಬ ಪ್ರಮಾಣಪತ್ರ ನೀಡಿದ ಕೆಲವು ತಿಂಗಳಲ್ಲೇ ಅದು ಕುಸಿದಿದೆ. ಸುರಕ್ಷಿತವಾಗಿದೆ ಎಂಬ ಪ್ರಮಾಣ ಪತ್ರವೇ ಲೋಪಗಳಿಂದ ಕೂಡಿದ್ದರೆ ಜನರ ಜೀವವು ಅಪಾಯಕ್ಕೆ ಸಿಲುಕುತ್ತದೆ ಹಾಗೂ ನೂರಾರು ಕೋಟಿ ರೂಪಾಯಿ ನಷ್ಟ ಸಂಭವಿಸುತ್ತದೆ. ಆಗಿರುವ ತಪ್ಪುಗಳನ್ನು ತಿದ್ದಿಕೊಳ್ಳಬೇಕಿದೆ. ತಪ್ಪು ತಿದ್ದಿಕೊಳ್ಳುವುದಕ್ಕೆ ಇದು ಸರಿಯಾದ ಸಮಯ.

# ಬಿಳಿ ಕೂದಲು ನಿಮ್ಮನ್ನು ಚಿಂತೆಗೀಡು ಮಾಡಿದ್ಯಾ..?

ಬಿಳಿ ಕೂದಲು ಕಂಡ ತಕ್ಷಣ ಮನಸ್ಸಿಗೇಕೋ ಬೇಸರ. ಇಷ್ಟು ಬೇಗ ಕೂದಲು ಬಿಳಿಯಾಯಿತಲ್ಲ ಎಂಬ ಚಿಂತೆ. ಮಾರುಕಟ್ಟೆಯಲ್ಲಿ ವಿವಿಧ ಹೇರ್ ಡೈಗಳು ಲಭ್ಯವಿದ್ದರೂ, ದೀರ್ಘ ಕಾಲ ರಾಸಾಯನಿಕ ಉತ್ಪನ್ನ ಬಳಸಿದರೆ ಏನಾದರೂ ಅಡ್ಡಪರಿಣಾಮ ಬೀರಬಹುದೇ ಎಂಬ ಆತಂಕ, ಹಾಗಾದರೆ ಇಲ್ಲಿ ತಿಳಿಸಿರುವ ವಿಧಾನದಲ್ಲಿ ಮನೆಯಲ್ಲೇ ಹೇರ್ ಡೈ ತಯಾರಿಸಿ. ಎಲ್ಲರೂ ಕಪ್ಪು ಕೂದಲನ್ನೇ ಇಷ್ಟ ಪಡುತ್ತಾರೆ. ಯುವಕರಂತೆ ಕಾಣಬೇಕೆಂದು ಪ್ರತಿಯೊಬ್ಬರೂ ಪ್ರಯತ್ನಿಸುತ್ತಾರೆ. ಆದರೆ ಈ ಬಿಳಿ ಕೂದಲು ಎಲ್ಲವನ್ನೂ ಹಾಳುಮಾಡುತ್ತದೆ. ಇತ್ತೀಚೆಗಂತೂ 20-30 ವಯಸ್ಸಿನಲ್ಲಿಯೇ ಬಿಳಿ ಕೂದಲು ಕಾಣಿಸಿಕೊಳ್ಳುತ್ತದೆ. ಬಿಳಿ ಕೂದಲು ಬಾರದಂತೆ ತಡೆಯುವುದು ಬಹುತೇಕ ಅಸಾಧ್ಯ. ಆದರೆ ಬಿಳಿ ಕೂದಲನ್ನು ಕಪ್ಪು ಮಾಡಿಕೊಳ್ಳುವ ಆಯ್ಕೆಗಳಿವೆ. ಹೆಚ್ಚಿನವರು ಹೇರ್ ಡೈ ಬಳಸುತ್ತಾರೆ.

ಆದರೆ ದೀರ್ಘ ಕಾಲ ಇದನ್ನು ಬಳಸಿದರೆ ಕೆಲವು ಅಡ್ಡಪರಿಣಾಮಗಳನ್ನು ಬೀರಬಹುದು. ಕೆಲವರು ಮೆಹಂದಿ ಅಥವಾ ಹೆನ್ನಾ ಬಳಸುತ್ತಾರೆ ಇದು ಉತ್ತಮ ಆಯ್ಕೆ. ಮೆಹೆಂದಿ ಹುಡಿಗೆ ಕೆಲವು ನೈಸರ್ಗಿಕ ಪದಾರ್ಥಗಳನ್ನು ಸೇರಿಸುವುದರಿಂದ ಹೆಚ್ಚಿನ ಪ್ರಯೋಜನ ಪಡೆಯಬಹುದು. ನಾವಿಲ್ಲಿ ಮನೆಯಲ್ಲಿಯೇ ನೈಸರ್ಗಿಕ ಹೇರ್ ಡೈ ತಯಾರಿಸಿ ಕೂದಲಿಗೆ ಹಚ್ಚುವ ವಿಧಾನವನ್ನು ತಿಳಿಸಿದ್ದೇವೆ.

**ಮನೆಯಲ್ಲಿಯೇ ತಯಾರಿಸಿ ಹೇರ್ ಡೈ:** ಮನೆಯಲ್ಲಿಯೇ ಕೂದಲಿಗೆ ಬಣ್ಣ ಹಚ್ಚಲು, ಕೂದಲನ್ನು ಕಪ್ಪಾಗಿಡುವ ಗುಣಗಳನ್ನು ಹೊಂದಿರುವ ನೈಸರ್ಗಿಕ ಗಿಡಮೂಲಿಕೆಗಳ



ಸಹಾಯವನ್ನು ನೀವು ತೆಗೆದುಕೊಳ್ಳಬಹುದು. ನೈಸರ್ಗಿಕ ಗಿಡಮೂಲಿಕೆಗಳಿಂದ ಅಪಾಯಕಾರಿ ಅಡ್ಡಪರಿಣಾಮಗಳು ಕಂಡುಬರುವುದಿಲ್ಲ. ಇದು ನಿಮ್ಮ ಕೂದಲಿನ ಬೆಳವಣಿಗೆಗೂ ಸಹಾಯ ಮಾಡಬಹುದು. ಅಂತಹ ಒಂದು ನೈಸರ್ಗಿಕ ಹೇರ್ ಡೈ ತಯಾರಿಸುವ ವಿಧಾನವನ್ನು ಇಲ್ಲಿ ತಿಳಿಯೋಣ.

**ಕೂದಲಿಗೆ ಬಣ್ಣ ಹಚ್ಚುವ ಮೊದಲು ಹೀಗೆ ಮಾಡಿ:** ಈ ಹೇರ್ ಡೈ ಅನ್ನು ನಿಮ್ಮ ಕೂದಲಿಗೆ ಹಚ್ಚುವ ಮೊದಲು, ನಿಮ್ಮ ಹಣೆ, ಕುತ್ತಿಗೆ ಮತ್ತು ಕಿವಿಗಳಿಗೆ ಪೆಟ್ರೋಲಿಯಂ ಜೆಲ್ಲಿ ಅಥವಾ ತೆಂಗಿನ ಎಣ್ಣೆಯನ್ನು ಹಚ್ಚಿ. ಇದು ಚರ್ಮದ ಮೇಲೆ ಬಣ್ಣದ ಕಲೆಗಳು ಕಾಣಿಸಿಕೊಳ್ಳುವುದನ್ನು ತಡೆಯುತ್ತದೆ. ಮತ್ತು ನೀವು ಕೂದಲಿಗೆ ಬಣ್ಣ ಹಚ್ಚಿದ್ದೀರಿ ಎಂಬ ಸುಳಿವು ಕಾಣಿಸದಂತೆ ತಡೆಯುತ್ತದೆ.

**ಚಿಂತೆ ಬಿಡಿ ಈ ಹೇರ್‌ಪ್ಯಾಕ್ ಬಳಸಿ ನೋಡಿ**

**ಕೂದಲಿನ ಬಣ್ಣವನ್ನು ಕೇವಲ 3 ವಸ್ತುಗಳಿಂದ ತಯಾರಿಸಬಹುದು:** ಕೂದಲಿಗೆ ಕಪ್ಪು ಬಣ್ಣ ಹಚ್ಚಲು ಒಂದು ಬಟ್ಟಲು ಗೋರಂಟಿ ಪುಡಿ, 3 ಚಮಚ ಆಮ್ಲಾ ಪುಡಿ ಮತ್ತು ಒಂದು ಚಮಚ ಕಾಫಿ ಪುಡಿಯನ್ನು ತೆಗೆದುಕೊಳ್ಳಿ. ಈ ಎಲ್ಲಾ ವಸ್ತುಗಳನ್ನು ನೀರಿನ ಸಹಾಯದಿಂದ ಬೆರೆಸಿ ದಪ್ಪ ಪೇಸ್ಟ್ ಮಾಡಿ.

## ಕೂದಲಿಗೆ ಬಣ್ಣವನ್ನು ಹೇಗೆ ಹಚ್ಚಬೇಕು

**ನಿಮ್ಮ ಕೂದಲು ಮತ್ತು ನೆತ್ತಿಗೆ ಹೇರ್ ಡೈ (ಮನೆಯಲ್ಲಿ ತಯಾರಿಸಿದ ಹೇರ್ ಡೈ) ಹಚ್ಚಿ. ಈ ಕೂದಲಿನ ಬಣ್ಣವನ್ನು ಕೂದಲಿನ ಬೇರುಗಳಿಂದ ತುದಿಯವರೆಗೆ ಸರಿಯಾಗಿ ಹಚ್ಚಬೇಕು ಎಂಬುದನ್ನು ನೆನಪಿನಲ್ಲಿಡಿ. ಕೂದಲಿನ ಬಣ್ಣವನ್ನು ನಿಮ್ಮ ಕೂದಲಿನ ಮೇಲೆ 45-50 ನಿಮಿಷಗಳ ಕಾಲ ಇರಿಸಿ. ಅಥವಾ ಈ ಪೇಸ್ಟ್ ಒಣಗುವವರೆಗೆ ಕೂದಲು ತೊಳೆಯಬೇಡಿ. ಈ ಹೇರ್ ಡೈ ನಿಮ್ಮ ಕೂದಲಿಗೆ ಬಣ್ಣ ನೀಡುವ ಜೊತೆಗೆ ನಿಮ್ಮ ಕೂದಲಿನ ಪೋಷಣೆಯನ್ನೂ ಮಾಡುತ್ತದೆ.**



**ನೈಸರ್ಗಿಕ ಹೇರ್ ಡೈ ಪ್ರಯೋಜನಗಳು:** ಕೂದಲಿಗೆ ನೈಸರ್ಗಿಕ ಬಣ್ಣ ಹಚ್ಚುವುದರಿಂದ ಕೂದಲು ಉದುರುವ ಸಮಸ್ಯೆ ಕಡಿಮೆಯಾಗುತ್ತದೆ ಮತ್ತು ಕೂದಲಿನ ಶುಷ್ಕತೆ, ದೌರ್ಬಲ್ಯ ಮತ್ತು ತಲೆಹೊಟ್ಟು ಕೂಡ ಕಡಿಮೆಯಾಗುತ್ತದೆ. ಕಾಫಿಯಲ್ಲಿರುವ ಕೆಫೀನ್ ನೆತ್ತಿಯನ್ನು ಪೋಷಿಸುತ್ತದೆ, ಕೂದಲಿನ ಕಿರುಚೀಲಗಳನ್ನು ಉತ್ತೇಜಿಸುತ್ತದೆ, ಕೂದಲಿನ ತ್ವರಿತ ಬೆಳವಣಿಗೆಗೆ ಸಹಕಾರಿ.

ಇದು ಕೂದಲಿನ ಬೇರುಗಳಿಗೆ ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ, ಬಲವಾದ ಕೂದಲಿಗೆ ಉತ್ತಮ ಪೋಷಕಾಂಶ ಹೀರಿಕೊಳ್ಳಲು ಸಹಾಯ ಮಾಡುತ್ತದೆ. ಹೆನ್ನಾ ಅಥವಾ ಗೋರಂಟಿ ಕೂದಲಿನ ಅನೇಕ ಸಮಸ್ಯೆಗಳಾದ ಕೂದಲು ಉದುರುವುದು, ಕೂದಲು ಒರಟಾಗುವುದು, ತಲೆಹೊಟ್ಟು ಮುಂತಾದವುಗಳಿಗೆ ಪರಿಹಾರ ನೀಡುತ್ತದೆ. ಹೆನ್ನಾ ಕೂದಲಿನ ಉತ್ತಮ ಬಣ್ಣಕ್ಕೆ ಅತ್ಯುತ್ತಮ ಮನೆಮದ್ದುಗಳಲ್ಲಿ ಒಂದಾಗಿದೆ. ಕೂದಲನ್ನು ಕಪ್ಪಾಗಿಸುವ ಗುಣ ಹೊಂದಿರುವುದಕ್ಕೆ ನೆಲ್ಲಿಕಾಯಿ ಅಥವಾ ಆಮ್ಲಾವನ್ನು ಹೇರ್ ಡೈ ಉತ್ಪನ್ನಗಳಲ್ಲಿ ಬಳಸುತ್ತಾರೆ. ನೆಲ್ಲಿಕಾಯಿ ವಿಟಮಿನ್ ಸಿ ಮತ್ತು ಉತ್ಕರ್ಷಣ ನಿರೋಧಕಗಳ ವಿರುದ್ಧ ಹೋರಾಡುತ್ತದೆ. ಕೂದಲಿಗಾಗುವ ಹಾನಿಯನ್ನು ಕಡಿಮೆ ಮಾಡುತ್ತದೆ.

# ಮಂತ್ರವನ್ನು ಆರಂಭಿಸುವ ಮುನ್ನ ಓಂ ಕಾರ ಯಾಕೆ?

ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ



ಸನಾತನ ಧರ್ಮದ ಅನುಸಾರ ಪ್ರಣವ ಮಂತ್ರ ಓಂ ಗೆ ತನ್ನದೇ ಆದ ಮಹತ್ವ ಇದೆ. ಓಂ ಉಚ್ಛಾರ ಮಾಡದೇ ಯಾವುದೇ ಪೂಜೆಗಳು ಶುರುವಾಗುವುದೂ ಇಲ್ಲ ಸಂಪೂರ್ಣವಾಗುವುದೇ ಇಲ್ಲ. ಮಂತ್ರಗಳಲ್ಲಿ ಓಂಉಚ್ಛಾರ ಮಾಡದೇ ಶುರುವಾಗದ ಮಂತ್ರ ಹೇಗೆ ಪೂರ್ಣಗೊಳ್ಳುವುದು..?
ಕಾರ ಉಚ್ಚರಿಸುತ್ತಲೇ ಶ್ರೀಗಣೇಶನ ಆವಾಹನೆ ಮತ್ತು ಸಂಸ್ಥಾಪನೆ..
ವಾತಾವರಣ ಎಲ್ಲವೂ ಮಂಗಳ, ಮಂಗಳ, ಮಂಗಳ ...
ಪ್ರಣವ (ಓಂ ಕಾರ) ಸ್ವರೂಪ ವಕ್ರತುಂಡಮ್
ವಿದ್ಯೆ, ಬುದ್ಧಿ, ಸಂಪತ್ತು ಮತ್ತು ಜ್ಞಾನದ ಆದಿದೇವತೆಯಾಗಿರುವ ಪ್ರಥಮ ವಂದಿತ, ಆದಿ ಪೂಜಿತ, ಬುದ್ಧಿ ಪ್ರದಾಯಕ, ಸಿದ್ಧಿ ದಾಯಕ, ಗಣಗಳ ಆಧೀಶ್ವರ, ಮೋದಕ-ಗರಿಕೆ ಪ್ರಿಯ, ವಿಘ್ನ ಹರ ಎಲ್ಲವೂ ಆದ ಶ್ರೀ ಗಣೇಶ. ಪ್ರತಿಯೊಂದು ಮಂಗಳ ಕಾರ್ಯದ ಆರಂಭದಲ್ಲಿ ಶ್ರೀಗಣೇಶನ ಆವಾಹನೆ, ಸಂಸ್ಥಾಪನೆ ಮತ್ತು ಪೂಜೆ ಮಾಡಲಾಗುತ್ತದೆ. ಮಹಾಭಾರತ ಕಾಲಕ್ಕೂ ಬಹು ಹಿಂದೆಯೇ ಗಣೇಶ ಪೂಜೆ ಅಥವಾ ಗಣೇಶ ಚತುರ್ಥಿ ವ್ರತ ಇತ್ತೆಂಬುದಕ್ಕೆ ಪೌರಾಣಿಕ ಪುರಾವೆಗಳಿವೆ. ಸ್ವಯಂ ಭಗವಾನ್ ಶ್ರೀಕೃಷ್ಣನೇ ಗಣೇಶನ ವ್ರತ ಆಚರಿಸಿದ್ದ ಎಂದೂ ಶಾಸ್ತ್ರ-ಪುರಾಣಗಳು ಹೇಳುತ್ತವೆ. ಅಷ್ಟೇ ಅಲ್ಲದೇ ಗಣೇಶನು ಮಂಗಳಕಾರಕವೂ ವಿಘ್ನ ನಿವಾರಕನೂ ಆಗಿದ್ದಾನೆ ಮತ್ತು ವಿದ್ಯಾ-ಬುದ್ಧಿಯ ಅಭೀಷ್ಟ ಪ್ರದಾಯಕನೂ ಆಗಿದ್ದಾನೆ.

ಮಂತ್ರ ಪಠಿಸಿ, ಸರ್ವ ರೋಗ ನಿವಾರಿಸಿ ! ಆದರೆ ಓಂ ಗೆ ಕೇವಲ ಧಾರ್ಮಿಕ ಮಹತ್ವ ಅಲ್ಲದೇ ಶಾರೀರಿಕ ಮಹತ್ವ ಕೂಡಾ ಇದೆ ಎಂಬುದು ನಿಮಗೆ ತಿಳಿದಿದೆಯೇ.?

**ಓಂ ಮತ್ತು ಥೈರಾಯ್ಡ್:** ಓಂ ಉಚ್ಛಾರಣೆ ಮಾಡುವುದರಿಂದ ಗಂಟಲಿನಲ್ಲಿ ಕಂಪನ ಉಂಟಾಗುತ್ತದೆ. ಇದರಿಂದ ಥೈರಾಯ್ಡ್ ಗ್ರಂಥಿಗಳ ಮೇಲೆ ಸಕಾರಾತ್ಮಕ ಪ್ರಭಾವ ಉಂಟಾಗುತ್ತದೆ.

**ಓಂ ಮತ್ತು ಭಯ:** ನಿಮಗೆ ಭಯವಾಗುತ್ತಿದ್ದರೆ ಕಣ್ಣನ್ನು ಮುಚ್ಚಿಕೊಂಡು ಐದು ಬಾರಿ ದೀರ್ಘ ಶ್ವಾಸ ತೆಗೆದುಕೊಂಡು 'ಓಂ' ಎಂದು ಉಚ್ಚರಿಸಿ.

**ಓಂ ಮತ್ತು ಒತ್ತಡ :** ಇದು ಶರೀರದ ವಿಷ ಅಂಶಗಳನ್ನು ದೂರ ಮಾಡುತ್ತದೆ. ಇದನ್ನು ಉಚ್ಛಾರ ಮಾಡುವುದರಿಂದ ಒತ್ತಡ ಕಡಿಮೆಯಾಗುತ್ತದೆ.

**ಓಂ ಮತ್ತು ರಕ್ತ ಸಂಚಾರ :** ಹೃದಯವನ್ನು ಆರೋಗ್ಯವಾಗಿಡಲು ಸಹಕಾರಿಯಾಗಿದೆ. ಓಂ ಎಂದು ಹೇಳುವುದರಿಂದ ರಕ್ತ ಸಂಚಾರ ಸುಗಮವಾಗುತ್ತದೆ.

**ಓಂ ಮತ್ತು ಪಚನ ಕ್ರಿಯೆ:** ಇದನ್ನು ಉಚ್ಛಾರ ಮಾಡುವುದರಿಂದ ಪಚನ ಕ್ರಿಯೆ ಸರಿಯಾಗುತ್ತದೆ.

**ಓಂ ಮತ್ತು ಸ್ಫೂರ್ತಿ :** ಇದರಿಂದ ಶರೀರದಲ್ಲಿ ಯುವಾವಸ್ಥೆಯ ಸ್ಫೂರ್ತಿ ಹರಿದಾಡುತ್ತದೆ.

**ಓಂ ಮತ್ತು ಸುಸ್ತು:** ಆಯಾಸವನ್ನು ದೂರ ಮಾಡಲು ಸುಲಭ ಉಪಾಯ ಓಂ ಉಚ್ಛಾರ ಮಾಡುವುದು.

**ಓಂ ಮತ್ತು ನಿದ್ರೆ:** ಸರಿಯಾಗಿ ನಿದ್ರೆ ಬರದೇ ಇದ್ದ ಸಂದರ್ಭದಲ್ಲಿ ಓಂ ಎಂದು ಪಠಣ ಮಾಡಿ. ಇದರಿಂದ ಮನಸ್ಸು ಶಾಂತವಾಗಿ ನಿದ್ರೆ ಚೆನ್ನಾಗಿ ಬರುತ್ತದೆ. **ಓಂ ಮತ್ತು ಶ್ವಾಸಕೋಶ:** ಓಂ ಉಚ್ಛಾರಣೆ ಶ್ವಾಸಕೋಶದ ತೊಂದರೆ ಕಡಿಮೆಯಾಗುತ್ತದೆ. **ಓಂ ಮತ್ತು ಬೆನ್ನೆಲುಬು:** ಓಂ ಉಚ್ಛಾರ ಮಾಡುವುದರಿಂದ ಉಂಟಾಗುವ ಕಂಪನದಿಂದ ಬೆನ್ನೆಲುಬು ಗಟ್ಟಿಯಾಗುತ್ತದೆ ಮುಂದೆ ಇದರಿಂದ ಯಾವುದೇ ಸಮಸ್ಯೆ ಕಾಣಿಸುವುದಿಲ್ಲ..



# ಸಂಚಾರ ದಟ್ಟಣೆ: ವಾಹನ ಸಂಚಾರಕ್ಕೆ ಪರ್ಯಾಯ ಮಾರ್ಗ



• ಉದಯವಾಹಿನಿ, ಬೆಂಗಳೂರು

ಎಚ್‌ಎಎಲ್ ಏರ್‌ಪೋರ್ಟ್ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ದೇವರಬೀಸನಹಳ್ಳಿ ಜಂಕ್ಷನ್‌ನಲ್ಲಿ ಸಂಚಾರ ದಟ್ಟಣೆ ತೀವ್ರಗೊಂಡಿದ್ದು, ವಾಹನಗಳ ಸುಗಮ ಸಂಚಾರಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರಾಯೋಗಿಕವಾಗಿ ವಾಹನ ಸಂಚಾರ ಮಾರ್ಪಾಡು ಮಾಡಲಾಗಿದ್ದು, ಸೋಮವಾರದಿಂದಲೇ ಜಾರಿಗೆ ಬಂದಿದೆ. **ಸಂಚಾರ ನಿರ್ಬಂಧ:** ಸಕ್ರಾ ಆಸ್ಪತ್ರೆ ಕಡೆಯಿಂದ ದೇವರಬೀಸನಹಳ್ಳಿ-ಇಕೋವರ್ಲ್ಡ್ ಇಂಟೆಲ್ ಇಕೊಸ್ಪೇಸ್ ಕಡೆಗೆ ನೇರ ಸಂಚಾರ ನಿರ್ಬಂಧಿಸಲಾಗಿದೆ. **ಪರ್ಯಾಯ ಮಾರ್ಗ:** ದೇವರಬೀಸನಹಳ್ಳಿ ಜಂಕ್ಷನ್‌ನಲ್ಲಿ ಎಡಕ್ಕೆ ತಿರುವು ಪಡೆದುಕೊಳ್ಳಬೇಕು.

ಕಾಡಬೀಸನಹಳ್ಳಿ ಕಡೆಯ ಸರ್ವಿಸ್ ರಸ್ತೆಯ ಮೂಲಕ ವಾಹನಗಳು ಸಾಗಿ ಕಾಡಬೀಸನಹಳ್ಳಿಯಲ್ಲಿ ಯು ತಿರುವು ಪಡೆದುಕೊಳ್ಳಬೇಕು. ದೇವರಬೀಸನಹಳ್ಳಿ ಕಡೆಯ ಮಧ್ಯದಲ್ಲಿರುವ ಸರ್ವಿಸ್ ರಸ್ತೆ, ಹೊರವರ್ತುಲ ರಸ್ತೆ ಮೂಲಕ ದೇವರಬೀಸನಹಳ್ಳಿ ಕಡೆಯ ಸರ್ವಿಸ್ ರಸ್ತೆಗೆ ಹೋಗಿ ದೇವರಬೀಸನಹಳ್ಳಿ ಜಂಕ್ಷನ್ ಮೂಲಕ ಸಂಚರಿಸಬಹುದು. ಬೆಳ್ಳಂದೂರು ಕಡೆಯಿಂದ ಪಾಸ್ ಪೋರ್ಟ್ ಸರ್ವೀಸ್ ರಸ್ತೆಯ ಮೂಲಕ ಮಾರತ್ ಹಳ್ಳಿ ಕಡೆ ಸಂಚರಿಸುವ ವಾಹನಗಳು ದೇವರಬೀಸನಹಳ್ಳಿ ಜಂಕ್ಷನ್‌ನಲ್ಲಿ, ಕಾಡಬೀಸನಹಳ್ಳಿ ಕಡೆಗೆ ಹೋಗುವ ಮಧ್ಯ ಭಾಗದ ಸರ್ವಿಸ್ ರಸ್ತೆಯ ಮೂಲಕ ನೇರವಾಗಿ ಮಾರತ್ ಹಳ್ಳಿ ಕಡೆಗೆ ಸಂಚರಿಸಬಹುದು. ಬೆಳ್ಳಂದೂರು ಕಡೆಯಿಂದ ಪಾಸ್‌ಪೋರ್ಟ್ ಸರ್ವಿಸ್ ರಸ್ತೆಯ ಮೂಲಕ ದೇವರಬೀಸನಹಳ್ಳಿ ರಸ್ತೆ ಕಡೆ ಸಂಚರಿಸುವ ವಾಹನಗಳು, ದೇವರಬೀಸನಹಳ್ಳಿ ಜಂಕ್ಷನ್ ಮೂಲಕ ಮಧ್ಯ ಭಾಗದ ಸರ್ವಿಸ್ ರಸ್ತೆಯಲ್ಲಿ ಎಡಕ್ಕೆ ತಿರುವು ಪಡೆದುಕೊಳ್ಳಬೇಕು.

ಕಾಡಬೀಸನಹಳ್ಳಿ ಸರ್ವಿಸ್ ರಸ್ತೆಯ ಮೂಲಕ ಕಾಡಬೀಸನಹಳ್ಳಿ ಜಂಕ್ಷನ್‌ನಲ್ಲಿ ತಿರುವು ಪಡೆದುಕೊಂಡು, ದೇವರಬೀಸನಹಳ್ಳಿ ಕಡೆಯ ಮಧ್ಯದಲ್ಲಿರುವ ಸರ್ವಿಸ್ ರಸ್ತೆ ಹೊರವರ್ತುಲ ಮೂಲಕ ದೇವರಬೀಸನಹಳ್ಳಿ ಕಡೆಯ ಸರ್ವಿಸ್ ರಸ್ತೆಗೆ ಹೋಗಿ ದೇವರಬೀಸನಹಳ್ಳಿ ಜಂಕ್ಷನ್ ಮೂಲಕ ಸಂಚರಿಸಬಹುದು. ಇಕೋವರ್ಲ್ಡ್ (ಆರ್‌ಎಂಝಡ್) ಕಡೆಯಿಂದ ಮಾರತ್ ಹಳ್ಳಿ ಕಡೆಗೆ ಸಂಚರಿಸುವ ವಾಹನಗಳು ದೇವರಬೀಸನಹಳ್ಳಿ ಜಂಕ್ಷನ್‌ನಲ್ಲಿ ನೇರವಾಗಿ ಚಲಿಸಿ ಪಾಸ್‌ಪೋರ್ಟ್ ಸರ್ವಿಸ್ ರಸ್ತೆಯಲ್ಲಿ ಬಲಕ್ಕೆ ತಿರುವು ಪಡೆದುಕೊಳ್ಳಬೇಕು. ದೇವರಬೀಸನಹಳ್ಳಿ ಜಂಕ್ಷನ್‌ನಲ್ಲಿ ಕಾಡಬೀಸನಹಳ್ಳಿ ಕಡೆಗೆ ಹೋಗುವ ಮಧ್ಯ ಭಾಗದ ಸರ್ವಿಸ್ ರಸ್ತೆಯ ಮೂಲಕ ನೇರವಾಗಿ ಮಾರತ್ ಹಳ್ಳಿ ಕಡೆಗೆ ಸಂಚರಿಸಬಹುದು ಎಂದು ಸಂಚಾರ ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಮಾಯಣ



## ಭರತನು ಶ್ರೀ ರಾಮನ ಆಶ್ರಮವನ್ನು ಕಂಡದ್ದು

• ಹಿಂದಿನ ಸಂಚಿಕೆಯಿಂದ

### 97ನೆಯ ಅಧ್ಯಾಯ

ಮಹಾಪತಿವ್ರತಾ ಶಿರೋಮಣಿಯಾಗಿ ಕೃತಾರ್ಥೆಯಾಗಿ ಜನಕರಾಯನ ಮಗಳಾದ ಸೀತಾದೇವಿಯು ತನ್ನ ಪತಿಯಾದ ಶ್ರೀರಾಮನೊಡನೆ ಯಾವ ಪರ್ವತದ ಸಮೀಪಪ್ರದೇಶದಲ್ಲಿ ಸಂಚರಿಸುತ್ತಿರುವಳೋ ಅಂಥ ಚಿತ್ರಕೂಟಗಿರಿಯು ಮಹಾಮೇರುವಿಗೆ ಸಮಾನವಾದದ್ದು. ಕುಬೇರನು ನಂದನವನದಲ್ಲಿ ಸಂಚರಿಸುವಂತೆ ಶ್ರೀರಾಮನು ಯಾವ ವನದಲ್ಲಿ ಸಂಚರಿಸುತ್ತಿರುವನೋ ಅಂಥ ಚಿತ್ರಕೂಟದ ವನವೇ ಅತಿಪವಿತ್ರವಾದದ್ದು ಎಂದು ನುಡಿದನು. ಅನಂತರ ಭರತನು ಬಿಲ್ಲುಬಾಣಗಳನ್ನು ಧರಿಸಿಕೊಂಡು ಪುಷ್ಪಿತವಾದ ವೃಕ್ಷಗಳುಳ್ಳ ಆ ವನಮಧ್ಯದಲ್ಲಿದ್ದ ಒಂದು ಮರದಡಿಯಲ್ಲಿ ನಿಂತುಕೊಂಡು ಶ್ರೀರಾಮನ ಆಶ್ರಮದಿಂದೇಳುತ್ತಿದ್ದ ಹೊಗೆಯನ್ನು ಕಂಡು ಅತಿಹರ್ಷಪಟ್ಟು. ಸಮುದ್ರದ ತಡಿಯನ್ನು ನಾವಿಕನು ಕಂಡಂತೆ ಅದೇ ಶ್ರೀರಾಮನ ಆಶ್ರಮವೆಂದು ನಿಶ್ಚಯಿಸಿದನು.

**ಭರತನು ಶ್ರೀ ರಾಮನನ್ನು ಕಂಡದ್ದು**

ಆ ಬಳಿಕ ಭರತನು ಶತ್ರುಘ್ನನಿಗೆ ಶ್ರೀರಾಮನ ಆಶ್ರಮವನ್ನು ತೋರಿಸುತ್ತ ತನ್ನ ತಾಯಂದಿರನ್ನು ಕರೆಸುವಂತೆ ವಸಿಷ್ಠಮುನಿಗೆ ತಿಳಿಸಿದನು. ಅವನು ಅಣ್ಣನ ಮೇಲಣ ಪ್ರೀತಿಯಿಂದ ಮುಂದೆ ನಡೆಯುತ್ತ ಅತಿಹರ್ಷದಿಂದ ಶತ್ರುಘ್ನನನ್ನೂ ಪ್ರಧಾನರನ್ನೂ ಕುರಿತು ಇದು ಶ್ರೀರಾಮನ ಆಶ್ರಮವಾಗಿರಬೇಕು, ಇಲ್ಲಿ ಭರದ್ವಾಜಮುನಿಯು ಹೇಳಿದ ಕುರುಹುಗಳೆಲ್ಲವೂ ಇವೆ. ಸಮೀಪದಲ್ಲಿ ಮಂದಾಕಿನೀನದಿಯು ಕಾಣಿಸುತ್ತಿದೆ ಎಂದು ನುಡಿಯುತ್ತ ಆ ತಪೋವನದಲ್ಲಿ ಅಣ್ಣನಾದ ಶ್ರೀರಾಮನ ಪರ್ಣಶಾಲೆಯನ್ನು ಕಂಡನು. ಆ ಪರ್ಣಶಾಲೆಯ ಮುಂದುಗಡೆಯಲ್ಲಿದ್ದ ಪುಷ್ಪದ ಕರಡಿಗೆಯನ್ನೂ ಸಮಿತ್ತುಗಳ ರಾಶಿಯನ್ನೂ ವೃಕ್ಷಗಳ ಕೊಂಬೆಗಳಲ್ಲಿ ಕಟ್ಟಿದ್ದ ನಾರುಬಟ್ಟೆಗಳನ್ನೂ ರಾತ್ರಿಯಲ್ಲಿ ಬೆಂಕಿಯನ್ನು ರಕ್ಷಿಸುವುದಕ್ಕೆ ತಂದ ಬೆರಣಿಗಳನ್ನೂ ನೋಡಿದನು. ಅದರ ಮುಂದುಗಡೆಯಲ್ಲಿ ಉನ್ನತವಾದ ಮರದ ಕೊಂಬೆಗಳಲ್ಲಿ ಕಟ್ಟಿದ್ದ ನಾರುಬಟ್ಟೆಗಳು ಲಕ್ಷ್ಮಣನಿಂದ ಕಟ್ಟಲ್ಪಟ್ಟವೆಂದು ಊಹಿಸಿದನು. ಅತಿಹರ್ಷದಿಂದ ಶ್ರೀರಾಮನನ್ನು ಕಂಡದ್ದಾಗಿ ಭಾವಿಸಿ ಕ್ಷಣಮಾತ್ರದಲ್ಲಿ ಚಿತ್ರಕೂಟ ಪರ್ವತದ ಸಮೀಪಕ್ಕೆ ಹೋಗಿ ಆ ಪರ್ವತದ ಸಮೀಪದಲ್ಲಿದ್ದ ಮಂದಾಕಿನೀನದಿಯ ಪಾರ್ಶ್ವವನ್ನು ಸೇರಿದನು. ತನ್ನ ಬಳಿಯಲ್ಲಿದ್ದವರೊಡನೆ ಆ ರಾಜಕುಮಾರನು ತನ್ನ ತಮ್ಮನನ್ನೂ ತನ್ನ ಪತ್ನಿಯನ್ನೂ ಕರೆದುಕೊಂಡು ಬಂದು ನಾರುಬಟ್ಟೆಗಳನ್ನುಟ್ಟು ಜಡೆಗಳನ್ನು ಧರಿಸಿಕೊಂಡು ತಪಸ್ವಿಯಾಗಿ ಬಿಲ್ಲುಬಾಣಗಳನ್ನು ಧರಿಸಿಕೊಂಡು ವೀರಾಸನದಲ್ಲಿ ಕುಳಿತಿರುವನು. ಆತನು ಸಮಸ್ತ ಲೋಕಗಳಿಗೂ ಒಡೆಯನು. ಮಹಾತೇಜಸ್ವಿಯಾದವನು. ಅವನು ನನ್ನ ನಿಮಿತ್ತವಾಗಿ ರಾಜ್ಯವನ್ನು ಬಿಟು ವನಕ್ಕೆ ಬಂದು ಈ ಪರ್ಣಶಾಲೆಯಲ್ಲಿ ವಾಸವಾಗಿರುವನು. ನನ್ನ ಜನ್ಮವು ವ್ಯರ್ಥ, ಈಗ ಶ್ರೀರಾಮನನ್ನು ಕಂಡು ಆತನ ಪಾದಗಳಿಗೆ ನಮಸ್ಕಾರವನ್ನು ಮಾಡಿ ಸೀತಾದೇವಿಗೂ ನಮಸ್ಕರಿಸಿ ಅವರನ್ನು ಅಯೋಧ್ಯಾಪಟ್ಟಣಕ್ಕೆ ಬರಹೇಳಿ ಬೇಡುವೆನು ಎಂದು ಹಂಬಲಿಸುತ್ತ ಮುಂದಕ್ಕೆ ನಡೆದನು.

ಮುಂದುವರಿಯುವುದು...

# ಮಾಜಿ ಮುಖ್ಯಮಂತ್ರಿ ಕೆ.ಕಾಮರಾಜ್ ರವರ 122ನೇ ವರ್ಷದ ಜನ್ಮಜಯಂತಿ

ಕಲಾ ಸಾಹಿತ್ಯ



ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ಕೆ.ಕಾಮರಾಜ್ ರವರು 1903 ಜುಲೈ 15 ರಂದು ತಮಿಳುನಾಡಿನ ರಾಮನಾಥಪುರಂ ಜಿಲ್ಲೆಯಲ್ಲಿ ಜನಿಸಿದರು. ತಂದೆ ಕುಮಾರಸ್ವಾಮಿ ನಾಡರ್, ತಾಯಿ ಶಿವಕಾಯಿ ಅಮ್ಮಾಳ್ ಇವರು ಪ್ರೌಢಶಾಲೆಯಲ್ಲಿ ಓದುತ್ತಿರುವಾಗಲೇ ತಂದೆ ತೀರಿಕೊಂಡಿದ್ದರಿಂದ ಅವರ ವ್ಯಾಸಂಗ ಅಲ್ಲಿಗೆ ನಿಂತಿತ್ತು. ನಂತರ ಸೋದರಮಾವನ ಬಟ್ಟೆಯಂಗಡಿಯಲ್ಲಿ ಜೀವನ ನಿರ್ವಹಣೆಗೆ ಕೆಲಸ ಮಾಡಲಾರಂಭಿಸಿದರು. ತಮ್ಮ 13ನೇ ವಯಸ್ಸಿನಲ್ಲಿಯೇ ರಾಜಕೀಯದಲ್ಲಿ ಆಸಕ್ತಿ ತೋರಿದರು. ಸಾರ್ವಜನಿಕ ಸಭೆಗಳಲ್ಲಿ ಭಾಗವಹಿಸಿ ಪ್ರಸಿದ್ಧ ವಾಗ್ಮಿಗಳಾಗಿದ್ದ ಡಾ:ವರದರಾಜು ನಾಯ್ಡು, ಜಾರ್ಜ್ ಜೋಸೆಫ್ ಮೊದಲಾದವರ ಭಾಷಣಗಳಿಂದ ಸ್ಫೂರ್ತಿ ಪಡೆದರು. ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾದರು. ಸಾರ್ವಜನಿಕ ಸಭೆ ಸಮಾರಂಭಗಳನ್ನು ಆಯೋಜಿಸುವದರೊಂದಿಗೆ ಹಣ ಸಂಗ್ರಹಿಸಿ ಕಾಂಗ್ರೆಸ್ ಪಕ್ಷಕ್ಕೆ ನೀಡುತ್ತಿದ್ದರು.

1930 ರಲ್ಲಿ ನಡೆದ ಉಪ್ಪಿನ ಸತ್ಯಾಗ್ರಹದಲ್ಲಿ ಕಾಮ್ ರಾಜರು ಭಾಗವಹಿಸಿದರು. ಬ್ರಿಟೀಷ್ ಸರ್ಕಾರ ಅವರನ್ನು ಬಂಧಿಸಿ ಎರಡು ವರ್ಷಗಳು ಸಜೆ ವಿಧಿಸಿದರು.


ಬಿಡುಗಡೆ ನಂತರ ಹೋರಾಟದಲ್ಲಿ ಭಾಗವಹಿಸುತ್ತಿದ್ದರು. 1942ರಲ್ಲಿ ನಡೆದ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಕ್ಕೆ ಬ್ರಿಟೀಷ್ ಸರ್ಕಾರ ಮತ್ತೆ ಸೆರೆಮನೆಗೆ ಕಳುಹಿಸಿತು. ಸೆರೆಮನೆಯಲ್ಲಿದ್ದಾಗ ಗ್ರಂಥ ಅಧ್ಯಯನದಿಂದ ತಮ್ಮ ಜ್ಞಾನವನ್ನು ಗುರುತಿಸಿಕೊಂಡರು. 1940ರಲ್ಲಿ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದರು. 1952 ರಲ್ಲಿ ಲೋಕಸಭೆಗೆ ಆಯ್ಕೆಯಾಗಿ 1954 ರವರೆಗೆ ಸದಸ್ಯರಾಗಿದ್ದರು.1954ರಲ್ಲಿ ಮದ್ರಾಸ್ ಪ್ರಾಂತದ ಮುಖ್ಯಮಂತ್ರಿಗಳಾದರು.

ಸಚಿವ ಸಂಪುಟಕ್ಕೆ ಹೇಳಿದ ಕಿವಿ ಮಾತೇನೆಂದರೆ, ಸಮಸ್ಯೆಗಳನ್ನು ಎದುರಿಸಿ, ಅವುಗಳನ್ನ ಮುಚ್ಚಿಡಬೇಡಿ ಅವುಗಳ ಪರಿಹಾರಕ್ಕೆ ಮಾರ್ಗಗಳನ್ನು ಕಂಡುಹಿಡಿಯಿರಿ. ನೀವು ಏನನ್ನಾದರೂ ಒಳಿತನ್ನು ಮಾಡಿದರೆ ಜನರು ಸಂತೋಷಪಟ್ಟು ತೃಪ್ತಿ ಗೊಳ್ಳುತ್ತಾರೆ. ಎಂದು ಜಾಗೃತಿ ಮೂಡಿಸಿರುತ್ತಾರೆ. ಅವರ ಆಡಳಿತ ಅವಧಿಯಲ್ಲಿಯೇ ಮದ್ರಾಸ್ ರಾಜ್ಯಕ್ಕೆ ತಮಿಳ್ ನಾಡು ಎಂದು ನಾಮಕರಣ ಮಾಡಲಾಯಿತು. ಕಾಮರಾಜರು ಮುಖ್ಯಮಂತ್ರಿಗಳಾಗಿ ತಮಿಳುನಾಡಿನ ಸರ್ವತೋಮುಖ ಏಳಿಗೆಗಾಗಿ ಶ್ರಮಿಸಿದರು. ಆಡಳಿತದಲ್ಲಿ ಅನೇಕ ಸುಧಾರಣೆಗಳನ್ನು ತಂದರು. ರಾಜ್ಯದ ಏಳಿಗೆಗಾಗಿ ಹಲವಾರು ಯೋಜನೆಗಳು ರೂಪಿತವಾದವು. ಗ್ರಾಮಾಂತರ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಿದರು. ಕಡ್ಡಾಯ ಶಿಕ್ಷಣ ಪದ್ಧತಿಯನ್ನು ಜಾರಿಗೆ ತಂದರು. ಹಳ್ಳಿಗಳಿಗೆ ವಿದ್ಯುತ್, ನೀರಾವರಿ ಸೌಲಭ್ಯಗಳನ್ನು ಒದಗಿಸಿದರು.

**ಹೊಸ ಕೈಗಾರಿಕೆಗಳು ಸ್ಥಾಪಿತವಾಗಿ ಆರ್ಥಿಕ ಅಭಿವೃದ್ಧಿ**

ರಾಜ್ಯದಲ್ಲಿ ಹೊಸ ಕೈಗಾರಿಕೆಗಳು ಸ್ಥಾಪಿತವಾಗಿ ಆರ್ಥಿಕ ಅಭಿವೃದ್ಧಿಗೆ ಅನುವು ಮಾಡಿಕೊಡಲಾಯಿತು. ಕ್ರಮೇಣ ಕಾಂಗ್ರೆಸ್ ಪಕ್ಷದ ಬಲ ಕುಗ್ಗುತ್ತಿದೆ ಎಂಬುದನ್ನು ಅರಿತ ಕಾಮರಾಜರು ಪದವಿಗಿಂತ ಪಕ್ಷ ಪ್ರಧಾನವೆಂದು ಸೂಚಿಸಿದರು. ಕಾಂಗ್ರೆಸ್ ಪಕ್ಷದ ಎಲ್ಲಾ ಧುರೀಣರು ತಮ್ಮ ತಮ್ಮ ಪದವಿಗಳಿಗೆ ತ್ಯಾಗ ಪತ್ರ ನೀಡಿ ಪಕ್ಷದ ಬಲವರ್ಧನೆಯ ಕೆಲಸದಲ್ಲಿ ತೊಡಗಬೇಕೆಂದು ಹೇಳಿದರು. ಇದು ಕಾಮ ರಾಜ್ ಸೂತ್ರ ವೆಂದೇ ಪ್ರಸಿದ್ಧವಾಯಿತು. ಕೇಂದ್ರ ಮತ್ತು ರಾಜ್ಯಗಳ ಮಂತ್ರಿಗಳು ತಮ್ಮ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದರು, ಲಾಲ್ ಬಹದ್ದೂರ್ ಶಾಸ್ತ್ರಿ, ಜಗಜೀವನ್ ರಾಮ್, ಮುರಾರ್ಜಿ ದೇಸಾಯಿ, ಎಸ್ ಕೆ ಪಾಟೀಲ್ ಮೊದಲಾದವರು. 1964 ರಲ್ಲಿ ಕಾಮರಾಜ್ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಪಕ್ಷವನ್ನು ಎಲ್ಲಾ ರೀತಿಯಲ್ಲಿ ಬಲಗೊಳಿಸಿದರು. ನೆಹರುರವರು ನಿಧನದ ನಂತರ ತಲೆದೋರಿದ ಕಠಿಣ ಪರಿಸ್ಥಿತಿ, ರಾಜಕೀಯ ಬಿಕ್ಕಟ್ಟುಗಳನ್ನು ಅತ್ಯಂತ ಸಮರ್ಥವಾಗಿ ಎದುರಿಸಿ ಪರಿಹಾರಗಳನ್ನು ಒದಗಿಸಿದರು. ಕಾಮರಾಜುರವರು 1975 ಅಕ್ಟೋಬರ್ 02 ರಂದು ತೀರಿಕೊಂಡರು. ಆಗ ಅವರಿಗೆ ಕೇವಲ 72 ವರ್ಷ ವಯಸ್ಸಾಗಿತ್ತು. 1976 ಜನವರಿ 17 ರಂದು ಭಾರತ ಸರ್ಕಾರ ಮರಣೋತ್ತರವಾಗಿ ಕೆ ಕಾಮರಾಜ್ ಅವರಿಗೆ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿತು. ಭಾರತದ ರಾಜಕೀಯ ಕ್ಷೇತ್ರದಲ್ಲಿ ಕೆ ಕಾಮರಾಜ್ ಅವರು ಪ್ರಮುಖ ಪಾತ್ರದಾರಿಗಳಾಗಿ ಪ್ರಾಮಾಣಿಕತೆ, ಪರಿಶುದ್ಧತೆ,ಸರಳತೆ ಇವುಗಳಿಂದಾಗಿ ಅವರು ಜನಪ್ರಿಯ ನಾಯಕರು ಎನಿಸಿದ್ದರು. ನಾಡಿನ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿ ನೆಹರು ಅವರ ನಿಕಟವರ್ತಿಗಳಾಗಿದ್ದರು. ಲಾಲ್ ಬಹದ್ದೂರ್ ಶಾಸ್ತ್ರಿ ಇಂದಿರಾ ಗಾಂಧಿಯವರನ್ನು ಪ್ರಧಾನಮಂತ್ರಿಗಳನ್ನಾಗಿ ಮಾಡುವಲ್ಲಿ ಇವರ ಪಾತ್ರ ಪ್ರಮುಖವಾಗಿತ್ತು. ಇವರನ್ನು ದಕ್ಷಿಣ ಭಾರತದ ಗಾಂಧಿ ಎಂದೇ ಕರೆಯಲಾಗುತ್ತಿತ್ತು.

**ಇವರ ಸರಳತೆಗೆ ಒಂದು ಉದಾಹರಣೆ:** ನಿಗದಿಯಾಗಿದ್ದ ಒಂದು ಶಾಲೆಯ ಉದ್ಘಾಟನೆಗೆ ಶಾಲೆಯ ಮುಖ್ಯಸ್ಥರು ಮತ್ತು ಶಿಕ್ಷಣ ಸಚಿವರು ಮುಖ್ಯಮಂತ್ರಿಯಾಗಿದ್ದ ಕಾಮರಾಜ್ ರವರ ಮನೆಗೆ ನಿಗದಿತ ಸಮಯಕ್ಕೆ ಕರೆದುಕೊಂಡು ಹೋಗಲು ಬಂದಿರುತ್ತಾರೆ. ಶಿಕ್ಷಣ ಸಚಿವರು ಮುಖ್ಯಮಂತ್ರಿಗಳನ್ನು ಉದ್ದೇಶಿಸಿ ನಿಗದಿತ ಸಮಯಕ್ಕೆ ಹಾಜರಾಗಲು ತಿಳಿಸಿದ್ದರಂತೆ, ಆಗ ಅವರು ಕೊಟ್ಟ ಉತ್ತರ, ರಾತ್ರಿ ಒಣಗಲು ಹಾಕಿದ್ದ ಪಂಚೆ ಮತ್ತು ಶರ್ಟು ಸ್ವಲ್ಪ ತೇವಾಂಶ ಇದೆ ಇನ್ನು ಐದು ನಿಮಿಷದಲ್ಲಿ ಹೊರಡಲು ಸಿದ್ಧತೆ ಮಾಡಿಕೊಳ್ಳೋಣ ಎಂದು ತಿಳಿಸಿದರಂತೆ. ಇದರಲ್ಲಿ ಅವರ ಸಾಮಾನ್ಯ, ಸರಳತೆ ಎಷ್ಟಿದೆ ಎಂಬುದನ್ನು ನಾವುಗಳು ಮಿಗಿಲಾಗಿ ಈಗಿನ ರಾಜಕಾರಣಿಗಳು ಅರ್ಥಮಾಡಿಕೊಳ್ಳಬೇಕಾಗಿದೆ. ಇಂಥ ಸಮರ್ಥ ಪ್ರಾಮಾಣಿಕ ರಾಜಕಾರಣಿರವರ 122ನೇ ವರ್ಷದ ಜನ್ಮ ಜಯಂತಿಯ ದಿನವಾದ ಇಂದು ಸ್ಮರಿಸಿ- ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಸದ್ಗತಿ ದೊರಕಲೆಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.



# ಕನ್ನಡ ಶಾಲೆಗಳಿಲ್ಲದ ಗ್ರಾಮಗಳಲ್ಲಿ ಕನ್ನಡ ಶಾಲೆ ತೆರೆಯಿರಿ

• ಉದಯವಾಹಿನಿ, ಔರಾದ್

ಔರಾದ್ ಮತ್ತು ಕಮಲನಗರ ತಾಲ್ಲೂಕಿನ ಕನ್ನಡ ಶಾಲೆಗಳಿಲ್ಲದ ಗ್ರಾಮಗಳಲ್ಲಿ ಪ್ರಸಕ್ತ ವರ್ಷದಿಂದ ಕನ್ನಡ ಶಾಲೆಗಳು ಆರಂಭಿಸುವಂತೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಅವರಿಗೆ ಮನವಿ ಸಲ್ಲಿಸಿದ್ದಾರೆ. ಪಟ್ಟಣದ ಕನ್ನಡ ಭವನದಲ್ಲಿ ಗಡಿ ಭಾಗದಲ್ಲಿ ಕನ್ನಡದ ಸ್ಥಿತಿಗತಿ ಕುರಿತು ಚರ್ಚಿಸಲು ಆಯೋಜಿಸಿರುವ ಸಮಾಲೋಚನಾ ಸಭೆಯಲ್ಲಿ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ, ಪ್ರಸ್ತುತ ತಮ್ಮ ಮಕ್ಕಳಿಗೆ ಕನ್ನಡ ಮಾಧ್ಯಮದಲ್ಲಿ ಕಲಿಸಲು ಗಡಿ ಭಾಗದ ಪಾಲಕರು ಉತ್ಸುಕರಾಗಿದ್ದು, ಆ ಗಡಿ ಜನರ ಭಾವನೆಗಳಿಗೆ ನಾವುಗಳು ಸ್ಪಂದಿಸಬೇಕಿದೆ.

ಗಡಿ ಭಾಗದ ಸುಮಾರು 23ಕ್ಕೂ ಅಧಿಕ ಗ್ರಾಮಗಳಲ್ಲಿ ಕನ್ನಡ ಶಾಲೆಗಳೇ ಇಲ್ಲ. ಈ ಕಾರಣ ಅನೇಕ ಪಾಲಕ ಪೋಷಕರು ತಮ್ಮ ಮಕ್ಕಳಿಗೆ ಅನಿವಾರ್ಯವಾಗಿ ಔರಾದ್ ಪಟ್ಟಣದ ಖಾಸಗಿ ಶಾಲೆಗಳಿಗೆ ಕಳುಹಿಸುತ್ತಿರುವುದು ಸಾಮಾನ್ಯ. ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಗಳು ತೆರೆದರೆ ಗಡಿಭಾಗದ ಜನರಿಗೆ ನ್ಯಾಯ ದೊರೆಯುತ್ತದೆ. ಔರಾದ್ ಪಟ್ಟಣದಲ್ಲಿ ಕನಿಷ್ಠ 500 ಜನ ಸೇರುವಂತಹ ಒಂದು ಸುಸಜ್ಜಿತ ಸಾಂಸ್ಕೃತಿಕ ಭವನ ನಿರ್ಮಾಣ, ಕನ್ನಡ ಭವನಕ್ಕೆ ಮೂಲ ಸೌಲಭ್ಯಗಳ ಒದಗಿಸುವಿಕೆ, ಗಡಿ ಸಮಾವೇಶಗಳ ಆಯೋಜನೆಗೆ ಅಗತ್ಯ ಅನುದಾನ ನೀಡುವಂತೆ ಪ್ರಾಧಿಕಾರದ ಅಧ್ಯಕ್ಷರಲ್ಲಿ ವಿನಂತಿಸಿದರು. ಯುವ ಸಾಹಿತಿ ಬಾಲಾಜಿ ಕುಂಬಾರ್ ಮಾತನಾಡಿ, ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ 3 ಸಾವಿರ ಮಕ್ಕಳು ಪ್ರಥಮ ಭಾಷೆ ಕನ್ನಡದಲ್ಲಿ ಅನುತ್ತೀರ್ಣರಾಗಿದ್ದು ಪಾಲಕ ಪೋಷಕರಲ್ಲಿ ದೊಡ್ಡ ಆತಂಕ ಸೃಷ್ಟಿಸಿದೆ. ಪ್ರೌಢಶಾಲೆಗಳಲ್ಲಿ ಕನ್ನಡ ಭಾಷಾ ಬೋಧಕರ ಕೊರತೆಯಿಂದ ಈ ಸಮಸ್ಯೆ ಕಾಡುತ್ತಿದೆ ಎಂದು ಸಭೆಯ ಗಮನ ಸೆಳೆದ ಅವರು, ಹತ್ತಾರು ಸಂಘ ಸಂಸ್ಥೆಗಳಿಗೆ ಧನಸಹಾಯ ನೀಡುವ ಬದಲು ಗಡಿಯಲ್ಲಿ ಕನ್ನಡ ಭಾಷೆಯನ್ನು ರಚನಾತ್ಮಕವಾಗಿ ಕಟ್ಟಲು ಯೋಜನೆ ರೂಪಿಸುವಂತೆ ಸಲಹೆ ನೀಡಿದರು.

ಅಲ್ಲದೇ 2023ರಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿರುವ ಡಾ. ಜಯದೇವಿತಾಯಿ ಲಿಗಾಡೆ ಹಾಗೂ ಪ್ರಭುರಾವ ಕಂಬಳಿವಾಲೆ ಪ್ರತಿಷ್ಠಾನಗಳ ರಚನೆ ನೆನೆಗುದಿಗೆ ಬಿದ್ದಿದ್ದು, ಈ ಬಗ್ಗೆ ಶೀಘ್ರ ಕ್ರಮ ವಹಿಸಲು ವಿನಂತಿಸಿದರು. ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಸಂಘದ ಪದಾಧಿಕಾರಿಗಳು ಮನವಿ ಸಲ್ಲಿಸಿ, 1995ರ ನಂತರದ ಅನುದಾನ ರಹಿತ ಶಾಲೆಗಳು ಅನುದಾನಕ್ಕೆ ಒಳಪಡಿಸಿ, ಕನ್ನಡ ಮಾಧ್ಯಮ ಶಾಲೆಗಳ ಉಳಿವಿಗೆ ಸರ್ಕಾರ ರೂಪಿಸಿದ ನೀತಿ ನಿಯಮಗಳು ಸರಳಿಕರಣಗೊಳಿಸಬೇಕು ಎಂದರು.


ಉದಯವಾಹಿನಿ ಚಿತ್ರ

**ಗಡಿಭಾಗದ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಬದ್ಧ**

ಶಿಕ್ಷಣ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕನ್ನಡ ಶಾಲೆಗಳ ಆರಂಭಕ್ಕೆ ಕ್ರಮ ವಹಿಸಲಾಗುವುದು. ಪ್ರತಿಷ್ಠಾನಗಳ ರಚನೆಗೆ ಸಚಿವರೊಂದಿಗೆ ಚರ್ಚಿಸಿ ನಿರ್ಧರಿಸಲಾಗುವುದು. ಅಲ್ಲದೇ ಈಗಾಗಲೇ ಹೆಚ್ಚುವರಿ ಅನುದಾನಕ್ಕಾಗಿ ಮುಖ್ಯಮಂತ್ರಿಗಳಿಗೆ ಬೇಡಿಕೆ ಇಟ್ಟಿದ್ದು, ಅನುದಾನ ದೊರೆತಲ್ಲಿ ಔರಾದ್ ಪಟ್ಟಣದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವುದಾಗಿ ಭರವಸೆ ನೀಡಿದರು. ಅಲ್ಲದೇ ಗಡಿ ಭಾಗದ ಜನರ ಸಮಸ್ಯೆಗಳು, ಶಾಲಾ ಕಾಲೇಜುಗಳಲ್ಲಿನ ಸಮಸ್ಯೆಗಳು ಅರಿತು ಹಂತ ಹಂತವಾಗಿ ಬಗೆಹರಿಸಲು ಸರ್ಕಾರ ಬದ್ಧವಾಗಿದೆ

– ಸೋಮಣ್ಣ ಬೇವಿನಮರದ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ

# ಪಡುಬಿದ್ರಿ ಪೊಲೀಸರ ಕಾರ್ಯಾಚರಣೆ ಕುಖ್ಯಾತ ಕಳ್ಳರ ಬಂಧನ

• ಉದಯವಾಹಿನಿ, ಉಡುಪಿ

ಇತ್ತೀಚೆಗೆ ಪಡುಬಿದ್ರಿ, ಕೋಟ ಮತ್ತು ಕುಂದಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮನೆಗಳಿಗೆ ನುಗ್ಗಿ ಕಳವು ಮಾಡಿದ್ದ ಕುಖ್ಯಾತ ಅಂತರ್‌ರಾಜ್ಯ ಕಳ್ಳರಿಬ್ಬರನ್ನು ಪಡುಬಿದ್ರಿ ಪೊಲೀಸರು ಬಂಧಿಸಿದ್ದಾರೆ.ದ.ಕ. ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೊಯ್ಲ ಗ್ರಾಮದ ಕಲಾಯಿ ಹೌಸ್ ನಿವಾಸಿ ಇಬ್ರಾಹಿಂ ಕಲಂದರ್ ಹಾಗೂ ಕಾಸರಗೋಡು ಜಿಲ್ಲೆಯ ಕುಂಬಳೆ ಗ್ರಾಮದ ಬೇಕೂರು ನಿವಾಸಿ ಮಹಮ್ಮದ್ ರಿಯಾಜ್ ಆಲಿಯಾಸ್ ಕಡಪ್ಪ ರಿಯಾಜ್ ಬಂಧಿತ ಆರೋಪಿಗಳು. ಈ ಕಳ್ಳರು ಜೂನ್ 22ರಂದು ರಾತ್ರಿ ಪಡುಬಿದ್ರಿಯ ಪಾದೆಬೆಟ್ಟು ಗ್ರಾಮದ ಗಣೇಶ್ ಪ್ರಸಾದ್ ಶೆಟ್ಟಿ ಅವರ ಮನೆಯ ಬಾಗಿಲನ್ನು ಒಡೆದು 1,45,000 ರು. ಮೌಲ್ಯದ ಚಿನ್ನಾಭರಣಗಳನ್ನು ಕಳವು ಮಾಡಿದ್ದರು. ಈ ಬಗ್ಗೆ ಪಡುಬಿದ್ರಿ ಎಸ್ಸೈಗಳಾದ ಸಕ್ತಿವೇಲು, ಅನಿಲ್ ಕುಮಾರ್ ಮತ್ತು ಸಿಬ್ಬಂದಿ ಕಳ್ಳರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಕಾಸರಗೋಡು ಜಿಲ್ಲೆಯ ಕುಂಬಳೆಯ ಸಾಸ್ತ ನಗರದಲ್ಲಿ ಅವರನ್ನು ಬಂಧಿಸಿದ್ದಾರೆ. ಈ ಸಂದರ್ಭ ಅವರಿಂದ ಒಂದು ಕಾರು, 24,000 ರು. ನಗದನ್ನು ವಶಪಡಿಸಿಕೊಳ್ಳಲಾಗಿದೆ. ಕಳ್ಳರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಹೆಚ್ಚು ವಿಚಾರಣೆ ನಡೆಯುತ್ತಿದೆ. ಇಬ್ರಾಹಿಂ ಕಲಂದರ್ ಮೇಲೆ ಕಾಸರಗೋಡು ಜಿಲ್ಲೆಯ ಬದಿಯಡ್ಕ ಠಾಣೆಯಲ್ಲಿ 2 ದೇವಸ್ಥಾನ ಕಳವು, ವಿದ್ಯಾನಗರ ಠಾಣೆಯಲ್ಲಿ 1 ಮನೆ ಕಳವು, ಮಂಜೇಶ್ವರ ಠಾಣೆಯಲ್ಲಿ 1 ದರೋಡೆಗೆ ಪ್ರಯತ್ನ, ಮೇಲ್ಪರಂಭ ಠಾಣೆಯಲ್ಲಿ ಮನೆ ಕಳವು ಹಾಗೂ ಉಡುಪಿ ಜಿಲ್ಲೆಯ ಹೆಬ್ರಿ ಠಾಣೆಯಲ್ಲಿ ಮುನಿಯಾಲು ಸೊಸೈಟಿ ದರೋಡೆ, ದ.ಕ. ಜಿಲ್ಲೆಯ ವಿಟ್ಲ ಠಾಣೆಯಲ್ಲಿ ಕರ್ನಾಟಕ ಬ್ಯಾಂಕ್ ದರೋಡೆ ಪ್ರಕರಣ, ಮೂಡುಬಿದಿರೆ ಠಾಣೆಯಲ್ಲಿ ಅಡಕೆ ಕಳವು ಪ್ರಕರಣ, ಪುತ್ತೂರು ನಗರ ಮತ್ತು ಗ್ರಾಮಾಂತರ ಠಾಣೆಯಲ್ಲಿ 4 ಮನೆ ಕಳವು ಪ್ರಕರಣ, ಉಪ್ಪಿನಂಗಡಿ ಠಾಣೆಯಲ್ಲಿ ಅಂಗಡಿ ಕಳವು, ಬಂಟ್ವಾಳ ಗ್ರಾಮಾಂತರ ಠಾಣೆಯಲ್ಲಿ ಅಂಗಡಿ ಕಳವು, ಮಡಿಕೇರಿ ಜಿಲ್ಲೆಯ ಕುಶಾಲನಗರ ಠಾಣೆಯಲ್ಲಿ ಕಳವು, ಚಿಕ್ಕಮಗಳೂರು ಜಿಲ್ಲೆಯ ಕಡಬ ಠಾಣೆಯಲ್ಲಿ ಸರ ಕಳ್ಳತನ ಪ್ರಕರಣಗಳು ದಾಖಲಾಗಿವೆ. ಅಲ್ಲದೇ ಈತ ಕೇರಳ ರಾಜ್ಯದ ಹೊಸದುರ್ಗ ಜಿಲ್ಲಾ ಕಾರಾಗೃಹದಲ್ಲಿ ಜೈಲು ಶಿಕ್ಷೆ ಅನುಭವಿಸಿ ಫೆಬ್ರವರಿಯಲ್ಲಿ ಬಿಡುಗಡೆಯಾಗಿದ್ದಾನೆ. ಮೊಹಮ್ಮದ್ ರಿಯಾಜ್ ಆಲಿಯಾಸ್ ಕಾಸರಗೋಡು ಜಿಲ್ಲೆಯ ಕುಂಬಳೆ ಠಾಣೆಯಲ್ಲಿ ಕೊಲೆ ಪ್ರಕರಣ ಹಾಗೂ ಪುತ್ತೂರು ನಗರ ಠಾಣೆಯಲ್ಲಿ ಗಾಂಜಾ ಮಾರಾಟ ಪ್ರಕರಣ ದಾಖಲಾಗಿದ್ದು, ಈತನು ಮೇನಲ್ಲಿ ಕಾಸರಗೋಡು ಸಬ್ ಜೈಲಿನಿಂದ ಬಿಡುಗಡೆ ಹೊಂದಿದ್ದಾನೆ.

# ಜಿಲ್ಲಾ ಕೇಂದ್ರ ಬಸ್ ನಿಲ್ದಾಣದಲ್ಲಿ ಸಂಭ್ರಮೋತ್ಸವ

## ರಾಜ್ಯದಲ್ಲಿ ಶಕ್ತಿ ಯೋಜನೆಯಡಿ ಸಂಚರಿಸಿದ ಮಹಿಳೆಯರ ಸಂಖ್ಯೆ 500 ಕೋಟಿ

• ಉದಯವಾಹಿನಿ, ಯಾದಗಿರಿ

ರಾಜ್ಯ ಸರ್ಕಾರದ ಮಹತ್ವದ ಐದು ಗ್ಯಾರಂಟಿಗಳ ಪೈಕಿ ಅತಿ ಹೆಚ್ಚು ಜನಪ್ರಿಯ ಮತ್ತು ಜನಾನುರಾಗಿಯಾದ ಯೋಜನೆ ಎಂದರೆ ಶಕ್ತಿ ಯೋಜನೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ ಒರಡಿಯಾ ಹೇಳಿದರು. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಡಿ 500 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ ಸಂಭ್ರಮದ ಹಿನ್ನೆಯಲ್ಲಿ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಸೋಮವಾರ ಬಸ್‌ಗೆ ಪೂಜೆ ಮಾಡಿ ಟಿಕೇಟ್ ವಿತರಣೆ ಮಾಡಿ ಮಾತನಾಡಿದರು.

■ ಪಂಚ ಗ್ಯಾರಂಟಿಗಳಲ್ಲಿಯೇ ಅತಿ ಹೆಚ್ಚು ಜನಪ್ರಿಯಗೊಂಡ ಶಕ್ತಿ ಯೋಜನೆ

■ ಜಿಪಂ ಸಿಇಒ ಲವೀಶ್ ಒರಡಿಯಾ ಪ್ರತಿಪಾದನೆ

ಈ ಯೋಜನೆಯಿಂದ ಲಕ್ಷಾಂತರ ಮಹಿಳೆಯರು ಸ್ವತಂತ್ರವಾಗಿ ರಾಜ್ಯದ ಎಲ್ಲಡೆ ಉಚಿತ ಪ್ರಯಾಣಿಸಲು ಅನುಕೂಲವಾಗಿದೆ. ದೇಶ ಸುತ್ತು , ಕೋಶ ಓದು ಎಂಬ ಹಿನ್ನಲೆಯಲ್ಲಿ ಮಹಿಳೆಯರು ರಾಜ್ಯ ಸುತ್ತಿ ನಮ್ಮ ಐತಿಹಾಸಿಕ ಪರಂಪರೆ, ಇತಿಹಾಸ, ಸಂಸ್ಕೃತಿ ನೋಡಿ ತಿಳಿದುಕೊಂಡಿದ್ದಾರೆಂದು ಒರಡಿಯಾ ಸಂತಸ ವ್ಯಕ್ತಪಡಿಸಿದರು. ದೇವಸ್ಥಾನ, ಮದುವೆ, ವ್ಯಾಪಾರ ಹೀಗೆ ಅನೇಕ ಕಡೆಗಳಲ್ಲಿ ಮಹಿಳೆಯರೇ ಅಧಿಕ ಸಂಖ್ಯೆಯಲ್ಲಿ ಸಂಚರಿಸುವ ಮೂಲಕ ಹೊಸತನವನ್ನು ಅರಿತುಕೊಂಡಿದ್ದಾರೆಂದು ಲವೀಶ್ ವಿವರಿಸಿದರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಶರಣಿಕ ಕುಮಾರ ದೋಖಾ ಮಾತನಾಡಿ, ಎರಡು ವರ್ಷದಲ್ಲಿ ನಮ್ಮ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಜಾರಿ ಮಾಡಲಾಗಿದೆ ಎಂದರು.


ಉದಯವಾಹಿನಿ ಚಿತ್ರ

**ಪಂಚ ಗ್ಯಾರಂಟಿಗಳ ಎಲ್ಲಾ ಯೋಜನೆಗಳು ಶೇ.90 ರಷ್ಟು ಸಾಧನೆ ಮಾಡಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ಈ ಎಲ್ಲಾ ಯೋಜನೆಗಳು ಅಧಿಕ ಪ್ರಮಾಣದಲ್ಲಿ ಜಾರಿ ಮಾಡಲಾಗಿದೆ ಎಂದು ದೋಖಾ ಹೇಳಿದರು. ಮಾಜಿ ಕೇಂದ್ರ ಸಚಿವ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಶಿವಕುಮಾರ ಅವರ ಕಾರ್ಯವೈಖರಿಯಿಂದ ಮತ್ತು ಸಹಕಾರದಿಂದ ಯಶ್ವಸಿಯಾಗಿದೆ ಎಂದರು.**

ಇಲ್ಲಿಯವರೆಗೂ ರಾಜ್ಯದ ಎಲ್ಲಡೆ ಐದು ನೂರು ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡುವ ಮೂಲಕ ಇದೊಂದು ಯಶಸ್ವಿಯಾಗಿ ಯೋಜನೆಯಾಗಿಸಿದ್ದಾರೆ ಎಂದರು. ಕೆಕೆಆರ್‌ಟಿಸಿ ವಿಭಾಗಿಯ ನಿಯಂತ್ರಣಾಧಿಕಾರಿ ಸುನೀಲಕುಮಾರ ಚಂದರಗಿ ಮಾತನಾಡಿ, ಯಾದಗಿರಿ ವಿಭಾಗದಿಂದ ನಮ್ಮ ಬಸ್ಸುಗಳಲ್ಲಿ ಈ ಯೋಜನೆ ಆರಂಭಗೊಂಡಾಗಿನಿಂದ ಇಲ್ಲಿಯವರೆಗೂ ಸುಮಾರು 5 ಕೋಟಿ 43 ಲಕ್ಷ ಮಹಿಳಾ ಪ್ರಯಾಣಿಕರು ಸಂಚಾರ ಮಾಡಿದ್ದಾರೆ ಎಂದರು. ಈ ಯೋಜನೆಯಿಂದ ಸುಮಾರು 191 ಕೋಟಿ ರೂ.ಮೌಲ್ಯದ ಟಿಕೆಟ್ ಖರ್ಚಾಗಿವೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಬಸರೆಡ್ಡಿ ಅನಪೂರ್, ಮುಖಂಡರಾದ ಪಂಪನಗೌಡ, ಬಸ್ಸಗೌಡ ಬಿಳ್ಹಾರ್, ಚಿದಾನಂದಪ್ಪ ಕಾಳೆಬೆಳಗುಂದಿ, ಜಿಲ್ಲಾ ಪಂಚಾಯತ ಕಾರ್ಯದರ್ಶಿ, ವಿಜಯಕುಮಾರ್ ಮಡ್ಡೆ, ವಿಭಾಗಿಯ ಸಂಚಾರಾಧಿಕಾರಿ ವಿ.ಆರ್ ರೆಡ್ಡಿ, ವಿಭಾಗೀಯ ತಾಂತ್ರಿಕ ಅಧಿಕಾರಿ ಪ್ರಶಾಂತ ಸುರಪುರಕರ್, ಘಟಕ ವ್ಯವಸ್ಥಾಪಕ ಶಂಶಾಕ ಬಾಬು, ಯಾದಗಿರಿ ವಿಭಾಗದ ಸಾರಿಗೆ ನೌಕರರ ಸಂಘದ ಅಧ್ಯಕ್ಷ ದೇವಿಂದ್ರಪ್ಪ ಮ್ಯಾಗೇರಿ, ಶ್ಯಾಮಸನ್ ಮಾಳಿಕೇರಿ, ಯಾದಗಿರಿ ತಾಲ್ಲೂಕಿನ ಶಕ್ತಿ ಯೋಜನೆ ತಾಲ್ಲೂಕಿನ ಸದಸ್ಯರಾದ ಅರ್ಜುನ ಪವಾರ್, ಶಿವು ಕೊಲಿವಾಡ್, ಮಹೇಶ ಬೋಜ್ಜಿ, ಮಲ್ಲಿಕಾರ್ಜುನ ಈಟೆ, ಮಹಿಳಾ ಮುಖಂಡರಾದ ನೀಲಾಫರ್ ಬಾದಲ್, ಪದ್ಮಾವತಿ ಜಿ, ಸಿದ್ದಲಿಂಗಮ್ಮ ದದ್ದಲ್, ಮಲ್ಲಮ್ಮ ಕೋಮಾರ್, ನೀಲಮ್ಮ ಮುಳಾಗಸಿ, ಚಂದ್ರಕಲಾ ಮನಿಯಪ್ಪನೋರ್ ಇದ್ದರು.


ಉದಯವಾಹಿನಿ ಚಿತ್ರ

# 500ಕೋಟಿ ಶಕ್ತಿ ಯೋಜನೆಯಡಿ ಮಹಿಳೆಯರು ಪ್ರಯಾಣ ಸಿಹಿಹಂಚಿ ಸಂಭ್ರಮ

• ಉದಯವಾಹಿನಿ,ಚಿಂಚೋಳಿ:

ತಾಲ್ಲೂಕಿನ ಕುಂಚಾವರಂ ಗ್ರಾಮದ ಬಸ್ ನಿಲ್ದಾಣದಲ್ಲಿ ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಲ್ಲಿ ಪ್ರಮುಖವಾಗಿರುವ ಶಕ್ತಿ ಯೋಜನೆಯ ಮಹಿಳೆಯರಿಗೆ ಉಚಿತ ಪ್ರಯಾಣವೆಂಬ ಗ್ಯಾರಂಟಿ ಯೋಜನೆಯಿಂದ 500ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ ಹಿನ್ನಲೆಯಲ್ಲಿ ಕುಂಚಾವರಂ ಬಸ್ ನಿಲ್ದಾಣದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ನರಸಿಂಹಮ್ಲು ಕುಂಬಾರ ನೇತೃತ್ವದಲ್ಲಿ ಬಸ್ಸಿಗೆ ಪೂಜಿಸಿ ಪ್ರಯಾಣಿಕರಿಗೆ ಸಿಹಿ ತಿನ್ನಿಸಿ ಸನ್ಮಾನಿಸಿ ಗೌರವಿಸಿ ನಿರ್ವಾಹಕರಿಂದ ಮಹಿಳೆಯರಿಗೆ ಉಚಿತ ಟಿಕೆಟ್ ನೀಡುವುದರ ಮೂಲಕ ಸಂಭ್ರಮಿಸಿದರು. ಕುಂಚಾವರಂ ಗ್ರಾಪಂ.ಅಧ್ಯಕ್ಷ ರಮೇಶ ಮಾಸಾನಿ, ತಾಪಂ ಮಾಜಿ ಸದಸ್ಯ ಚಿರಂಜೀವಿ, ಡಾ.ಅಂಜನೇಯ, ಮಲ್ಲೇಶ ರುಂಪಲ್ಲಿ,ಅನುಸೋಯಾ ರವಿ, ಶ್ರೀಕಾಂತ, ಸಂಜು ಜಗದೀಶ, ಸಲಿಂ, ಅರ್ಜುನ್ ಸಿರವಾಟಿ, ಬಾಬು, ಟಿ.ಬೀಚ್ಚಾಪ್ಪ, ಅನ್ವರ್, ಜನಾರ್ಧನ ಮಾಡ್ಬು, ಪ್ರಭಾಕರೆಡ್ಡಿ, ಸಂತೋಷ, ನಾಸೀರಪಟೇಲ, ಜಗದೀಶ, ಅನೇಕರಿದ್ದರು.



ಉದಯವಾಹಿನಿ ಚಿತ್ರ

# ಕನ್ನಡ ಶಾಲೆಗಳಿಗೆ ಸರ್ಕಾರಗಳು ಅನುದಾನ ನೀಡಿ ಬೆಳೆಸುವ ಕೆಲಸ ಮಾಡಲಿ

• ಉದಯವಾಹಿನಿ,ಚಿಂಚೋಳಿ

ರಾಜ್ಯ ಸರ್ಕಾರವು ಕನ್ನಡ ಶಾಲೆಗಳಿಗೆ ಮೊದಲ ಆದ್ಯತೆ ನೀಡಿ ಶಾಲೆಗಳ ಅಭಿವೃದ್ಧಿಗಾಗಿ ಅನುದಾನ ನೀಡುವುದರ ಮೂಲಕ ಕನ್ನಡ ಶಾಲೆಗಳು ಉಳಿಸುವ ಕೆಲಸ ಮಾಡಲಿ ಎಂದು ಕಲಬುರ್ಗಿಯ ಮಣ್ಣೂರ್ ಮಲ್ಟಿಸ್ಪೇಷಾಲೀಟಿ ಆಸ್ಪತ್ರೆಯ ಮುಖ್ಯಸ್ಥ ಪ್ರಖ್ಯಾತ ವೈದ್ಯ ಡಾ.ಫಾರೂಕ್ ಮಣ್ಣೂರ್ ಒತ್ತಾಯಿಸಿದರು.

ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಅಧ್ಯಕ್ಷ ಭೀಮಶೆಟ್ಟಿ ಮುರುಡಾ ಮಾತನಾಡಿ 1995ರ ನಂತರ ಪ್ರಾರಂಭವಾದ ಖಾಸಗಿ ಶಾಲಾ ಕಾಲೇಜುಗಳಿಗೆ ಅನುದಾನಕ್ಕೆ ಒಳಪಡಿಸಬೇಕು,ಸಂಸ್ಥೆಗಳ ಅನುಮತಿ ನವೀಕರಣ ಸರಳಿಕರಣಗೊಳಿಸಬೇಕು,ಬಡ ಮಕ್ಕಳ ಅನುಕೂಲಕ್ಕಾಗಿ ಆರ್.ಟಿ.ಇ ಪ್ರವೇಶ ಖಾಸಗಿ ಶಾಲೆಗಳಿಗೆ ಮರುಜಾರಿ ಮಾಡಿ,ಖಾಲಿಯಿರುವ ಶಿಕ್ಷಕರ ಹುದ್ದೆ ಭರ್ತಿಗೊಳಿಸಿ,371ಜೆ ಕಾನೂನು ಅಡಿಯಲ್ಲಿ ಸಿಗಬೇಕಾದ ಸೌಲಭ್ಯಗಳನ್ನು ಖಾಸಗಿ ಸಂಸ್ಥೆಗಳಿಗೂ ನೀಡಬೇಕು,ರಾಜ್ಯಾದ್ಯಂತ ಅನಾಧಿಕೃತ ಕೋಚಿಂಗ್ ಸೆಂಟರ್ ಮುಚ್ಚಿಸಬೇಕು,2012ರಿಂದ 2015ವರೆಗಿನ ಆರ್.ಟಿ.ಇ ಶುಲ್ಕ ಮರುಪಾವತಿ ವಸೂಲಿ ಮಾಡಲು ಶಾಲೆಗಳಿಗೆ ನೀಡಿದ ನೋಟಿಸ್ ಹಿಂಪಡೆದು ಶಾಲೆಗಳಿಗೆ ಬಾಕಿಯಿರುವ ಆರ್.ಟಿ.ಇ ಶುಲ್ಕ ಮರುಪಾವತಿ ಬೇಗನೇ ನೀಡಬೇಕು.


ಉದಯವಾಹಿನಿ ಚಿತ್ರ

ಕನ್ನಡ ಶಾಲೆಗಳನ್ನು ಬಂದ್ ಮಾಡಿ ಕರ್ನಾಟಕ ಪಬ್ಲಿಕ್ ಶಾಲೆ ಆಂಗ್ಲ ಮಾಧ್ಯಮ ಪ್ರಾರಂಭಿಸಿದ್ದು ಕೈಬಿಡಬೇಕು,ಕನ್ನಡ ಶಾಲೆಗಳು ಪ್ರಾರಂಭಿಸಲು ಸರಳಿಕರಣಗೊಳಿಸಬೇಕು, ಖಾಸಗಿ ಶಾಲೆಗಳ ಶಿಕ್ಷಣ ಸಂಸ್ಥೆಗಳ ಹೆಸರಿನ ನಾನ್ ಎನ್.ಎ ಇದ್ದ ಆಸ್ತಿಯನ್ನು ಉಚಿತವಾಗಿ ಗ್ರಾಪಂ,ಪಪ,ಪುರಸಭೆ, ನಗರಸಭೆ, ಮಹಾನಗರ ಸಭೆಯಲ್ಲಿ ನೊಂದಾಯಿಸಿಕೊಂಡು ಹಕ್ಕುಪತ್ರ ಈಸ್ವತ್ತು ಪ್ರಮಾಣಪತ್ರ ನೀಡಬೇಕು ಎಂದರು.

ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಒಕ್ಕೂಟದಿಂದ ವಿವಿಧ ಬೇಡಿಕೆಗಳ ಮನವಿಪತ್ರವನ್ನು ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಶೋಕ ಪಾಟೀಲ, ಮಲ್ಲಿಕಾರ್ಜುನ ಉಡುಪಿ, ಶ್ರೀಶೈಲ ಶಾಸ್ತ್ರಿ, ನವೀನರೆಡ್ಡಿ ಮುನ್ನೂರ, ಸುರೇಶ ದೇಶಪಾಂಡೆ, ಕಾಶಿನಾಥ ಮಡಿವಾಳ, ಕೆಎಂಬಾರಿ, ಗೋಪಾಲ ಗಾರಂಪಳ್ಳಿ, ವೆಂಕಕರೆಡ್ಡಿ ಪಾಟೀಲ, ವಿಠ್ಠಲ ಕುಸಾಳೆ, ಗೋಪಾಲ ಇಡಗೊಟ್ಟಿ, ಶಂಕರ ಪವ್ಹಾರ, ಲಿಂಬಾಜೀ ಚವ್ಹಾಣ, ಸೋಮಶೇಖರ, ಜಗನ್ನಾಥ ರಾಠೋಡ, ಅನೀಲಕುಮಾರ ಬಿರಾದಾರ, ರೇವಣಸಿದ್ದಪ್ಪ, ಹರ್ಷವರ್ಧನ್, ಹಣಮಂತ, ನಾರಾಯಣ ನಾಟೀಕಾರ, ಅನೇಕರಿದ್ದರು.

**ಪಟ್ಟಣದ ತಹಶೀಲ್ ಕಛೇರಿ ಎದುರು ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಒಕ್ಕೂಟದಿಂದ ಕನ್ನಡ ಶಾಲೆಗಳ ರಕ್ಷಣೆ ಹಾಗೂ ಶಾಲೆಗಳಿಗೆ ವಿಧಿಸಿದ ಷರತ್ತುಗಳು ಸಡಿಲಗೊಳಿಸಿ ಕನ್ನಡ ಶಾಲೆಗಳು ಉಳಿಸಿ,ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆ ಜಾರಿಗೊಳಿಸುವಂತೆ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ನಾವೆಲ್ಲರೂ ಮೊದಲು ಕನ್ನಡಿಗರು ಕನ್ನಡ ಭಾಷೆ,ಕನ್ನಡ ಶಾಲೆ ಉಳಿಸುವ ಕೆಲಸ ಮಾಡಬೇಕಾಗಿದೆ**

–ಡಾ.ಫಾರೂಕ್ ಮಣ್ಣೂರ್

# ಜೋಳಕ್ಕಿಂತ ಹುಲುಸಾಗಿ ಬೆಳೆದ ಕಳೆ

• ಉದಯವಾಹಿನಿ, ಆಲೂರು

ತಿಂಗಳು ನಿರಂತರ ಮಳೆಯಾಗಿದ್ದರಿಂದ ಹೊಲದಲ್ಲಿ ಬಿತ್ತನೆ ಮಾಡಿದ್ದ ಮೆಕ್ಕೆ ಜೋಳದ ಜೊತೆಯಲ್ಲಿ ಹುಲ್ಲು ಬೆಳೆಯುತ್ತಿದ್ದು, ಜೋಳದ ಬೆಳೆ ಕೈಗೆಟಕದಂತಾಗಿದೆ.

ಒಂದೂವರೆ ತಿಂಗಳ ಹಿಂದೆ ಹದ ಮಳೆಯಾಯಿತು. ಈ ಸಂದರ್ಭದಲ್ಲಿ ಹಲವು ರೈತರು ಮಾಗಿ ಉಳುಮೆ ಮಾಡಿ ಜೋಳ ಬಿತ್ತನೆ ಮಾಡಿದ್ದರು. ಬಿತ್ತನೆ ಮಾಡಿದ ಒಂದು ವಾರದ ನಂತರ ಜೋಳ ಚೆನ್ನಾಗಿ ಬಂದಿತ್ತು. ಒಂದು ವಾರದಲ್ಲಿ ಹೊಲದಲ್ಲಿ ಕಳೆ ತೆಗೆದು ಗೊಬ್ಬರ ಹಾಕಬೇಕಾಗಿತ್ತು. ಆದರೆ ಅಷ್ಟರಲ್ಲಿ ಮಳೆ ಪ್ರಾರಂಭವಾಗಿದ್ದು, ನಿರಂತರವಾಗಿ ಒಂದು ತಿಂಗಳು ಸುರಿಯಿತು., ಇದರಿಂದ ಜೋಳದ ಜೊತೆಗೆ ಕಳೆಯ ಹುಲ್ಲು ಬೃಹತ್ತಾಗಿ ಬೆಳೆಯಿತು. ಕಳೆ ನಾಶ ಮಾಡಲು ಸಮಯಾಕಾಶ ದೊರಕದೇ, ಕೃಷಿ ಕೆಲಸ ಮಾಡಲು ಸಾಧ್ಯವಾಗದೆ ರೈತರು ಕೈ ಚೆಲ್ಲಿದರು. ಈಗ ಜೋಳದೊಡನೆ ಬೃಹತ್ತಾಗಿ ಕಳೆ ಬಂದಿದೆ. ಕಳೆಯಿಂದ ಜೋಳವನ್ನು ಬೇರ್ಪಡಿಸಲು ಸಾಧ್ಯವಾಗುತ್ತಿಲ್ಲ.

ಹುಲ್ಲಿನೊಂದಿಗೆ ಜೋಳವನ್ನುಕೊಯ್ದು ಮಾಡಿ ಜಾನುವಾರುಗಳಿಗೆ ಉಣ ಬಡಿಸುವ ಪರಿಸ್ಥಿತಿ ತಲೆದೋರಿದೆ ಎಂದು ರೈತರು ಹೇಳುತ್ತಿದ್ದಾರೆ. ಹೊಲದ ಉಳುಮೆ, ಜೋಳದ ಬೀಜ, ಗೊಬ್ಬರ ಬೆರೆಸಿ ಬಿತ್ತುವ ಕಾರ್ಯ ಸೇರಿದಂತೆ ಈಗಾಗಲೇ ಎಕರೆಗೆ ಈ 10ಸಾವಿರದಿಂದ 15 ಸಾವಿರ ಖರ್ಚಾಗಿದೆ. ಆದರೆ ಮಳೆಯಿಂದಾಗಿ ಯಾವುದೇ ಪ್ರತಿಫಲ ಸಿಗದಂತಾಗಿದೆ ಎಂದು ರೈತರು ಹತಾಶರಾಗಿದ್ದಾರೆ. ಎರಡು ದಶಕಗಳ ಹಿಂದೆ ಮಾರ್ಚ್‌ನಲ್ಲಿ ಬಹುತೇಕ ಮಳೆಯಾಗುತ್ತಿತ್ತು. ಆಗ ಅಡಿಗಾರು ಉಳುಮೆ ಮಾಡುತ್ತಿದ್ದರು. ಸುಡು ಬಿಸಿಲಿನಲ್ಲಿ ಕಳೆ ಸಂಪೂರ್ಣ ನಾಶವಾಗುತ್ತಿತ್ತು. ಮೇ ತಿಂಗಳಲ್ಲಿ ಬಿತ್ತನೆ ಮಾಡುತ್ತಿದ್ದರು.

ಉತ್ತಮ ಫಸಲು ದೊರಕುತ್ತಿತ್ತು. ಆದರೆ ಇತ್ತೀಚೆಗೆ ಯಾಂತ್ರಿಕ ಕೃಷಿಗೆ ಮಾರು ಹೋಗಿರುವ ರೈತರು, ಉಳುಮೆ ಮಾಡಿದ ಸಂದರ್ಭದಲ್ಲಿ ಬಿತ್ತನೆ ಮಾಡುತ್ತಿದ್ದು, ಮುಂದಿನ ಕೃಷಿ ಚಟುವಟಿಕೆಗೆ ಅವಕಾಶ ಸಿಗದಿದ್ದರೆ ಇಂತಹ ಪರಿಸ್ಥಿತಿ ತಲೆದೋರುತ್ತದೆ ಎಂದು ಹಿರಿಯ ಕೃಷಿಕರು ತಮ್ಮ ಅನುಭವ ಹಂಚಿಕೊಳ್ಳುತ್ತಾರೆ.

**ಜೋಳ ಬಿತ್ತನೆ ಮಾಡಿ ವಾರ ಮಳೆಯಿಲ್ಲದೆ ಉತ್ತಮ ವಾತಾವರಣ ಇತ್ತು. ಇನ್ನೇನು ಮುಂದಿನ ಕೆಲಸ ಮಾಡುವಷ್ಟರಲ್ಲಿ ಮಳೆ ಪ್ರಾರಂಭವಾಯಿತು. ಈವರೆಗೂ ಮಳೆ ಬಿಟ್ಟಿಲ್ಲ. ಜೋಳದ ಜೊತೆ ಕಳೆ ಹುಲ್ಲು ಬೆಳೆದು ನಿಂತಿದೆ.**

–ಆರ್. ಆನಂದ ನಾಕಲಗೂಡು ರೈತ

## ಚಂದ್ರಂಪಳ್ಳಿ ಜಲಾಶಯ ಕೆರೆಯ ದಂಡೆಯಲ್ಲಿ ಗಿಡಗಂಟ್ಟೆಗಳು: ಅಪಾಯಕ್ಕೆ ಆಹ್ವಾನ

# ಮೂಲ ಸೌಕರ್ಯ ಇಲ್ಲದೆ ಪ್ರವಾಸಿಗರು ಪರದಾಡುವ ಸ್ಥಿತಿ


• ಉದಯವಾಹಿನಿ ವಿಶೇಷ

• ಮಹೇಬೂಬಶಾ ಅಣವಾರ

**ಚಿಂಚೋಳಿ:** ತಾಲ್ಲೂಕಿನ ಚಂದ್ರಂಪಳ್ಳಿ ಜಲಾಶಯವು ಮಾಜಿ ಮುಖ್ಯಮಂತ್ರಿಗಳು ವೀರೇಂದ್ರ ಪಾಟೀಲರ ಪರಿಶ್ರಮದಿಂದ ರೈತರಿಗೆ ಅನುಕೂಲವಾಗಲಿವೆಂದು ಕಟ್ಟಿಸಿದ್ದು ಸಾವಿರಾರು ರೈತರು ಈ ಜಲಾಶಯ ಮೇಲೆ ಅವಲಂಬಿತರಾಗಿದ್ದಾರೆ ಆದರೆ ಇಂದಿನ ಜನಪ್ರತಿನಿಧಿಗಳು ಚಂದ್ರಂಪಳ್ಳಿ ಜಲಾಶಯಕ್ಕೆ ನಿರ್ವಹಣೆ ಮಾಡಲು ಆಗದೆ ಜಲಾಶಯ ದಂಡೆಗೆ ಗಿಡಗಂಟ್ಟೆಗಳು ಬೆಳೆದು ಅಪಾಯಕ್ಕೆ ಅಹ್ವಾನಿಸುತ್ತಿದೆ.


ಉದಯವಾಹಿನಿ ಚಿತ್ರ

ಕಳೆದ 10-12ವರ್ಷಗಳ ಹಿಂದೆ ಚಂದ್ರಂಪಳ್ಳಿ ಜಲಾಶಯ ಅತ್ಯಂತ ಸುಂದರ ದೃಶ್ಯ ಪ್ರವಾಸಿಗರನ್ನು ಆಕರ್ಷಿಸುತ್ತಿತ್ತು,ಆದರೆ ಇಂದಿನ ಪರಿಸ್ಥಿತಿಯಲ್ಲಿ ಚಂದ್ರಂಪಳ್ಳಿ ಜಲಾಶಯದಲ್ಲಿ ಮೂಲಭೂತ ಸೌಕರ್ಯ ಇಲ್ಲದಿದರೂ ಕೂಡ ಪ್ರವಾಸಿಗರು ಸಾಕಷ್ಟು ದೂರ ದೂರದಿಂದ ಅಂತರ ರಾಜ್ಯ ತೆಲಂಗಾಣ ಮಹಾರಾಷ್ಟ್ರ ಆಂದ್ರಪ್ರದೇಶದಿಂದ ಬರುತ್ತಾರೆ ಇಲ್ಲಿ ಯಾವುದೇ ಮೂಲಭೂತ ಸೌಕರ್ಯ ಇಲ್ಲದೆ ಪ್ರವಾಸಿಗರು ಪರದಾಡುವ ಪರಿಸ್ಥಿತಿಯಾಗಿದೆ. ಜಲಾಶಯದ ದಂಡೆಗೆ ಗಿಡಗಂಟ್ಟೆಗಳು ದೊಡ್ಡಮಟ್ಟದಲ್ಲಿ ಬೆಳೆದು ಅದರ ಬೇರುಗಳು ದಂಡೆಯಲ್ಲಿರುವುದರಿಂದ ಜನರಿಗೆ ಭಯವಾಗುತ್ತಿದೆ, ಅಪಾಯಕ್ಕೆ ಅಹ್ವಾನ ನೀಡುತ್ತಿದೆ ಆದರೆ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ತೋರುತ್ತಿರುವುದು ಕಂಡುಬರುತ್ತಿದೆ. ಜಲಾಯಶಕ್ಕೆ ವರ್ಷಕ್ಕೆ 32ಲಕ್ಷ ರೂ.ದಂತೆ ನಿರ್ವಹಣೆಗೆ ಬರುತ್ತದೆ ಎಂಬುವುದು ಸಾರ್ವಜನಿಕರಿಗೆ ಮಾಹಿತಿ ತಿಳಿದಿರುವ ವಿಷಯವಾಗಿದೆ. ಆದರೆ ಇಷ್ಟೆಲ್ಲಾ ಅನುದಾನ ಬಿಡುಗಡೆ ಆದರೂ ಮೂಲಭೂತ ಸೌಕರ್ಯ ಹಾಗೂ ಸಣ್ಣಪುಟ್ಟ ದುರಸ್ತಿ ಕೆಲಸಗಳು ಯಾಕೆ ಮಾಡುತ್ತಿಲ್ಲವೆಂಬುವುದು ಸಾರ್ವಜನಿಕರ ಪ್ರಶ್ನೆಯಾಗಿದೆ, ದಶಕದ ಹಿಂದೆ ಜಲಾಶಯಕ್ಕೆ ಹೋಗುವ ಪ್ರವಾಸಿಗರಿಗೆ ತಂಪಾದ ವಾತಾವರಣ, ತೋಟಗಾರಿಕೆ, ಅತ್ಯಂತ ಪ್ರಸಿದ್ಧವಾದ ಪೇರಳೆ ಹಣ್ಣು, ಹೀಗೆ ಹಲವಾರು ಸೌಲಭ್ಯಗಳಿದ್ದವೂ ಈಗ ಯಾವುದೇ ಸೌಲಭ್ಯ ಇಲ್ಲದೆ ಪ್ರವಾಸಿಗರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಜನಪ್ರತಿನಿಧಿಗಳು ಅಧಿಕಾರಿಗಳು ಇತ್ತ ಗಮನಹರಿಸಿ ಜಲಾಶಯ ದಂಡೆಯ ಮೇಲೆ ಬೆಳೆದಿರುವ ಗಿಡಗಂಟ್ಟೆಗಳು ತೆರವುಗೊಳಿಸಿ ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ಕಲ್ಪಿಸಿಕೊಡುತ್ತಾರೆಯೋ ಇಲ್ಲವೋ ಕಾದು ನೋಡಬೇಕಾಗಿದೆ.


ಉದಯವಾಹಿನಿ ಚಿತ್ರ



**ಚಂದ್ರಂಪಳ್ಳಿ ಜಲಾಶಯದ ದಂಡೆಯ ಮೇಲೆ ಬೆಳೆದಿರುವ ಗಿಡಗಂಟ್ಟೆಗಳಿಂದ ಅಪಾಯಕ್ಕೆ ಅಹ್ವಾನಿಸುತ್ತಿದೆ,ಅಧಿಕಾರಿಗಳು ಸ್ಥಳೀಯ ಶಾಸಕರು ನಿರ್ಲಕ್ಷ್ಯವೇ ಇದಕ್ಕೆ ನೇರಕಾರಣವಾಗಿದೆ. ಕಳೆದ 15ವರ್ಷಗಳ ಹಿಂದೆ ಚಂದ್ರಂಪಳ್ಳಿ ಜಲಾಶಯಕ್ಕೆ ಬಹಳ ದೂರದಿಂದ ಬರುತ್ತಿದ್ದರೂ ಈಗ ಯಾವುದೇ ಸೌಲಭ್ಯ ಇಲ್ಲದಿರುವುದರಿಂದ ಪ್ರವಾಸಿಗರ ಸಂಖ್ಯೆ ಕ್ಷೀಣಿಸುತ್ತಿದೆ,ಸ್ಥಳೀಯ ಶಾಸಕರು ಚಂದ್ರಂಪಳ್ಳಿಯಲ್ಲಿ ಎಡ್ಮೂರು ಸಭೆಗಳು ಮಾಡಿದರು ಉಪಯೋಗವಾಗಿಲ್ಲ, ಬಿಜೆಪಿ ಸರ್ಕಾರದ ಅವಧಿಯಲ್ಲಿ ವಿವಿಧ ಸಚಿವರಿಗೆ ಶಾಸಕರು ಕರೆಸಿದರೂ ಯಾವುದೇ ಅಭಿವೃದ್ಧಿ ಕಾರ್ಯ ಆಗಿಲ್ಲ, ದೀರ್ಘಕಾಲದಿಂದ ಜಲಾಶಯ ನಿರ್ಲಕ್ಷ್ಯಕ್ಕೆ ಒಳಪಡುತ್ತಿದೆ, ಮಾಜಿ ಸಿಎಂ ವೀರೇಂದ್ರ ಪಾಟೀಲರು ಕಟ್ಟಿದ ಜಲಾಶಯ ಹಾಳುಬಿಳದಂತೆ ಇದನ್ನು ಅಭಿವೃದ್ಧಿಗೊಳಿಸಿ ಸಾವಿರಾರು ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕು.**

–ಶರಣುಪಾಟೀಲ ಮೋತಕಪಳ್ಳಿ, ವಕ್ತಾರರು, ತಾಲ್ಲೂಕಾ ಬ್ಲಾಕ್ ಕಾಂಗ್ರೇಸ್ ಸಮಿತಿ ಚಿಂಚೋಳಿ.



**ಚಂದ್ರಂಪಳ್ಳಿ ಜಲಾಶಯ ದಂಡೆಯ ಮೇಲೆ ಬೆಳೆದ ಗಿಡಗಂಟ್ಟೆಗಳು ಕಟಾವು ಮಾಡಲು ಈಗಾಗಲೇ ಕ್ರೀಯಾಯೋಜನೆ ಸಿದ್ದಪಡಿಸಲಾಗಿದೆ,ಅಗಷ್ಟ್ ಅಥವಾ ಸಪ್ಟೆಂಬರ್ ತಿಂಗಳಲ್ಲಿ ಯಂತ್ರಗಳ ಮೂಲಕ ಕಟಾವು ಸ್ವಚ್ಚತೆ ಮಾಡಲಾಗುವುದು, ಜಲಾಶಯ ಮತ್ತು ಕಾಲುವೆ ನಿರ್ವಹಣೆಗೆ ವರ್ಷಕ್ಕೆ 32ಲಕ್ಷ ಬರುತ್ತೆ ಆದರೆ ಈವರ್ಷ ಇಲ್ಲಿಯವರೆಗೆ ಅನುದಾನ ಬಂದಿರುವುದಿಲ್ಲ. ಕಳೆದ ವರ್ಷ ಒಂದುಕಡೆ ಬೆಳೆದಿರುವ ಗಿಡಗಂಟ್ಟೆಗಳು ಸ್ವಚ್ಚತೆ ಮಾಡಲಾಗಿತ್ತು**

– ಚೇತನ ಕಳಸ್ಕರ, ಎಇಇ,ಚಂದ್ರಂಪಳ್ಳಿ ಜಲಾಶಯ.

## ಮಿನಿ ನ್ಯೂಸ್

### ವಕೀಲರು ನಿರಂತರ ಅಧ್ಯಯನ ಶೀಲರಾಗಿರಬೇಕು

• ಉದಯವಾಹಿನಿ, ಬಾದಾಮಿ

ವಕೀಲರ ವೃತ್ತಿ ಪಾವಿತ್ರ್ಯವಾದುದು. ಪ್ರಮಾಣಿಕವಾಗಿ ಕೆಲಸ ಮಾಡಬೇಕು ನಿರಂತರವಾಗಿ ಓದುತ್ತಿರಬೇಕು, ಸಾಮಾಜಿಕ ಸಮತೋಲನ, ಸಾಮಾಜಿಕ ನ್ಯಾಯ ದೊರಕಿಸಿ ಕೊಡಬೇಕು ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಎಚ್.ಪಿ.ಸಂದೇಶ ಹೇಳಿದರು. ನಗರದ ವಕೀಲರ ಸಂಘದಲ್ಲಿ ಕರ್ನಾಟಕ ರಾಜ್ಯ ವಕೀಲರ ಪರಿಷತ್ತು, ತಾಲ್ಲೂಕಾ ವಕೀಲರ ಸಂಘ ಬಾದಾಮಿ, ಗುಳೇದಗುಡ್ಡ, ಕೆರೂರ ಇವರ ಸಹಯೋಗದಲ್ಲಿ ಬಾಗಲಕೋಟೆ, ವಿಜಯಪೂರ, ಗದಗ ತ್ರಿವಳಿ ಜಿಲ್ಲೆಗಳ ವಕೀಲರ ಸಂಘಗಳ ಪದಾಧಿಕಾರಿಗಳ ಸಭೆ, ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹಿಂದಿನ ವಕೀಲರು ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದರು. ಹಣ ಪಡೆಯದೇ ಹೋರಾಟ ಮಾಡಿದರು. ಇಂದು ವಕೀಲರು ನಿರಂತರ ಅಧ್ಯಯನ ಮಾಡಬೇಕು. ಬಸವಣ್ಣನವರು ಸಾಮಾಜಿಕ ನ್ಯಾಯಕ್ಕೆ ಮಾದರಿಯಾಗಿದ್ದಾರೆ. ಅಂತಹ ನಾಡಿನಲ್ಲಿ ಹುಟ್ಟಿದ ನಾವು ಮಾದರಿಯಾಗಬೇಕು. ವಕೀಲರ ವೃತ್ತಿ ಸಾಮಾಜಿಕ ಸೇವೆಯಾಗಿದೆ ಎಂದು ಹೇಳಿದರು. ಮಾಜಿ ಕಾನೂನು ಸಚಿವ ಪ್ರೊ.ಎ.ಲಕ್ಷ್ಮೀಸಾಗರ ಉಪನ್ಯಾಸ ನೀಡಿದರು. ರಾಜ್ಯ ವಕೀಲರ ಪರಿಷತ್ ಅಧ್ಯಕ್ಷ ಎಸ್.ಎಸ್. ಮಿಟ್ಟಲಕೋಡ, ಜಿಲ್ಲಾ ಪ್ರಧಾನ, ಸತ್ರ ನ್ಯಾಯಾಧೀಶ ಎನ್.ವ್ಹಿ.ವಿಜಯ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಹಿರಿಯ ನ್ಯಾಯವಾದಿ ಎಚ್. ಕಾಂತರಾಜು ಉಪನ್ಯಾಸ ನೀಡುತ್ತಾ ಮಾತನಾಡಿ ಎ.ಲಕ್ಷ್ಮೀಸಾಗರ ಒಬ್ಬ ಹೋರಾಟಗಾರರು. ವಕೀಲರಿಗೆ ಮಾದರಿಯಾಗಿದ್ದಾರೆ. ಪ್ರಜಾಪ್ರಭುತ್ವ ಉಳಿಯಲು ನ್ಯಾಯಾಂಗದಿಂದ ಮಾತ್ರ ಸಾಧ್ಯ. ಪ್ರಜಾಪ್ರಭುತ್ವ ಉಳಿಸಲು ವಕೀಲರು ಶ್ರಮಿಸಬೇಕು ಎಂದು ಹೇಳಿದರು.

### ಗ್ಯಾರಂಟಿಗಳಿಂದ ರಾಜ್ಯದ ಮಹಿಳೆಯರ ಸಬಲೀಕರಣ

• ಉದಯವಾಹಿನಿ, ಕಾರವಾರ

ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿ ಅಲ್ಲಿನ ಕುಟುಂಬಗಳಿಗೆ ಉಳುವವನೇ ಭೂಮಿಯ ಒಡೆಯ ಮಾದರಿ ವಾಸಿಸುವವನೇ ಮನೆಯ ಒಡೆಯ ಎಂದು ಹಕ್ಕುಪತ್ರ ವಿತರಿಸಲಾಗುತ್ತಿರುವುದು ನಮ್ಮ ಪಕ್ಷದ ಸಾಧನೆಯಾಗಿದೆ ಎಂದು ಕರ್ನಾಟಕ ರಾಜ್ಯ ಯುವ ಕಾಂಗ್ರೇಸ್ ಅಧ್ಯಕ್ಷ ಮಂಜುನಾಥ ಗೌಡ ಹೇಳಿದರು. ಕಾಂಗ್ರೇಸ್ ಪಕ್ಷ ಧ್ವನಿ ಇಲ್ಲದವರನ್ನು ಮುಖ್ಯ ವಾಹಿನಿಗೆ ತರುವ ಕೆಲಸ ಮಾಡುತ್ತಿದೆ.ನಮ್ಮ ಶಕ್ತಿಯ ಮುಂದೆ ಬಿಜೆಪಿ ರಾಜ್ಯದಲ್ಲಿ ಉಸಿರೆತ್ತುತ್ತಿಲ್ಲ, ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಾ ಇನ್ನೊಂದೆಡೆ ಗ್ಯಾರಂಟಿ ಪ್ರಯೋಜನಗಳನ್ನು ಪಡೆಯುವುದರಲ್ಲಿ ಬಿಜೆಪಿಗರೇ ಮೊದಲ ಸ್ಥಾನದಲ್ಲಿದ್ದಾರೆ ಎಂದು ಟೀಕಿಸಿದರು.

ಅಂಕೋಲದ ನಾಡವರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಯುವ ಕಾಂಗ್ರೇಸ್ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಗ್ಯಾರಂಟಿಗಳಲ್ಲಿ ಶೇ.99 ರಷ್ಟು ಸಾಧನೆಯಾಗಿದೆ, ಗೃಹಲಕ್ಷ್ಮೀ, ಶಕ್ತಿ ಯೋಜನೆ ಮಹಿಳೆಯರ ಸಬಲೀಕರಣಕ್ಕೆ ನೆರವಾದರೆ, ಅನ್ನಭಾಗ್ಯ, ಯುವನಿಧಿ, ಗೃಹಜ್ಯೋತಿಯ ಪ್ರಯೋಜನವನ್ನು ಲಕ್ಷಾಂತರ ಮಂದಿ ಪಡೆದಿದ್ದಾರೆ ಎಂದು ಹೇಳಿದರು.

### ಪ್ರತಿಭಾ ಪುರಸ್ಕಾರ: ಸರ್ಕಾರಿ ನೌಕರರ ಮಕ್ಕಳಿಂದ ಅರ್ಜಿ ಆಹ್ವಾನ

• ಉದಯವಾಹಿನಿ, ಶಿರಸಿ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಶಿರಸಿ ಶೈಕ್ಷಣಿಕ ಜಿಲ್ಲಾ ಘಟಕದ ನೇತೃತ್ವದಲ್ಲಿ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಸಮಾರಂಭ ಆ.3ರಂದು ನಗರದ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಜರುಗಲಿದ್ದು, ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವಂತೆ ಘಟಕದ ಅಧ್ಯಕ್ಷ ಕಿರಣಕುಮಾರ ನಾಯ್ಕ ತಿಳಿಸಿದ್ದಾರೆ. ರಾಜ್ಯ ಸಮಿತಿ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ ಅಧ್ಯಕ್ಷತೆಯಲ್ಲಿ ಅಂದು ಕಾರ್ಯಕ್ರಮ ನಡೆಯಲಿದೆ. ಈ ಸಮಯದಲ್ಲಿ ಶಿರಸಿ ಶಾಖೆಯ ವಾರ್ಷಿಕ ಸರ್ವಸಾಧಾರಣ ಸಭೆಯನ್ನೂ ಹಮ್ಮಿಕೊಳ್ಳಲಾಗಿದ್ದು, ಅದರಲ್ಲಿ ಶಿರಸಿ ಘಟಕದ ಪರವಾಗಿ ಶಿರಸಿ ತಾಲ್ಲೂಕಿನ ಸರ್ಕಾರಿ ನೌಕರರ ಮಕ್ಕಳಿಗಾಗಿ ಪ್ರತಿಭಾ ಪುರಸ್ಕಾರ 2024-25 ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಶೇ 95ರಷ್ಟು ಮತ್ತು ಪಿಯುಸಿಯಲ್ಲಿ ಶೇ 90ರಷ್ಟು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ನೀಡಲಾಗುತ್ತದೆ. ಕಾರಣ ಎರಡೂ ವಿಭಾಗದಲ್ಲಿ ಶಿರಸಿ ತಾಲ್ಲೂಕಿನ ನೌಕರರ ಅರ್ಹ ಮಕ್ಕಳು ಅಥವಾ ಪಾಲಕರು ಜುಲೈ 27ರ ಒಳಗಾಗಿ ಒಂದು ಪೋಟೋ, ಅಂಕಪಟ್ಟಿ ಪ್ರತಿ ಹಾಗೂ ಕೈ ಬರಹದ ಅರ್ಜಿಯೊಂದಿಗೆ, ಪೋನ್ ನಂಬರ್, ಆಯಾ ಇಲಾಖೆಯ ನಮ್ಮ ಸಂಘದ ನಿರ್ದೇಶಕರ ದೃಢೀಕರಣದೊಂದಿಗೆ, ಅಧ್ಯಕ್ಷರು, ಕ.ರಾ. ಸ.ನೌ.ಸಂ ಜಿಲ್ಲಾ ಶಾಖೆ ಶಿರಸಿ ಇಲ್ಲಿ ಸಲ್ಲಿಸಬೇಕು ಅಥವಾ ನೌಕರರ ಭವನ ಶಿರಸಿಗೆ ಅಂಚೆ ಮೂಲಕ ತಲುಪಿಸಬೇಕು ಎಂದು ತಿಳಿಸಿದ್ದಾರೆ.

### ಕೇಂದ್ರ ಕಾರಾಗೃಹದಲ್ಲಿರುವ ಕೈದಿ ಜೇಬಿನಲ್ಲಿ ಸಿಮ್ ಕಾರ್ಡ್ ಪತ್ತೆ

• ಉದಯವಾಹಿನಿ, ಶಿವಮೊಗ್ಗ

ಇಲ್ಲಿನ ಸೋಗಾನೆಯ ಕೇಂದ್ರ ಕಾರಾಗೃಹದಲ್ಲಿರುವ ಕೈದಿಯೊಬ್ಬನ ಜೇಬಿನಲ್ಲಿ ಸಿಮ್ ಕಾರ್ಡ್, ತಗಡಿನಿಂದ ಮಾಡಿದ ವಸ್ತು ಪತ್ತೆಯಾಗಿದೆ. ಕೈದಿ ಉಮ್ಮೆದ್ ಎಂಬಾತನನ್ನು ಪುತ್ತೂರಿನ ನ್ಯಾಯಾಲಯಕ್ಕೆ ಕರೆದೊಯ್ಯುವಾಗ ಜೈಲಿನ ಆ್ಯಕ್ಸೆಸ್ ಕಂಟ್ರೋಲ್‌ನಲ್ಲಿ ತಪಾಸಣೆ ನಡೆಸುವಾಗ ವಸ್ತುಗಳು ಪತ್ತೆಯಾಗಿವೆ. ಕೈದಿ ದೌಲತ್ ಖಾನ್ ಎಂಬಾತನ ಹೊಟ್ಟೆಯಲ್ಲಿ ಒಂದು ಇಂಚು ಅಗಲ, ಮೂರು ಇಂಚು ಉದ್ದದ ಕೀ ಪ್ಯಾಡ್ ಮೊಬೈಲ್ ಫೋನ್ ದೊರೆತಿತ್ತು. ಮೆಗ್ಗಾನ್ ಆಸ್ಪತ್ರೆಯ ವೈದ್ಯರು ಶಸ್ತ್ರಚಿಕಿತ್ಸೆ ನಡೆಸಿ ಹೊರ ತೆಗೆದಿದ್ದರು.

### ಅನುಮತಿ ಪಡೆಯದೇ ಡಿ.ಜೆ ಬಳಕೆ ಎಫ್‌ಐಆರ್ ದಾಖಲು

• ಉದಯವಾಹಿನಿ, ಮಂಗಳೂರು

ಅಪಾರ್ಟ್‌ಮೆಂಟ್ ಸಮುಚ್ಚಯದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಅನುಮತಿ ಪಡೆಯದೆಯೇ ಡಿ.ಜೆ ಬಳಸಿವರ ವಿರುದ್ಧ ಉರ್ವ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಅಶೋಕನಗರದ ಅಪಾರ್ಟ್‌ಮೆಂಟ್ ಸಮುಚ್ಚಯವೊಂದರಲ್ಲಿ ಡಿ.ಜೆ ಬಳಸಿ ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವ ಬಗ್ಗೆ ಗುರುವಾರ ರಾತ್ರಿ, ಪೊಲೀಸ್ ನಿಯಂತ್ರಣ ಕೊಠಡಿಗೆ ದೂರು ಬಂದಿತ್ತು. ಅದರನ್ವಯ ಉರ್ವ ಠಾಣೆಯ ಹೊಯ್ಸಳ ವಾಹನದ ಸಿಬ್ಬಂದಿ ರಾತ್ರಿ 10.52ಕ್ಕೆ ಸ್ಥಳಕ್ಕೆ ತಲುಪಿದಾಗ ಅಪಾರ್ಟ್‌ಮೆಂಟ್ ಸಮುಚ್ಚಯದ ಐದನೇ ಮಹಡಿಯಲ್ಲಿ ಧ್ವನಿವರ್ಧಕ ಬಳಸಲಾಗುತ್ತಿತ್ತು. ಅನಗತ್ಯ ಶಬ್ದ ಮಾಲಿನ್ಯ ಮಾಡಿ, ಸುತ್ತ-ಮುತ್ತಲಿನ ನಿವಾಸಿಗಳಿಗೆ ತೊಂದರೆ ಉಂಟುಮಾಡಿದ ಕುರಿತು ಹೊಯ್ಸಳ ಸಿಬ್ಬಂದಿ ನೀಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಉದಯ ವಾಹಿನಿ

ಪ್ರಾದೇಶಿಕ

ಮಂಗಳವಾರ 15 ಜುಲೈ 2025



### ಬೀಜಿಂಗ್‌ನಲ್ಲಿ ಜೈಶಂಕರ್ ಸರಣಿ ಮೀಟಿಂಗ್; ಸಂಬಂಧ ಸುಧಾರಣೆಯ ಸಲಹೆ ಸ್ವೀಕರಿಸಿದ ಚೀನಾ ಉಪಾಧ್ಯಕ್ಷ ಹಾನ್ ಝೆಂಗ್

# ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಮಾತುಕತೆ

**ಬೀಜಿಂಗ್:** ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಸೋಮವಾರ ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ ಉಪಾಧ್ಯಕ್ಷ ಹಾನ್ ಝೆಂಗ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದ್ದಾರೆ. ಭಾರತ-ಚೀನಾ ಸಂಬಂಧ ಸುಧಾರಣೆಗೆ ಒತ್ತು ನೀಡಿರುವ ಈ ಸಭೆ, ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಮಾತುಕತೆಗಳು ಸಕಾರಾತ್ಮಕ ಪಥದಲ್ಲಿ ಮುನ್ನಡೆಯುವ ಭರವಸೆ ವ್ಯಕ್ತಪಡಿಸಿದೆ.ಹಾನ್ ಝೆಂಗ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ, ಎಸ್. ಜೈಶಂಕರ್ ಅವರು ಚೀನಾದ ಶಾಂಘೈ ಸಹಕಾರ ಸಂಸ್ಥೆ ಅಧ್ಯಕ್ಷತೆಗೆ ಭಾರತದ ಬೆಂಬಲವನ್ನು ವ್ಯಕ್ತಪಡಿಸಿದರು. ಜೊತೆಗೆ ಪ್ರಾದೇಶಿಕ ಸ್ಥಿರತೆಗಾಗಿ ಭಾರತ-ಚೀನಾ ನಡುವೆ ಉತ್ತಮ ಬಾಂಧವ್ಯದ ಅಗತ್ಯತೆಯನ್ನು ಜೈಶಂಕರ್ ಒತ್ತಿ ಹೇಳಿದರು. ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಭಾರತದ ವಿದೇಶಾಂಗ ಸಚಿವ, ಇಂದು ನಾನು ಬೀಜಿಂಗ್‌ಗೆ ಬಂದ ಕೂಡಲೇ ಉಪಾಧ್ಯಕ್ಷ ಹಾನ್ ಝೆಂಗ್ ಅವರನ್ನು ಭೇಟಿ ಮಾಡಿ ಸಂತೋಷವಾಯಿತು. ಚೀನಾದ ಎಸ್‌ಸಿಒ ಅಧ್ಯಕ್ಷತೆಗೆ ಭಾರತದ ಬೆಂಬಲವನ್ನು ತಿಳಿಸಲಾಗಿದೆ. ನಮ್ಮ ದ್ವಿಪಕ್ಷೀಯ ಸಂಬಂಧಗಳಲ್ಲಿನ ಸುಧಾರಣೆಯನ್ನು ಗಮನಿಸಲಾಗಿದ್ದು, ನನ್ನ ಭೇಟಿಯ ಸಮಯದಲ್ಲಿ ನಡೆಯುವ ಚರ್ಚೆಗಳು ಆ ಸಕಾರಾತ್ಮಕ ಪಥವನ್ನು ಕಾಯ್ದುಕೊಳ್ಳುತ್ತವೆ ಎಂಬ ವಿಶ್ವಾಸವಿದೆ ಎಂದು ಹೇಳಿದ್ದಾರೆ. ಪ್ರಧಾನಿ ಮೋದಿ ಮತ್ತು ಕ್ಸಿ ಜಿನ್‌ಪಿಂಗ ಭೇಟಿ ಬಳಿಕ, ನಮ್ಮ ದ್ವಿಪಕ್ಷೀಯ ಸಂಬಂಧವು ಸ್ಥಿರವಾಗಿ ಸುಧಾರಿಸುತ್ತಿದೆ. ಪ್ರಸ್ತುತ ನನ್ನ ಭೇಟಿ ಕೂಡ ಈ ಪ್ರಯತ್ನಕ್ಕೆ ಮತ್ತಷ್ಟು ಬಲ ತುಂಬಲಿದೆ ಎಂಬ ವಿಶ್ವಾಸ ಇದೆ. ಪ್ರಾದೇಶಿಕ ಸ್ಥಿರತೆಗಾಗಿ ನಾವು ಪರಸ್ಪರ ಉತ್ತಮ ಭಾಂಧವ್ಯ ಹೊಂದುವುದು ತುಂಬಾ ಅಗತ್ಯ ಎಂದು ಜೈಶಂಕರ್ ಪ್ರತಿಪಾದಿಸಿದರು. ಭಾರತ, ಚೀನಾ ರಾಜತಾಂತ್ರಿಕ ಸಂಬಂಧಗಳ 75 ನೇ ವಾರ್ಷಿಕೋತ್ಸವವನ್ನು ಆಚರಿಸಿವೆ. ಕೈಲಾಸ ಮಾನಸ ಸರೋವರ ಯಾತ್ರೆಯ ಪುನರಾರಂಭಕ್ಕೆ ಚೀನಾ ಸಹಕಾರ ನೀಡಿದ್ದಕ್ಕೆ, ಭಾರತದಲ್ಲಿ ವ್ಯಾಪಕವಾಗಿ ಪ್ರಶಂಸಿಸಲಾಗುತ್ತಿದೆ. ಈ ಸಂಬಂಧ ಹೀಗೆಯೇ ಮುಂದುವರೆಬೇಕು ಎಂಬುದು ಭಾರತದ ಪ್ರಾಮಾಣಿಕ ಆಶಯ ಎಂದು ಭಾರತದ ವಿದೇಶಾಂಗ ಸಚಿವರು ಸಭೆಗೆ ಸ್ಪಷ್ಟಪಡಿಸಿದರು.



**ಭಾರತಕ್ಕೆ ಭೇಟಿ ನೀಡುವ ನಿರೀಕ್ಷೆ**

2020ರಲ್ಲಿ ಗಲ್ವಾನ್‌ನಲ್ಲಿ ನಡೆದ ಮಾರಕ ಮಿಲಿಟರಿ ಘರ್ಷಣೆಯ ನಂತರ, ಭಾರತ-ಚೀನಾ ರಾಜತಾಂತ್ರಿಕ ಸಂಬಂಧಗಳು ಹದಗೆಟ್ಟಿವೆ. ಈ ಘರ್ಷಣೆ ಬಳಿಕ ಇದೇ ಮೊದಲ ಬಾರಿಗೆ ಭಾರತದ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಚೀನಾ ಪ್ರವಾಸ ಕೈಗೊಂಡಿದ್ದಾರೆ. ಕಳೆದ ಜೂನ್‌ನಲ್ಲಿ ನಡೆದ ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಆಭಗವಹಿಸಲು, ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬೀಜಿಂಗ್‌ಗೆ ಆಗಮನಿಸಿದ್ದರು.

ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಕೂಡ ಈ ವೇಳೆ ಉಪಸ್ಥಿತರಿದ್ದರು. ಈ ವೇಳೆ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದಿದ್ದ ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ಉಲ್ಲೇಖವಿರದ ಜಂಟಿ ಹೇಳಿಕೆ ದಾಖಲೆಗೆ ಸಹಿ ಹಾಕಲು ಭಾರತ ನಿರಾಕರಿಸಿತ್ತು. ಸಿಂಗಪುರ ಪ್ರವಾಸದ ಬಳಿಕ ನೇರವಾಗಿ ಬೀಜಿಂಗ್‌ಗೆ ಬಂದಿದಳಿದ ಡಾ.ಎಸ್. ಜೈಶಂಕರ್, ಚೀನಾದ ಉಪಾಧ್ಯಕ್ಷ ಹಾನ್ ಝೆಂಗ್ ಅವರನ್ನು ಭೇಟಿ ಮಾಡಿದರು. ದ್ವಿಪಕ್ಷೀಯ ಸಭೆಗಾಗಿ ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಅವರನ್ನೂ ಕೆಲವೇ ಕ್ಷಣಗಳಲ್ಲಿ ಜೈಶಂಕರ್ ಭೇಟಿ ಮಾಡಲಿದ್ದಾರೆ. ಜೈಶಂಕರ್, ವಾಂಗ್ ಯಿ ಭೇಟಿ ಕೊನೆಯ ಬಾರಿಗೆ ಫೆಬ್ರವರಿಯಲ್ಲಿ ಜೋಹಾನ್ಸ್‌ಬರ್ಗ್‌ನಲ್ಲಿ ನಡೆದ ಜಿ 20 ಸಭೆಯ ವೇಳೆ ಏರ್ಪಟ್ಟಿತ್ತು. ಜು. 15ರಂದು ಟಿಯಾಂಜಿನ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ ವಿದೇಶಾಂಗ ಸಚಿವರ ಸಭೆಯಲ್ಲಿಯೂ, ಭಾರತದ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಭಾಗವಹಿಸಲಿದ್ದಾರೆ. ದಶಕಗಳಷ್ಟು ಹಳೆಯದಾದ ಗಡಿ ವಿವಾದವನ್ನು ಪರಿಹರಿಸುವ ಗುರಿಯನ್ನು ಹೊಂದಿರುವ ವಿಶೇಷ ಪ್ರತಿನಿಧಿಗಳ ಕಾರ್ಯವಿಧಾನದ ಅಡಿಯಲ್ಲಿ, ಯೋಜಿತ ಸುತ್ತಿನ ಸಂವಾದದ ಭಾಗವಾಗಿ ವಾಂಗ್‌ಯಿ ಮುಂದಿನ ತಿಂಗಳು ಭಾರತಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ.

**ಜೈಶಂಕರ್ ಹೇಳಿದ್ದೇನು?**

ಹಾನ್ ಝೆಂಗ್ ಅವರೊಂದಿಗಿನ ಸಭೆಯಲ್ಲಿ ತಮ್ಮ ಆರಂಭಿಕ ಭಾಷಣದಲ್ಲಿ, ಜೈಶಂಕರ್ ಅವರು ತಮ್ಮ ಭೇಟಿಯ ಸಮಯದಲ್ಲಿ ನಡೆದ ಚರ್ಚೆಗಳು ಭಾರತ-ಚೀನಾ ನಡುವಿನ ಸಂಬಂಧ ಸುಧಾರಣೆಯ ಪ್ರಯತ್ನಗಳನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಜಾನ್‌ನಲ್ಲಿ ಭಾರತದ ಪ್ರಧಾನಮಂತ್ರಿ, ನರೇಂದ್ರ ಮೋದಿ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ನಡುವಿನ ಸಭೆಯ ನಂತರ, ಎರಡು ರಾಷ್ಟ್ರಗಳ ನಡುವಿನ ಸಂಬಂಧಗಳು ಸುಧಾರಿಸುತ್ತಿವೆ ಎಂದು ಭಾರತದ ವಿದೇಶಾಂಗ ಸಚಿವರು ಇದೇ ವೇಳೆ ಉಲ್ಲೇಖಿಸಿದರು.

**ಸಂಕೀರ್ಣ ಜಾಗತಿಕ ಪರಿಸ್ಥಿತಿ**

**ಪ್ರಸ್ತುತ ಅಂತರರಾಷ್ಟ್ರೀಯ ಪರಿಸ್ಥಿತಿಯನ್ನು ಸಂಕೀರ್ಣ ಎಂದು ಬಣ್ಣಿಸಿರುವ ಜೈಶಂಕರ್, , ನಾವು ನೋಡುತ್ತಿರುವ ಅಂತಾರಾಷ್ಟ್ರೀಯ ಪರಿಸ್ಥಿತಿಗಳು ತುಂಬಾ ಸಂಕೀರ್ಣವಾಗಿದೆ. ನೆರೆಯ ರಾಷ್ಟ್ರಗಳು ಮತ್ತು ಪ್ರಮುಖ ಆರ್ಥಿಕತೆಗಳಾಗಿ, ಭಾರತ ಮತ್ತು ಚೀನಾ ನಡುವಿನ ಅಭಿಪ್ರಾಯಗಳು ಮತ್ತು ದೃಷ್ಟಿಕೋನಗಳ ಮುಕ್ತ ವಿನಿಮಯ ಬಹಳ ಮುಖ್ಯ. ಈ ಭೇಟಿಯ ಸಮಯದಲ್ಲಿ ನಾನು ಅಂತಹ ಚರ್ಚೆಗಳನ್ನು ಎದುರು ನೋಡುತ್ತಿದ್ದೇನೆ ಎಂದು ಹೇಳಿದರು.**

## ಹುಥಿ ದಾಳಿ: ಶೋಧ ಕಾರ್ಯಾಚರಣೆ ಮುಕ್ತಾಯ

**ದುಬೈ:** ಕೆಂಪು ಸಮುದ್ರದಲ್ಲಿ ಸಾಗುತ್ತಿದ್ದ ಸರಕು ಸಾಗಣೆ ಹಡಗುಗಳ ಮೇಲೆ ಯೆಮೆನ್‌ನ ಹುಥಿ ಬಂಡುಕೋರರು ದಾಳಿ ನಡೆಸಿದಾಗ ಕಾಣೆಯಾದವರ ಪತ್ತೆಗಾಗಿ ನಡೆಯುತ್ತಿದ್ದ ಶೋಧ ಕಾರ್ಯಾಚರಣೆಯು ಮುಕ್ತಾಯಗೊಂಡಿದೆ. ಘಟನೆಯಲ್ಲಿ ಒಟ್ಟು 10 ಜನರನ್ನು ರಕ್ಷಿಸಲಾಗಿದೆ. ನಾಲ್ವರು ಮೃತಪಟ್ಟಿದ್ದು, ಇತರ 11 ಜನರ ಸುಳಿವು ಪತ್ತೆಯಾಗಿಲ್ಲ ಎಂದು ಖಾಸಗಿ ಭದ್ರತಾ ಸಂಸ್ಥೆಗಳು ಸೋಮವಾರ ತಿಳಿಸಿವೆ. ಜುಲೈ 7ರಂದು ಹಡಗೊಂದರ ಮೇಲೆ ದಾಳಿ ನಡೆದ ಒಂದು ದಿನದ ಬಳಿಕ ಮತ್ತೊಂದು ಹಡಗನ್ನು ಗುರಿಯಾಗಿಸಿ ದಾಳಿ ನಡೆಯಿತು. ಎರಡೂ ಲೈಬೀರಿಯಾ ಮೂಲದ ಹಡಗುಗಳಾಗಿವೆ. ದಾಳಿಯ ಬಳಿಕ ನಾವಿಕರನ್ನು ನಾವು ಅಪಹರಿಸಿದ್ದೇವೆ ಎಂದು ಹುಥಿ ಬಂಡುಕೋರರು ಹೇಳಿಕೊಂಡಿದ್ದಾರೆ. ಆದರೆ ಇದಕ್ಕೆ ಯಾವುದೇ ಪುರಾವೆಗಳಿಲ್ಲ. ಯೆಮೆನ್‌ನಲ್ಲಿರುವ ಅಮೆರಿಕ ರಾಯಭಾರ ಕಚೇರಿಯು, ನಾವಿಕರ ಅಪಹರಣ ನಡೆದಿದೆ ಎಂದಿದೆ. ಹಡಗಿನಲ್ಲಿದ್ದ ತೈಲವು ಸಮುದ್ರದಲ್ಲಿ ಸೋರಿಕೆಯಾಗಿರುವುದರಿಂದ, ಜಲಚರಗಳಿಗೆ ತೊಂದರೆಯುಂಟಾಗಲಿದೆ ಎಂದು ಕಳವಳ ವ್ಯಕ್ತವಾಗಿದೆ. 2023ರ ಡಿಸೆಂಬರ್‌ನಿಂದ 2024ರ ಡಿಸೆಂಬರ್‌ವರೆಗೆ ಹುಥಿ ಉಗ್ರರು 100ಕ್ಕೂ ಅಧಿಕ ಹಡಗುಗಳನ್ನು ಗುರಿಯಾಗಿಸಿ ಕ್ಷಿಪಣಿ, ಡ್ರೋನ್‌ಗಳಿಂದ ದಾಳಿ ನಡೆಸಿದ್ದಾರೆ. ಈ ದಾಳಿಗಳಲ್ಲಿ ನಾಲ್ಕು ಹಡಗುಗಳು ಮುಳುಗಿದ್ದು, ಕನಿಷ್ಠ 8 ನಾವಿಕರು ಸಾವಿಗೀಡಾಗಿದ್ದಾರೆ.

## ಚೀನಾ ಅತಿಕ್ರಮಣ: ತೈವಾನ್ ವಾಯುಪ್ರದೇಶ ಪ್ರವೇಶಿಸಿದ 17 ಯುದ್ಧ ವಿಮಾನ

**ತೈಪೆ:** ತೈವಾನ್ ಭೂಪ್ರದೇಶದ ಅತಿಕ್ರಮಣವನ್ನು ಚೀನಾ ಮುಂದುವರಿಸಿದ್ದು, ಸೋಮವಾರ ಬೆಳಿಗ್ಗೆ 6 ಗಂಟೆಯವರೆಗೆ (ಸ್ಥಳೀಯ ಸಮಯ) ತೈವಾನ್‌ನ ಸುತ್ತಲೂ ಚೀನಾದ 17 ಮಿಲಿಟರಿ ವಿಮಾನಗಳು, ನೌಕಾ ಹಡಗುಗಳನ್ನು ಪತ್ತೆಹಚ್ಚಿರುವುದಾಗಿ ತೈವಾನ್‌ನ ರಾಷ್ಟ್ರೀಯ ರಕ್ಷಣಾ ಸಚಿವಾಲಯ (ಎಂಎನ್‌ಡಿ) ತಿಳಿಸಿದೆ. ಸಚಿವಾಲಯದ ಪ್ರಕಾರ, 17 ವಿಮಾನಗಳ ಪೈಕಿ 7 ಮಧ್ಯದ ರೇಖೆಯನ್ನು ದಾಟಿ ತೈವಾನ್‌ನ ಉತ್ತರ, ನೈರುತ್ಯ, ಪೂರ್ವ ವಾಯು ರಕ್ಷಣಾ ಗುರುತಿನ ವಲಯವನ್ನು ಪ್ರವೇಶಿಸಿದ್ದವು.


ಚೀನಾದ ಅತಿಕ್ರಮಣಕ್ಕೆ ಪ್ರತಿಕ್ರಿಯಿಸಲು, ತೈವಾನ್‌ನ ಸಶಸ್ತ್ರ ಪಡೆಗಳು ಯುದ್ಧ ವಿಮಾನಗಳು, ಯುದ್ಧ ನೌಕೆಗಳು ಮತ್ತು ಕರಾವಳಿ ಕ್ಷಿಪಣಿ ವ್ಯವಸ್ಥೆಗಳನ್ನು ನಿಯೋಜಿಸಿದ್ದವು. ಚೀನಾ ರಾಷ್ಟ್ರದ ಮಹಾನ್ ಪುನಶ್ಚತನದ ನೀತಿಯ ಭಾಗವಾಗಿ, ಪಶ್ಚಿಮ ಪೆಸಿಫಿಕ್‌ನಲ್ಲಿ ಪ್ರಾಬಲ್ಯವನ್ನು ವಿಸ್ತರಿಸುವ ಮೂಲಕ ತೈವಾನ್ ಅನ್ನು ಸ್ವಾಧೀನಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಚೀನಾ, ಯುದ್ಧ ವಿಮಾನಗಳು, ಯುದ್ಧ ನೌಕೆಗಳ ಮೂಲಕ ಅತಿಕ್ರಮಿಸುತ್ತಿದೆ ಎಂದು ಜೂನ್ 28 ರಂದು, ತೈವಾನ್ ಅಧ್ಯಕ್ಷ ಲೈ ಚಿಂಗ್-ಟೆ ಹೇಳಿದ್ದರು.

# ಭೂಮಿಯತ್ತ ಶುಭಾಂಶು ಶುಕ್ಲಾ ಪ್ರಯಾಣ ಆರಂಭ

**ನವದೆಹಲಿ:** ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ 18 ದಿನಗಳ ವಾಸ್ತವ್ಯದ ನಂತರ, ಗಗನಯಾತ್ರಿ ಶುಭಾಂಶು ಶುಕ್ಲಾ ಮತ್ತು ವಾಣಿಜ್ಯ ಆಕ್ಸಿಯಮ್ -4 ಮಿಷನ್ ಪೂರ್ಣಗೊಂಡಿದ್ದು, ಅವರು ಇಂದು ಭೂಮಿಗೆ ವಾಪಸ್ಸಾಗುತ್ತಿದ್ದಾರೆ. ರಾಕೇಶ್ ಶರ್ಮಾ ಅವರ 1984 ರ ಒಡಿಸ್ಸಿ ನಂತರ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಎರಡನೇ ಭಾರತೀಯ ಗಗನಯಾತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾದ ಶುಕ್ಲಾ, ಭಾರತೀಯ ಕಾಲಮಾನ ಸೋಮವಾರ ಮಧ್ಯಾಹ್ನ 2 ಗಂಟೆಗೆ ಡ್ರ್ಯಾಗನ್ ಬಾಹ್ಯಾಕಾಶ ನೌಕೆಯನ್ನು ಹತ್ತುತ್ತಾರೆ ಮತ್ತು ಎರಡು ಗಂಟೆಗಳ ನಂತರ ಹಿಂದಿರುಗುವ ಪ್ರಯಾಣವನ್ನು ಕೈಗೊಳ್ಳುತ್ತಾರೆ. ಐಎಸ್‌ಎಸ್‌ನಿಂದ ತೆಗೆದು ಹಾಕುವಿಕೆಯನ್ನು ಬೆಳಿಗ್ಗೆ 6:05ಕ್ಕಿಂತ ಮುಂಚಿತವಾಗಿ ನಿಗದಿಪಡಿಸಲಾಗಿದೆ ಎಂದು ಆಕ್ಸಿಯಮ್ ಸ್ಪೇಸ್ ಹೇಳಿಕೆಯಲ್ಲಿ ತಿಳಿಸಿದೆ.ಭೂಮಿಗೆ 22.5 ಗಂಟೆಗಳ ಪ್ರಯಾಣದ ನಂತರ, ಸಿಬ್ಬಂದಿ ಕ್ಯಾಲಿಫೋರ್ನಿಯಾದ ಕರಾವಳಿಯಿಂದ ಸುಮಾರು ಇಂದು ಬೆಳಿಗ್ಗೆ 4:31ಕ್ಕೆ ಇಳಿಯುವ ನಿರೀಕ್ಷೆಯಿದೆ ಎಂದು ಅದು ಹೇಳಿದೆ.

ದಂಡಯಾತ್ರೆಯ 73 ಗಗನಯಾತ್ರಿಗಳು ಶುಕ್ಲಾ, ಕಮಾಂಡರ್ ಪೆಗ್ಗಿ ವಿಟ್ಸನ್, ಮಿಷನ್ ತಜ್ಞರಾದ ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾನ್ಸ್ಕಿ-ವಿಸ್ನಿಯೆವ್ಸ್ಕಿ, ಹಂಗೇರಿಯ ಟಿಬೋರ್ ಕಾಪು ಅವರನ್ನು ಒಳಗೊಂಡ ಆಕ್ಸಿಯಮ್ -4 ಸಿಬ್ಬಂದಿಗೆ ಸಾಂಪ್ರದಾಯಿಕ ವಿದಾಯ ಸಮಾರಂಭವನ್ನು ಆಯೋಜಿಸಲಾಗಿದೆ. ಆಕ್ಸಿಯಮ್ -4 ಮಿಷನ್ ನಾಲ್ಕು ದಶಕಗಳಿಗೂ ಹೆಚ್ಚು ಕಾಲದ ನಂತರ ಭಾರತ, ಪೋಲೆಂಡ್ ಮತ್ತು ಹಂಗೇರಿಗೆ ಬಾಹ್ಯಾಕಾಶಕ್ಕೆ ಮರಳುವಿಕೆಯನ್ನು ಗುರುತಿಸಿತು. ಜಲ್ದಿ ಹಿ ಧರ್ತಿ ಪೆ ಮುಲಾಕತ್ ಕರ್ತೇ ಹೈ, ಎಂದು ಎಕ್ಸ್ ನಲ್ಲಿ ವಿದಾಯ ಸಮಾರಂಭದಲ್ಲಿ ಶುಕ್ಲಾ ಹೇಳಿದರು.

ಐಎಸ್‌ಎಸ್‌ನಿಂದ ಡ್ರ್ಯಾಗನ್ ಬಾಹ್ಯಾಕಾಶ ನೌಕೆಯ ಇಳಿಯುವಿಕೆಯನ್ನು ಸಂಪೂರ್ಣವಾಗಿ ಸ್ವಾಯತ್ತವಾಗಿ ವಿನ್ಯಾಸಗೊಳಿಸಲಾಗಿದೆ.ಅನ್‌ಡಾಕ್ ಮಾಡಿದ ನಂತರ, ಡ್ರ್ಯಾಗನ್



**ತಮ್ಮ ಐಕಾನ್ ರಾಕೇಶ್ ಶರ್ಮಾ 41 ವರ್ಷಗಳ ಹಿಂದೆ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಸಮಯವನ್ನು ಶುಕ್ಲಾ ನೆನಪಿಸಿಕೊಂಡರು ಮತ್ತು ಅಲ್ಲಿಂದ ಭಾರತ ಹೇಗೆ ಕಾಣುತ್ತದೆ ಎಂದು ವಿವರಿಸಿದರು. ನಾವೆಲ್ಲರೂ ಇನ್ನೂ ಮೇಲಿನಿಂದ ಭಾರತ ಹೇಗೆ ಕಾಣುತ್ತದೆ ಎಂದು ತಿಳಿಯಲು ಕುತೂಹಲದಿಂದ ಇದ್ದೇವೆ. ಆಜ್ ಕಾ ಭಾರತ್ ಮಹಾತ್ವಕಾಂಶಿ ದಿಖ್ತಾ ಹೈ. ಆಜ್ ಕಾ ಭಾರತ್ ನಿದರ್ ದಿಖ್ತಾ ಹೈ, ಆಜ್ ಕಾ ಭಾರತ್ ಆತ್ಮವಿಶ್ವಾಸ ದಿಖ್ತಾ ಹೈ. ಆಜ್ ಕಾ ಭಾರತ್ ಗರ್ವ್ ಸೆ ಪೂರ್ಣ ದಿಖ್ತಾ ಹೈ. ಎಂದು ಶುಕ್ಲಾ ಹೇಳಿದರು.**

ನಿಂದ ಸುರಕ್ಷಿತವಾಗಿ ದೂರ ಸರಿಯಲು, ಮರು-ಪ್ರವೇಶ ಕಾರ್ಯವಿಧಾನಗಳನ್ನು ಪ್ರಾರಂಭಿಸಲು ಎಂಜಿನ್ ಬರ್ನ್‌ಗಳ ಸರಣಿಯನ್ನು ನಿರ್ವಹಿಸುತ್ತದೆ. ಅಂತಿಮ ಸಿದ್ಧತೆಗಳಲ್ಲಿ ಕ್ಯಾಪ್ಸುಲ್‌ನ ಕಾಂಡವನ್ನು ಬೇರ್ಪಡಿಸುವುದು, ವಾತಾವರಣದ ಪ್ರವೇಶಕ್ಕೆ ಮುಂಚಿತವಾಗಿ ಶಾಖ ಶೀಲ್ಡ್ ಅನ್ನು ಓರಿಯಂಟ್ ಮಾಡುವುದು ಸೇರಿವೆ, ಇದು ಬಾಹ್ಯಾಕಾಶ ನೌಕೆಯನ್ನು 1,600 ಡಿಗ್ರಿ ಸೆಲ್ಸಿಯಸ್ ಸಮೀಪವಿರುವ ತಾಪಮಾನಕ್ಕೆ ಒಡ್ಡುತ್ತದೆ.


ಪ್ಯಾರಾಚೂಟ್‌ಗಳು ಎರಡು ಹಂತಗಳಲ್ಲಿ ನಿಯೋಜಿಸಲ್ಪಡುತ್ತವೆ ಮೊದಲು ಸುಮಾರು 5.7 ಕಿ.ಮೀ ಎತ್ತರದಲ್ಲಿ ಸ್ಥಿರಗೊಳಿಸುವ ಚ್ಯೂಟ್‌ಗಳು ಮತ್ತು ನಂತರ ಸರಿಸುಮಾರು ಎರಡು ಕಿ.ಮೀ. ಗಳಲ್ಲಿ ಮುಖ್ಯ ಪ್ಯಾರಾಚೂಟ್‌ಗಳು. ಕ್ಯಾಲಿಫೋರ್ನಿಯಾದ ಕರಾವಳಿಯಲ್ಲಿ ಸ್ಪ್ಲಾಶ್‌ಡೌನ್ ನಿರೀಕ್ಷಿಸಲಾಗಿದೆ, ಅನ್‌ಡಾಕ್ ಮಾಡಿದ ಸುಮಾರು 22.5 ಗಂಟೆಗಳ ನಂತರ ವಿಶೇಷ ಹಡಗಿನ ಮೂಲಕ ಬಾಹ್ಯಾಕಾಶ ಕ್ಯಾಪ್ಸುಲ್ ಅನ್ನು ಮರುಪಡೆಯಲಾಗುತ್ತದೆ. ಈ ಎಲ್ಲಾ ಕಾರಣಗಳಿಂದಾಗಿ, ಇಂದಿನ ಭಾರತ ಇನ್ನೂ ಸಾರೆ ಜಹಾನ್ ಸೆ ಅಚ್ಛಾ ಆಗಿ ಕಾಣುತ್ತದೆ ಎಂದು ನಾನು ಮತ್ತೊಮ್ಮೆ ಹೇಳಬಲ್ಲೆ ಎಂದು ಅವರು ಹೇಳಿದರು. ನಡೆದ ಔಪಚಾರಿಕ ವಿದಾಯ ಸಮಾರಂಭದಲ್ಲಿ -4 ಸಿಬ್ಬಂದಿಯ ಸಂಕ್ಷಿಪ್ತ ಹೇಳಿಕೆಗಳು ಕಾಣಿಸಿಕೊಂಡವು, ಅವರಲ್ಲಿ ಕೆಲವರು ಎಕ್ಸ್‌ಪೆಡಿಶನ್ 73ರ ಸದಸ್ಯರನ್ನು ಅಪ್ಪಿಕೊಂಡು ಭಾವುಕರಾಗಿ ಕಾಣಿಸಿಕೊಂಡರು, ಅವರೊಂದಿಗೆ ವಾಸ್ತವ್ಯದ ಸಮಯದಲ್ಲಿ ಹೊಸ ಸ್ನೇಹ ಬೆಸೆಯಲ್ಪಟ್ಟಿತು.ನಾನು ಜೂನ್ 25 ರಂದು ಫಾಲ್ಕನ್ -9 ನಲ್ಲಿ ಪ್ರಾರಂಭಿಸಿದಾಗ ಇದೆಲ್ಲವನ್ನೂ ಊಹಿಸಿರಲಿಲ್ಲ. ಇದರಲ್ಲಿ ಭಾಗಿಯಾಗಿರುವ ಜನರಿಂದ ಇದು ಅದ್ಭುತವಾಗಿದೆ ಎಂದು ನಾನು ಭಾವಿಸುತ್ತೇನೆ. ನನ್ನ ಹಿಂದೆ ನಿಂತಿರುವ ಜನರು, ನಮಗೆ ಇದು ನಿಜವಾಗಿಯೂ ವಿಶೇಷವಾಗಿಸಿದ್ದಾರೆ. ಇಲ್ಲಿರುವುದು ನಿಮ್ಮಂತಹ ವೃತ್ತಿಪರರೊಂದಿಗೆ ಕೆಲಸ ಮಾಡುವುದು ಅದ್ಭುತ ಸಂತೋಷವಾಗಿದೆ ಎಂದು ಶುಕ್ಲಾ ಹೇಳಿದರು. ನಾಲ್ವರು ಗಗನಯಾತ್ರಿಗಳು ಕಕ್ಷೆಯಲ್ಲಿ ಅನುಭವಿಸಿದ ತೂಕವಿಲ್ಲದಿರುವಿಕೆಗಿಂತ ಭಿನ್ನವಾಗಿ, ಗುರುತ್ವಾಕರ್ಷಣೆಯ ಪ್ರಭಾವದ ಅಡಿಯಲ್ಲಿ ಭೂಮಿಯ ಮೇಲಿನ ಜೀವನಕ್ಕೆ ಮರಳಲು ಏಳು ದಿನಗಳ ಪುನರ್ವಸತಿಯಲ್ಲಿ ಕಳೆಯುವ ನಿರೀಕ್ಷೆಯಿದೆ. 2027ರಲ್ಲಿ ಕಕ್ಷೆಗೆ ಸೇರಲಿರುವ ಮಾನವ ಬಾಹ್ಯಾಕಾಶ ಹಾರಾಟ ಕಾರ್ಯಕ್ರಮವಾದ ಗಗನ್ಯಾನ್‌ನ ಯೋಜನೆ ಮತ್ತು ಕಾರ್ಯಗತಗೊಳಿಸುವಿಕೆಯಲ್ಲಿ ಬಾಹ್ಯಾಕಾಶ ಸಂಸ್ಥೆಗೆ ಸಹಾಯ ಮಾಡುವ ಅನುಭವವಾದ ಶುಕ್ಲಾ ಅವರು ಐಎಸ್‌ಎಸ್‌ಗೆ ಪ್ರಯಾಣ ಬೆಳೆಸಲು ಸುಮಾರು 550 ಕೋಟಿ ರೂ.ಗಳನ್ನು ಇಸ್ರೋ ಪಾವತಿಸಿದೆ.

# ಪ್ರಾಥಮಿಕ ವರದಿ ತಿರಸ್ಕರಿಸಿದ ಮೃತರ ಸಂಬಂಧಿಕರು

**ಹಮದಾಬಾದ್:** ಗುಜರಾತ್‌ನ ಅಹಮದಾಬಾದ್‌ನಲ್ಲಿ ಜೂನ್ 12ರಂದು ನಡೆದ ಏರ್ ಇಂಡಿಯಾ ವಿಮಾನ ಅಪಘಾತಕ್ಕೆ ಸಂಬಂಧಿಸಿದಂತೆ ಬಂದಿರುವ ಪ್ರಾಥಮಿಕ ವರದಿ ಕುರಿತು ಮೃತರ ಸಂಬಂಧಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರಾಥಮಿಕ ತನಿಖೆಯನ್ನು ಟಾಟಾ ಒಡೆತನದ ವಿಮಾನಯಾನ ಸಂಸ್ಥೆ, ಭಾರತ ಸರ್ಕಾರವನ್ನು ರಕ್ಷಿಸುವ ರೀತಿ ತಯಾರಿಸಲಾಗಿದೆ. ಮೃತ ಪೈಲಟ್ ಮೇಲೆ ತಪ್ಪು ಹೊರಿಸಬೇಡಿ ಅವರು ಬಂದು ಆರೋಪವನ್ನು ಸತ್ಯ ಅಲ್ಲ ಎಂದು ಸಾಬೀತು ಮಾಡಲು ಸಾಧ್ಯವಿಲ್ಲ, ಈ ವರದಿ ತಪ್ಪು ನಾವು ಅದನ್ನು ಒಪ್ಪುವುದಿಲ್ಲ ಎಂದು ಅಮೀನ್ ಸಿದ್ದಿಕಿ ಹೇಳಿದ್ದಾರೆ.

ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ 270 ಮಂದಿ ಪ್ರಾಣ ಕಳೆದುಕೊಂಡಿದ್ದರು. ಓರ್ವ ಮಾತ್ರ ಬದುಕುಳಿದಿದ್ದರು. ಜುಲೈ 13ರಂದು ವಿಮಾನ ಅಪಘಾತಕ್ಕೆ ಸಂಬಂಧಿಸಿದಂತೆ ಅಪಘಾತದ ಪ್ರಾಥಮಿಕ ತನಿಖಾ ವರದಿಯನ್ನು ಎಎಐಬಿ ಬಿಡುಗಡೆ ಮಾಡಿತ್ತು. ವರದಿ ಹೊರಬಂದ ಬಳಿಕ ಅದರಲ್ಲಿ ಅನೇಕ ಪ್ರಶ್ನೆಗಳಿಗೆ ಉತ್ತರ ಸಿಕ್ಕಿತ್ತು. ಆದರೆ ಉತ್ತರಗಳಿಗಿಂತ ಮತ್ತಷ್ಟು ಪ್ರಶ್ನೆಗಳನ್ನು ಹುಟ್ಟುಹಾಕಿತ್ತು. ಆರಂಭಿಕ ವರದಿಯು ಎಂಜಿನ್ ಅಥವಾ ಬೋಯಿಂಗ್ ವ್ಯವಸ್ಥೆಗಳಲ್ಲಿ ಯಾವುದೇ ದೋಷವಿಲ್ಲ ಎಂದು ಹೇಳಿ ಕ್ಲೀನ್ ಚಿಟ್ ನೀಡಿದೆ.

ಅಪಘಾತದಲ್ಲಿ ಸಾವನ್ನಪ್ಪಿದ್ದ ಫೈಜಾನ್ ರಫೀಕ್ ಅವರ ಸಂಬಂಧಿ ಸಮೀರ್ ಮಾತನಾಡಿ, ವಿಮಾನಯಾನ



ಸಂಸ್ಥೆಯು ಕಾಕ್‌ಪಿಟ್ ರೆಕಾರ್ಡಿಂಗ್ ಅನ್ನು ನಮಗೆ ಒದಗಿಸುವವರೆಗೂ ವರದಿ ನಂಬುವುದಿಲ್ಲ ಎಂದು ಹೇಳಿದ್ದಾರೆ. ಅಹಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ಪತನಗೊಳ್ಳುವುದಕ್ಕೂ ಮುನ್ನ ಅದರ ಎರಡೂ ಎಂಜಿನ್‌ಗಳಿಗೆ ಇಂಧನ ಪೂರೈಸುವ ಸ್ವಿಚ್‌ಗಳು ಕಟ್ ಆಫ್ ಸ್ಥಿತಿಯಲ್ಲಿ ಇದ್ದವು. ಇದರಿಂದ ಪೈಲಟ್‌ಗಳು ಗೊಂದಲಕ್ಕೀಡಾಗಿದ್ದರು ಎಂಬ ವಿಷಯ ವಿಮಾನ ಅಪಘಾತ ತನಿಖಾ ಬ್ಯೂರೊ ತನಿಖೆಯಿಂದ ಗೊತ್ತಾಗಿತ್ತು. ಈ ಲೋಪದಿಂದಾಗಿ ವಿಮಾನವು ಟೇಕ್‌ಆಫ್ ಆದ ಕೆಲವೇ ಸೆಕೆಂಡ್‌ಗಳಲ್ಲಿ ಕೆಳಗಿಳಿಯಲು ಆರಂಭಿಸಿ, ದುರಂತ ಸಂಭವಿಸಿತು ಎಂದು ಎಎಐಬಿ ಪ್ರಾಥಮಿಕ ತನಿಖಾ ವರದಿ ತಿಳಿಸಿದೆ. ಬ್ರಿಟನ್‌ನ ವಾಯು ಅಪಘಾತ ತನಿಖಾ ಶಾಖೆ ಮತ್ತು ಅಮೆರಿಕ ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿಯ ನೆರವಿನಿಂದ ಎಎಐಬಿ ಈ ತನಿಖೆಯನ್ನು ನಡೆಸಿದೆ. ದುರಂತದ ಕುರಿತು 15 ಪುಟಗಳ ವರದಿಯನ್ನು ಅದು ಬಿಡುಗಡೆಗೊಳಿಸಿದ್ದು, ಕೆಲವು ಆಘಾತಕಾರಿ ಮಾಹಿತಿಗಳು ತಿಳಿದುಬಂದಿವೆ. ವಿಮಾನ ಟೇಕ್‌ಆಫ್ ಆದ ಮೂರೇ ಸೆಕೆಂಡ್‌ಗಳಲ್ಲಿ ಎರಡೂ ಎಂಜಿನ್‌ಗಳ ಇಂಧನ ಪೂರೈಕೆ ಸ್ವಿಚ್‌ಗಳು, ಇದ್ದಕ್ಕಿದ್ದಂತೆ ರನ್ ಮೋಡ್‌ನಿಂದ ಕಟ್‌ಆಫ್ ಮೋಡ್‌ಗೆ ಬದಲಾದವು. ಇದು ಕೇವಲ ಒಂದು ಸೆಕೆಂಡ್‌ನಲ್ಲಿ ಸಂಭವಿಸಿದೆ. ಎಂಜಿನ್‌ಗಳಿಗೆ ಇಂಧನ ಪೂರೈಕೆ ನಿಂತಿದ್ದರಿಂದ ಅವು ಕಾರ್ಯವನ್ನು ಸ್ಥಗಿತಗೊಳಿಸಿವೆ ಎಂದು ವರದಿಯಲ್ಲಿ ಹೇಳಲಾಗಿದೆ. ಎಂಜಿನ್‌ಗಳನ್ನು ಪುನಃ ಆನ್ ಮಾಡಲು ಪೈಲಟ್‌ಗಳು ಪ್ರಯತ್ನಿಸಿದ್ದಾರೆ. ಆಗ ಎಂಜಿನ್ 1ರಲ್ಲಿ ಭಾಗಶಃ ಚೇತರಿಕೆ ಕಂಡುಬಂದಿದೆ. ಆದರೆ ಎಂಜಿನ್ 2ರಲ್ಲಿ ಯಾವುದೇ ಚೇತರಿಕೆ ಕಂಡುಬಂದಿಲ್ಲ. ಇದರಿಂದ ಈ ಪ್ರಯತ್ನ ವಿಫಲವಾಗಿದೆ. ಆದರೆ ಈ ವರದಿಯನ್ನು ಮೃತರ ಸಂಬಂಧಿಕರು ನಿರಾಕರಿಸಿದ್ದಾರೆ.

**ಇವರು ತಮ್ಮ ಸಂಬಂಧಿ ಅಕೀಲ್ ಕುಟುಂಬವನ್ನು ಅಪಘಾತದಲ್ಲಿ ಕಳೆದುಕೊಂಡಿದ್ದರು. ಏರ್ ಇಂಡಿಯಾ ಪರಿಹಾರ ಪ್ರಸ್ತಾಪವನ್ನು ನಾನು ತಿರಸ್ಕರಿಸಿದ್ದೇನೆ, ನಮ್ಮ ಕುಟುಂಬ ಸದಸ್ಯರನ್ನು ಕೊಂದಿದ್ದಕ್ಕಾಗಿ ವಿಮಾನಯಾನ ಸಂಸ್ಥೆಯನ್ನು ನ್ಯಾಯಾಲಯದ ಅಂಗಳಕ್ಕೆ ಕರೆದೊಯ್ಯುವುದಾಗಿ ದಿ ಟೆಲಿಗ್ರಾಫ್‌ಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.**

## ಸಣ್ಣ ವಿಮಾನ ಪತನ

**ಲಂಡನ್:** ಇಲ್ಲಿಂದ 72 ಕಿ.ಮೀ ದೂರದಲ್ಲಿರುವ ಸೌತ್‌ಎಂಡ್ ವಿಮಾನ ನಿಲ್ದಾಣದಲ್ಲಿ ಸಣ್ಣ ವಿಮಾನವೊಂದು ಭಾನುವಾರ ಅಪಘಾತಕ್ಕೀಡಾಗಿದೆ. ವಿಮಾನ ಎಲ್ಲಿಗೆ ಹೊರಟಿತ್ತು, ಅದರಲ್ಲಿ ಎಷ್ಟು ಪ್ರಯಾಣಿಕರು, ಸಿಬ್ಬಂದಿ ಇದ್ದರು ಎಂಬುದರ ವಿವರಗಳು ತಕ್ಷಣಕ್ಕೆ ತಿಳಿದುಬಂದಿಲ್ಲ. ಅಪಘಾತ ಸಂಭವಿಸಿದ ಸ್ಥಳಕ್ಕೆ ತುರ್ತು ಸೇವಾ ತಂಡಗಳು ಧಾವಿಸಿ, ರಕ್ಷಣಾ ಕಾರ್ಯದಲ್ಲಿ ನಿರತವಾಗಿದ್ದವು. ಅಪಘಾತಕ್ಕೀಡಾದ ವಿಮಾನವು ಸುಮಾರು 12 ಮೀಟರ್ (39 ಅಡಿ) ಉದ್ದವಿತ್ತು ಎಂದು ಮೂಲಗಳು ತಿಳಿಸಿವೆ. ವಿಮಾನ ಪತನವಾದ ಬಳಿಕ ಭಾರಿ ಪ್ರಮಾಣದಲ್ಲಿ ಕಪ್ಪು ಹೊಗೆ ಆವರಿಸಿತ್ತು. ಈ ಕುರಿತ ವಿಡಿಯೊ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿದೆ. ಪ್ರತ್ಯಕ್ಷದರ್ಶಿ ಜಾನ್ ಜಾನ್ಸನ್ ಅವರ ಪ್ರಕಾರ, ವಿಮಾನವು ಮೊದಲು ತಲೆಕೆಳಗಾಗಿ ನೆಲಕ್ಕೆ ಅಪ್ಪಳಿಸಿತು. ಬಳಿಕ ಅಲ್ಲಿಂದ ದೊಡ್ಡ ಬೆಂಕಿಯ ಉಂಡೆ ಕಂಡುಬಂದಿತು ಎಂದಿದ್ದಾರೆ.



ವಿಮಾನವು ಟೇಕ್‌ಆಫ್ ಆದ ಮೂರರಿಂದ ನಾಲ್ಕು ಸೆಕೆಂಡುಗಳಲ್ಲಿ ಎಡ ಭಾಗಕ್ಕೆ ಬಾಗಿತು. ನಂತರ ಕೆಲ ಸೆಕೆಂಡುಗಳಲ್ಲಿಯೇ ತಲೆಕೆಳಗಾಗಿ ನೆಲಕ್ಕೆ ಅಪ್ಪಳಿಸಿತು ಎಂದು ಅವರು ವಿವರಿಸಿದ್ದಾರೆ.

## ಮಳೆ ಸಂಬಂಧಿತ ಅವಘಡಗಳಲ್ಲಿ 14 ಜನರ ಸಾವು

**ಲಖನೌ:** ಉತ್ತರ ಪ್ರದೇಶದಾದ್ಯಂತ ಮಳೆ ಸಂಬಂಧಿತ ಅವಘಡಗಳಲ್ಲಿ 24 ಗಂಟೆಗಳಲ್ಲಿ ಕನಿಷ್ಠ 14 ಜನರು ಸಾವಿಗೀಡಾಗಿದ್ದಾರೆ ಎಂದು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ರಾತ್ರಿ 8 ಗಂಟೆಯಿಂದ ಭಾನುವಾರ ರಾತ್ರಿ 8 ಗಂಟೆಯವರೆಗೆ ಸಿಡಿಲಿನ ಹೊಡೆತ, ನೀರಿನಲ್ಲಿ ಮುಳುಗಿ ಮತ್ತು ಹಾವು ಕಡಿತದಿಂದ ಸಾವಿಗೀಡಾದವರ ಸಂಖ್ಯೆ 14 ಎಂದು ಅದು ಹೇಳಿದೆ. ಗೋರಖ್‌ಪುರದಲ್ಲಿ ಸಿಡಿಲು ಬಡಿದು ಇಬ್ಬರು ಸಾವಿಗೀಡಾದರೆ, ಚೌನ್‌ಪುರ, ರಾಯ್‌ಬರೇಲಿ, ಚಂದೌಲಿ, ಕುಶಿನಗರ, ಕಾನ್ಪುರದ ದೇಹತ್‌ನಲ್ಲಿ ಇದೇ ರೀತಿಯ ಘಟನೆಗಳಲ್ಲಿ ತಲಾ ಒಬ್ಬರು ಮೃತಪಟ್ಟಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



ಚಿತ್ರಕೂಟದಲ್ಲಿ ಇಬ್ಬರು, ಬಂದಾದಲ್ಲಿ ಒಬ್ಬರು ನೀರಿನಲ್ಲಿ ಮುಳುಗಿ, ಘಾಜಿಪುರದಲ್ಲಿ ಇಬ್ಬರು ಮತ್ತು ಚಂದೌಲಿ ಹಾಗೂ ಪ್ರತಾಪ್‌ಗಢದಲ್ಲಿ ತಲಾ ಒಬ್ಬರು ಹಾವು ಕಡಿತದಿಂದ ಅಸುನೀಗಿದ್ದಾರೆ ಎಂದು ಅದು ಹೇಳಿದೆ. ಸಂತ್ರಸ್ತರ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ತೈವಾನ್ ಜಲಸಂಧಿಯಲ್ಲಿ ಚೀನಾದ ನೌಕಾಸೇನೆ ಉಪಸ್ಥಿತಿ ಪತ್ತೆ

### ತೈವಾನ್ ಜಲಸಂಧಿಗೆ ವಕ್ಕರಿಸಿದ ಚೀನಾದ ಯುದ್ಧನೌಕೆಗಳು; ಮತ್ತೇನು ಅನಾಹುತ ಮಾಡುತ್ತೋ ಡ್ರ್ಯಾಗನ್?

**ತೈಪೆ:** ತೈವಾನ್‌ನ ರಾಷ್ಟ್ರೀಯ ರಕ್ಷಣಾ ಸಚಿವಾಲಯವು, ತೈವಾನ್ ಜಲಸಂಧಿಯಲ್ಲಿ ಚೀನಾದ ಯುದ್ಧ ಹಡಗುಗಳು ಮತ್ತು ಯುದ್ಧ ವಿಮಾನಗಳ ಉಪಸ್ಥಿತಿಯನ್ನು ಗುರುತಿಸಿರುವುದಾಗಿ ಹೇಳಿದೆ. ಬೆಳಿಗ್ಗೆ 6 ಗಂಟೆಯವರೆಗೆ ತೈವಾನ್‌ನ ಸುತ್ತಲೂ ಕಾರ್ಯನಿರ್ವಹಿಸುತ್ತಿದ್ದ 17 ಚೀನೀ ಮಿಲಿಟರಿ ವಿಮಾನಗಳು, 8 ನೌಕಾ ಹಡಗುಗಳು ಮತ್ತು ಒಂದು ಅಧಿಕೃತ ಯುದ್ಧ ಹಡಗನ್ನು ಪತ್ತೆಹಚ್ಚಲಾಗಿದೆ ಎಂದು ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯ ಸ್ಪಷ್ಟಪಡಿಸಿದೆ. 17 ವಿಮಾನ ಹಾರಾಟಗಳಲ್ಲಿ 7 ವಿಮಾನ ಹಾರಾಟಗಳು ಮಧ್ಯದ ರೇಖೆಯನ್ನು ದಾಟಿ, ತೈವಾನ್‌ನ ಉತ್ತರ, ನೈಋತ್ಯ ಮತ್ತು ಪೂರ್ವ ವಾಯು ರಕ್ಷಣಾ ಗುರುತಿನ ವಲಯವನ್ನು ಪ್ರವೇಶಿಸಿವೆ ಎಂದೂ ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯ ಮಾಹಿತಿ ನೀಡಿದೆ.

ಚೀನಾದ ಕ್ರಮಕ್ಕೆ ಪ್ರತಿಕ್ರಿಯೆಯಾಗಿ, ತೈವಾನ್‌ನ ಸಶಸ್ತ್ರ ಪಡೆಗಳು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ವಿಮಾನಗಳು, ನೌಕಾ ಹಡಗುಗಳು, ಕರಾವಳಿ ಕ್ಷಿಪಣಿ ವ್ಯವಸ್ಥೆಗಳನ್ನು ನಿಯೋಜಿಸಿವೆ. ತೈವಾನ್ ದ್ವೀಪರಾಷ್ಟ್ರವನ್ನು ಚೀನಾ ಸುತ್ತುವರೆದಿದೆ ಎಂಬ ಸುದ್ದಿ ಇದೀಗ ಜಾಗತಿಕ ಮಟ್ಟದಲ್ಲಿ ಸದ್ದು ಮಾಡುತ್ತಿದೆ. ಸೋಮವಾರ ಬೆಳಿಗ್ಗೆ 6 ಗಂಟೆಯವರೆಗೆ 17 ಪಿಎಲ್‌ಎ ವಿಮಾನಗಳು, 8



**ನ್ಯೂನ್ಯತೆಗಳ ಮೇಲೆ ಬೆಳಕು**

ಪಿಎಲ್‌ಎಎನ್ ಹಡಗುಗಳು, ತೈವಾನ್‌ನ ಸುತ್ತಲೂ ಕಾರ್ಯನಿರ್ವಹಿಸುತ್ತಿರುವ 1 ಅಧಿಕೃತ ಯುದ್ಧ ಹಡಗನ್ನು ಪತ್ತೆಹಚ್ಚಲಾಯಿತು. 17 ವಿಮಾನ ಹಾರಾಟಗಳಲ್ಲಿ 7 ವಿಮಾನ ಹಾರಾಟಗಳು ಮಧ್ಯದ ರೇಖೆಯನ್ನು ದಾಟಿ ತೈವಾನ್‌ನ ಉತ್ತರ, ನೈಋತ್ಯ ಮತ್ತು ಪೂರ್ವ ADIZ ಅನ್ನು ಪ್ರವೇಶಿಸಿದವು. ನಾವು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಿದ್ದೇವೆ ಮತ್ತು ಪ್ರತಿಕ್ರಿಯಿಸಿದ್ದೇವೆ ಎಂದು ತೈವಾನ್‌ನ MND ತನ್ನ ಅಧಿಕೃತ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದೆ. ಪಕ್ಷದ ಅಧ್ಯಕ್ಷರಾಗಿ ಡಿಪಿಪಿಯ ರಾಷ್ಟ್ರೀಯ ಕಾಂಗ್ರೆಸ್‌ನ್ನು ಉದ್ದೇಶಿಸಿ ಮಾತನಾಡಿದ ಲೈ, ವಿರೋಧ ಪಕ್ಷದ ನಿಯಂತ್ರಿತ ಶಾಸಕಾಂಗವು ಸರಿಯಾದ ಕಾರ್ಯವಿಧಾನಗಳನ್ನು ಬೈಪಾಸ್ ಮಾಡಿದೆ. ಸಂವಿಧಾನಕ್ಕೆ ವಿರುದ್ಧವಾದ ಮಸೂದೆಗಳನ್ನು ಅಂಗೀಕರಿಸಿದೆ ಮತ್ತು ಕೇಂದ್ರ ಸರ್ಕಾರದ ಬಜೆಟ್‌ಗಳನ್ನು ತೀವ್ರವಾಗಿ ಕಡಿತಗೊಳಿಸುವ ಮೂಲಕ, ಸರ್ಕಾರಿ ಕಾರ್ಯಾಚರಣೆಗಳನ್ನು ದುರ್ಬಲಗೊಳಿಸಿದೆ ಎಂದು ತೈವಾನ್‌ನ ಆಂತರಿಕ ರಾಜಕೀಯದಲ್ಲಿನ ನ್ಯೂನ್ಯತೆಗಳ ಮೇಲೆ ಬೆಳಕು ಚೆಲ್ಲಿದ್ದರು. ತೈವಾನ್ ಮಿಲಿಟರಿ ಶಕ್ತಿ ಹೆಚ್ಚಳಕ್ಕೆ ಲೈ ಕರೆ ಕೊಟ್ಟಿದ್ದಾರೆ. ಉತ್ತಮ ಪ್ರಜಾಪ್ರಭುತ್ವ, ಉತ್ತಮ ತೈವಾನ್ ಎಂಬ ಧ್ಯೇಯವಾಕ್ಯದಡಿಯಲ್ಲಿ ನಡೆದ ಈ ಸಮ್ಮೇಳನದಲ್ಲಿ, ತೈವಾನ್‌ನ ಸಾರ್ವಭೌಮತ್ವ, ಪ್ರಜಾಪ್ರಭುತ್ವವನ್ನು ರಕ್ಷಿಸಲು ಡೆಮಾಕ್ರಟಿಕ್ ಪ್ರೋಗ್ರೆಸ್ಸಿವ್ ಪಾರ್ಟಿ ಸಾರ್ವಜನಿಕರೊಂದಿಗೆ ಒಗ್ಗಟ್ಟಿನಿಂದ ನಿಲ್ಲಬೇಕು ಎಂದು ಲೈ ಚಿಂಗ್-ಟೆ ಕರೆ ನೀಡಿದ್ದಾರೆ.

**ತೈವಾನ್ ಜಲಸಂಧಿಯಲ್ಲಿ ಹೆಚ್ಚಿದ ಆತಂಕ**

**ಇನ್ನು ಚೀನೀ ನೌಕಾಸೇನೆಯ ಉಪಸ್ಥಿತಿ, ತೈವಾನ್ ಜಲಸಂಧಿಯಲ್ಲಿ ಆತಂಕವನ್ನು ಹೆಚ್ಚಿಸಿದೆ. ಚೀನಾದ ಯುದ್ಧ ವಿಮಾನಗಳು ಸಾಗರ ಗಡಿಗಳನ್ನು ದಾಟಿ ಹಾರಾಟ ನಡೆಸುತ್ತಿರುವುದರಿಂದ, ಯಾವ ಸಮಯದಲ್ಲಾದರೂ ಚೀನಾದಿಂದ ಆಕ್ರಮಣ ನಡೆಯಬಹುದು ಎಂಬ ವಾತಾವರಣವನ್ನು ಸೃಷ್ಟಿಸಿದೆ. ಜಾಗತಿಕ ಜಲಸಂಧಿ ಪಾಲಿಟಿಕ್ಸ್, ಎಲ್ಲಡೆಯೂ ಯುದ್ಧದ ಕಾರ್ಮೋಡ ಕವಿಯುವಂತೆ ಮಾಡಿದೆ. ಇತ್ತೀಚಿಗೆ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು, ತೈವಾನ್ ವಶಪಡಿಸಿಕೊಳ್ಳುವ ಚೀನಾದ ನಿರ್ಧಾರಕ್ಕೆ ಅಡ್ಡಗಾಲು ಹಾಕಲು ಜಗತ್ತಿನ ಯಾವ ಶಕ್ತಿಯಿಂದಲೂ ಸಾಧ್ಯವಿಲ್ಲ ಎಂದು ಗುಡುಗಿದ್ದರು. ಇದೀಗ ಚೀನಾದ ಯುದ್ಧನೌಕೆ ಮತ್ತು ಯುದ್ಧ ವಿಮಾನಗಳು ತೈವಾನ್ ಜಲಸಂಧಿಯಲ್ಲಿ ಗರ್ಜಿಸುತ್ತಿದ್ದು, ಈ ಪ್ರದೇಶದಲ್ಲಿ ಯುದ್ಧ ಆತಂಕವನ್ನು ದ್ವಿಗುಣಗೊಳಿಸಿದೆ.**

**ಚೀನಿ ಬೆದರಿಕೆಯನ್ನು ಮೊದಲೇ ಊಹಿಸಿದ್ದ ತೈವಾನ್ ಅಧ್ಯಕ್ಷ**

**ತೈವಾನ್ ಅಧ್ಯಕ್ಷ ಲೈ ಚಿಂಗ್-ಟೆ, ಅವರು ಇತ್ತೀಚಿಗೆ, ಚೀನೀ ರಾಷ್ಟ್ರದ ಪುನರುಜ್ಜೀವನ ನೀತಿಯ ಭಾಗವಾಗಿ ಮತ್ತು ಪಶ್ಚಿಮ ಪೆಸಿಫಿಕ್‌ನಲ್ಲಿ ಪ್ರಾಬಲ್ಯವನ್ನು ವಿಸ್ತರಿಸುವ ಉದ್ದೇಶದಿಂದ, ತೈವಾನ್ ಮೇಲಿನ ಚೀನಾದ ಮಿಲಿಟರಿ ಬೆದರಿಕೆಯನ್ನು ಎತ್ತಿ ತೋರಿಸಿದರು. ತೈವಾನ್‌ನ ಸರ್ಕಾರಿ ನಾಯಕತ್ವದಲ್ಲಿನ ಬದಲಾವಣೆಗಳನ್ನು ಲೆಕ್ಕಿಸದೆ ಈ ಬೆದರಿಕೆ ಮುಂದುವರಿಯುತ್ತದೆ ಎಂದು ಲೈ ಹೇಳಿದ್ದರು.**

## ಮಿನಿ ನ್ಯೂಸ್

### ಕೆಂಟುಕಿ ಚರ್ಚ್‌ನಲ್ಲಿ ಗುಂಡಿನ ದಾಳಿ ಮಹಿಳೆಯರಿಬ್ಬರ ಸಾವು

**ವಾಷಿಗ್ಟಂನ್:** ಅಮೆರಿಕದ ಕೆಂಟುಕಿ ಚರ್ಚ್‌ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ಮಹಿಳೆಯರು ಸಾವನ್ನಪ್ಪಿರುವ ಘಟನೆ ನಡೆದಿದ್ದು ಹಲವು ಮಂದಿ ಗಾಯಗೊಂಡಿರುವ ಘಟನೆ ನಡೆದಿದೆ. ಪ್ರಾಥಮಿಕ ಮಾಹಿತಿ ಪ್ರಕಾರ ಶಂಕಿತನಿಗೆ ಚರ್ಚ್‌ಗೆ ಸಂಬಂಧಿಸಿದ ವ್ಯಕ್ತಿಗಳೊಂದಿಗೆ ಸಂಬಂಧವಿರಬಹುದು ಎಂದು ಶಂಕೆ ವ್ಯಕ್ತಪಡಿಸಲಾಗಿದೆ. ಆರೋಪಿಯನ್ನು ಗುಂಡಿಟ್ಟು ಹತ್ಯೆ ಮಾಡಲಾಗಿದೆ. ಮತ್ತೊಂದು ಪ್ರಕರಣದಲ್ಲಿ ನಗರದ ವಿಮಾನ ನಿಲ್ದಾಣದ ಬಳಿ ಒಬ್ಬ ವ್ಯಕ್ತಿ ರಾಜ್ಯ ಸೈನಿಕರ ಮೇಲೆ ಗುಂಡು ಹಾರಿಸಿದ ನಂತರ ಕೆಂಟುಕಿಯ ಲೆಕ್ಸಿಂಗ್ಟನ್‌ನಲ್ಲಿರುವ ರಿಚ್ಮಂಡ್ ರಸ್ತೆ ಬ್ಯಾಪ್ಟಿಸ್ಟ್ ಚರ್ಚ್‌ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ಮಹಿಳೆಯರು ಸಾವನ್ನಪ್ಪಿದ್ದಾರೆ, ಹಲವಾರು ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಎರಡೂ ಗುಂಡಿನ ದಾಳಿಯಲ್ಲಿ ಆರೋಪಿಗಳು ಸಾವನ್ನಪ್ಪಿದ್ದಾರೆ ಎಂದು ಹೇಳಲಾಗಿದೆ. ನಗರದ ವಿಮಾನ ನಿಲ್ದಾಣದ ಬಳಿ ಸಂಚಾರ ನಿಲುಗಡೆಯ ಸಮಯದಲ್ಲಿ ರಾಜ್ಯ ಸೈನಿಕರ ಮೇಲೆ ಗುಂಡು ಹಾರಿಸಿದ ನಂತರ, ಶಂಕಿತ ವಾಹನವನ್ನು ಕಾರನ್ನು ಕದ್ದಾಲಿಸಿ ರಿಚ್ಮಂಡ್ ರಸ್ತೆ ಬ್ಯಾಪ್ಟಿಸ್ಟ್ ಚರ್ಚ್‌ಗೆ ಓಡಿಸಿದ್ದಾನೆ ಎಂದು ಲೆಕ್ಸಿಂಗ್ಟನ್ ಪೊಲೀಸ್ ಮುಖ್ಯಸ್ಥ ಲಾರೆನ್ಸ್ ವೆದರ್ಸ್ ದೃಢಪಡಿಸಿದ್ದಾರೆ. ಚರ್ಚ್‌ನಲ್ಲಿ ಇತರ ಇಬ್ಬರು ಜನರು ಗಾಯಗೊಂಡು ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯಲಾಯಿತು ಎಂದು ಪೊಲೀಸ್ ಮುಖ್ಯಸ್ಥರು ತಿಳಿಸಿದ್ದಾರೆ. ಅದರಲ್ಲಿ ಓರ್ವ ಗಂಭೀರವಾಗಿ ಗಾಯಗೊಂಡಿದ್ದು ಮತ್ತೊಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎಂದು ಹೇಳಲಾಗಿದೆ. ಲೈಸೆನ್ಸ್ ಪ್ಲೇಟ್ ರೀಡರ್ ಅಲರ್ಟ್ ಪಡೆದ ನಂತರ ರಾಜ್ಯ ಸೈನಿಕರೊಬ್ಬರು ಫಯೆಟ್ಟೆ ಕೌಂಟಿಯಲ್ಲಿ ಸಂಚಾರ ನಿಲುಗಡೆ ನಡೆಸಿದಾಗ ಗುಂಡಿನ ಚಕಮಕಿ ನಡೆದಿದೆ ಎಂದು ಹೇಳಲಾಗಿದೆ. ಇತ್ತೀಚಿನ ದಿನಗಳಲ್ಲಿ ಅಮೆರಿಕಾದಲ್ಲಿ ಗುಂಡಿನ ದಾಳಿ ಹೆಚ್ಚಾಗಿದ್ದು ಆತಂಕ ಮನೆ ಮಾಡಿದೆ.

### ನಕಲಿ ಬಾಬಾಗಳ ಬಂಧನ

**ಡೆಹ್ರಾಡೂನ್:** ಉತ್ತರಾಖಂಡದಲ್ಲಿ ನಕಲಿ ಸಾಧುಗಳು, ಬಾಬಾಗಳ ವಿರುದ್ಧ ಆಪರೇಷನ್ ಕಲಾನೇಮಿ ನಡೆಸಲಾಗುತ್ತಿದೆ. ಬದರಿನಾಥ ಧಾಮದಿಂದ ಡೆಹ್ರಾಡೂನ್‌ವರೆಗೆ, ಪೊಲೀಸರು ಅಂತಹ ಬಾಬಾಗಳ ವಿರುದ್ಧ ತ್ವರಿತ ಕ್ರಮ ಕೈಗೊಳ್ಳುತ್ತಿದ್ದಾರೆ. ಇಲ್ಲಿಯವರೆಗೆ 200 ಕ್ಕೂ ಹೆಚ್ಚು ನಕಲಿ ಬಾಬಾಗಳನ್ನು ಬಂಧಿಸಲಾಗಿದೆ ಎಂದು ಸಿಎಂ ಪುಷ್ಕರ್ ಸಿಂಗ್ ಧಾಮಿ ಹೇಳಿದ್ದಾರೆ. ಇದರಲ್ಲಿ ಬಾಂಗ್ಲಾದೇಶ, ಇತರ ರಾಜ್ಯಗಳ ಜನರು ಸಹ ಸೇರಿದ್ದಾರೆ. ಡೆಹ್ರಾಡೂನ್‌ನಲ್ಲಿ, ಆಪರೇಷನ್ ಕಲಾನೇಮಿ ಅಡಿಯಲ್ಲಿ ಮೂರು ದಿನಗಳಲ್ಲಿ 82 ನಕಲಿ ಬಾಬಾಗಳನ್ನು ಬಂಧಿಸಲಾಗಿದೆ. ಚಮೋಲಿಯ ಬದರಿನಾಥ್ ಪೊಲೀಸರು ಇದುವರೆಗೆ 60ಕ್ಕೂ ಹೆಚ್ಚು ವಂಚಕರನ್ನು ಬಂಧಿಸಿದ್ದಾರೆ. ಅಭಿಯಾನ ಕಲಾನೇಮಿ ಅಡಿಯಲ್ಲಿ, ಪೊಲೀಸರು ಬದರಿನಾಥ್ ಧಾಮದಲ್ಲಿ ಸಾಧುಗಳ ತನಿಖೆ ಮತ್ತು ಪರಿಶೀಲನೆ ಕಾರ್ಯವನ್ನು ಪ್ರಾರಂಭಿಸಿದ್ದಾರೆ. ಅನುಮಾನಾಸ್ಪದ ಸಾಧುಗಳನ್ನು ಗುರುತಿಸಲಾಗುತ್ತಿದೆ, ಅವರ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಇದರೊಂದಿಗೆ, ನಕಲಿ ಬಾಬಾಗಳ ಮೇಲೆ ಕಟ್ಟುನಿಟ್ಟಿನ ಕಣ್ಗಾವಲು ಇಡಲಾಗಿದೆ.

ರಾಜ್ಯದಲ್ಲಿ ಸಾಧು ವೇಷದಲ್ಲಿ ಸೋಗು ಹಾಕುವವರ ನಿಜವಾದ ಗುರುತನ್ನು ಬಹಿರಂಗಪಡಿಸಲು ಆಪರೇಷನ್ ಕಲಾನೇಮಿ ನಡೆಸಲಾಗುತ್ತಿದೆ ಎಂದು ಸಿಎಂ ಪುಷ್ಕರ್ ಸಿಂಗ್ ಧಾಮಿ ತಿಳಿಸಿದ್ದಾರೆ .ಇಲ್ಲಿಯವರೆಗೆ, ಕೆಲವು ಬಾಂಗ್ಲಾದೇಶಿ ನುಸುಳುಕೋರರು ಸೇರಿದಂತೆ 200 ಕ್ಕೂ ಹೆಚ್ಚು ಶಂಕಿತರನ್ನು ಬಂಧಿಸಲಾಗಿದೆ. ನಕಲಿ ಬಾಬಾ ಅಥವಾ ಸಾಧುಗಳ ಬಗ್ಗೆ ಸಾರ್ವಜನಿಕರು ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕೆಂದು ಮುಖ್ಯಮಂತ್ರಿ ಮನವಿ ಮಾಡಿದ್ದಾರೆ. ಅಭಿಯಾನವನ್ನು ಯಶಸ್ವಿಗೊಳಿಸಲು, ಜನರ ನಂಬಿಕೆಯೊಂದಿಗೆ ಆಟವಾಡುವ ನಕಲಿ ಬಾಬಾಗಳ ವಿರುದ್ಧ ಪರಿಣಾಮಕಾರಿ ಕ್ರಮ ಕೈಗೊಳ್ಳಲು ಠಾಣೆಯ ಉಸ್ತುವಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಡೆಹ್ರಾಡೂನ್ ಎಸ್‌ಎಸ್‌ಪಿ ಅಜಯ್ ಸಿಂಗ್ ಹೇಳಿದ್ದಾರೆ.

### ನಿಮಿಷಾ ಬಿಡುಗಡೆಗೆ ಪಿಣರಾಯಿ ಪತ್ರ

**ತಿರುವನಂತಪುರಂ:** ಯೆಮೆನ್‌ನಲ್ಲಿ ಗಲ್ಲು ಶಿಕ್ಷೆಗೆ ಗುರಿಯಾಗಿರುವ ಕೇರಳದ ನರ್ಸ್ ನಿಮಿಷಾ ಪ್ರಿಯಾ ಅವರ ಬಿಡುಗಡೆಗೆ ತಕ್ಷಣ ಮಧ್ಯಪ್ರವೇಶಿಸುವಂತೆ ಕೋರಿ ಕೇರಳ ಸಿಎಂ ಪಿಣರಾಯಿ ವಿಜಯನ್ ಪ್ರಧಾನ ಮಂತ್ರಿ, ನರೇಂದ್ರ ಮೋದಿ, ವಿದೇಶಾಂಗ ಸಚಿವ ಜೈಶಂಕರ್ ಅವರಿಗೆ ಪತ್ರ ಬರೆದಿದ್ದಾರೆ. ನಿಮಿಷಾ ಪ್ರಿಯಾ ಅವರು ತಮ್ಮ ವ್ಯವಹಾರ ಪಾಲುದಾರರಾದ ತಲಾಲ್ ಅಬ್ದೋ ಮಹ್ದಿ ಅವರ ಕೊಲೆಗೆ ಸಂಬಂಧಿಸಿ ಯೆಮೆನ್‌ನಲ್ಲಿ ಮರಣದಂಡನೆ ಶಿಕ್ಷೆ ಎದುರಿಸುತ್ತಿದ್ದಾರೆ. 2017ರ ಜುಲೈನಲ್ಲಿ ನಿಮಿಷಾ ಪ್ರಿಯಾಳನ್ನು ಬಂಧಿಸಲಾಗಿತ್ತು. 2020ರಲ್ಲಿ ಯೆಮೆನ್ ನ್ಯಾಯಾಲಯ ಆಕೆಗೆ ಗಲ್ಲು ಶಿಕ್ಷೆ ವಿಧಿಸಿತ್ತು. ಜುಲೈ 16ರಂದು ನಿಮಿಷಾ ಪ್ರಿಯಾಳನ್ನು ಗಲ್ಲಿಗೇರಿಸಲು ನಿರ್ಧರಿಸಲಾಗಿದೆ ಎಂದು ಯೆಮೆನ್‌ನ ಜೈಲು ಅಧಿಕಾರಿಗಳು ತಿಳಿಸಿದ್ದರು. ನಿಮಿಷಾ ಪ್ರಿಯಾ ಅವರನ್ನು ರಕ್ಷಿಸಲು ಮಧ್ಯಪ್ರವೇಶಿಸುವಂತೆ ಕೇಂದ್ರ ಸರಕಾರಕ್ಕೆ ನಿರ್ದೇಶಿಸಬೇಕೆಂದು ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಸೋಮವಾರ ಸುಪ್ರೀಂ ಕೋರ್ಟ್‌ನಲ್ಲಿ ನಡೆಯಲಿದೆ.

### ಮಿನಿ ಟ್ರಕ್ ಮೇಲೆ ಉರುಳಿಬಿದ್ದ ಮಾವು ತುಂಬಿದ ಲಾರಿ, 9 ಜನ ಸಾವು

**ಅಮರಾವತಿ:** ಮಾವು ತುಂಬಿದ ಲಾರಿಯೊಂದು ಮಿನಿ ಟ್ರಕ್ ಮೇಲೆ ಉರುಳಿಬಿದ್ದ ಪರಿಣಾಮ ಒಂಬತ್ತು ಮಂದಿ ಸಾವನ್ನಪ್ಪಿದ್ದು, ಹನ್ನೊಂದು ಜನರು ಗಾಯಗೊಂಡಿರು ಘಟನೆ ಅಂಧ್ರದ ಅನ್ನಮಯ್ಯ ಜಿಲ್ಲೆಯ ಪುಲ್ಲಂಪೇಟೆ ಮಂಡಲದ ರೆಡ್ಡಿಚೆರುವು ಬಳಿ ನಡೆದಿದೆ. ತಡರಾತ್ರಿ ಈ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಲಾರಿಯ ಹಿಂದಿನ ಚಕ್ರ ಮರಳಿನಲ್ಲಿ ಸಿಲುಕಿಕೊಂಡು ಸಮತೋಲನ ಕಳೆದುಕೊಂಡು ಮಿನಿ ಟ್ರಕ್ ಮೇಲೆ ಬಿದ್ದಾಗ ಇದು ದುರಂತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಾವು ಲಾರಿಯ ಮೇಲೆ ಸುಮಾರು 20 ಕ್ಕೂ ಹೆಚ್ಚು ಕಾರ್ಮಿಕರು ಪ್ರಯಾಣಿಸುತ್ತಿದ್ದರು ಎಂದು ತಿಳಿದು ಬಂದಿದೆ. ಸ್ಥಳಕ್ಕೆ ದಾವಿಸಿದ ಪೊಲೀಸರು ಗಾಯಾಳುಗಳನ್ನು ಆಂಬುಲೆನ್ ಮೂಲಕ ರಾಜಂಪೇಟೆಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತದಿಂದ ಬದುಕುಳಿದ ಟ್ರಕ್ ಚಾಲಕನ ಮಾಹಿತಿಯಂತೆ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಕಾರಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಪ್ರಯತ್ನಿಸುವಾಗ ನಿಯಂತ್ರಣ ತಪ್ಪಿದೆ ಎಂದು ಪೊಲೀಸರಿಗೆ ತಿಳಿಸಿದ್ದಾರೆ. ಅನ್ನಮಯ್ಯ ಜಿಲ್ಲೆಯ ರೈಲೇ ಕೊಡೂರು ಮಂಡಲ ಮತ್ತು ತಿರುಪತಿ ಜಿಲ್ಲೆಯ ವೆಂಕಟಗಿರಿ ಮಂಡಲದ 21 ದಿನಗೂಲಿ ಕಾರ್ಮಿಕರ ಗುಂಪು ರಾಜಂಪೇಟೆ ಮಂಡಲದ ಎಸುಕಪಲ್ಲಿ, ಸುತ್ತಮುತ್ತಲಿನ ಹಳ್ಳಿಗಳ ತೋಟಗಳಿಂದ ಮಾವು ಕೀಳಲು ಹೋಗಿದ್ದರು. ಮಾವಿನ ಹೊರೆಯೊಂದಿಗೆ, ಟ್ರಕ್ ರೈಲ್ವೆ ಕೊಡೂರು ಮಾರುಕಟ್ಟೆಗೆ ಹೋಗುತ್ತಿತ್ತು, ಮತ್ತು ಕಾರ್ಮಿಕರು ಮಾವಿನ ಹೊರೆಯ ಮೇಲೆ ಕುಳಿತಿದ್ದರು. ಕಾರ್ಮಿಕರು 30-40 ಟನ್ ಮಾವಿನ ಹಣ್ಣುಗಳ ಅಡಿಯಲ್ಲಿ ಸಿಲುಕಿಕೊಂಡರು. ಪೊಲೀಸರು ಸ್ಥಳಕ್ಕೆ ಧಾವಿಸಿ ಜೆಸಿಬಿ ಸಹಾಯದಿಂದ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದರು.

**ಹೌದು. ಬಹುಭಾಷಾ ನಟಿಯಾಗಿರುವ ಸರೋಜಾದೇವಿ ಅವರು ಇಂದು ವಿಧಿವಶರಾಗಿದ್ದಾರೆ. 200 ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದ ಇವರು ಕನ್ನಡ ಚಿತ್ರರಂಗದಲ್ಲಿ ಅಭಿನಯ ಸರಸ್ವತಿ ಎಂದೇ ಹೆಸರು ಪಡೆದಿದ್ದರು. ಸರೋಜಾದೇವಿ ಅವರ ಬಗ್ಗೆ ಕರ್ನಾಟಕ ಸರ್ಕಾರದ ವಾರ್ತಾ ಇಲಾಖೆ ಸಾಕ್ಷ್ಯಚಿತ್ರವನ್ನು ತಯಾರಿಸಿತ್ತು. ಈ ಸಾಕ್ಷ್ಯಚಿತ್ರದಲ್ಲಿ ಅವರು ತಮ್ಮ ಜೀವನದ ಹಲವು ವಿಚಾರಗಳನ್ನು ಹಂಚಿಕೊಂಡಿದ್ದರು.**


# ಅಭಿನಯ ಸರಸ್ವತಿ ಸರೋಜಾದೇವಿ ವಿಧಿವಶ



ಅಭಿನಯ ಸರಸ್ವತಿ ಎಂದೇ ಖ್ಯಾತರಾಗಿದ್ದ ಹಿರಿಯ ನಟಿ ಬಿ.ಸರೋಜಾದೇವಿ(87) ನಿಧನರಾಗಿದ್ದಾರೆ. ಜನವರಿ 7, 1938 ರಲ್ಲಿ ಜನಿಸಿದ್ದ ಸರೋಜಾದೇವಿ ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದರು. ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಮಣಿಪಾಲ ಆಸ್ಪತ್ರೆಯಲ್ಲಿ ನಿಧನರಾದರು. ಮೃತದೇಹ ಮಲ್ಲೇಶ್ವರಂ ನಿವಾಸದಲ್ಲಿದ್ದು ಪೊಲೀಸರು ಭದ್ರತೆ ವ್ಯವಸ್ಥೆ ಮಾಡುತ್ತಿದ್ದಾರೆ. ಹಲವು ಗಣ್ಯರು ಈಗ ನಿವಾಸಕ್ಕೆ ಬಂದು ಅಂತಿಮ ದರ್ಶನ ಪಡೆಯುತ್ತಿದ್ದಾರೆ. ಸುಮಾರು 6 ದಶಕಗಳ ಕಾಲ ಚಿತ್ರರಂಗದ ಸೇವೆ ಮಾಡಿರುವ ಇವರು 5 ಭಾಷೆಗಳಲ್ಲಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಚಿತ್ರರಂಗದ ಸಾಧನೆಗೆ ಇವರಿಗೆ ಕೇಂದ್ರ ಸರ್ಕಾರ ಪದ್ಮಭೂಷಣ ನೀಡಿ ಪುರಸ್ಕರಿಸಿತ್ತು.

ಸರೋಜಾದೇವಿ ಅವರು ಕನ್ನಡದಲ್ಲಿ ಡಾ. ರಾಜ್‌ಕುಮಾರ್ ಅವರೊಂದಿಗೆ ● ಅಮರಶಿಲ್ಪಿ ಜಕಣಾಚಾರಿ ● ಕಥಾಸಾಗರ ● ಬಬ್ರುವಾಹನ ● ಭಾಗ್ಯವಂತರು ● ಆಷಾಡಭೂತಿ ● ಶ್ರೀರಾಮಪೂಜಾ ● ಕಚ ದೇವಯಾನಿ ● ರತ್ನಗಿರಿ ರಹಸ್ಯ ● ಕೋಕಿಲವಾಣಿ ● ಸ್ಕೂಲ್‌ಮಾಸ್ಟರ್ ● ಪಂಚರತ್ನ ● ಲಕ್ಷ್ಮೀಸರಸ್ವತಿ ● ಚಿಂತಾಮಣಿ ● ಭೂಕೈಲಾಸ ● ಅಣ್ಣತಂಗಿ ● ಜಗಜ್ಯೋತಿ ಬಸವೇಶ್ವರ ● ದೇವಸುಂದರಿ ● ವಿಜಯನಗರದ ವೀರಪುತ್ರ ● ಮಲ್ಲಮ್ಮನ ಪವಾಡ ● ಶ್ರೀಕೃಷ್ಣರುಕ್ಮಿಣಿ ಸತ್ಯಭಾಮ ● ಪೂರ್ಣಿಮಾ ● ಗೃಹಿಣಿ ● ಪಾಪಪುಣ್ಯ ● ಸಹಧರ್ಮಿಣಿ ● ಶ್ರೀನಿವಾಸಕಲ್ಯಾಣ ● ಚಾಮುಂಡೇಶ್ವರಿ ಮಹಿಮೆ ● ಚಿರಂಜೀವಿ ● ಶನಿಪ್ರಭಾವ ಮುಂತಾದ ಚಿತ್ರಗಳಲ್ಲಿ ನಟಿಸಿದ್ದಾರೆ.ಸರೋಜಾದೇವಿ ಅವರು ತಮಿಳಿನಲ್ಲಿ ಜೆಮಿನಿ ಗಣೇಶನ್, ಶಿವಾಜಿ ಗಣೇಶನ್, ಮತ್ತು ಎಂ.ಜಿ. ರಾಮಚಂದ್ರನ್ ಅವರೊಂದಿಗೆ ಅನೇಕ ಹಿಟ್ ಚಿತ್ರಗಳಲ್ಲಿ ಅಭಿನಯಿಸಿದ್ದರು. ಅವರು ಹಿಂದಿಯಲ್ಲಿ ದಿಲೀಪ್ ಕುಮಾರ್, ರಾಜೇಂದ್ರ ಕುಮಾರ್, ಶಮ್ಮಿ ಕಪೂರ್, ಮತ್ತು ಸುನೀಲ್ ದತ್ ಅವರೊಂದಿಗೆ ನಟಿಸಿದ್ದಾರೆ.

**ತಮ್ಮ 17ನೇ ವಯಸ್ಸಿನಲ್ಲಿಯೇ ಕನ್ನಡ ಚಿತ್ರರಂಗದ ಭೀಷ್ಮ ಹೊನ್ನಪ್ಪ ಭಾಗವತರ್ ಅವರ 'ಮಹಾಕವಿ ಕಾಳಿದಾಸ' ಚಿತ್ರದಲ್ಲಿ ಅಭಿನಯಿಸುವ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟಿದ್ದರು.**





**ಚನ್ನಪಟ್ಟಣದ ದಶಾವರದಲ್ಲಿ ಬಿ.ಸರೋಜಾದೇವಿ ಅಂತ್ಯಕ್ರಿಯೆ**

ಸರೋಜಾದೇವಿಯವರ ಮಗ ಗೌತಮ್ ಮಾತನಾಡಿ, ಬೆಳಿಗ್ಗೆ 11:30ರವರೆಗೂ ಬೆಂಗಳೂರಿನ ಸ್ವಗೃಹದ ಬಳಿ ಅಂತಿಮದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಬಳಿಕ ಪಾರ್ಥಿವ ಶರೀರವನ್ನು ಚನ್ನಪಟ್ಟಣಕ್ಕೆ ಕರೆದೊಯ್ಯಲಾಗುವುದು.

ಅಲ್ಲಿ ದಶಾವರದ ಕಣ್ವ ಡ್ಯಾಂ ಬಳಿ ಒಕ್ಕಲಿಗ ಸಂಪ್ರದಾಯದಂತೆ ಅಂತಿಮ ವಿಧಿವಿಧಾನ ನೆರವೇರಲಿದೆ. ಅವರ ತಾಯಿ ರುದ್ರಮ್ಮ ಅವರ ಸಮಾಧಿಯ ಪಕ್ಕದಲ್ಲಿಯೇ ಸರೋಜಾದೇವಿಯವರ ಅಂತ್ಯಕ್ರಿಯೆ ನಡೆಯಲಿದ್ದು, ಇದು ಸರೋಜಾದೇವಿಯವರ ಕೊನೆಯಾಸೆಯಾಗಿತ್ತು ಎಂದು ಮಾಹಿತಿ ನೀಡಿದ್ದಾರೆ.

ಅಂತ್ಯಕ್ರಿಯೆ ಹಿನ್ನೆಲೆ ಸ್ಥಳಕ್ಕೆ ರಾಮನಗರ ಎಸ್ಪಿ ಶ್ರೀನಿವಾಸ್ ಗೌಡ ಭೇಟಿ ನೀಡಿ, ಸ್ಥಳ ಪರಿಶೀಲನೆ ನಡೆಸಿದ್ದಾರೆ.

ಸಾಕಷ್ಟು ರಾಜಕೀಯ ಗಣ್ಯರು, ಸಿನಿಮಾ ಕಲಾವಿದರು ಆಗಮಿಸುವ ಹಿನ್ನೆಲೆ ಅಂತಿಮ ದರ್ಶನದ ವ್ಯವಸ್ಥೆ ಹಾಗೂ ಪಾರ್ಕಿಂಗ್ ವ್ಯವಸ್ಥೆಯನ್ನು ಪರಿಶೀಲನೆ ನಡೆಸಿದ್ದಾರೆ. ಅಲ್ಲದೇ ಸೂಕ್ತ ಪೊಲೀಸ್ ಬಂದೋಬಸ್ತ್ ನೀಡುವಂತೆ ಡಿವೈಎಸ್ಪಿ ಗಿರಿಗೆ ಸೂಚನೆ ನೀಡಿದ್ದಾರೆ. ಇನ್ನೂ ಸರೋಜಾದೇವಿ ಅಗಲಿಕೆಗೆ ಗ್ರಾಮಸ್ಥರು ಶ್ರದ್ಧಾಂಜಲಿ ಸಲ್ಲಿಸಿದ್ದು, ಅವರ ನಿವಾಸದ ಮುಂದೆ ಫೋಟೊ ಇಟ್ಟು ಪುಷ್ಪಾರ್ಚನೆ ಸಲ್ಲಿಸಿದ್ದಾರೆ. ಸರೋಜಾದೇವಿಯವರು ಗ್ರಾಮಕ್ಕೆ ಮೂರು ಶಾಲಾ ಕೊಠಡಿ ಕಟ್ಟಿಸಿಕೊಟ್ಟಿದ್ದು, ಗ್ರಾಮಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಅಲ್ಲದೇ ಗ್ರಾಮದಲ್ಲಿ ಹೈಸ್ಕೂಲ್ ನಿರ್ಮಾಣಕ್ಕೆ ಅನುಮತಿ ಕೊಡಿಸಿದ್ದನ್ನ ನೆನೆದು ಗ್ರಾಮಸ್ಥರು ಭಾವುಕರಾದರು.

## ಸರೋಜಾದೇವಿ ಹೇಳಿದ್ದೇನು



ನನ್ನ ತಾಯಿ ರುದ್ರಮ್ಮ ನಾಲ್ಕನೇಯ ಬಾರಿ ಗರ್ಭವತಿಯಾಗಿದ್ದರು. ಡೆಲಿವರಿ ಸಮಯ ಹತ್ತಿರ ಬಂದಾಗ ಹೊಟ್ಟೆನೋವಿನಿಂದ ಬಳಲುತ್ತಿದ್ದರು. ಆ ಸಂದರ್ಭದಲ್ಲಿ ನಮ್ಮ ಮನೆಯ ಹತ್ತಿರದಲ್ಲಿ ಸತ್ಯನಾರಾಯಣ ಪೂಜೆ ನಡೆಯುತ್ತಿತ್ತು. ನನ್ನ ತಾಯಿ ಹೊಟ್ಟೆನೋವಿನಿಂದ ಬಳಲುವುದನ್ನು ನೋಡಿ ನೆರೆ ಮನೆಯವರು ದೊನ್ನೆಯಲ್ಲಿ ಸತ್ಯನಾರಾಯಣ ದೇವರ ಸಜ್ಜಿಗೆ ಪ್ರಸಾದವನ್ನು ನೀಡಿದರು. ಸಜ್ಜಿಗೆ ಪ್ರಸಾದವನ್ನು ತಾಯಿ ಸೇವಿಸಿದ ಕೆಲ ಸಮಯದಲ್ಲಿ ಹೆಣ್ಣು ಮಗುವಿಗೆ ಜನನ ನೀಡಿದರು. ಮೊದಲ ಮೂರು ಹೆಣ್ಣು ಮಕ್ಕಳೇ ಆಗಿದ್ದರಿಂದ ಸಂಬಂಧಿಕರು ನಾಲ್ಕನೇಯ ಹೆಣ್ಣು ಮಗುವನ್ನು ಯಾರಿಗಾದರೂ ಕೊಡು ಎಂದು ತಾಯಿಗೆ ಹೇಳಿದ್ದರು. ಆದರೆ ತಾಯಿ ನನ್ನನ್ನು ಯಾರಿಗೆ ಕೊಡಲಿಲ್ಲ. ನನ್ನ ಬಹಳ ಪ್ರೀತಿಯಿಂದ ಸಾಕಿದ್ದರು. ಅಂದು ನನಗೆ ಬಹಳ ಪ್ರೋತ್ಸಾಹ ನೀಡಿದ್ದರಿಂದ ನಾನು ಕಲಾವಿದೆಯಾದೆ ಎಂದು ಹೇಳಿದ್ದರು.

ಬಹಳ ದೈವ ಭಕ್ತೆಯಾಗಿದ್ದ ಸರೋಜಾದೇವಿ ಅವರು ಪ್ರತಿನಿತ್ಯ ಬೆಳಗ್ಗೆ ಎದ್ದು ಪೇಪರ್ ಓದುತ್ತಿದ್ದರು. ನಂತರ ಸ್ನಾನ ಮಾಡಿ ಪೂಜೆ ಮಾಡಿ ತಿಂಡಿ ತಿನ್ನುತ್ತಿದ್ದರು. ಸ್ನಾನ ಮಾಡಿ ಪೂಜೆ ಮಾಡಿದ ಬಳಿಕ ಬೆಳಗ್ಗೆ 9 ಗಂಟೆಯ ವೇಳೆಗೆ ಟಿವಿ ಆನ್ ಮಾಡಿದ್ದರು. ಈ ವೇಳೆ ಅವರು ತುಂಬಾ ಸುಸ್ತಾಗಿದ್ದರು. ಅರೆಪ್ರಜ್ಞಾವಸ್ಥೆ ಸ್ಥಿತಿಗೆ ಹೋದ ಕೂಡಲೇ ಅವರನ್ನು ಮಲ್ಲೇಶ್ವರದಲ್ಲಿರುವ ಮಣಿಪಾಲ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆಸ್ಪತ್ರೆಗೆ ದಾಖಲಿಸುವಷ್ಟರಲ್ಲೇ ಅವರು ಮೃತಪಟ್ಟಿದ್ದರು.



ಲಕ್ಷಾಂತರ ಅಭಿಮಾನಿಗಳ ಹೃದಯ ಗೆದ್ದ ಮಹಾನ್ ನಟಿ ಸರೋಜಾ ದೇವಿ ಈಗ ನಮ್ಮೊಂದಿಗಿಲ್ಲ. ಅವರ ಆತ್ಮಕ್ಕೆ ಶಾಂತಿ ಸಿಗಲಿ. ಒಂದು ಸುವರ್ಣ ಸಿನಿಮಾ ಯುಗ ಅಂತ್ಯಗೊಂಡಿದೆ.
-ರಜನಿಕಾಂತ್, ಖ್ಯಾತ ನಟ ತಲೈವಾ



ಸರೋಜಾದೇವಿ ಅಮ್ಮ ಎಲ್ಲಾ ಕಾಲದಲ್ಲೂ ಶ್ರೇಷ್ಠರು. ದಕ್ಷಿಣದಲ್ಲಿ ಅವರಷ್ಟು ಹೆಸರು, ಖ್ಯಾತಿ ಪಡೆದ ಮಹಿಳಾ ನಟಿ ಇನ್ನೊಬ್ಬರಿಲ್ಲ. ಅವರು ನನ್ನ ಪ್ರೀತಿಯ ಮತ್ತು ಆರಾಧ್ಯ ದೈವವೂ ಕೂಡ ಹೌದು. ಅವರನ್ನು ಭೇಟಿಯಾಗದೇ ನನ್ನ ಬೆಂಗಳೂರಿಗೆ ಪ್ರವಾಸ ಅಪೂರ್ಣವಾಗಿತ್ತು. ಚೆನ್ನೈಗೆ ಬಂದಾಗೆಲ್ಲ ಅವರು ನನಗೆ ಕರೆ ಮಾಡಿ ಮಾತನಾಡುತ್ತಿದ್ದರು. ಈಗ ಅವರನ್ನ ತುಂಬಾ ಮಿಸ್ ಮಾಡಿಕೊಳ್ತೀನಿ. ಅವರ ಆತ್ಮಕ್ಕೆ ಶಾಂತಿ ಸಿಗಲಿ
-ಖುಷ್ಬು, ಬಹುಭಾಷಾ ನಟಿ



**ಎಲ್ಲ ನಟರಿಗೆ ಹಾಟ್ ಫೇವರೆಟ್**

ಅವರ ಚಿತ್ರಗಳನ್ನು ನೋಡಿದಾಗ ನಮ್ಮ ಕನಸಿನ ಕನ್ಯೆ ಅಂತ ಅನಿಸುತ್ತಿದ್ದರು. ಅವರ ಹತ್ತಿರ ಹೋಗೋ ಯೋಗ್ಯತೆಯೂ ನಮಗಿರಲಿಲ್ಲ. ಅವರನ್ನು ನೋಡೋದೇ ನಮ್ಮ ಭಾಗ್ಯ ಆಗಿತ್ತು. ಲೋಕೇಶ್ ಅವರೊಟ್ಟಿಗೆ ತುಂಬಾ ಚೆನ್ನಾಗಿ ಮಾತಾಡುತ್ತಿದ್ದರು. ಪ್ರತಿ ವರ್ಷ ನವೆಂಬರ್ 1 ಎಲ್ಲಾ ಕಲಾವಿದರು ಭೇಟಿಯಾಗುತ್ತಿದ್ದೆವು. ಆಗ ಒಂದು ಕಾರ್ಯಕ್ರಮ ಮಾಡಿ, ಕಲಾವಿದರನ್ನು ಸನ್ಮಾನ ಮಾಡುತ್ತಿದ್ದರು. ಆಗ ಅವರಿಗೆ ತಮ್ಮ ಸ್ವಂತ ಹಣದಿಂದ ಉಂಗುರ ನೀಡುತ್ತಿದ್ದರು. ಜೊತೆಗೆ ತಮ್ಮದೇ ಒಂದು ಟ್ರಸ್ಟ್ ಮಾಡಿಕೊಂಡು, ರಾಷ್ಟ್ರೀಯ ಪ್ರಶಸ್ತಿ ನೀಡಿ, ಒಂದು ಲಕ್ಷ ರೂ. ನೀಡುತ್ತಿದ್ದರು. ಆದರೆ ಇದನ್ನು ಯಾರ ಬಳಿಯೂ ಹೇಳಿಕೊಳ್ಳುತ್ತಿರಲಿಲ್ಲ. ಇನ್ನೂ ನಾನು ಅಭಿನಯಕ್ಕೆ ಬಂದ ಮೇಲೆ ಜಯಂತಿ ಅವರೊಟ್ಟಿಗೆ ಸೇರಿ, ಸರೋಜಾದೇವಿ ಅವರ ಮನೆಗೆ ಹೋಗಿ ಅವರನ್ನು ಭೇಟಿಯಾಗುವ ಭಾಗ್ಯ ಸಿಕ್ಕಿತ್ತು. ಕಲಾವಿದರನ್ನ ಪ್ರೋತ್ಸಾಹಿಸುವ ಕೆಲಸ ಮಾಡುತ್ತಿದ್ದರು ಚಿಕ್ಕ ಮಕ್ಕಳ ಮನಸ್ಸಿನವರು. ತುಂಬಾ ಮುಗ್ಧ ಸ್ವಭಾವದವರು. ಆದರೆ ಚಿತ್ರರಂಗದ ಹೊರಗೆ ತುಂಬಾ ಗಾಂಭೀರ್ಯತೆಯಿಂದ ಇರುತ್ತಿದ್ದರು. ಪರಿಪೂರ್ಣ ಜೀವನವನ್ನು ಅನುಭವಿಸಿದರು. ಆದರೆ ವೈವಾಹಿಕ ಜೀವನವನ್ನು ಬಹಳ ದಿನ ಅನುಭವಿಸುವ ಭಾಗ್ಯ ಅವರಿಗೆ ಸಿಗಲಿಲ್ಲ. ಇನ್ನೂ ಕನ್ನಡ ಸೇರಿ ಬೇರೆ ಭಾಷೆಯ ನಟರು ಕೂಡ ಅವರ ಜೊತೆ ನಟಿಸಲು ಕಾಯುತ್ತಿದ್ದರು. ದಿಲೀಪ್ ಕುಮಾರ್, ಶಿವಾಜಿ ಗಣೇಶನ್ ಸೇರಿ ಹಿರಿಯ ನಟರು ಇವರ ಜೊತೆ ನಟನೆಗಾಗಿ ಕಾಯುತ್ತಿದ್ದರು. ಆಗ ಎಲ್ಲಾ ಸ್ಟಾರ್ ನಟರಿಗೆ ಹಾಟ್ ಫೇವರೆಟ್ ನಟಿ ಆಗಿದ್ದರು. ಸರೋಜಾದೇವಿ ನಮ್ಮ ಸಿನಿಮಾದಲ್ಲಿ ಇರಬೇಕು ಎಂದು ಹಾತೊರೆಯುತ್ತಿದ್ದರು ಎಂದು ನಟಿ ಗಿರಿಜಾ ಲೋಕೇಶ್ ತಿಳಿಸಿದರು.



ಅಭಿನಯ ಸರಸ್ವತಿ ಬಿ.ಸರೋಜಾದೇವಿ ಅವರ ನಿಧನದ ಸುದ್ದಿ ಕೇಳಿ ತುಂಬಾ ನೋವಾಗಿದೆ. ಭಾರತೀಯ ಸಿನಿಮಾ ಹಾಗೂ ಸಂಸ್ಕೃತಿಯ ಆದರ್ಶ ಮೂರ್ತಿ ಅವರು, ತಮ್ಮ ವೈವಿಧ್ಯಮಯ ನಟನೆಯಿಂದಲೇ ತಲೆಮಾರುಗಳಲ್ಲಿ ಅಳಿಸಲಾಗದ ಗುರುತನ್ನು ಬಿಟ್ಟು ಹೋಗಿದ್ದಾರೆ. ಬೇರೆ ಬೇರೆ ಭಾಷೆಗಳಲ್ಲಿ ತಮ್ಮ ನಟನಾ ಶೈಲಿಯ ಮೂಲಕ ಬಹುಮುಖ ಪ್ರತಿಭೆಯನ್ನು ಎತ್ತಿ ತೋರಿಸಿದ್ದಾರೆ. ದೇವರು ಅವರ ಕುಟುಂಬ ವರ್ಗಕ್ಕೆ ಹಾಗೂ ಅಭಿಮಾನಿಗಳಿಗೆ ಅಗಲುವಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ
-ನರೇಂದ್ರ ಮೋದಿ, ಪ್ರಧಾನ ಮಂತ್ರಿ




ಕನ್ನಡ ನಾಡು ಕಂಡಂತಹ ಪ್ರತಿಭಾವಂತೆ. ಅವರು ಕನ್ನಡ, ತೆಲುಗು, ತಮಿಳು ಹಾಗೂ ಹಿಂದಿ ಭಾಷೆಗಳಲ್ಲಿ ನಟಿಸಿದ್ದಾರೆ. ಅವರು ಒಬ್ಬ ಅಪ್ರತಿಮ ಕಲಾವಿದೆ. ಬಿ.ಸರೋಜಾದೇವಿ ಅವರ ಸಾವಿನಿಂದ ಇಂದು ಕಲಾಜಗತ್ತು ಬಡವಾಗಿದೆ. ಅವರ ಆತ್ಮಕ್ಕೆ ಶಾಂತಿಸಿಗಲಿ ಹಾಗೂ ಕುಟುಂಬ ವರ್ಗದವರಿಗೆ ಅವರ ಸಾವನ್ನು ಸಹಿಸಿಕೊಳ್ಳುವ ಶಕ್ತಿ ನೀಡಲಿ.
-ಸಿದ್ದರಾಮಯ್ಯ, ಮುಖ್ಯಮಂತ್ರಿ



ಹಲವು ರಾಷ್ಟ್ರೀಯ ಪ್ರಶಸ್ತಿಗಳು, ಜೀವಮಾನದ ಪ್ರಶಸ್ತಿ ನೀಡುವ ವೇಳೆ ನಾನಿದ್ದೆ. ಚಿತ್ರರಂಗದಲ್ಲಿ ಮರೆಯಾಲಾಗದ ಪಾತ್ರ ಮಾಡಿದ್ದರು. ಪರಭಾಷಾ ಕಲಾವಿದರಿಗೆ ಹೆಚ್ಚು ಅವಕಾಶ ಇದ್ದಾಗಲೇ ಬೇರೆ ಭಾಷೆಗಳಲ್ಲೂ ಹಿರಿಮೆ ಸಾಧಿಸಿದ್ದರು. ನಟಿಯನ್ನು ಕಳೆದುಕೊಂಡಿರುವ ದುಃಖ ಹೆಚ್ಚಿದೆ. ಅವರ ಕುಟುಂಬಕ್ಕೆ ದುಃಖ ಸಹಿಸಿಕೊಳ್ಳುವ ಶಕ್ತಿ ನೀಡಲಿ .
-ಆರ್. ಅಶೋಕ್, ವಿಪಕ್ಷ ನಾಯಕ

**ಕೆಲಸಕ್ಕೆ ಬಾರದವರೆಲ್ಲ ದೊಡ್ಡ ನಟಿಯೆಂದು ಹೇಳ್ಕೊತಾರೆ**



ಸುಮ್ಮನೇ ಕೆಲಸಕ್ಕೆ ಬಾರದವರೆಲ್ಲ ಸೋಷಿಯಲ್ ಮೀಡಿಯಾದಲ್ಲಿ ದೊಡ್ಡ ನಟಿ ಎಂದು ಹೇಳಿಕೊಂಡು ತಿರುಗಾಡುತ್ತಾರೆ. ಆದರೆ ನಟಿ ಸರೋಜಾದೇವಿಯವರು ಇದನ್ನೆಲ್ಲ ಮಾಡಲೇ ಇಲ್ಲ ಎಂದು ನಿರ್ದೇಶಕ ರಾಜೇಂದ್ರ ಸಿಂಗ್ ಬಾಬು ಅವರು ಹೇಳಿದರು. ಸುಮಾರು 1954ರಲ್ಲಿ ನಮ್ಮ ತಂದೆಯವರ 'ಆಷಾಡಭೂತಿ' ಸಿನಿಮಾದಲ್ಲಿ ನಾಯಕಿಯಾಗಿ ನಟಿಸಿದ್ದರು. ಅವಾಗಿನಿಂದಲೂ ನಮ್ಮ ಕುಟುಂಬಕ್ಕೆ ತೀರ ಹತ್ತಿರವಾದವರು. ಪ್ರತಿ ಬಾರಿ ನಮ್ಮ ಮನೆಗೆ ಬಂದಾಗ ನಮ್ಮನ್ನೆಲ್ಲಾ ತುಂಬಾ ಪ್ರೀತಿಯಿಂದ ನೋಡಿಕೊಳ್ಳುತ್ತಿದ್ದರು. ಅದಾದ ನಂತರ ನಟನೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿ, ಬಹು ದೊಡ್ಡ ಸ್ಟಾರ್ ಆದರು. ಆಗಲೂ ಅವರು ನಮ್ಮ ಮನೆಗೆ ಬಂದಾಗ ಮೊದಲು ಹೇಗೆ ನೋಡಿಕೊಳ್ಳುತ್ತಿದ್ದರೂ ಅದೇ ರೀತಿ ನಮ್ಮನ್ನೆಲ್ಲಾ ಕಾಣುತ್ತಿದ್ದರು. ಇನ್ನೂ ನನಗೆ ತುಂಬಾ ಹತ್ತಿರದವರು, ಯಾಕಂದ್ರೆ ಪ್ರತಿ ಬಾರಿ ನಾನು ಮದ್ರಾಸ್‌ಗೆ ಹೋದಾಗ ಚೆನ್ನಾಗಿ ಓದಬೇಕು ಅಂತ ಹೇಳಿ, ಒಂದು ಗಡಿಯಾರ ಉಡುಗೊರೆಯಾಗಿ ನೀಡಿದ್ದರು ಎಂದರು. ನಮ್ಮ ತಾಯಿಯನ್ನು ಕಂಡರೆ ಅವರಿಗೆ ತುಂಬಾ ಪ್ರೀತಿ, ಅದಲ್ಲದೇ ನನ್ನ ಸ್ನೇಹಿತನೊಬ್ಬನಿಗೆ ತುಂಬಾ ಸಹಾಯ ಮಾಡಿದ್ದರು. ಬಹಳ ಶಿಸ್ತಿನ ನಟಿ, ನಾಲ್ಕು ಭಾಷೆಯಲ್ಲಿ ನಟಿಸೋದು ಅಂದರೆ ಸಣ್ಣ ಮಾತಲ್ಲ. ಹಿಂದಿ, ತಮಿಳು, ತೆಲುಗು ಹಾಗೂ ಕನ್ನಡದಲ್ಲಿ ನಟಿಸಿದರು. ಅವರು ಎಷ್ಟೇ ಬೆಳೆದರೂ ಕೂಡ ಕನ್ನಡದಲ್ಲಿ ಕಿತ್ತೂರು ಚೆನ್ನಮ್ಮ, ಭಾಗ್ಯವಂತರು ಅಂತಹ ಪಾತ್ರಗಳಲ್ಲಿ ನಟಿಸುವುದನ್ನು ನಿಲ್ಲಿಸಲಿಲ್ಲ. ಎಂದು ತಿಳಿಸಿದರು.





ಬಿ ಸರೋಜಾ ದೇವಿ ಒಬ್ಬ ಹಿರಿಯ ತಾರೆ. ನನಗೆ ಬಹಳ ಆತ್ಮೀಯರಾಗಿದ್ದರು. ಅನೇಕ ಸಂದರ್ಭದಲ್ಲಿ ಸರ್ಕಾರದ ಕಾರ್ಯಕ್ರಮಗಳಲ್ಲಿ ಭಾಗಿಯಾಗಿದ್ದರು. ಈ ಮಧ್ಯೆ ಅವರ ಆರೋಗ್ಯ ಸಲ್ಪ ಹೆಚ್ಚುಕಮ್ಮಿ ಆಗಿತ್ತು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಮಾತ್ರವಲ್ಲದೇ ಭಾರತದ ಅನೇಕ ಚಿತ್ರನಟರ ಜೊತೆ ನಟಿಸಿದ್ದರು. ಅವರ ಅಭಿಮಾನಿಗಳಿಗೆ, ಬಂಧುಗಳಿಗೆ ಭಗವಂತ ಶಕ್ತಿ ಕೊಡಲಿ ಅಂತ ಕೇಳಿಕೊಳ್ಳುತ್ತೇನೆ
-ಡಿ.ಕೆ.ಶಿವಕುಮಾರ್, ಡಿಸಿಎಂ




ಚೆನ್ನಮ್ಮ ಅಂದರೆ ಹೀಗಿದ್ದರು ಅಂತ ಕಲ್ಪನೆ ಮೂಡಿಸಿದ್ದರು. ಅವರ ಅಭಿನಯ, ಕಲ್ಪನೆ ಇಂದಿಗೂ ಮನಸ್ಸಿನಲ್ಲಿ ಇದೆ. ಮಲ್ಲಮ್ಮನ ಪವಾಡ ಇದೊಂದು ಮನೆಮನೆಯಲ್ಲಿ ಮನಮುಟ್ಟುವ ಚಿತ್ರ ಅಗಿತ್ತು. ಲಕ್ಷ್ಮಿ ಸರಸ್ವತಿ, ಬಬ್ರುವಾಹನ, ಶ್ರೀನಿವಾಸ ಕಲ್ಯಾಣ ಸೇರಿದಂತೆ ನೂರಾರು ಚಿತ್ರಗಳಲ್ಲಿ ನಟನೆ ಮಾಡಿದ್ದರು. ಅವರ ಅಭಿನಯದ ಮೂಲಕ ನಮ್ಮ ಮನದಲ್ಲಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ
-ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ



ಕೋವಿಡ್ ಸಮಯದಲ್ಲಿ ಸಾಕಷ್ಟು ಕೆಲಸ ಮಾಡಿದ್ದರು. ನನಗೆ ಕರೆ ಮಾಡಿ 2 ಲಕ್ಷ ರೂ. ಕೊಟ್ಟು ಯಾರಿಗಾದರೂ ಸಹಾಯ ಮಾಡು, ಕಲಾವಿದರಿಗೆ ಒಳ್ಳೆಯದಾಗಬೇಕು ಎಂದು ಹೇಳಿದ್ದರು. ಬಳಿಕ ನಾನು ಅದನ್ನು ಉಪೇಂದ್ರ ಅವರ ಟ್ರಸ್ಟ್‌ಗೆ ಕಳುಹಿಸಿದೆ. ಆದರೆ ಈವರೆಗೂ ಸರೋಜಾದೇವಿಯವರು ನನಗೆ ಆ ಹಣವನ್ನು ಯಾರಿಗೆ ಕೊಟ್ಟೆ ಎಂದು ಕೇಳಲಿಲ್ಲ . ಸರೋಜಾದೇವಿ ಅಂತಹವರು ಸಿಗೋದು ತುಂಬಾ ವಿರಳ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಗಳಿಸಿದವರು, ನಾಲ್ಕು ಭಾಷೆಗಳಲ್ಲಿ ಬೇರೆ ಬೇರೆ ನಾಯಕ ನಟರೊಂದಿಗೆ ನಟಿಸಿದವರು, ದೊಡ್ಡ ಮಟ್ಟದ ಪ್ರಶಸ್ತಿಗಳನ್ನು ಪಡೆದವರು. ಆದರೂ ಕೂಡ ಸಾಮಾನ್ಯರಂತೆ ಇರುವವರು ತುಂಬಾ ಕಡಿಮೆ. ನಮಗೆ ಸ್ವಲ್ಪ ಏನಾದರೂ ಸಿಕ್ಕರೆ ಅಹಂ ಬರುತ್ತದೆ. ಆದರೆ ಸರೋಜಾದೇವಿಯವರು ಯಾವತ್ತೂ ಹಾಗಿರಲಿಲ್ಲ. ಇನ್ನೂ ಸೂಪರ್ ಸ್ಟಾರ್‌ಗಳು ಇವರ ಜೊತೆ ನಟಿಸಬೇಕೆಂದು ಕಾಯುತ್ತಿದ್ದರು. ಸರೋಜಾದೇವಿಯವರು ನಟಿಸ್ತಾರೆ ಎಂದರೆ ಎಂಜಿಆರ್, ಶಿವಾಜಿ ಗಣೇಶನ್, ಎನ್‌ಟಿಆರ್ ಎಲ್ಲರೂ ಮೊದಲು ಮೇಡಂ ಬಳಿ ಡೇಟ್ಸ್ ತಗೊಳ್ಳಿ, ಬಳಿಕ ನಾವು ಆಕ್ಟ್ ಮಾಡ್ತೀವಿ ಎಂದು ಹೇಳುತ್ತಿದ್ದರು. ಅಂತಹ ಗತ್ತನ್ನು ಇಟ್ಟುಕೊಂಡು ಜೀವನ ನಡೆಸಿದವರು. ಇನ್ನೂ ಶಿಸ್ತಿನ ವಿಷಯದಲ್ಲಿ ಕಡೆಯವರೆಗೂ ನಟಿ ಎಂಬ ಗ್ಲ್ಯಾಮರ್‌ನ್ನು ಬಿಟ್ಟು ಕೊಡಲೇ ಇಲ್ಲ. ಮೃದು ಹೃದಯದವರು, ಸಾಕಷ್ಟು ಜನರಿಗೆ ಸಹಾಯ ಮಾಡಿದರು. ಯಾರಿಗೂ ತೊಂದರೆ ಕೊಡದೇ ದೇವರ ಪಾದ ಸೇರಿದ್ದಾರೆ, ದೇವರು ಕೂಡ ಅವರಿಗೆ ಒಳ್ಳೆಯ ಅಂತ್ಯವನ್ನು ಕೊಟ್ಟಿದ್ದಾನೆ ಎಂದುಕೊಳ್ಳುತ್ತೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ
-ಸಾಧು ಕೋಕಿಲಾ, ಸಂಗೀತ ನಿರ್ದೇಶಕ, ನಟ



ಕನ್ನಡ ಚಿತ್ರರಂಗದ ಹಿರಿಯ ನಟಿ, ಅಭಿನಯ ಸರಸ್ವತಿ ಎಂದೇ ಖ್ಯಾತರಾಗಿದ್ದ ಬಿ.ಸರೋಜಾದೇವಿ ಅವರು ನಿಧನರಾದ ಸುದ್ದಿ ತಿಳಿದು ಅತೀವ ದುಃಖವಾಗಿದೆ. ಆರು ದಶಕಗಳಿಗೂ ಹೆಚ್ಚು ಕಾಲ ಚಿತ್ರರಂಗದಲ್ಲಿ ಸೇವೆ ಸಲ್ಲಿಸಿದ ಅವರು 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದರು. ಸರೋಜಾದೇವಿ ಅವರ ಸಾವಿನಿಂದ ಇಡೀ ಕಲಾಜಗತ್ತು ಬಡವಾಗಿದೆ. ಸರೋಜಾದೇವಿಯವರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಕುಟುಂಬವರ್ಗ ಹಾಗೂ ಅಭಿಮಾನಿ ಬಳಗಕ್ಕೆ ದು:ಖವನ್ನು ಭರಿಸುವ ಶಕ್ತಿ ತುಂಬಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುವೆ.
-ನಿಖಿಲ್ ಕುಮಾರ್‌ಸ್ವಾಮಿ, ಜೆಡಿಎಸ್ ವರಿಷ್ಠ



ಅವರು ಭಾರತೀಯ ಚಿತ್ರರಂಗದ ಇತಿಹಾಸದಲ್ಲಿ ಅತ್ಯಂತ ಯಶಸ್ವಿ ನಟಿಯರಲ್ಲಿ ಒಬ್ಬರು. ಬಿ.ಸರೋಜಾದೇವಿ ಅವರು ಕನ್ನಡ, ತಮಿಳು, ತೆಲುಗು ಮತ್ತು ಹಿಂದಿ ಚಿತ್ರರಂಗಗಳಲ್ಲಿ ನಟಿಸಿ ಹೆಸರುವಾಸಿಯಾಗಿದ್ದು, 200ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿದ್ದರು. ಅವರನ್ನು ಕನ್ನಡದಲ್ಲಿ 'ಅಭಿನಯ ಸರಸ್ವತಿ' ಎಂಬ ಉಪನಾಮದಿಂದ ಕರೆಯುತ್ತಿದ್ದರು. ಅವರಿಗೆ ಹತ್ತಾರು ಪ್ರಶಸ್ತಿಗಳೂ ಲಭಿಸಿದ್ದವು ಮೃತರ ಕುಟುಂಬಕ್ಕೆ, ಬಂಧುಮಿತ್ರರಿಗೆ ಮತ್ತು ಅಭಿಮಾನಿಗಳಿಗೆ ಅಗಲುವಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ. ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ.
-ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ



ಅಭಿನಯ ಸರಸ್ವತಿ ಎಂದೇ ಹೆಸರಾದ ಬಹುಭಾಷಾ ತಾರೆ ಸರೋಜಾದೇವಿ ಅವರು ತಮ್ಮ ಮೋಹಕತೆಯೊಂದಿಗೆ ಹೊರಟಿದ್ದಾರೆ. ಹಲವು ಭಾಷೆಗಳ ಪ್ರೌಢಿಮೆ ಹೊಂದಿದ್ದ ಅವರು ಅನೇಕ ದಿಗ್ಗಜರೊಂದಿಗೆ ನಟಿಸಿ ತಾನೇ ಪಾತ್ರವಾಗಿ ಬೆಳ್ಳಿತೆರೆಯಲ್ಲಿ ಶಾಶ್ವತವಾಗಿ ಉಳಿದಿದ್ದಾರೆ. ಪಾರಿಜಾತ ಪುಷ್ಪವೊಂದು ತನ್ನ ಪರಿಮಳದೊಂದಿಗೆ ತುಂಬು ಜೀವನ ನೆಡೆಸಿ ನಮ್ಮನ್ನು ಅಗಲಿ ಹೊರಟಿದೆ.
-ಸುದೀಪ್, ಖ್ಯಾತ ನಟ



ಹಿರಿಯ ನಟಿ, ಅಭಿನಯ ಸರಸ್ವತಿ ಎಂದೇ ಖ್ಯಾತರಾಗಿದ್ದ ಪದ್ಮಭೂಷಣ ಬಿ.ಸರೋಜಾದೇವಿ ಅವರು ವಿಧಿವಶರಾದ ಸುದ್ದಿ ತಿಳಿದು ಅತ್ಯಂತ ದುಃಖವಾಗಿದೆ. ಅವರ ಆತ್ಮಕ್ಕೆ ಚಿರಶಾಂತಿಯನ್ನು ಕೋರುತ್ತೇನೆ. ದೇವರು ಅವರ ಕುಟುಂಬದವರಿಗೆ, ಅವರ ಅಪಾರ ಅಭಿಮಾನಿಗಳಿಗೆ ಹಿರಿಯ ಕಲಾವಿದೆಯ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ
-ದರ್ಶನ್, ನಟ

**ಸಾವಿನಲ್ಲೂ ಸಾರ್ಥಕತೆ ಮೆರೆದ ಹಿರಿಯ ನಟಿ**

ಮನುಷ್ಯನ ಪಂಚೇಂದ್ರಿಯಗಳಲ್ಲಿ ಕಣ್ಣು ಪ್ರಮುಖವಾದದ್ದು. ಕಣ್ಣು ದಾನ ಮಾಡುವ ಮೂಲಕ ಬೇರೊಬ್ಬರಿಗೆ ದೃಷ್ಟಿ ನೀಡಿ ಬಾಳು ಬೆಳಗಬೇಕು' ಎನ್ನುವಂತೆ ಸರೋಜಾ ದೇವಿ ಅವರು ನೇತ್ರದಾನ ಮಾಡಿದ್ದಾರೆ. ಬೆಂಗಳೂರಿನ ನಾರಾಯಣ ನೇತ್ರಾಲಯಕ್ಕೆ ನೇತ್ರದಾನ ಮಾಡಿದ್ದರು. ಅದರಂತೆ ಇಂದು ಸರೋಜಾದೇವಿ ಅವರ ಕಣ್ಣುಗಳನ್ನು ಪಡೆಯಲಾಗುತ್ತಿದೆ. ವೈದ್ಯರ ತಂಡ ಮಲ್ಲೇಶ್ವರಂನಲ್ಲಿರುವ ಮನೆಗೆ ಆಗಮಿಸಿದ್ದು, ನೇತ್ರದಾನ ಪ್ರಕ್ರಿಯೆಯನ್ನ ಪೂರ್ಣಗೊಳಿಸಲಾಗುತ್ತಿದೆ. ನೇತ್ರದಾನ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಅಂತಿಮ ದರ್ಶನ ಮತ್ತೆ ನಡೆಯಲಿದೆ. ಕನ್ನಡ ವರನಟ ಡಾ.ರಾಜ್‌ಕುಮಾರ್, ಪುನೀತ್ ರಾಜ್‌ಕುಮಾರ್ ಕೂಡ ನೇತ್ರದಾನ ಮಾಡಿದ್ದರು. ಪುನೀತ್ ರಾಜ್ ಕುಮಾರ್ ಅವರ ಅಕಾಲಿಕ ಮರಣದ ನಂತರ ಅವರ ಕಣ್ಣುಗಳನ್ನು ನಾರಾಯಣ ನೇತ್ರಾಲಯದಲ್ಲಿ ಇಬ್ಬರು ಅಂಧರಿಗೆ ಅಳವಡಿಸಲಾಗಿದೆ. ಆ ಮೂಲಕ ಇಬ್ಬರ ಬಾಳಿಗೆ ಪುನೀತ್ ರಾಜ್‌ಕುಮಾರ್ ಬೆಳಕಾಗಿದ್ದಾರೆ. ಇದೀಗ ರಾಜ್‌ಕುಮಾರ್, ಪುನೀತ್ ಅವರ ಹಾದಿಯಾಗಿ ಸರೋಜಾದೇವಿ ಅವರೂ ನೇತ್ರದಾನ ಮಾಡಿದ್ದು, ಬದುಕಿನ ಪಯಣ ಮುಗಿಸಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966